ಸಂಪುಟ: 06 ಸಂಚಿಕೆ: 202 ಪುಟಗಳು: 08 ಬುಧವಾರ 07 ಅಕ್ಟೋಬರ್ 2026 www.udayavahini.in epaper.udayavahini.in Udaya vahini news Udaya vahini news Udayavahini news youtube udayavahininews@gmail.com

ಸಂಪಾದಕರು: ಟಿ. ಹೊಂಬೇಗೌಡ RNI No. KARKAN/2021/80833 9448225696 + 91 8035621249 ₹5

**ಮುಂಜಾನೆ ಮಾತು**

ಜೀವನದಲ್ಲಿ ಇದ್ದ ಆಸೆಗಳನ್ನು ಬಿಟ್ಟು ಕೊಟ್ಟಾಯಿತು... ಕನಸುಗಳು ಕಣ್ಣೀರ ಸೇರಿತು.. ಅರ್ಥ ಮಾಡಿಕೊಳ್ಳುವವರು ಅಪಾರ್ಥ ಮಾಡಿಕೊಂಡರು. ಎಲ್ಲಾ ಮಾಡಿ ... ಈಗ ಏನೇ ಆದ್ರೂ ಮೌನವೇ ಚಂದ ಅನಿಸಿಬಿಟ್ಟಿದೆ...

# ಉದಯ ವಾಹಿನಿ

ಸರ್ವ ಸಮಾನತೆಯ ಕನ್ನಡ ದಿನಪತ್ರಿಕೆ

## 5 ವಿಧಾನಸಭಾ, 1 ಲೋಕಸಭಾ ಕ್ಷೇತ್ರಕ್ಕೆ ಮತದಾನ ಆರಂಭ

• **ಉದಯವಾಹಿನಿ, ನವದೆಹಲಿ**

ದೇಶದ ಮೂರು ರಾಜ್ಯಗಳು ಹಾಗೂ ಒಂದು ಕೇಂದ್ರಾಡಳಿತ ಪ್ರದೇಶದ ಒಟ್ಟು 5 ವಿಧಾನಸಭಾ ಕ್ಷೇತ್ರಗಳು ಮತ್ತು 1 ಲೋಕಸಭಾ ಕ್ಷೇತ್ರಕ್ಕೆ ಇಂದು ಉಪಚುನಾವಣೆಯ ಮತದಾನ ನಡೆಯುತ್ತಿದೆ. ಮಂಗಳವಾರ ಬೆಳಗ್ಗೆ 7 ಗಂಟೆಯಿಂದಲೇ ಮತದಾನ ಆರಂಭವಾಗಿದೆ. ಸಂಜೆ 6 ಗಂಟೆಯವರೆಗೆ ಮತ ಚಲಾಯಿಸಲು ಅವಕಾಶವಿದ್ದು, ಮತದಾರರ ಸುಲಭ ಸಂಚಾರಕ್ಕಾಗಿ ಆಯಾ ಜಿಲ್ಲಾಡಳಿತಗಳು ಸ್ಥಳೀಯ ರಜೆಯನ್ನು ಘೋಷಿಸಿವೆ. ಮೂರು ದಿನಗಳ ಬಳಿಕ, ಅಂದರೆ ಅಕ್ಟೋಬರ್ 9ರ ಶುಕ್ರವಾರದಂದು ಈ ಎಲ್ಲಾ ಕ್ಷೇತ್ರಗಳ ಫಲಿತಾಂಶ ಪ್ರಕಟವಾಗಲಿದೆ.

ಎರಡು ಕ್ಷೇತ್ರಗಳಾದ ಮಧುರಾಂತಕಂ ಮತ್ತು ಧರಾಪುರಂ ಕ್ಷೇತ್ರಗಳ ಎಐಎಡಿಎಂಕೆ ಶಾಸಕರು ರಾಜೀನಾಮೆ ನೀಡಿ ನಟ ವಿಜಯ್ ನೇತೃತ್ವದ ಟಿಗಿಪಿ (ತಮಿಳಗ ವೆಟ್ರಿ ಕಳಗಂ) ಪಕ್ಷವನ್ನು ಸೇರಿದ್ದರು. ಟಿವಿಕೆ ಪರವಾಗಿ ಅದೇ ಇಬ್ಬರು ಅಭ್ಯರ್ಥಿಗಳು ಮತ್ತೆ ಕಣಕ್ಕಿಳಿದಿದ್ದಾರೆ. ನಾಲ್ಕು ತಿಂಗಳ ಹಿಂದೆ ಅಧಿಕಾರಕ್ಕೆ ಬಂದ ಜೋಸೆಫ್ ವಿಜಯ್ ನೇತೃತ್ವದ ಸರ್ಕಾರಕ್ಕೆ ಇದು ಮೊದಲ ಚುನಾವಣಾ ಅಗ್ನಿಪರೀಕ್ಷೆಯಾಗಿದೆ. ಮತ್ತು ಅಕಋ ನಡುವೆ ಚತುಷ್ಕೋನ ಸ್ಪರ್ಧೆ ಏರ್ಪಟ್ಟಿದೆ.

ಅತ್ಯಂತ ಹೈ-ಪ್ರೊಫೈಲ್ ಕ್ಷೇತ್ರವಾದ ನಂದಿಗ್ರಾಮದಲ್ಲಿ ಮುಖ್ಯಮಂತ್ರಿ ಸುವೇಂದು ಅಧಿಕಾರಿ ಅವರು ಈ ವರ್ಷದ ಆರಂಭದಲ್ಲಿ ನಡೆದ ರಾಜ್ಯ ಚುನಾವಣೆಯಲ್ಲಿ ಎರಡು ಕ್ಷೇತ್ರಗಳಲ್ಲಿ ಗೆದ್ದಿದ್ದರಿಂದ, ಈ ಸ್ಥಾನಕ್ಕೆ ರಾಜೀನಾಮೆ ನೀಡಿದ್ದರು.

## ಜ್ಞಾನೇಶ್ ಕುಮಾರ್ ರಾಜೀನಾಮೆಗೆ ವೋಟ್ ಬಚಾವ್, ದೇಶ ಬಚಾವ್ ಹೆಸರಿನಲ್ಲಿ ಹೋರಾಟ: ಬಿ.ಕೆ.ಹರಿಪ್ರಸಾದ್

• **ಉದಯವಾಹಿನಿ, ಬೆಂಗಳೂರು**

ಇದು ದೇಶದ ಪ್ರಜಾಪ್ರಭುತ್ವ ವ್ಯವಸ್ಥೆಯ ಆತ್ಮಹತ್ಯೆಯ ವಿಚಾರ. ಹೀಗಾಗಿ ಜ್ಞಾನೇಶ್ ಕುಮಾರ್ ರಾಜೀನಾಮೆ ನೀಡಲೇಬೇಕು ಎಂದು ಹರಿಪ್ರಸಾದ್ ಕೆಪಿಸಿಸಿ ಅಧ್ಯಕ್ಷ ಒತ್ತಾಯಿಸಿದರು. ಈ ಕುರಿತು ದೆಹಲಿಯಲ್ಲಿ ಮಾತನಾಡಿ, ಇಬ್ಬರು ಚುನಾವಣಾ ಆಯುಕ್ತರು ಜ್ಞಾನೇಶ್ ಕುಮಾರ್ ಅವರ ಕಾರ್ಯವೈಖರಿ ಬಗ್ಗೆ ಆಕ್ಷೇಪ ವ್ಯಕ್ತಪಡಿಸಿದ್ದಾರೆ. ಕಳೆದ ಹತ್ತು ತಿಂಗಳಲ್ಲಿ 14 ಬಾರಿ ಆಕ್ಷೇಪಣೆ ಸಲ್ಲಿಸಲಾಗಿದೆ. ಸುಪ್ರೀಂಕೋರ್ಟ್ ಕೂಡ ಸ್ಪಷ್ಟ ಅಭಿಪ್ರಾಯ ವ್ಯಕ್ತಪಡಿಸಿದೆ ಎಂದರು. ದೇಶದಲ್ಲಿ ದಬ್ಬಾಳಿಕೆ ನಡೆಯುವುದಿಲ್ಲ. ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ ಅವರನ್ನು ಬಂಧಿಸುವ ಪ್ರಯತ್ನ ನಡೆಯುತ್ತಿದೆ ಎಂದು ಆರೋಪಿಸಿದರು. ಪ್ರಧಾನಿ ಮೋದಿ ಅವರು ಪ್ರಜಾಪ್ರಭುತ್ವ ವ್ಯವಸ್ಥೆ ಬದಲಿಗೆ ಸರ್ವಾಧಿಕಾರಿ ಧೋರಣೆ ಪ್ರದರ್ಶಿಸುತ್ತಿದ್ದಾರೆ. ಕೇಂದ್ರ ಸರ್ಕಾರ ಭಯಗೊಂಡಿದೆ. ಮತ ಕಳ್ಳತನದ ಭಯ ಅವರನ್ನು ಕಾಡುತ್ತಿದೆ ಎಂದು ಆರೋಪಿಸಿದರು. ದೆಹಲಿಯಲ್ಲಿ ಕಾಂಗ್ರೆಸ್ ರಾಜ್ಯ ಘಟಕಗಳ ಅಧ್ಯಕ್ಷರ ಸಭೆ ನಡೆದಿದ್ದು, ಅ. 8ರಂದು ಕೆಪಿಸಿಸಿಯಲ್ಲಿ ಸಭೆ ನಡೆಸಿ, ಮುಂದಿನ ಎರಡು ತಿಂಗಳ ಕಾಲ ರಾಜ್ಯಾದ್ಯಂತ ಪ್ರತಿಭಟನೆ ನಡೆಸಲು ಸಿದ್ಧತೆ ಮಾಡಿಕೊಳ್ಳಲಾಗುವುದು. 'ವೋಟ್ ಬಚಾವ್, ದೇಶ ಬಚಾವ್' ಹೆಸರಿನಲ್ಲಿ ಕಾರ್ಯಕ್ರಮಗಳನ್ನು ಆಯೋಜಿಸಲಾಗುವುದು ಎಂದರು. ಹರಿಪ್ರಸಾದ್ ಒಂದು ಚುನಾವಣೆಯನ್ನೂ ಗೆದ್ದಿಲ್ಲ ಎಂಬ ಬಿಜೆಪಿ ನಾಯಕ ಆರ್.ಅಶೋಕ್ ಅವರ ಹೇಳಿಕೆಗೆ ಪ್ರತಿಕ್ರಿಯಿಸಿದ ಅವರು, ನಾನು ಚುನಾವಣೆ ಗೆದ್ದಿದ್ದೇನೋ, ಸೋತಿದ್ದೇನೋ ಬೇರೆ ವಿಚಾರ. ವಿದ್ಯಾರ್ಥಿ ದೆಸೆಯಿಂದಲೇ ರಾಜಕೀಯದಲ್ಲಿದ್ದೇನೆ.

## ಬೆಂಗಳೂರು-ಹೊಸೂರು ಟ್ರಾಫಿಕ್‌ನಲ್ಲಿ 50 ನಿಮಿಷಗಳ ಕಾಲ ಸಿಲುಕಿದ ಶಾಸಕ ಸುರೇಶ್ ಕುಮಾರ್

• **ಉದಯವಾಹಿನಿ, ಬೆಂಗಳೂರು**

ಹೊಸೂರು ರಸ್ತೆಯ ಚಂದಾಪುರ ಸಮೀಪ ಉಂಟಾಗಿದ್ದ ಟ್ರಾಫಿಕ್ ಜಾಮ್‌ನಿಂದಾಗಿ ರಾಜಾಜಿನಗರ ಕ್ಷೇತ್ರದ ಶಾಸಕ ಎಸ್. ಸುರೇಶ್ ಕುಮಾರ್ ಬರೋಬ್ಬರಿ 50 ನಿಮಿಷಗಳ ಕಾಲ ಮುಂದೆ ಸಾಗಲಾಗದೆ ರಸ್ತೆಯಲ್ಲೇ ಕಾಲ ಕಳೆಯುವಂತಾಯಿತು.

ಒಂದೆಡೆ ಮಳೆ, ಮತ್ತೊಂದೆಡೆ ಸಂಚಾರ ದಟ್ಟಣೆಯಿಂದಾಗಿ ಸಾರ್ವಜನಿಕರು ತೀವ್ರ ಸಂಕಷ್ಟಕ್ಕೆ ಸಿಲುಕಿದ್ದರು. ಸಾಮಾನ್ಯ ಜನರೊಂದಿಗೆ ಶಾಸಕ ಸುರೇಶ್ ಕುಮಾರ್ ಅವರ ವಾಹನವೂ ಟ್ರಾಫಿಕ್ ನಡುವೆ ಲಾಕ್ ಆಗಿತ್ತು.

ಈ ಕುರಿತು ಎಕ್ಸ್ ಪೋಸ್ಟ್ ಮಾಡಿರುವ ಶಾಸಕ ಸುರೇಶ್ ಕುಮಾರ್, ಬೆಂಗಳೂರಿಗೆ ಬರುತ್ತಿರುವಾಗ ಹೊಸೂರು ರಸ್ತೆಯ ಚಂದಾಪುರದ ಮುನ್ನ ಸುಮಾರು 50 ನಿಮಿಷಗಳಿಂದ ಒಂದಡಿ ಮುಂದೆ ಸಾಗುವುದಕ್ಕೆ ಆಗದೆ ನಿಂತಿದ್ದೇವೆ.

ನಮ್ಮ ಮುಂದೆ ಸುಮಾರು 2 ಕಿ.ಮೀ ಟ್ರಾಫಿಕ್ ಇದೆ. ಪುದುಚೇರಿಗೆ ಸುಲಭವಾಗಿದ್ದ ಸೈಕಲ್ ಪಯಣ ಈಗ ಕೆಣಕುತ್ತಿದೆ ಎಂದು ಸಮಾಧಾನ ವ್ಯಕ್ತಪಡಿಸಿದ್ದಾರೆ. ಮತ್ತೊಂದೆಡೆ ಬೆಂಗಳೂರಿನಲ್ಲಿ ಸಂಜೆ ಸುರಿದ ಭಾರಿ ಮಳೆಗೆ ಕೆ.ಆರ್ ಪುರಂ ಅಂಡರ್ ಪಾಸ್ ಜಲಾವೃತಗೊಂಡಿತ್ತು.

## ಸ್ಮಿತ್ ಮಚ್ಚಾರ್ ತಲೆಬುರುಡೆ ಮೂಳೆ ಮುರಿತ; ಸೌದಿಯಲ್ಲಿ ಶಸ್ತ್ರಚಿಕಿತ್ಸೆ

• **ಉದಯವಾಹಿನಿ, ಬೆಂಗಳೂರು**

ಫ್ಲೈದುಬೈ ವಿಮಾನದಲ್ಲಿ ಸಹ-ಪೈಲಟ್‌ನಿಂದ ಮಾರಣಾಂತಿಕ ಹಲ್ಲೆಗೆ ಒಳಗಾಗಿದ್ದ ಭಾರತೀಯ ಪೈಲಟ್ ಸ್ಮಿತ್ ಮಚ್ಚಾರ್ ಅವರ ತಲೆಬುರುಡೆಗೆ ಗಂಭೀರ ಪೆಟ್ಟಾಗಿದ್ದು, ಸೌದಿಯಲ್ಲಿ ತುರ್ತು ಶಸ್ತ್ರಚಿಕಿತ್ಸೆಗೆ ಒಳಪಡಿಸಲಾಗಿದೆ. ಕಾಕ್‌ಪಿಟ್‌ನಲ್ಲಿದ್ದಾಗ ಒಮಾನಿ ಸಹ-ಪೈಲಟ್ ನಡೆಸಿದ 'ಕ್ರಾಶ್ ಆಕ್ಸ್' (ವಿಮಾನದ ತುರ್ತು ಬಳಕೆಯ ಕೊಡಲಿ) ದಾಳಿಯಿಂದಾಗಿ ಸ್ಮಿತ್ ತಲೆಬುರುಡೆಯ ಮೂಳೆ ಮುರಿತಕ್ಕೆ ಒಳಗಾಗಿದೆ. 38 ವರ್ಷದ ವಿಮಾನದ ಕ್ಯಾಪ್ಟನ್, ತೀವ್ರ ನೋವು ಮತ್ತು ವಿಪರೀತ ರಕ್ತಸ್ರಾವದ ನಡುವೆಯೂ ಹೋರಾಡಿ ಕಾಕ್‌ಪಿಟ್‌ನ ಬಾಗಿಲನ್ನು ತೆರೆಯುವಲ್ಲಿ ಯಶಸ್ವಿಯಾದರು. ಸಿಬ್ಬಂದಿ ಮತ್ತು ಪ್ರಯಾಣಿಕರು ಒಳಗೆ ನುಗ್ಗಿ, ಸಹ-ಪೈಲಟ್‌ನನ್ನು ನಿಯಂತ್ರಣಕ್ಕೆ ತೆಗೆದುಕೊಂಡು, ವಿಮಾನವನ್ನು ಸ್ಥಿರಗೊಳಿಸಲು ನೆರವಾಗಲು ಸಾಧ್ಯವಾಯಿತು.

ಬೆಂಗಳೂರಿನಲ್ಲಿ ಐದು ಪೊಲೀಸ್ ಕಮಿಷನರೇಟ್ ರಚನೆ ವಿಚಾರವಾಗಿಯೂ ಟೀಕಿಸಿರುವ ಅಶೋಕ್, ಇದು ತುಘಲಕ್ ಸರ್ಕಾರ. ದುಡ್ಡು ಹೊಡೆಯುವುದಕ್ಕೆ ಈ ವಿಂಗಡನೆ ಮಾಡುತ್ತಿದ್ದಾರೆ. ಬೆಂಗಳೂರು ಪೊಲೀಸ್ ಇತಿಹಾಸದಲ್ಲಿ ಇದು ಕರಾಳ ಅಧ್ಯಾಯ. ಪೊಲೀಸ್ ಅಧಿಕಾರಿಗಳೆಲ್ಲಾ ನಮಗೆ ಫೋನ್ ಮಾಡಿದ್ದರು. ಐದು ಕಮಿಷನರೇಟ್‌ನಿಂದ ಬೆಂಗಳೂರಿಗೆ ಒಳ್ಳೆಯದಾಗಲ್ಲ. 5 ಪಾಲಿಕೆ ಮಾಡಿದ ಬಳಿಕ ಈಗ ಒಂದರಲ್ಲೂ ಹಣವಿಲ್ಲ. ಈ ಮನೆಹಾಳು ಕೆಲಸ ಪೊಲೀಸ್ ಇಲಾಖೆಗೂ ತಂದಿದ್ದಾರೆ. ಬೆಂಗಳೂರಿಗೆ ಒಬ್ಬ ಕಮಿಷನರ್ ಪರಂಪರಾಗತ ಬಂದಿದೆ. ಮುಂದೆ ಒಂದು ಪೊಲೀಸ್ ಠಾಣೆಗೆ ಒಬ್ಬ ಡಿಸಿಪಿ ಆಗ್ತಾರೆ. ಸರ್ಕಲ್ ಇನ್ಸ್‌ಪೆಕ್ಟರ್‌ಗಳು ಕಾನ್ಸ್‌ಟೇಬಲ್‌ಗಳಾಗುತ್ತಾರೆ, ಡಿಸಿಪಿಗಳೆಲ್ಲ ಸರ್ಕಲ್ ಇನ್ಸ್‌ಪೆಕ್ಟರ್‌ಗಳಾಗ್ತಾರೆ ಎಂದವರು ವ್ಯಂಗ್ಯವಾಡಿದ್ದಾರೆ.ವಿಧಾನಸೌಧದಲ್ಲಿ ಸಚಿವರು, ಅಧಿಕಾರಿಗಳ ಕೊಠಡಿ ನವೀಕರಣ, ಕುಮಾರಕೃಪಾ ಗೆಸ್ಟ್‌ಹೌಸ್ ನವೀಕರಣ ಕಾಮಗಾರಿ ಬಗ್ಗೆಯೂ ಮಾಹಿತಿ ಕೇಳಿ ಪತ್ರ ಬರೆದಿದ್ದೇನೆ. ಕಾರ್ಯದರ್ಶಿ ಅಂಜುಂ ಪರ್ವೇಜ್‌ಗೆ ಕರೆ ಮಾಡಿ ಕೇಳಿದ್ದೇನೆ. ಮಾಹಿತಿ ಕೊಡುವೆ, ಮಾಹಿತಿ ಕೊಡುವೆ ಅಂತಿದ್ದಾರೆ. ಮಾಹಿತಿ ಕೊಡದಿದ್ದರೆ ಅವರ ಕಚೇರಿ ಮುಂದೆ ಧರಣಿ ಮಾಡುವೆ. ನವೀಕರಣದ ಬಗ್ಗೆ ಎಲ್ಲಾ ದಾಖಲೆ ತೆಗೆದುಕೊಂಡು ಮಾತಾಡುವೆ ಎಂದು ಆರ್.ಅಶೋಕ್ ತಿಳಿಸಿದ್ದಾರೆ.




# ಹಾಲಿನ ದರ ಏರಿಕೆ ಆರ್. ಅಶೋಕ್ ಎಚ್ಚರಿಕೆ



ಐದು ಪೊಲೀಸ್ ಕಮಿಷನರೇಟ್ ರಚನೆ ವಿಚಾರ

ಆಶೋಕ್ ಗರಂ

ಬಸ್ ಟಿಕೆಟ್ ದರ ಹೆಚ್ಚಳ



ಸಚಿವ ಸಂಪುಟ ಸಭೆ

## ಸ್ವಯಂಸೇವಕರಿಗೆ 'ಎಮರ್ಜೆನ್ಸಿ ರೆಸ್ಪಾಂಡರ್ ಕಿಟ್ ಸಂಪುಟ ಒಪ್ಪಿಗೆ

ರಾಜ್ಯದಲ್ಲಿ ನೈಸರ್ಗಿಕ ವಿಕೋಪಗಳು ಮತ್ತು ತುರ್ತು ಪರಿಸ್ಥಿತಿಗಳನ್ನು ಪರಿಣಾಮಕಾರಿಯಾಗಿ ಎದುರಿಸುವ ನಿಟ್ಟಿನಲ್ಲಿ ಕೇಂದ್ರ ಪುರಸ್ಕೃತ ಯುವ ಆಪದ್ ಮಿತ್ರ ಯೋಜನೆಯಡಿ ಆಯ್ಕೆಯಾದ ಸ್ವಯಂಸೇವಕರಿಗೆ ರಕ್ಷಣಾ ಸಾಮಗ್ರಿಗಳನ್ನೊಳಗೊಂಡ ಎಮರ್ಜೆನ್ಸಿ ರೆಸ್ಪಾಂಡರ್ ಕಿಟ್' ಖರೀದಿಸಲು ಸಚಿವ ಸಂಪುಟ ಸಭೆಯು ಆಡಳಿತಾತ್ಮಕ ಅನುಮೋದನೆ ನೀಡಿದೆ.

ಈ ಯೋಜನೆಯಡಿ ರಾಜ್ಯದ 11 ಜಿಲ್ಲೆಗಳಾದ ಬಾಗಲಕೋಟೆ, ಚಿಕ್ಕಮಗಳೂರು, ದಕ್ಷಿಣ ಕನ್ನಡ, ಬೆಂಗಳೂರು ನಗರ, ಕಲಬುರಗಿ, ಕೊಡಗು, ರಾಯಚೂರು, ಶಿವಮೊಗ್ಗ, ಉಡುಪಿ, ಉತ್ತರ ಕನ್ನಡ ಹಾಗೂ ಯಾದಗಿರಿ ಜಿಲ್ಲೆಗಳಲ್ಲಿ ಸ್ಕೌಟ್ಸ್ ಮತ್ತು ಎನ್.ಎಸ್.ಎಸ್ ಹಾಗೂ 'ಮೇರಾ ಯುವ ಭಾರತ್' ಏಜೆನ್ಸಿಗಳ ಮೂಲಕ ಒಟ್ಟು 10,350 ಸ್ವಯಂಸೇವಕರಿಗೆ ತರಬೇತಿ ನೀಡಲಾಗುತ್ತದೆ. ತರಬೇತಿ ಪಡೆದ ಪ್ರತಿಯೊಬ್ಬ ಸ್ವಯಂಸೇವಕರಿಗೆ ತಲಾ 10,000 ವೆಚ್ಚದಲ್ಲಿ ರಕ್ಷಣಾ ಉಪಕರಣಗಳನ್ನೊಳಗೊಂಡ ಎಮರ್ಜೆನ್ಸಿ ರೆಸ್ಪಾಂಡರ್ ಕಿಟ್' ಒದಗಿಸಲಾಗುತ್ತದೆ. ಇದರ ಒಟ್ಟು ಅನುದಾನ ವೆಚ್ಚ 10.35 ಕೋಟಿಗಳಾಗಿರುತ್ತದೆ.

## ಕ್ರಿಮಿನಲ್ ಕಾನೂನು ತಿದ್ದುಪಡಿ ಕಾಯ್ದೆ-2022 ವಿಧೇಯಕ ಹಿಂಪಡೆಯಲು ನಿರ್ಧಾರ:

ದಿ ಕ್ರಿಮಿನಲ್ ಲಾ ಅಮೆಂಡ್ಮೆಂಟ್ ಆರ್ಡಿನೆನ್ಸ್, 1944 (ಕರ್ನಾಟಕ ತಿದ್ದುಪಡಿ) ವಿಧೇಯಕ, ಅನ್ನು ಹಿಂಪಡೆಯಲು ಮುಖ್ಯಮಂತ್ರಿಗಳ ಅಧ್ಯಕ್ಷತೆಯಲ್ಲಿ ನಡೆದ ರಾಜ್ಯ ಸಚಿವ ಸಂಪುಟ ಸಭೆಯು ಅನುಮೋದನೆ ನೀಡಿದೆ. ಕರ್ನಾಟಕ ವಿಧಾನಮಂಡಲದ ಉಭಯ ಸದನಗಳಿಂದ ಅಂಗೀಕಾರಗೊಂಡಿದ್ದ ಈ ವಿಧೇಯಕವನ್ನು ಗೌರವಾನ್ವಿತ ರಾಜ್ಯಪಾಲರು ರಾಷ್ಟ್ರಪತಿಗಳ ಅಂಕಿತಕ್ಕಾಗಿ ಕಾಯ್ದಿರಿಸಿದ್ದರು. ಅದರಂತೆ ವಿಧೇಯಕವನ್ನು ಕೇಂದ್ರ ಸರ್ಕಾರದ ಗೃಹ ಸಚಿವಾಲಯಕ್ಕೆ ರವಾನಿಸಲಾಗಿತ್ತು.

ಕೇಂದ್ರದ ಹೊಸ ಕಾನೂನಿನಲ್ಲಿ (ಭಾರತೀಯ ನಾಗರಿಕ ಸುರಕ್ಷಾ ಸಂಹಿತೆ, 2023) ಈಗಾಗಲೇ ಈ ಎಲ್ಲಾ ವಿಸ್ತೃತ ಅವಕಾಶಗಳಿರುವುದರಿಂದ, ಕೇಂದ್ರ ಸರ್ಕಾರ ಮತ್ತು ರಾಷ್ಟ್ರಪತಿಗಳ ಅಂಕಿತಕ್ಕಾಗಿ ಬಾಕಿ ಇರುವ 'ಕ್ರಿಮಿನಲ್ ಕಾನೂನು ತಿದ್ದುಪಡಿ ವಿಧೇಯಕ,2022'ಅನ್ನು ಮುಂದುವರಿಸುವ ಅಗತ್ಯವಿಲ್ಲವೆಂದು ಪರಿಗಣಿಸಿ, ಅದನ್ನು ಅಧಿಕೃತವಾಗಿ ಹಿಂಪಡೆಯಲು ಸಚಿವ ಸಂಪುಟ ಸಭೆಯಲ್ಲಿ ಆಡಳಿತಾತ್ಮಕ ತೀರ್ಮಾನ ಕೈಗೊಳ್ಳಲಾಗಿದೆ.

## ಜನವರಿಯಲ್ಲಿ ZP, TP ಚುನಾವಣೆ?:

ಸಚಿವ ಸಂಪುಟ ಸಭೆಯಲ್ಲಿ ಜಿಲ್ಲಾ, ತಾಲ್ಲೂಕು ಪಂಚಾಯತ್ ಚುನಾವಣೆ ಸಂಬಂಧ ಚರ್ಚೆ ನಡೆಯಿತು. ಚುನಾವಣಾ ಆಯೋಗ ZP, TP ವಾರ್ಡುವಾರು ಮೀಸಲಾತಿ ಪಟ್ಟಿಗೆ ಒಪ್ಪಿಗೆ ಸೂಚಿಸಿದರೆ ಜನವರಿ ಮೊದಲ ವಾರದಲ್ಲಿ ಜಿಲ್ಲಾ ಪಂಚಾಯತ್ ಹಾಗೂ ತಾಲ್ಲೂಕು ಪಂಚಾಯತ್ ಚುನಾವಣೆ ನಡೆಸಲು ಸರ್ಕಾರ ಮುಂದಾಗಿದೆ. ಎರಡು ದಿನಗಳ ಹಿಂದೆ ರಾಜ್ಯ ಚುನಾವಣಾ ಆಯೋಗಕ್ಕೆ ಸರ್ಕಾರ ZP, TP ವಾರ್ಡುವಾರು ಮೀಸಲಾತಿ ಪಟ್ಟಿಗೆ ಒಪ್ಪಿಗೆ ಕೋರಿ ಮನವಿ ಸಲ್ಲಿಸಿತ್ತು. ರಾಜ್ಯದಲ್ಲಿ ಪರಿಷತ್ ಚುನಾವಣೆ ನೀತಿ ಸಂಹಿತೆ ಹಿನ್ನೆಲೆ ರಾಜ್ಯ ಚುನಾವಣಾ ಆಯೋಗ ಮೀಸಲಾತಿ ಪಟ್ಟಿಯನ್ನು ಕೇಂದ್ರ ಚುನಾವಣಾ ಆಯೋಗಕ್ಕೆ ಕಳುಹಿಸಿದೆ. ಚುನಾವಣಾ ಆಯೋಗ ಮೀಸಲಾತಿ ಪಟ್ಟಿಗೆ ಒಪ್ಪಿಗೆ ಸೂಚಿಸಿದ ಬಳಿಕ ಆ ಸಂಬಂಧ ಕರಡು ಅಧಿಸೂಚನೆ ಹೊರಡಿಸಲಾಗುವುದು. ಸಾರ್ವಜನಿಕ ಆಕ್ಷೇಪ ಪರಿಗಣಿಸಿದ ಬಳಿಕ ಡಿಸೆಂಬರ್ ಮಧ್ಯದಲ್ಲಿ ವಾರ್ಡುವಾರು ಮೀಸಲಾತಿ ಪಟ್ಟಿಯ ಅಂತಿಮ ಅಧಿಸೂಚನೆ ಪ್ರಕಟಿಸುತ್ತೇವೆ.

ಜನವರಿ ಮೊದಲ ವಾರದಲ್ಲಿ ZP, TPಚುನಾವಣೆ ನಡೆಸಲು ಮುಂದಾಗಿದ್ದೇವೆ. ZP, TP ಚುನಾವಣೆಯ 15 ದಿನಗಳ ಬಳಿಕ ಗ್ರಾಮ ಪಂಚಾಯಿತಿ ಚುನಾವಣೆ ನಡೆಸಲು ಉದ್ದೇಶಿಸಲಾಗಿದೆ ಎಂದು ಸಚಿವ ಈಶ್ವರ್ ಖಂಡ್ರೆ ತಿಳಿಸಿದರು.

• **ಉದಯವಾಹಿನಿ, ಬೆಂಗಳೂರು**



ರಾಜ್ಯದ ಜನತೆಗೆ ಸರ್ಕಾರ ಬಿಗ್ ಶಾಕ್ ಕೊಟ್ಟಿದೆ. ಹಾಲಿನ ದರ 8 ರೂ. ಹೆಚ್ಚಳಕ್ಕೆ ಸಚಿವ ಸಂಪುಟ ಒಪ್ಪಿಗೆ ನೀಡಿದೆ. ಇದರ ಜೊತೆಗೆ ಬಸ್ ಟಿಕೆಟ್ ದರ ಹೆಚ್ಚಳಕ್ಕೂ ಒಪ್ಪಿಗೆ ಸೂಚಿಸಲಾಗಿದೆ. ನಂದಿನಿ ಹಾಲಿನ ಮಾರಾಟ ದರವನ್ನು ಪ್ರತಿ ಲೀಟರ್‌ಗೆ 8ರೂ. ಏರಿಕೆಗೆ ಸಚಿವ ಸಂಪುಟ ಸಭೆ ಒಪ್ಪಿಗೆ ಸೂಚಿಸಿದ್ದು, ಪರಿಷತ್ ಚುನಾವಣೆ ನೀತಿ ಸಂಹಿತೆ ಹಿನ್ನೆಲೆ ಸಿಎಂ ಬೆಲೆ ಏರಿಕೆ ಸಂಬಂಧ ಚುನಾವಣಾ ಆಯೋಗಕ್ಕೆ ಪತ್ರ ಬರೆದು ಅನುಮತಿ ಕೋರಲಿದ್ದಾರೆ.

ಸಿಎಂ ಡಿ.ಕೆ.ಶಿವಕುಮಾರ್ ನೇತೃತ್ವದಲ್ಲಿ ನಡೆದ ಸಚಿವ ಸಂಪುಟ ಸಭೆಯಲ್ಲಿ ಹಾಲಿನ ದರ ಏರಿಕೆಗೆ ಒಪ್ಪಿಗೆ ಸೂಚಿಸಲಾಗಿದೆ. ಚುನಾವಣಾ ಆಯೋಗ ಒಪ್ಪಿಗೆ ಸೂಚಿಸಿದರೆ ನ.1ರಿಂದ ಹಾಲಿನದರ ಏರಿಕೆ ಅನ್ವಯವಾಗುವ ಸಾಧ್ಯತೆ ಇದೆ. ರಾಜ್ಯ ಹಾಲು ಒಕ್ಕೂಟಗಳು ಮಾರಾಟ ದರ ಏರಿಕೆಗೆ ಒತ್ತಾಯಿಸಿದ್ದರು. ಹಾಲು ಒಕ್ಕೂಟಗಳ ನಿಯೋಗ ಸಿಎಂ ಡಿಕೆಶಿ ಭೇಟಿಯಾಗಿ ಬೆಲೆ ಏರಿಕೆಗೆ ಮನವಿಮಾಡಿದ್ದರು. ಹೈನುಗಾರಿಕೆಗೆ ಅಗತ್ಯವಿರುವ ಪಶು ಆಹಾರ, ಮೇವು, ಔಷಧೋಪಚಾರ ಸೇರಿದಂತೆ ನಿರ್ವಹಣಾ ವೆಚ್ಚ ನಿರಂತರವಾಗಿ ಹೆಚ್ಚಾಗುತ್ತಿರುವುದರಿಂದ ಹಾಲಿನ ಉತ್ಪಾದನಾ ವೆಚ್ಚ ಗಣನೀಯವಾಗಿ ಹೆಚ್ಚಾಗಿದ್ದು, ಸದ್ಯದ ಬರ ಪರಿಸ್ಥಿತಿಯಲ್ಲಿ ಬೆಳೆ ಕೊರತೆಯಿಂದ ವ್ಯವಸಾಯ ಆದಾಯ ತೀವ್ರವಾಗಿ ಕುಸಿದಿದ್ದು, ಮೇವಿನ ಲಭ್ಯತೆ ಕಡಿಮೆಯಾಗಿರುವುದರಿಂದ ಹೈನುಗಾರರು ಸಂಕಷ್ಟ ಎದುರಿಸುತ್ತಿದ್ದಾರೆ ಎಂದು ನಿಯೋಗ ಮನವಿ ಮಾಡಿತ್ತು.

ಕರ್ನಾಟಕದಲ್ಲಿ ಒಕ್ಕೂಟ ಉತ್ಪಾದಕರಿಂದ ಟೋನ್ಡ್ ಹಾಲನ್ನು ಲೀಟರಿಗೆ ರೂ.35ಕ್ಕೆ ಖರೀದಿಸುತ್ತಿದ್ದು, ನೆರೆಯ ಆಂಧ್ರಪ್ರದೇಶದಲ್ಲಿ ರೂ. 41.5, ಕೇರಳದಲ್ಲಿ ರೂ. 41.8, ಮಹಾರಾಷ್ಟ್ರದಲ್ಲಿ ರೂ. 41, ತಮಿಳುನಾಡಿನಲ್ಲಿ ರೂ. 42.24 ಕ್ಕೆ ಖರೀದಿಸಲಾಗುತ್ತಿದೆ. ಇದೇ ರೀತಿ ಹಾಲಿನ ಗರಿಷ್ಠ ಮಾರಾಟ ದರದಲ್ಲಿ ಸಹ ನೆರೆಯ ರಾಜ್ಯಗಳಿಗೆ ಹೋಲಿಸಿದರೆ ಕರ್ನಾಟಕದಲ್ಲಿ ಲೀಟರಿಗೆ ಕನಿಷ್ಠ ರೂ.12ರಷ್ಟು ಕಡಿಮೆಯಿದೆ ಎಂದು ವಾದಿಸಿತ್ತು.

- ಕೆಎಂಎಫ್ ನಂದಿನಿ ಹಾಲಿನ ದರ ಹೆಚ್ಚಳಕ್ಕೆ ಮುಂದಾದ ಸರ್ಕಾರ.
- ದರ ಏರಿಕೆಗೆ ಸಚಿವ ಸಂಪುಟವು ಸಮ್ಮತಿ ನೀಡಿದೆ.
- ಅಕ್ಟೋಬರ್ 27ರ ಬಳಿಕ ಹೊಸ ದರ ಜಾರಿ ಸಾಧ್ಯತೆ. ಲೀಟರ್‌ಗೆ 8ರೂ. ಏರಿಕೆಯಾಗಬಹುದು.
- ಐದು ಪೊಲೀಸ್ ಕಮಿಷನರೇಟ್ ವಿಂಗಡಣೆಗೆ ಅಸ್ತು
- ಹಬ್ಬಗಳ ಹೊತ್ತಲ್ಲೆ ಕಾಂಗ್ರೆಸ್‌ನಿಂದ ಜನತೆಗೆ ಮತ್ತೊಂದು ಶಾಕ್

**ಅಶೋಕ್ ತೀವ್ರ ಆಕ್ಷೇಪ**

ಹಾಲಿನ ದರ ಹೆಚ್ಚಳ ಮತ್ತು ಜಿಬಿಎ ವ್ಯಾಪ್ತಿಯಲ್ಲಿ ಐದು ಪೊಲೀಸ್ ಕಮಿಷನರೇಟ್ ರಚನೆ ಸಂಬಂಧ ಸಿಎಂ ಡಿಕೆ ಶಿವಕುಮಾರ್ ನೇತೃತ್ವದಲ್ಲಿ ನಡೆದ ಸಚಿವ ಸಂಪುಟ ಸಭೆಯಲ್ಲಿನ ತೀರ್ಮಾನಕ್ಕೆ ವಿಪಕ್ಷ ನಾಯಕ ಆರ್. ಅಶೋಕ್ ತೀವ್ರ ಆಕ್ಷೇಪ ವ್ಯಕ್ತಪಡಿಸಿದ್ದಾರೆ. ಹಾಲಿನ ದರ ಹೆಚ್ಚಿಸಿ ಜನರ ಮೇಲೆ ಹೊರೆ ಹಾಕ್ತಿದ್ದೀರಿ. ಹಾಲಿನ ಸಬ್ಸಿಡಿ ದರ 8 ರೂ. ಹೆಚ್ಚಿಸುತ್ತೇವೆ ಎಂದು ಚುನಾವಣಾ ಪ್ರಣಾಳಿಕೆಯಲ್ಲೇ ಹೇಳಿದ್ರಿ. ಎಲ್ಲಾ ಭರವಸೆ ಈಡೇರಿಸಿದ್ದೇವೆ ಎನ್ನುವವರು ಇದನ್ಯಾಕೆ ಬಿಟ್ರಿ ಎಲ್ಲಾ ಈಡೇರಿಸಿದ್ರೆ ಹಾಲಿನ ದರ ಏರಿಕೆ ಪ್ರಶ್ನೆಯೇ ಬರುತ್ತಿರಲಿಲ್ಲ ಎಂದವರು ಹೇಳಿದ್ದಾರೆ.

**ನ್ಯಾಯಾಂಗ ಡಿಜಿಟಲೀಕರಣಕ್ಕೆ ರೂ.704 ಕೋಟಿ**

ಕರ್ನಾಟಕದ ನ್ಯಾಯಾಂಗ ವ್ಯವಸ್ಥೆಯ ಡಿಜಿಟಲೀಕರಣ ಮತ್ತು ಡಿಜಿಟಲ್ ರೂಪಾಂತರವನ್ನು ಮತ್ತಷ್ಟು ಬಲಪಡಿಸುವ ಉದ್ದೇಶದಿಂದ ರೂ.704 ಕೋಟಿ ವೆಚ್ಚದ ಯೋಜನೆಗೆ ಮುಖ್ಯಮಂತ್ರಿಗಳ ಅಧ್ಯಕ್ಷತೆಯಲ್ಲಿ ನಡೆದ ಸಚಿವ ಸಂಪುಟ ಅನುಮೋದನೆ ನೀಡಿದೆ. ಕರ್ನಾಟಕ ರಾಜ್ಯ ದತ್ತಾಂಶ ಕೇಂದ್ರದ ಮೂಲಕ ನ್ಯಾಯಾಂಗಕ್ಕಾಗಿ ದತ್ತಾಂಶ ಕೇಂದ್ರ ಹಾಗೂ ವಿಪತ್ತು ಮರುಸ್ಥಾಪನಾ ಕೇಂದ್ರ ಸ್ಥಾಪಿಸುವುದು ಸೇರಿದಂತೆ ವಿವಿಧ ಡಿಜಿಟಲೀಕರಣ ಮತ್ತು ಡಿಜಿಟಲ್ ರೂಪಾಂತರ ಕಾಮಗಾರಿಗಳನ್ನು ಕೈಗೊಳ್ಳಲು ಸಂಪುಟ ಒಪ್ಪಿಗೆ ನೀಡಿದೆ.

## ಹಸು-ಸುಧಾರಿತ ಎಮ್ಮೆ ಖರೀದಿಗೆ ಪ್ರೋತ್ಸಾಹಧನ

ಉತ್ತರ ಕರ್ನಾಟಕ ಭಾಗದಲ್ಲಿ ಗ್ರಾಮೀಣ ಮಹಿಳೆಯರ ಆರ್ಥಿಕ ಸಬಲೀಕರಣ ಹಾಗೂ ಹೈನುಗಾರಿಕೆಗೆ ಉತ್ತೇಜನ ನೀಡುವ ಉದ್ದೇಶದಿಂದ, ಬೆಳಗಾವಿ ಮತ್ತು ಕಲಬುರಗಿ ವಿಭಾಗಗಳ 9,600 ಅರ್ಹ ಮಹಿಳಾ ಫಲಾನುಭವಿಗಳಿಗೆ ಶೇ. 25ರಷ್ಟು ಸಹಾಯಧನದಲ್ಲಿ (ಸಬ್ಸಿಡಿ) ಮಿಶ್ರತಳಿ ಹಸು ಅಥವಾ ಸುಧಾರಿತ ಎಮ್ಮೆ ಖರೀದಿಸಲು ಪ್ರೋತ್ಸಾಹಧನ ನೀಡುವ ಯೋಜನೆಗೆ ಸಚಿವ ಸಂಪುಟ ಸಭೆ ಆಡಳಿತಾತ್ಮಕ ಅನುಮೋದನೆ ನೀಡಿದೆ. ಯೋಜನೆಯ ಒಟ್ಟು ವೆಚ್ಚ 18.00 ಕೋಟಿಗಳಾಗಿದ್ದು, ಬೆಳಗಾವಿ ವಿಭಾಗದ 4,800 ಫಲಾನುಭವಿಗಳಿಗೆ 9.00 ಕೋಟಿ ಹಾಗೂ ಕಲಬುರಗಿ ವಿಭಾಗದ 4,800 ಫಲಾನುಭವಿಗಳಿಗೆ 9.00 ಕೋಟಿ ಅನುದಾನವನ್ನು ಸಮಾನವಾಗಿ ಹಂಚಿಕೆ ಮಾಡಲಾಗಿದೆ ಎಂದು ತಿಳಿಸಿರುವ ಸಚಿವರು ಪ್ರತಿಯೊಬ್ಬ ಅರ್ಹ ಮಹಿಳಾ ಫಲಾನುಭವಿಗೆ ತಲಾ 18,750/-ಗಳಂತೆ ಶೇ. 25ರಷ್ಟು ಸರ್ಕಾರಿ ಸಹಾಯಧನ ಸಿಗಲಿದೆ.

## ಕುಮಾರಸ್ವಾಮಿ ಅವರ ಮನೆಯಲ್ಲಿ ಏನಾಗ್ತಿದೆ ಅಂತ ಮೊದಲು ತಿಳಿದುಕೊಳ್ಳಲಿ: ಪ್ರಿಯಾಂಕ್ ಖರ್ಗೆ

• **ಉದಯವಾಹಿನಿ, ಬೆಂಗಳೂರು**

ಕೇಂದ್ರ ಸಚಿವ ಕುಮಾರಸ್ವಾಮಿ ಅವರು ಮೊದಲು ಅವರ ಮನೆಯಲ್ಲಿ ಮಕ್ಕಳು ಏನು ಮಾಡುತ್ತಿದ್ದಾರೆ ಅಂತ ತಿಳಿದುಕೊಳ್ಳಲಿ ಎಂದು ಸಚಿವ ಪ್ರಿಯಾಂಕ್ ಖರ್ಗೆ ಕುಮಾರಸ್ವಾಮಿಗೆ ತಿರುಗೇಟು ನೀಡಿದ್ದಾರೆ. ಸಿದ್ಧಾರ್ಥ ಟ್ರಸ್ಟ್‌ನಿಂದ ಫಾರ್ಮ್ 7 ಪ್ರಿಂಟ್ ಆಗುತ್ತಿದೆ ಎಂಬ ಕುಮಾರಸ್ವಾಮಿ ಹೇಳಿಕೆಗೆ ಬೆಂಗಳೂರಿನಲ್ಲಿ ಪ್ರತಿಕ್ರಿಯೆ ನೀಡಿದ ಅವರು, ಸಿದ್ದಾರ್ಥ ವಿಹಾರ್ ಟ್ರಸ್ಟ್‌ನಲ್ಲಿ ಏನಾಗುತ್ತಿದೆ ಅಂತ ಕುಮಾರಸ್ವಾಮಿಗೆ ಗೊತ್ತಿಲ್ಲ. ಮೊದಲು ಅವರ ಮನೆ ಮಕ್ಕಳಿಗೆ ನೋಡಿಕೊಳ್ಳೋಕೆ ಹೇಳಿ. ಮನೆಯಲ್ಲಿ ಮಕ್ಕಳು ಏನು ಮಾಡುತ್ತಿದ್ದಾರೆ ನಿಮಗೆ ಗೊತ್ತಿಲ್ಲ. ಸಿದ್ಧಾರ್ಥ ವಿಹಾರ್ ಟ್ರಸ್ಟ್‌ನಲ್ಲಿ ಏನಾಗುತ್ತೆ ಗೊತ್ತಾ ನಿಮಗೆ ಚುನಾವಣೆ ಆಯೋಗದಲ್ಲಿ ಏನಾಗುತ್ತಿದೆ ಗೊತ್ತಾ ಅವರಿಗೆ ಎಂದು ಕಿಡಿಕಾರಿದರು. ಹಿರಿಯ ನಾಯಕರು ನೀವು ಆರ್‌ಎಸ್‌ಎಸ್ ಹೇಳಿಕೊಟ್ಟಿರುವ ಪಾಠ ಹೇಳಿದ್ರೆ ನಾವು ಮಾತಾಡಬೇಕಾಗುತ್ತದೆ. ನೀವು ಮರ್ಯಾದೆ ಕೊಡಿ ನಾವು ಮರ್ಯಾದೆ ಕೊಡುತ್ತೇವೆ. ಮರ್ಯಾದೆ ಬಿಟ್ಟು ಮಾತಾಡೋಕೆ ನೀವು ರೆಡಿ ಇದ್ದರೆ ನಾವೂ ರೆಡಿ ಇದ್ದೇವೆ ಎಂದು ವಾಗ್ದಾಳಿ ನಡೆಸಿದರು.



ಇನ್ನು ಕಾಂಗ್ರೆಸ್ ವಿರುದ್ಧ ರಾಜ್ಯಪಾಲರಿಗೆ ಎನ್‌ಡಿಎ ಕೂಟ ದೂರು ಕೊಟ್ಟ ಕುರಿತು ಪ್ರತಿಕ್ರಿಯಿಸಿದ ಅವರು, ಎನ್‌ಡಿಎ ನಾಯಕರು ರಾಜ್ಯಪಾಲರಿಗೆ ದೂರು ಕೊಡಲಿ. ಅವರ ಲೆಟರ್ ಹೆಡ್‌ನಲ್ಲಿ ಫಾರ್ಮ್ 7 ಹೋಗಿದೆ. ಅದರ ಬಗ್ಗೆ ದೂರು ಕೊಡಲಿ. ಕಾರ್ಪೋರೇಟರ್, ನಾಯಕರು, ಲೆಟರ್ ಹೆಡ್‌ನಲ್ಲಿ ಫಾರ್ಮ್ 7 ಯಾಕೆ ಇದೆ 7 ಸಾವಿರ 5 ಸಾವಿರ ಫಾರ್ಮ್ 7 ಡಿಲೀಟ್ ಮಾಡಲು ಕೊಡುತ್ತಿದ್ದೀರಾ. ಅದೆಲ್ಲವನ್ನು ರಾಜ್ಯಪಾಲರು, ಚುನಾವಣೆ ಆಯೋಗಕ್ಕೆ ಹೇಳಲಿ. ಇವರು ಏನು ಬೇಕಾದರೂ ಮಾಡಬಹುದಾ ಎಂದು ಹರಿಹಾಯ್ದರು. ಕುಮಾರಸ್ವಾಮಿ ಫಾರ್ಮ್ 7 ಕೊಡೋದು ಸಂವಿಧಾನ ಹಕ್ಕು ಅಂತಾರೆ. ಮತದಾರರು ತಮ್ಮ ಮತ ಡಿಫೆಂಡ್ ಮಾಡಿಕೊಳ್ಳೋದು ಅವರ ಹಕ್ಕು ಅಲ್ಲವಾ? ಮತದಾರರಿಗೆ ಮೋಸ ಮಾಡಿದ್ರೆ, ಪಟ್ಟಿಯಿಂದ ಹೊರಗೆ ಇಟ್ಟರೆ ನನ್ನ ಹಕ್ಕು ಅಂತ ಅವರು ದೂರು ಕೊಡಬಹುದು ಅಲ್ಲವಾ? ನಾನು ಬದುಕಿದ್ದೇನೆ ಅಂತ ದೂರು ಕೊಡೋದು ತಪ್ಪಾ ಎಂದು ಗುಡುಗಿದರು.

## ಕೇಂದ್ರದಿಂದ 2 ಮಹತ್ವದ ನಿರ್ಧಾರ; ಸಾರಿಗೆಗೆ ಹೊಸ ಪ್ರಾಧಿಕಾರ, ಸಣ್ಣ ಉದ್ಯಮಗಳಿಗೆ 10 ಸಾವಿರ ಕೋಟಿ ರೂ. ನಿಧಿ

• **ಉದಯವಾಹಿನಿ, ನವದೆಹಲಿ:**

ಸಾರಿಗೆ ಮತ್ತು ಸಣ್ಣ ಹಾಗೂ ಮಧ್ಯಮ ಉದ್ಯಮಗಳ ಕ್ಷೇತ್ರಕ್ಕೆ ಉತ್ತೇಜನ ನೀಡಲು ಕೇಂದ್ರ ಸಚಿವ ಸಂಪುಟ ಎರಡು ಮಹತ್ವದ ನಿರ್ಧಾರಗಳನ್ನು ಕೈಗೊಂಡಿದೆ. ಸಮಗ್ರ ಸಾರಿಗೆ ಮತ್ತು ಸರಕು ಸಾಗಣೆ ಪ್ರಾಧಿಕಾರ ಸ್ಥಾಪನೆಗೆ ಹಾಗೂ 10,000 ಕೋಟಿ ಮೊತ್ತದ ಎಸ್‌ಎಂಇ ಬೆಳವಣಿಗೆ ನಿಧಿ ಸ್ಥಾಪನೆಗೆ ಸಂಪುಟ ಅನುಮೋದನೆ ನೀಡಿದೆ. ಸಾರಿಗೆ ಮತ್ತು ಸರಕು ಸಾಗಣೆ ಕ್ಷೇತ್ರದಲ್ಲಿ ಸಂಶೋಧನೆ, ಯೋಜನೆ, ಯೋಜನೆಗಳ ಮೌಲ್ಯಮಾಪನ, ಮೇಲ್ವಿಚಾರಣೆ ಹಾಗೂ ಪರಿಣಾಮದ ಅಂದಾಜುಗಳನ್ನು ಸಮನ್ವಯಗೊಳಿಸುವುದು ಪ್ರಮುಖ ಉದ್ದೇಶವಾಗಿದೆ. ರಸ್ತೆ, ರೈಲು, ಬಂದರು, ವಿಮಾನಯಾನ, ಒಳನಾಡು ಜಲಮಾರ್ಗ, ಕರಾವಳಿ ಸಾಗಣೆ, ನಗರ ಸಾರಿಗೆ ಹಾಗೂ ಸರಕು ಸಾಗಣೆ ಸೇರಿದಂತೆ ವಿವಿಧ ಸಾರಿಗೆ ವ್ಯವಸ್ಥೆಗಳನ್ನು ಒಟ್ಟಾಗಿ ಯೋಜಿಸಲು ರಾಷ್ಟ್ರೀಯ ಮಟ್ಟದ ಪ್ರಮುಖ ಸಂಸ್ಥೆಯಾಗಿ ಕಾರ್ಯನಿರ್ವಹಿಸಲಿದೆ. 500 ಕೋಟಿ ರೂ. ಅಥವಾ ಅದಕ್ಕಿಂತ ಹೆಚ್ಚಿನ ವೆಚ್ಚದ ಸಾರಿಗೆ ಮತ್ತು ಮೂಲಸೌಕರ್ಯ ಯೋಜನೆಗಳ ತಾಂತ್ರಿಕ ಮೌಲ್ಯಮಾಪನ ಹಾಗೂ ಮೇಲ್ವಿಚಾರಣೆಯನ್ನೂ ಮಾಡಲಿದೆ.

ಇ-ವೇ ಬಿಲ್, ವಾಹನ ನೋಂದಣಿ, ಮತ್ತು ನಗರ ಸಂಚಾರ ವ್ಯವಸ್ಥೆಗಳ ಮಾಹಿತಿಯನ್ನು ಒಟ್ಟುಗೂಡಿಸಿ ರಾಷ್ಟ್ರೀಯ ಸಾರಿಗೆ



ದತ್ತಾಂಶ ಸಂಗ್ರಹ ರೂಪಿಸುವ ಉದ್ದೇಶವೂ ಇದೆ. ಇದರಿಂದ ಸರಕು ಸಾಗಣೆ ಮಾರ್ಗಗಳ ವಿಶ್ಲೇಷಣೆ ಮತ್ತು ಯೋಜನೆಗಳ ಮೇಲ್ವಿಚಾರಣೆಗೆ ಸಹಾಯವಾಗಲಿದೆ.ಇದೇ ವೇಳೆ, ಸಣ್ಣ ಮತ್ತು ಮಧ್ಯಮ ಉದ್ಯಮಗಳ ಬೆಳವಣಿಗೆಗಾಗಿ 10,000 ಕೋಟಿ ರೂ. ಮೊತ್ತದ ಎಸ್‌ಎಂಇ ಬೆಳವಣಿಗೆ ನಿಧಿಗೆ ಸಂಪುಟ ಅನುಮೋದನೆ ನೀಡಿದೆ. ಕೇಂದ್ರ ಬಜೆಟ್ 2026-27ರಲ್ಲಿ ಈ ನಿಧಿಯನ್ನು ಘೋಷಿಸಲಾಗಿತ್ತು. ಈ ನಿಧಿಯ ಮೂಲಕ ಸಾಮರ್ಥ್ಯ ಹೊಂದಿರುವ ಸಣ್ಣ ಮತ್ತು ಮಧ್ಯಮ ಉದ್ಯಮಗಳಿಗೆ ದೀರ್ಘಾವಧಿಯ ಬಂಡವಾಳ ಒದಗಿಸುವ ಗುರಿ ಹೊಂದಲಾಗಿದೆ. ನಿರ್ಮಾಣ ಕ್ಷೇತ್ರದ ಉದ್ಯಮಗಳಿಗೆ ಹೆಚ್ಚಿನ ಆದ್ಯತೆ ನೀಡಲಾಗುತ್ತದೆ.

ಸೇವಾ ಕ್ಷೇತ್ರ, ತಂತ್ರಜ್ಞಾನ, ನವೋದ್ಯಮ ಹಾಗೂ ಪ್ರಮುಖ ಮೌಲ್ಯ ಸರಪಳಿಗಳಲ್ಲಿರುವ ಉದ್ಯಮಗಳಿಗೂ ಈ ನಿಧಿಯಿಂದ ಬೆಂಬಲ ದೊರೆಯಲಿದೆ. ಉದ್ಯಮಗಳ ವಿಸ್ತರಣೆ ಹಾಗೂ ಜಾಗತಿಕ ಮಟ್ಟದಲ್ಲಿ ಸ್ಪರ್ಧಿಸುವ ಭಾರತೀಯ ಉದ್ಯಮಗಳ ನಿರ್ಮಾಣಕ್ಕೆ ಈ ನಿಧಿ ನೆರವಾಗಲಿದೆ.

## ಕಾಮನ್ ಸೆನ್ಸ್ ಇಲ್ಲದ ಮಾಜಿ ಶಾಸಕಿ ಟಿವಿಯಲ್ಲಿ ಶೋ ಕೊಡುವುದಕ್ಕೆ ದೂರು ಕೊಟ್ಟಿದ್ದಾರೆ: ಸಿ.ಕೆ.ರಾಮಮೂರ್ತಿ

• **ಉದಯವಾಹಿನಿ, ಬೆಂಗಳೂರು**

ಜಯನಗರ ಮತದಾರರ ಪಟ್ಟಿಯಲ್ಲಿ 8,000 ಡಬಲ್ ಎಂಟ್ರಿ ಇದೆ. ಕಾಮನ್ ಸೆನ್ಸ್ ಇಲ್ಲದ ಮಾಜಿ ಶಾಸಕಿ ಟಿವಿಯಲ್ಲಿ ಶೋ ಕೊಡುವುದಕ್ಕೆ ದೂರು ಕೊಟ್ಟಿದ್ದಾರೆ ಎಂದು ಜಯನಗರ ಶಾಸಕ ಸಿ.ಕೆ.ರಾಮಮೂರ್ತಿ ವಾಗ್ದಾಳಿ ನಡೆಸಿದ್ದಾರೆ. ವಿಧಾನಸೌಧದಲ್ಲಿ ಮಾತನಾಡಿದ ಅವರು, ಜಯನಗರ ಎಸ್‌ಐಆರ್ ಆರೋಪ ವಿಚಾರವಾಗಿ ಪ್ರತಿಕ್ರಿಯಿಸುತ್ತಾ, ಇಬ್ಬರು ಬಿಜೆಪಿ ಕಾರ್ಯಕರ್ತರ ಮೇಲೆ ಮಾಜಿ ಶಾಸಕಿ ದೂರು ಕೊಟ್ಟಿದ್ದಾರೆ. ಅವರಿಗೆ ಏನಾದರೂ ಕಾಮನ್ ಸೆನ್ಸ್ ಇದಿಯಾ?. ದೂರು ಕೊಡುವುದಾದರೆ ಚುನಾವಣಾ ಆಯೋಗಕ್ಕೆ ದೂರು ಕೊಡಲಿ. ಪೊಲೀಸರು ಏಕೆ ಇಲ್ಲಿ ಎಂಟ್ರಿ ಕೊಡುತ್ತಾರೆ?. ನಾವು ಈಗ ಈ ಬಗ್ಗೆ ದೂರು ನೀಡಿದ್ದಲ್ಲ. ಎಸ್‌ಐಆರ್ ಬಳಿಕ ಎರಡು ಮೂರು ಬಾರಿ ದೂರು ಕೊಟ್ಟಿದ್ದೇವೆ ಎಂದರು.

ಜಿಬಿಎ ಕೂಡ ಅಲ್ಲಿನ ಇಆರ್‌ಒಗಳಿಗೆ ನೋಟೀಸ್ ಕೊಟ್ಟಿದೆ. ಇದರ ಮೇಲೆ ಕ್ರಮ ತೆಗೆದುಕೊಳ್ಳಬೇಕು ಎಂದು ನೋಟೀಸ್ ಕೊಟ್ಟಿದ್ದರು. ಆದರೆ, ಕ್ರಮ ಕೈಗೊಂಡಿಲ್ಲ. ಜಯನಗರದಲ್ಲಿ 8 ಸಾವಿರ ಡಬಲ್ ಎಂಟ್ರಿ ಇದೆ. ಅದನ್ನು ತನಿಖೆ ಮಾಡಿ ಎಂದು ದೂರು ಕೊಟ್ಟಿದ್ದೆವು. ಹೊಸ ಮತದಾರರ ಪಟ್ಟಿಯಲ್ಲೂ ಸತ್ತವರ ಹೆಸರು ಇದೆ. ಸ್ಮಶಾನದಿಂದಲೇ ಫಾರ್ಮ್‌ಗೆ ಸಹಿ ಮಾಡಿದ್ರಾ?. ಇದೇ ತರಹ ಪ್ರತಿ ಬೂತ್ ನಲ್ಲಿದೆ. ಶಿಫ್ಟ್ ಆದವರು ಕೂಡ ಮತದಾರರ ಪಟ್ಟಿಯಲ್ಲಿ ಹೆಸರಿದೆ. ಈ ಬಗ್ಗೆ ಪ್ರಶ್ನೆ ಮಾಡಬಾರದಾ ಎಂದು ಪ್ರಶ್ನಿಸಿದ್ದಾರೆ.



ಇಡೀ ಜಯನಗರದಲ್ಲಿ ಸುಮಾರು 12,000 ಮತದಾರರ ಹೆಸರು ಡಿಲೀಟ್ ಆಗಬೇಕು. ಏಕೆಂದರೆ ಡಬಲ್ ಎಂಟ್ರಿಯಾಗಿದೆ. ನಮ್ಮ ಕಾರ್ಯಕರ್ತರು ಮನೆ ಮನೆ ಹೋಗ್ತಾರೆ, ಮನೆ ಶಿಫ್ಟಿಂಗ್ ಆಗಿದೆ. ಗುರಪ್ಪನಪಾಳ್ಯದಲ್ಲಿ ಬರೇ 500 – 1000 ಆನ್ ಲೈನ್ ನಲ್ಲಿ ನೋಂದಣಿ ಮಾಡಿದ್ದಾರೆ. ಇದನ್ನು ಕೇಳಬಾರದಾ?. 8 ಸಾವಿರ ಮತದಾರರ ಪಟ್ಟಿಯಲ್ಲಿ ಹೆಸರಿದೆ ಎಂಬ ಮಾಹಿತಿ ಇದೆ. ಅದನ್ನು ತೆಗೆಯಬೇಕಿದೆ. ಇದನ್ನು ಪರಿಗಣಿಸಬೇಕಾಗಿರುವುದು ಚುನಾವಣಾ ಆಯೋಗ. ಈ ಬಗ್ಗೆ ದೂರು ಕೊಟ್ಟಿದ್ದೇವೆ. ತಲೇಲಿ ಬುದ್ದಿ ಇಲ್ಲದವರು ಶೋ ಮಾಡೋದಕ್ಕೆ ದೂರು ನೀಡಿದ್ದಾರೆ ಎಂದು ಟೀಕಿಸಿದರು. ಹೆಣ್ಣು ಮಗುವಿಗೆ ಬ್ಲಾಕ್ ಮೇಲ್ ಮಾಡಿ ಹೆದರಿಸಿ ವಿಡಿಯೋ ಮಾಡಿಕೊಂಡಿದ್ದಾರೆ. ರಾಮಲಿಂಗಾ ರೆಡ್ಡಿ ಸಾಹೇಬ್ರು ನ್ಯಾಯ ಕೊಡಿಸಬೇಕು. ನಾವು ಇದರ ಬಗ್ಗೆ ಕೋರ್ಟ್‌ಗೆ ಹೋಗುತ್ತೇವೆ. ನಾಳೆ ನಾವು ಜಯನಗರದ ಪೊಲೀಸ್ ಠಾಣೆಗೆ ಮುತ್ತಿಗೆ ಹಾಕುವ ಕೆಲಸ ಮಾಡಲಿದ್ದೇವೆ. ನಾವು ಕೊಟ್ಟ ದೂರು ಗೌಪ್ಯವಾಗಿ ಇರಬೇಕು. ಆದರೆ, ಅದನ್ನು ಬಿಎಲ್ ಒಗಳು ಮಾಜಿ ಕಾರ್ಪೋರೇಟರ್‌ಗೆ ಕೊಟ್ಟಿದ್ದಾರೆ. ಅದು ಅವರಿಗೆ ಏಕೆ ಕೊಡುತ್ತಾರೆ. ಜಯನಗರ ಏನು ಮಾಡ್ತಾ ಇದ್ದಾರೆ?. ಈ ಬಗ್ಗೆಯೂ ತನಿಖೆ ಆಗಬೇಕು.

**ಈ ದಿನದ ದರ** ಪೆಟ್ರೋಲ್: 111.68₹/L ಡೀಸೆಲ್ : 99.56₹/L ಬಂಗಾರ: ₹ 14,902/Gram 24ct ₹ 13,660 /Gram 22ct ಬೆಳ್ಳಿ: ₹235.00/

# ಶ್ರೀ ಶ್ರೀನಿವಾಸ ಕಲ್ಯಾಣ ಧಾರ್ಮಿಕ ಪ್ರವಚನ

• ಉದಯವಾಹಿನಿ, ಬೆಂಗಳೂರು

ನಗರದ ವಿವಿಧ ಧಾರ್ಮಿಕ ಮಂದಿರಗಳಲ್ಲಿ ಆಶ್ವೀಜ ಮಾಸದ ಪ್ರಯುಕ್ತ ಶ್ರೀ ಶ್ರೀನಿವಾಸ ಕಲ್ಯಾಣ ಧಾರ್ಮಿಕ ಪ್ರವಚನ ಏರ್ಪಡಿಸಿದೆ. ಸುಬ್ರಹ್ಮಣ್ಯನಗರ : ಸೋಸಲೆ ಶ್ರೀ ವ್ಯಾಸರಾಜ ಮಠದ ವತಿಯಿಂದ ಅಕ್ಟೋಬರ್ 11 ರಿಂದ 20ರ ವರೆಗೆ ಪ್ರತಿದಿನ ಸಂಜೆ 6-00ಕ್ಕೆ ಶ್ರೀ ಶ್ರೀನಿವಾಸ ಕಲ್ಯಾಣ ಧಾರ್ಮಿಕ ಪ್ರವಚನ. ಪ್ರವಚನಕಾರರು ; ಶ್ರೀ ವಾಸುದೇವಾಚಾರ್ ಸತ್ತಿಗೇರಿ. ಸ್ಥಳ : ಸೋಸಲೆ ಶ್ರೀ ವ್ಯಾಸರಾಜ ಮಠ, 5ನೇ ಮುಖ್ಯರಸ್ತೆ, ಸುಬ್ರಹ್ಮಣ್ಯನಗರ, ರಾಜಾಜಿನಗರ 2ನೇ ಹಂತ, ಬಸವೇಶ್ವರನಗರ : ಮಧ್ವಸಂಘದ ವತಿಯಿಂದ ಅಕ್ಟೋಬರ್ 11 ರಿಂದ 21ರ ವರೆಗೆ ಪ್ರತಿದಿನ ಸಂಜೆ 6-30ಕ್ಕೆ ಶ್ರೀ ಶ್ರೀನಿವಾಸ ಕಲ್ಯಾಣ ಧಾರ್ಮಿಕ ಪ್ರವಚನ.


ಉದಯವಾಹಿನಿ ಚಿತ್ರ

ಪ್ರವಚನಕಾರರು : ಶ್ರೀ ಚಂದ್ರಶೇಖರ ಆಚಾರ್. ಸ್ಥಳ : ಶ್ರೀ ಮಾಧ್ವಸಂಘ, ಬಸವೇಶ್ವರನಗರ, ತ್ಯಾಗರಾಜನಗರ : ಶ್ರೀ ರಾಘವೇಂದ್ರ ಸ್ವಾಮಿಗಳ ಮಠದ ವತಿಯಿಂದ ಅಕ್ಟೋಬರ್ 13 ರಿಂದ 20ರ ವರೆಗೆ ಪ್ರತಿದಿನ ಸಂಜೆ 6-30ಕ್ಕೆ ಶ್ರೀ ಶ್ರೀನಿವಾಸ ಕಲ್ಯಾಣ ಧಾರ್ಮಿಕ ಪ್ರವಚನ. ಪ್ರವಚನಕಾರರು : ಶ್ರೀ ಕೃಷ್ಣಾಚಾರ್ ಕೆಂಪದಾಳಹಳ್ಳಿ. ಸ್ಥಳ : ಶ್ರೀ ರಾಘವೇಂದ್ರ ಸ್ವಾಮಿಗಳ ಮಠ, 11ನೇ ಅಡ್ಡರಸ್ತೆ, ತ್ಯಾಗರಾಜನಗರ.ವಿಜಯನಗರ : ವಿಜಯ ಮಧ್ವಸಂಘದ ವತಿಯಿಂದ ಅಕ್ಟೋಬರ್ 11 ರಿಂದ 20ರ ವರೆಗೆ ಪ್ರತಿದಿನ ಸಂಜೆ 6-30ಕ್ಕೆ ಶ್ರೀ ಶ್ರೀನಿವಾಸ ಕಲ್ಯಾಣ ಧಾರ್ಮಿಕ ಪ್ರವಚನ. ಪ್ರವಚನಕಾರರು : ಶ್ರೀ ಅನಿರುದ್ಧಾಚಾರ್. ಸ್ಥಳ : ವಿಜಯ ಮಧ್ವಸಂಘ, 37/2, ಗಂಗಾಧರ ಬಡಾವಣೆ, ವಿಜಯನಗರ. ಸುಧೀಂದ್ರನಗರ : ಶ್ರೀ ರಾಘವೇಂದ್ರ ಸೇವಾ ಸಮಿತಿಯ ವತಿಯಿಂದ ಅಕ್ಟೋಬರ್ 11 ರಿಂದ 21ರ ವರೆಗೆ ಪ್ರತಿದಿನ ಸಂಜೆ 7-00ಕ್ಕೆ ಡಾ|| ವಿನಾಯಕ ನಾಮಣ್ಣವರ್ ರಿಂದ ಶ್ರೀ ಶ್ರೀನಿವಾಸ ಕಲ್ಯಾಣ ಧಾರ್ಮಿಕ ಪ್ರವಚನ. ಸ್ಥಳ : ಶ್ರೀ ರಾಘವೇಂದ್ರ ಸ್ವಾಮಿಗಳ ಮಠ, 6ನೇ ಅಡ್ಡರಸ್ತೆ, ಈಜುಕೊಳದ ಬಡಾವಣೆ, ಸುಧೀಂದ್ರನಗರ. ಪ್ರಕಾಶನಗರ : ಶ್ರೀ ಗುರು ರಾಘವೇಂದ್ರ ಸೇವಾ ಟ್ರಸ್ಟ್ ವತಿಯಿಂದ ಅಕ್ಟೋಬರ್ 11 ರಿಂದ 20ರ ವರೆಗೆ ಪ್ರತಿದಿನ ಸಂಜೆ 7-00ಕ್ಕೆ ಪ್ರವಚನಕಾರರಿಂದ ಶ್ರೀ ಶ್ರೀನಿವಾಸ ಕಲ್ಯಾಣ ಧಾರ್ಮಿಕ ಪ್ರವಚನ. ಸ್ಥಳ : ಶ್ರೀ ರಾಘವೇಂದ್ರ ಸ್ವಾಮಿಗಳ ಮಠ, 11ನೇ ಮುಖ್ಯರಸ್ತೆ, ಪ್ರಕಾಶನಗರ.

## ಬೆಂಗಳೂರು ಸೇರಿ ಹಲವು ಜಿಲ್ಲೆಗಳಲ್ಲಿ ಮುಂದಿನ 7 ದಿನ ಮಳೆ

• ಉದಯವಾಹಿನಿ, ಬೆಂಗಳೂರು

ರಾಜ್ಯದಲ್ಲಿ ಮುಂದಿನ ಒಂದು ವಾರ ಹಗುರದಿಂದ ಸಾಧಾರಣ ಮಳೆಯಾಗುವ ಸಾಧ್ಯತೆ ಇದೆ ಎಂದು ಭಾರತೀಯ ಹವಾಮಾನ ಇಲಾಖೆ (ಐಎಂಡಿ) ಮುನ್ಸೂಚನೆ ನೀಡಿದೆ. ಮಂಗಳವಾರ ಬೆಂಗಳೂರು ನಗರ, ಬೆಂಗಳೂರು ಗ್ರಾಮಾಂತರ ಸೇರಿದಂತೆ ಹಲವು ಜಿಲ್ಲೆಗಳಲ್ಲಿ ಹಗುರದಿಂದ ಸಾಧಾರಣ ಮಳೆಯಾಗುವ ಸಾಧ್ಯತೆ ಇದೆ. ದಕ್ಷಿಣ ಒಳನಾಡಿನ ಚಿಕ್ಕಮಗಳೂರು, ಹಾಸನ ಹಾಗೂ ಶಿವಮೊಗ್ಗ ಸೇರಿದಂತೆ ಕೆಲವೆಡೆ ಪ್ರತ್ಯೇಕವಾಗಿ ಮಳೆಯಾಗುವ ನಿರೀಕ್ಷೆಯಿದೆ. ಕರಾವಳಿ ಕರ್ನಾಟಕದಲ್ಲಿ ಮಂಗಳವಾರ ಹಲವು ಕಡೆ ಹಗುರದಿಂದ ಸಾಧಾರಣ ಮಳೆಯಾಗುವ ಸಾಧ್ಯತೆ ಇದ್ದು, ಬುಧವಾರದಿಂದ ಶನಿವಾರದವರೆಗೆ ಕೆಲವೆಡೆ ಮಳೆಯಾಗಬಹುದು.ಭಾನುವಾರ ದಕ್ಷಿಣ ಕನ್ನಡ ಜಿಲ್ಲೆಯ ಒಂದೆರಡು ಕಡೆ ಮಳೆಯಾಗುವ ಸಾಧ್ಯತೆ ಇದ್ದರೆ, ಉಡುಪಿ ಹಾಗೂ ಉತ್ತರ ಕನ್ನಡ ಜಿಲ್ಲೆಗಳಲ್ಲಿ ಬಹುತೇಕ ಒಣಹವೆ ಮುಂದುವರಿಯುವ ನಿರೀಕ್ಷೆಯಿದೆ.

## ಏಷ್ಯನ್ ಮಾಸ್ಟರ್ಸ್ ಈಜು ಚಾಂಪಿಯನ್ ಶಿಪ್ ಡಾ||ಸುನೀತಾ ಅರ್ಗವಾಲ್ ಅವರಿಗೆ 2 ಚಿನ್ನದ ಪದಕ ಮುಡಿಗೆ

• ಉದಯವಾಹಿನಿ, ಬೆಂಗಳೂರು

ಉದಯವಾಹಿನಿ ಚಿತ್ರ



ಏಷ್ಯನ್ ಮಾಸ್ಟರ್ಸ್ ಈಜು ಚಾಂಪಿಯನ್ ಶಿಪ್‌ನಲ್ಲಿ ಅಗರವಾಲ್ ಆಸ್ಪತ್ರೆಯ ಡಾ.ಸುನೀತಾ ಅರ್ಗವಾಲ್ ರವರು 100ಮೀಟರ್ ಮತ್ತು 100ಮೀಟರ್ಸ್ ಫ್ರೀಸ್ಟೈಲ್ ಎರಡು ವಿಭಾಗದಲ್ಲಿ ಚಿನ್ನದ ಪದಕ ಗಳಿಸಿದರು.

ಇದೇ ಸಂದರ್ಭದಲ್ಲಿ ಡಾ||ಸುನೀತಾ ಅರ್ಗವಾಲ್ ರವರು ಮಾತನಾಡಿ ಪ್ರತಿಯೊಬ್ಬರು ಆರೋಗ್ಯವಂತರಾಗಿ ಇರಬೇಕು ಯೋಗ, ಧ್ಯಾನ ಮತ್ತು ಕ್ರೀಡಾ ಚಟುವಟಿಕೆಯನ್ನ ಜೀವನದಲ್ಲಿ ಅಳವಡಿಸಿಕೊಳ್ಳಬೇಕು.

ಮಾನಸಿಕ, ದೈಹಿಕವಾಗಿ ಆರೋಗ್ಯ ಜೀವನಕ್ಕೆ ಪ್ರತಿ ದಿನ ವಾಕಿಂಗ್ , ವ್ಯಾಯಾಮ ಈಜು ಎಲ್ಲಾ ಕ್ರೀಡಾ ಚಟುವಟಿಕೆಗಳಲ್ಲಿ ಒಂದು ಅಥವಾ ಎರಡು ಗಂಟೆ ಅಭ್ಯಾಸ ಮಾಡಿಕೊಳ್ಳಿ ಇದರಿಂದ ಉತ್ತಮವಾಗಿ ಬದುಕುಬಹುದು.ವ್ಯಾಯಾಮದ ಜೊತೆಯಲ್ಲಿ ಉತ್ತಮ ಆಹಾರಗಳಾದ ಸಿರಿಧ್ಯಾನ, ತರಕಾರಿ, ಹಣ್ಣುಗಳು ಸೇವನೆ, ಜಂಕ್ ಫುಡ್ , ಎಣ್ಣೆಯಲ್ಲಿ ಕರಿದ ಆಹಾರ ಸೇವನೆ ಕಡಿಮೆ ಮಾಡಿ. ಈಜು ಕಲಿಯಬೇಕು ಇದರಿಂದ ಮನುಷ್ಯ ದೇಹದ ಎಲ್ಲಾ ಭಾಗಗಳಿಗೆ ವ್ಯಾಯಾಮವಾಗುತ್ತದೆ, ರಕ್ತ ಸಂಚಲನ ಸುಲಭವಾಗುತ್ತದೆ ಎಂದು ಹೇಳಿದರು.

## ತೆರೆದ ಕೊಳವೆಬಾವಿ ಮುಕ್ತ ಕರ್ನಾಟಕದ ಗುರಿ- ಸಚಿವ ಡಾ. ಅಜಯ್ ಧರ್ಮಸಿಂಗ್


ಉದಯವಾಹಿನಿ ಚಿತ್ರ

• ಉದಯವಾಹಿನಿ, ಬೆಂಗಳೂರು

ವಿಫಲ ಹಾಗೂ ನಿರುಪಯುಕ್ತ ತೆರೆದ ಕೊಳವೆಬಾವಿಗಳಿಂದ ಮಕ್ಕಳು ಅಪಘಾತಕ್ಕೀಡಾಗುವ ಹಾಗೂ ಜಾನುವಾರುಗಳಿಗೆ ಅಪಾಯ ಉಂಟಾಗುವ ಪ್ರಕರಣಗಳನ್ನು ಗಂಭೀರವಾಗಿ ಪರಿಗಣಿಸಿರುವ ಸಣ್ಣ ನೀರಾವರಿ ಮತ್ತು ಅಂತರ್ಜಲ ಅಭಿವೃದ್ಧಿ ಇಲಾಖೆ, ರಾಜ್ಯಾದ್ಯಂತ 'ಕೊಳವೆಬಾವಿ ಸುರಕ್ಷತಾ ಅಭಿಯಾನ' ಆರಂಭಿಸಲು ಮುಂದಾಗಿದೆ ಎಂದು ಸಣ್ಣ ನೀರಾವರಿ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವ ಡಾ. ಅಜಯ್ ಧರ್ಮಸಿಂಗ್ ತಿಳಿಸಿದ್ದಾರೆ. ಅಭಿಯಾನದ ರೂಪುರೇಷೆ, ಅನುಷ್ಠಾನ ವಿಧಾನ, ಇಲಾಖಾವಾರು ಮಾಹಿತಿ ಸಂಗ್ರಹ ಹಾಗೂ ಮೇಲ್ವಿಚಾರಣೆಗೆ ಸಂಬಂಧಿಸಿದಂತೆ ಸಮಗ್ರ ಕಾರ್ಯಯೋಜನೆ ಸಿದ್ಧಪಡಿಸುವಂತೆ ಅಂತರ್ಜಲ ಅಭಿವೃದ್ಧಿ ನಿರ್ದೇಶನಾಲಯಕ್ಕೆ ಸಚಿವರು ಸೂಚನೆ ನೀಡಿದ್ದಾರೆ. ಕೊಳವೆಬಾವಿ ಕೊರೆಯುವ ಸಂದರ್ಭದಲ್ಲಿ ನೀರು ಸಿಗದೆ ವಿಫಲವಾದ ಅಥವಾ ಬಳಕೆಗೆ ಯೋಗ್ಯವಾಗದ ಕೊಳವೆಬಾವಿಗಳನ್ನು ಸುರಕ್ಷಿತವಾಗಿ ಮುಚ್ಚುವುದು ಕಡ್ಡಾಯವಾಗಿದೆ. ಸುಪ್ರೀಂ ಕೋರ್ಟ್ ನಿರ್ದೇಶನಗಳ ಹಿನ್ನೆಲೆಯಲ್ಲಿ ರಾಜ್ಯದಲ್ಲೂ ಈ ಕುರಿತು ಅಗತ್ಯ ಸುರಕ್ಷತಾ ಕ್ರಮಗಳು ಹಾಗೂ ಮೇಲ್ವಿಚಾರಣಾ ವ್ಯವಸ್ಥೆಗೆ ಕಾನೂನುಬದ್ಧ ಅವಕಾಶ ಕಲ್ಪಿಸಲಾಗಿದೆ. ಆದರೂ ದಾಖಲೆಗಳಿಗೆ ಬಾರದ ಅಥವಾ ಸಮರ್ಪಕವಾಗಿ ಮುಚ್ಚದೇ ಬಿಟ್ಟಿರುವ ಕೊಳವೆಬಾವಿಗಳು ಇರುವ ಸಾಧ್ಯತೆಯನ್ನು ಸಂಪೂರ್ಣವಾಗಿ ತಳ್ಳಿ ಹಾಕಲಾಗುವುದಿಲ್ಲ ಎಂದು ಸಚಿವರು ಹೇಳಿದ್ದಾರೆ. ''ಒಂದು ತೆರೆದ ಕೊಳವೆಬಾವಿಯೂ ಮಗುವಿನ ಜೀವಕ್ಕೆ ಅಪಾಯವಾಗಬಾರದು. ಮೊದಲ ಹಂತದಲ್ಲಿ ಸಣ್ಣ ನೀರಾವರಿ ಇಲಾಖೆಯೇ ಕೊರೆಸಿರುವ ಎಲ್ಲಾ ವಿಫಲ ಮತ್ತು ನಿರುಪಯುಕ್ತ ಕೊಳವೆಬಾವಿಗಳನ್ನು ಗುರುತಿಸಿ, ಅವು ಸುರಕ್ಷಿತವಾಗಿ ಮುಚ್ಚಲಾಗಿದೆಯೇ ಎಂಬುದನ್ನು ಪರಿಶೀಲಿಸಲಾಗುವುದು.

## ರಾಜ್ಯಪಾಲರ ಮಧ್ಯಪ್ರವೇಶಕ್ಕೆ NDA ನಾಯಕರ ಮನವಿ!

• ಉದಯವಾಹಿನಿ, ಬೆಂಗಳೂರು

ಮತದಾರರ ಪಟ್ಟಿಯ ವಿಶೇಷ ಪರಿಷ್ಕರಣೆ ಪ್ರಕ್ರಿಯೆಯಲ್ಲಿ ರಾಜ್ಯ ಸರ್ಕಾರವು ನಡೆಸುತ್ತಿರುವ ಅತಿಯಾದ ಹಸ್ತಕ್ಷೇಪದ ವಿರುದ್ಧ ಮಧ್ಯಪ್ರವೇಶಿಸುವಂತೆ ಹಾಗೂ 'ಫಾರ್ಮ್-7' ಮೂಲಕ ಆಕ್ಷೇಪಣೆ ಸಲ್ಲಿಸುವವರ ವಿರುದ್ಧ ಅನಗತ್ಯ ಕ್ರಿಮಿನಲ್ ಪ್ರಕರಣಗಳನ್ನು ದಾಖಲಿಸುವುದನ್ನು ತಡೆಯುವಂತೆ ಕೋರಿ, ಎನ್‌ಡಿಎ ನಿಯೋಗವೊಂದು ರಾಜ್ಯಪಾಲ ಥಾವರ್‌ಚಂದ್ ಗೆಹ್ಲೋಟ್ ಅವರಿಗೆ ಮನವಿ ಸಲ್ಲಿಸಿದೆ. ರಾಜ್ಯಪಾಲರಿಗೆ ಸಲ್ಲಿಸಿದ ಪತ್ರದಲ್ಲಿ, ಕಾಂಗ್ರೆಸ್‌ಸದಸ್ಯರು ಎಸ್‌ಐಆರ್ ಪ್ರಕ್ರಿಯೆಯ ಮೇಲೆ ಪ್ರಭಾವ ಬೀರುತ್ತಿದ್ದಾರೆ. ಮತದಾರರ ಪಟ್ಟಿಯಲ್ಲಿನ ಹೆಸರುಗಳ ವಿರುದ್ಧ ಆಕ್ಷೇಪಣೆ ಸಲ್ಲಿಸಿದ ವ್ಯಕ್ತಿಗಳ ವಿರುದ್ಧ ವಿಶೇಷವಾಗಿ ಬಿಜೆಪಿ ಕಾರ್ಯಕರ್ತರು ಮತ್ತು ಬೆಂಬಲಿಗರನ್ನು ಬೆದರಿಸಲು ರಾಜ್ಯ ಪೊಲೀಸ್ ಯಂತ್ರವನ್ನು ದುರುಪಯೋಗಪಡಿಸಿಕೊಳ್ಳುತ್ತಿದ್ದಾರೆ. ಎಚ್.ಡಿ. ಕುಮಾರಸ್ವಾಮಿ, ಆರ್. ಅಶೋಕ ಮತ್ತು ಚಲವಾದಿ ನಾರಾಯಣಸ್ವಾಮಿ ಸೇರಿದಂತೆ ಬಿಜೆಪಿ ಮತ್ತು ಜೆಡಿಎಸ್ ನಾಯಕರಿದ್ದ ನಿಯೋಗವು ಲೋಕ ಭವನದಲ್ಲಿ ರಾಜ್ಯಪಾಲರನ್ನು ಭೇಟಿಯಾಗಿ ದೂರು ಪತ್ರವನ್ನು ಸಲ್ಲಿಸಿದೆ.

## ಮುಂದಿನ 15 ವರ್ಷಗಳಲ್ಲಿ ನಗರದ ಚಿತ್ರಣವೇ ಬದಲು..!

• ಉದಯವಾಹಿನಿ, ಬೆಂಗಳೂರು

ಬೆಂಗಳೂರು ಮಹಾನಗರ ಪ್ರದೇಶ ಅಭಿವೃದ್ಧಿ ಪ್ರಾಧಿಕಾರ (ಬಿಎಂಆರ್‌ಡಿಎ) ವ್ಯಾಪ್ತಿಯ ಪ್ರದೇಶಗಳ ಅಭಿವೃದ್ಧಿಗೆ ಮುಂದಿನ 10-15 ವರ್ಷಗಳ ಸಮಗ್ರ ಯೋಜನೆಗಳನ್ನು ಸಿದ್ಧಪಡಿಸಲಾಗುತ್ತಿದೆ ಎಂದು ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಸೋಮವಾರ ತಿಳಿಸಿದ್ದಾರೆ.

ಬೆಂಗಳೂರಿನಲ್ಲಿ ನಡೆದ ಬೆಂಗಳೂರು ಮಹಾನಗರ ಪ್ರದೇಶ ಆರ್ಥಿಕ ಅಭಿವೃದ್ಧಿ ಯೋಜನೆಯ ಕಾರ್ಯತಂತ್ರ ಹಿರಿಯ ಸಲಹಾ ಸಮೂಹದ ಸಭೆಯಲ್ಲಿ ಮಾತನಾಡಿದ ಅವರು, ಬೆಂಗಳೂರು ನಗರ ಜಿಲ್ಲೆಯ ಎಲ್ಲಾ ಪ್ರದೇಶಗಳನ್ನು ಗ್ರೇಟರ್ ಬೆಂಗಳೂರು ಪ್ರಾಧಿಕಾರ (ಜಿಬಿಎ) ವ್ಯಾಪ್ತಿಗೆ ತರಲಾಗುವುದು ಎಂದು ಹೇಳಿದರು.

2047ರ ವೇಳೆಗೆ ರಾಜ್ಯದ ಆರ್ಥಿಕತೆಯನ್ನು 1 ಟ್ರಿಲಿಯನ್ ಡಾಲರ್‌ಗೆ ಕೊಂಡೊಯ್ಯುವ ಗುರಿ ಹೊಂದಲಾಗಿದೆ. 2037ರ ವೇಳೆಗೆ ಆರ್ಥಿಕತೆಯನ್ನು 400-420 ಬಿಲಿಯನ್ ಡಾಲರ್‌ಗೆ ತಲುಪಿಸಲು ಯೋಜನೆ ರೂಪಿಸಲಾಗಿದೆ. ಇದರ ಜೊತೆಗೆ ಬೆಂಗಳೂರು ಮಹಾನಗರ ಪ್ರದೇಶದಲ್ಲಿ ಸುಗಮ ಸಂಚಾರ ವ್ಯವಸ್ಥೆ, ವಸತಿ ಹಾಗೂ ಕೈಗಾರಿಕಾ ಅಭಿವೃದ್ಧಿಗೆ ನೀಲನಕ್ಷೆ ಸಿದ್ಧಪಡಿಸಲಾಗುತ್ತಿದೆ. ಬಿಎಂಆರ್‌ನಲ್ಲಿ ಒಂಬತ್ತು ಹೊಸ ಸಮಗ್ರ ಕೈಗಾರಿಕಾ ಟೌನ್‌ಶಿಪ್‌ಗಳನ್ನು ನಿರ್ಮಿಸಬೇಕಿದೆ ಎಂದು ತಿಳಿಸಿದರು. ಈಗಾಗಲೇ 7,900 ಎಕರೆ ಭೂಮಿಯನ್ನು ಸ್ವಾಧೀನಪಡಿಸಿಕೊಳ್ಳಲಾಗಿದೆ. ಇನ್ನೂ 5,600 ಎಕರೆ ಭೂಮಿ ಸ್ವಾಧೀನಪಡಿಸಿಕೊಳ್ಳುವ ಪ್ರಕ್ರಿಯೆ ನಡೆಯುತ್ತಿದೆ.

# KSTDC 24 ಹೋಟೆಲ್, 2 ರೆಸ್ಟೋರೆಂಟ್‌ಗಳಿಗೆ ಹೊಸ ರೂಪ: ಸಚಿವ ಕೆ.ಜೆ. ಜಾರ್ಜ್

### ಹಲವು ಮಯೂರ ಹೋಟೆಲ್‌ಗಳು ಹಂಪಿ, ಜೋಗ್ ಫಾಲ್ಸ್, ನಂದಿ ಹಿಲ್ಸ್, ಮಡಿಕೇರಿ, ಕೆಆರ್‌ಎಸ್ ಸೇರಿದಂತೆ ರಾಜ್ಯದ ಪ್ರಮುಖ ಪ್ರವಾಸಿ ತಾಣಗಳಿಗೆ ಅತ್ಯಂತ ಸಮೀಪದ ವಿಶಿಷ್ಟ ಸ್ಥಳಗಳಲ್ಲಿ ಕಾರ್ಯನಿರ್ವಹಿಸುತ್ತಿವೆ.

• ಉದಯವಾಹಿನಿ, ಬೆಂಗಳೂರು

ರಾಜ್ಯದ ಪ್ರಮುಖ ಪ್ರವಾಸಿ ತಾಣಗಳಲ್ಲಿರುವ ಕರ್ನಾಟಕ ರಾಜ್ಯ ಪ್ರವಾಸೋದ್ಯಮ ಅಭಿವೃದ್ಧಿ ನಿಗಮದ 24 ಹೋಟೆಲ್‌ಗಳು ಹಾಗೂ 2 ರೆಸ್ಟೋರೆಂಟ್‌ಗಳನ್ನು 100 ಕೋಟಿ ವೆಚ್ಚದಲ್ಲಿ ಹಂತ ಹಂತವಾಗಿ ಸಮಗ್ರವಾಗಿ ಮೇಲ್ದರ್ಜೆಗೇರಿಸಲು ನಿರ್ಧರಿಸಲಾಗಿದೆ ಎಂದು ಇಂಧನ ಮತ್ತು ಪ್ರವಾಸೋದ್ಯಮ ಸಚಿವ ಕೆ.ಜೆ. ಜಾರ್ಜ್ ತಿಳಿಸಿದ್ದಾರೆ.

1 100 ಕೋಟಿ ವೆಚ್ಚದಲ್ಲಿ ಹಂತ ಹಂತವಾಗಿ
2 ವೃತ್ತಿಪರ ಆತಿಥ್ಯ, ಸುಗಮ ಕಾಯ್ದಿರಿಸುವಿಕೆ
3 ಅತಿಥಿ ಅನುಭವವನ್ನು ಉತ್ತಮಪಡಿಸುವುದು

ಪ್ರವಾಸಿಗರಿಗೆ ಕೇವಲ ವಸತಿ ಒದಗಿಸುವುದಕ್ಕೆ ಸೀಮಿತವಾಗದೆ, ಉತ್ತಮ ಕೊಠಡಿ, ಗುಣಮಟ್ಟದ ಆಹಾರ, ಸ್ವಚ್ಛತೆ, ವೃತ್ತಿಪರ ಆತಿಥ್ಯ, ಸುಗಮ ಕಾಯ್ದಿರಿಸುವಿಕೆ ಹಾಗೂ ಒಟ್ಟಾರೆ ಅತಿಥಿ ಅನುಭವವನ್ನು ಉತ್ತಮಪಡಿಸುವುದು ಈ ಯೋಜನೆಯ ಪ್ರಮುಖ ಉದ್ದೇಶವಾಗಿದೆ.

ಹಲವು ಮಯೂರ ಹೋಟೆಲ್‌ಗಳು ಹಂಪಿ, ಜೋಗ್ ಫಾಲ್ಸ್, ನಂದಿ ಹಿಲ್ಸ್, ಮಡಿಕೇರಿ, ಕೆಆರ್ ಎಸ್ ಸೇರಿದಂತೆ ರಾಜ್ಯದ ಪ್ರಮುಖ ಪ್ರವಾಸಿ ತಾಣಗಳಿಗೆ ಅತ್ಯಂತ ಸಮೀಪದ ವಿಶಿಷ್ಟ ಸ್ಥಳಗಳಲ್ಲಿ ಕಾರ್ಯನಿರ್ವಹಿಸುತ್ತಿವೆ. ಖಾಸಗಿ ಆತಿಥ್ಯ ಸಂಸ್ಥೆಗಳಿಗೆ ಸುಲಭವಾಗಿ ಲಭ್ಯವಾಗದಂತಹ ಸ್ಥಳಗಳಲ್ಲಿ ಆಸ್ತಿಗಳು ಇರುವುದೇ ನಿಗಮದ ಪ್ರಮುಖ ಬಲವಾಗಿದೆ. ಈ ಸ್ಥಳದ ಅನುಕೂಲವನ್ನು ಉತ್ತಮ ಸೌಲಭ್ಯ ಮತ್ತು ವೃತ್ತಿಪರ ಸೇವೆಯೊಂದಿಗೆ ಜೋಡಿಸಿ ಪ್ರವಾಸಿಗರ ಅನುಭವ ಹಾಗೂ ನಿಗಮದ ಆದಾಯ ಎರಡನ್ನೂ ಹೆಚ್ಚಿಸುವ ಗುರಿ ಹೊಂದಲಾಗಿದೆ. ಕೊಠಡಿಯಿಂದ ಆತಿಥ್ಯ ಸೇವೆಯವರೆಗೆ ಸಮಗ್ರ ಸುಧಾರಣೆ: 100 ಕೋಟಿ ಮೇಲ್ದರ್ಜೆ ಯೋಜನೆಯಡಿ ಹೋಟೆಲ್ ಕೊಠಡಿಗಳು, ಸ್ನಾನಗೃಹಗಳು, ರೆಸ್ಟೋರೆಂಟ್‌ಗಳು, ಅಡುಗೆಮನೆಗಳು, ಸ್ವಾಗತ ಕೇಂದ್ರಗಳು, ಸಾಮಾನ್ಯ


ಉದಯವಾಹಿನಿ ಚಿತ್ರ

ಪ್ರದೇಶಗಳು, ಪೀಠೋಪಕರಣ, ಬೆಳಕಿನ ವ್ಯವಸ್ಥೆ, ಉದ್ಯಾನ ಮತ್ತು ಸುತ್ತಮುತ್ತಲಿನ ಪರಿಸರ ಸೇರಿದಂತೆ ಪ್ರವಾಸಿಗರಿಗೆ ಅಗತ್ಯವಿರುವ ಸೌಲಭ್ಯಗಳನ್ನು ಹಂತ ಹಂತವಾಗಿ ಸುಧಾರಿಸಲಾಗುವುದು.

ಮೂಲಸೌಕರ್ಯದ ಜೊತೆಗೆ ಸ್ವಚ್ಛತೆ, ಆಹಾರದ ಗುಣಮಟ್ಟ, ಕೊಠಡಿ ನಿರ್ವಹಣೆ, ಸಿಬ್ಬಂದಿಯ ಆತಿಥ್ಯ ಕೌಶಲ್ಯ, ಆನ್‌ಲೈನ್ ಕೊಠಡಿ ಕಾಯ್ದಿರಿಸುವ ವ್ಯವಸ್ಥೆ ಹಾಗೂ ಅತಿಥಿಗಳ ಅಭಿಪ್ರಾಯ ಸಂಗ್ರಹ ಮತ್ತು ಸ್ಪಂದನಾ ವ್ಯವಸ್ಥೆಗಳನ್ನೂ ಬಲಪಡಿಸಲಾಗುವುದು. ಆಯಾ ಹೋಟೆಲ್‌ಗಳ ಸ್ಥಳ, ಪ್ರವಾಸಿಗರ ಬೇಡಿಕೆ ಮತ್ತು ಕಾರ್ಯಸಾಧ್ಯತೆಯನ್ನು ಪರಿಗಣಿಸಿ 3-ಸ್ಟಾರ್ ಮಟ್ಟದ ಹಾಗೂ ಅದಕ್ಕಿಂತ ಉತ್ತಮ ಸೌಲಭ್ಯ ಮತ್ತು ಸೇವಾ ಗುಣಮಟ್ಟಕ್ಕೆ ಮೇಲ್ದರ್ಜೆಗೇರಿಸಲು ಪ್ರತ್ಯೇಕ ಕಾರ್ಯಯೋಜನೆ ರೂಪಿಸಲಾಗುವುದು.

**ಮಯೂರ ಹೋಟೆಲ್‌ಗಳ ದೊಡ್ಡ ಶಕ್ತಿ ಅವುಗಳ ಸ್ಥಳ.** ರಾಜ್ಯದ ಕೆಲವು ಅತ್ಯುತ್ತಮ ಪ್ರವಾಸಿ ತಾಣಗಳಲ್ಲಿ ಅತ್ಯಂತ ವಿಶಿಷ್ಟ ಸ್ಥಳಗಳಲ್ಲಿ ನಮ್ಮ ಆಸ್ತಿಗಳಿವೆ. ಈ ಸ್ಥಳದ ಅನುಕೂಲಕ್ಕೆ ಉತ್ತಮ ಕೊಠಡಿ, ಗುಣಮಟ್ಟದ ಆಹಾರ ಮತ್ತು ವೃತ್ತಿಪರ ಆತಿಥ್ಯವನ್ನು ಸೇರಿಸಬೇಕಾಗಿದೆ.

100 ಕೋಟಿ ಹೂಡಿಕೆಯ ಮೂಲಕ ಪ್ರವಾಸಿಗರ ಒಟ್ಟಾರೆ ಅನುಭವವನ್ನು ಮೇಲ್ದರ್ಜೆಗೇರಿಸಿ, ಆಧುನಿಕ ಸೌಲಭ್ಯಗಳು ಮತ್ತು ಉತ್ತಮ ಸೇವೆಯೊಂದಿಗೆ ಅವುಗಳನ್ನು ಮೇಲ್ದರ್ಜೆಗೇರಿಸಿದರೆ ಹೆಚ್ಚಿನ ಪ್ರವಾಸಿಗರನ್ನು ಆಕರ್ಷಿಸಲು, ಕೊಠಡಿಗಳ ಬಳಕೆಯನ್ನು ಹೆಚ್ಚಿಸಲು ಹಾಗೂ ಆದಾಯವನ್ನು ಗಣನೀಯವಾಗಿ ವೃದ್ಧಿಸಲು ಅವಕಾಶವಿದೆ. 100 ಕೋಟಿ ಯೋಜನೆಯನ್ನು ಆದ್ಯತೆ ಆಧಾರದಲ್ಲಿ ಹಂತ ಹಂತವಾಗಿ ಅನುಷ್ಠಾನಗೊಳಿಸಲಾಗುವುದು ಎಂದರು. ಆಸ್ತಿಗಳನ್ನು ಹೆಚ್ಚು ಸ್ಪರ್ಧಾತ್ಮಕ ಮತ್ತು ಆದಾಯದಾಯಕವಾಗಿಸುವುದು ನಮ್ಮ ಗುರಿ ಎಂದು ಸಚಿವ ಕೆ.ಜೆ. ಜಾರ್ಜ್ ಹೇಳಿದರು.

### ಉತ್ತಮ ಮಾನದಂಡ ನಿರ್ಮಿಸಬೇಕು

**ಸರ್ಕಾರಿ ಹೋಟೆಲ್ ಎನ್ನುವ ಕಾರಣಕ್ಕೆ ಪ್ರವಾಸಿಗರು ಗುಣಮಟ್ಟದಲ್ಲಿ ರಾಜಿ ಮಾಡಿಕೊಳ್ಳುವ ಪರಿಸ್ಥಿತಿ ಇರಬಾರದು. ಸ್ಥಳ, ಸೌಲಭ್ಯ ಮತ್ತು ಸೇವೆ ಈ ಮೂರರಲ್ಲೂ ಮಯೂರ ಹೋಟೆಲ್‌ಗಳು ಉತ್ತಮ ಮಾನದಂಡ ನಿರ್ಮಿಸಬೇಕು ಎಂದು ತಿಳಿಸಿದರು.**

**KSTDC ಅಧ್ಯಕ್ಷ ಎಂ. ಶ್ರೀನಿವಾಸ್ ಮಾತನಾಡಿ, ಮಯೂರ ಹೋಟೆಲ್‌ಗಳಿಗೆ ವಿಶಿಷ್ಟ ಸ್ಥಳಗಳ ಬಲದ ಜೊತೆಗೆ ಜನರಿಗೆ ಪರಿಚಿತವಾದ ಹೆಸರೂ ಇದೆ.**

**ಆಧುನಿಕ ಸೌಲಭ್ಯಗಳು ಮತ್ತು ಉತ್ತಮ ಸೇವೆಯೊಂದಿಗೆ ಅವುಗಳನ್ನು ಮೇಲ್ದರ್ಜೆಗೇರಿಸಿದರೆ ಹೆಚ್ಚಿನ ಪ್ರವಾಸಿಗರನ್ನು ಆಕರ್ಷಿಸಲು, ಕೊಠಡಿಗಳ ಬಳಕೆಯನ್ನು ಹೆಚ್ಚಿಸಲು ಹಾಗೂ ಆದಾಯವನ್ನು ಗಣನೀಯವಾಗಿ ವೃದ್ಧಿಸಲು ಅವಕಾಶವಿದೆ. 100 ಕೋಟಿ ಯೋಜನೆಯನ್ನು ಆದ್ಯತೆ ಆಧಾರದಲ್ಲಿ ಹಂತ ಹಂತವಾಗಿ ಅನುಷ್ಠಾನಗೊಳಿಸಲಾಗುವುದು ಎಂದರು.**

## ಮಠಗಳು- ಸ್ವಾಮೀಜಿಗಳ ಬಗ್ಗೆ ನನಗೆ ಅಪಾರ ಗೌರವ: ಸಿಎಂ

• ಉದಯವಾಹಿನಿ, ಬೆಂಗಳೂರು

ರಾಜ್ಯದ ಮಠಗಳು, ಸ್ವಾಮೀಜಿಗಳ ಬಗ್ಗೆ ನನಗೆ ಅಪಾರವಾದ ಗೌರವವಿದ್ದು, ಪ್ರತಿ ಸಂದರ್ಭದಲ್ಲಿಯೂ ಪಂಚಪೀಠಗಳ ಸ್ವಾಮೀಜಿಗಳ ಪಾದಗಳಿಗೆ ನಮಸ್ಕರಿಸಿ ಗೌರವ ತೋರಿದ್ದೇನೆ. ಸ್ವಾಮೀಜಿಗಳ ಬಗ್ಗೆ ಅಗೌರವವಾಗಿ ನಾನು ಮಾತನಾಡಿಲ್ಲ ಎಂದು ಮುಖ್ಯಮಂತ್ರಿ ಡಿ ಕೆ ಶಿವಕುಮಾರ್ ಅವರು ಸ್ಪಷ್ಟಪಡಿಸಿದರು. ವಿಧಾನಸೌಧದಲ್ಲಿ ಮಾಧ್ಯಮಗಳಿಗೆ ಶಿವಕುಮಾರ್ ಅವರು ಮಂಗಳವಾರ ಪ್ರತಿಕ್ರಿಯೆ ನೀಡಿದರು. ಇತ್ತೀಚೆಗೆ ವೀರಶೈವ ಸ್ವಾಮೀಜಿಗಳ ಕಾರ್ಯಕ್ರಮದಲ್ಲಿ ನಾನು ಯಾವ ಸ್ವಾಮೀಜಿಗಳಿಗೂ ಅಗೌರವದಿಂದ ಮಾತನಾಡಿಲ್ಲ. ಅಲ್ಲಿ ನೆರೆದಿದ್ದ ಜನರಿಗೆ 'ನೀವು ನಮ್ಮ ರಕ್ಷಣೆ, ಸೇವೆ ಮಾಡಬೇಕು, ನಾವೂ ನಿಮಗೆ ಸಹಾಯ ಮಾಡುತ್ತೇವೆ ಎಂದಿದ್ದೆ'.

ರಾಜ್ಯದ ಮಠಗಳು, ಸ್ವಾಮೀಜಿಗಳ ಬಗ್ಗೆ ಯಾರಿಗೆ ಗೌರವ ಇದೆಯೋ ಇಲ್ಲವೋ ಗೊತ್ತಿಲ್ಲ. ಆದರೆ ನನಗೆ ಮಾತ್ರ ಅಪಾರವಾದ ಗೌರವವಿದೆ. ನಾನೂ ಕೂಡ ದೈವಭಕ್ತ. ನನ್ನ ಧರ್ಮದ ಮೇಲೆ ನನಗೆ ನಂಬಿಕೆಯಿದೆ. ಮಾನವ ಧರ್ಮಕ್ಕೆ ಜಯವಾಗಲಿ. ಧರ್ಮದಿಂದಲೇ


ಉದಯವಾಹಿನಿ ಚಿತ್ರ

ವಿಶ್ವಕ್ಕೆ ಶಾಂತಿ ಎಂದು ನಂಬಿರುವವನು ನಾನು'' ಎಂದರು. ಕ್ರೈಸ್ತರು, ಬೌದ್ಧರು, ಪರಿಶಿಷ್ಟರು, ಒಕ್ಕಲಿಗರು, ಲಿಂಗಾಯತರು, ಹಿಂದುಳಿದವರು, ಅಲ್ಪಸಂಖ್ಯಾತರೆಲ್ಲರೂ ಒಂದೇ ಎನ್ನುವ ಭಾವನೆಯಿಂದ ರಾಜಕೀಯ ಬದುಕನ್ನು ಪ್ರಾರಂಭಿಸಿದವನು ನಾನು. ಇದನ್ನು ಕೆಲವರು ತಿರುಚಿ, ಬಾಯಿಗೆ ಬಂದಂತೆ ಮಾತನಾಡುತ್ತಾರೆ. ಡಿ ಕೆ ಶಿವಕುಮಾರ್ ಗೆ ಅಧಿಕಾರದ ಮದ ಬಂದಿದೆ ಎಂದು ಹೇಳುತ್ತಾರೆ. ನನಗೆ ಮದವಿದ್ದರೆ ಇಳಿಸಲಿ. ನಾನೇನು ಬೇಜಾರು ಮಾಡಿಕೊಳ್ಳುವುದಿಲ್ಲ'' ಎಂದರು

## ಆಶಾ ಕಾರ್ಯಕರ್ತೆಯರ ಅನಿರ್ದಿಷ್ಟಾವಧಿ ಮುಷ್ಕರ ಆರಂಭ

• ಉದಯವಾಹಿನಿ, ಬೆಂಗಳೂರು

ಗೌರವಧನ ಹೆಚ್ಚಳ, ಪ್ರೋತ್ಸಾಹಧನವನ್ನು ಸಕಾಲದಲ್ಲಿ ಪಾವತಿಸುವುದು ಹಾಗೂ ಆಪ್ ಆಧಾರಿತ ಕೆಲಸದಿಂದ ಎದುರಾಗುತ್ತಿರುವ ಸಮಸ್ಯೆಗಳಿಗೆ ತಕ್ಷಣ ಪರಿಹಾರ ನೀಡುವಂತೆ ಆಗ್ರಹಿಸಿ ಆಶಾ ಕಾರ್ಯಕರ್ತೆಯರು (ಆಶಾ) ಸೋಮವಾರದಿಂದ ರಾಜ್ಯಾದ್ಯಂತ ಪ್ರತಿಭಟನೆ ಆರಂಭಿಸಿದ್ದಾರೆ.

ಕರ್ನಾಟಕ ರಾಜ್ಯ ಜಂಟಿ ಆಶಾ ಕಾರ್ಯಕರ್ತೆಯರ ಸಂಘ ಕರೆ ನೀಡಿರುವ ಪ್ರತಿಭಟನೆಯಲ್ಲಿ ಜಿಲ್ಲಾ ಹಾಗೂ ತಾಲ್ಲೂಕು ಕೇಂದ್ರಗಳಲ್ಲಿ ಸಾವಿರಾರು ಕಾರ್ಯಕರ್ತೆಯರು ಭಾಗವಹಿಸಿದ್ದಾರೆ. ಕಳೆದ ಒಂಬತ್ತು ವರ್ಷಗಳಲ್ಲಿ ಜೀವನ ವೆಚ್ಚ ಗಣನೀಯವಾಗಿ ಏರಿಕೆಯಾಗಿದ್ದರೂ ಆಶಾ ಕಾರ್ಯಕರ್ತೆಯರ ಗೌರವಧನದಲ್ಲಿ ಕೇವಲ 1,500 ರೂಪಾಯಿ ಮಾತ್ರ ಹೆಚ್ಚಳ ಮಾಡಲಾಗಿದೆ ಎಂದು ಸಂಘದ ಮುಖಂಡರು ತಿಳಿಸಿದ್ದಾರೆ. ರಾಜ್ಯ ಸರ್ಕಾರ ನೀಡುವ ಗೌರವಧನ ಹಾಗೂ ಕೇಂದ್ರ ಸರ್ಕಾರದಿಂದ ದೊರೆಯುವ ಪ್ರೋತ್ಸಾಹಧನ ಸೇರಿದಂತೆ ಒಟ್ಟು ಮಾಸಿಕ ಪಾವತಿಯನ್ನು ಕನಿಷ್ಠ 15,000 ರೂಪಾಯಿಗೆ ನಿಗದಿಪಡಿಸಬೇಕು ಎಂದು ಸಂಘದ


ಉದಯವಾಹಿನಿ ಚಿತ್ರ

ಮುಖಂಡರು ಒತ್ತಾಯಿಸಿದ್ದಾರೆ. ಈ ಕುರಿತು ರಾಜ್ಯ ಸರ್ಕಾರ ನೀಡಿದ್ದ ಭರವಸೆ ಇನ್ನೂ ಈಡೇರಿಲ್ಲ ಎಂದು ಅವರು ಆರೋಪಿಸಿದ್ದಾರೆ. ಇದೇ ವೇಳೆ ಗೌರವಧನ ಹಾಗೂ ಪ್ರೋತ್ಸಾಹಧನ ಪಾವತಿಯಲ್ಲಿ ಆಗುತ್ತಿರುವ ವಿಳಂಬದ ಬಗ್ಗೆಯೂ ಕಾರ್ಯಕರ್ತೆಯರು ಅಸಮಾಧಾನ ವ್ಯಕ್ತಪಡಿಸಿದ್ದಾರೆ.

'ಸಮಸ್ತ' ಆಪ್ ಬಳಕೆಗೆ ಮೊಬೈಲ್ ಫೋನ್‌ಗಳನ್ನು ಒದಗಿಸದೆ ತಮ್ಮ ಮೇಲೆ ಒತ್ತಡ ಹೇರಲಾಗುತ್ತಿದೆ. ಆಪ್ ಬಳಸುತ್ತಿರುವವರಿಗೆ ತಾಂತ್ರಿಕ ದೋಷಗಳು ಹಾಗೂ ಸರ್ವರ್ ಸಮಸ್ಯೆಗಳು ಎದುರಾಗುತ್ತಿವೆ. ಜತೆಗೆ, ಭೌತಿಕ ದಾಖಲೆಗಳೊಂದಿಗೆ ಡಿಜಿಟಲ್ ದಾಖಲೆಗಳನ್ನೂ ನಿರ್ವಹಿಸಬೇಕಾಗಿರುವುದರಿಂದ ಹೆಚ್ಚುವರಿ ಸಮಯ ವ್ಯಯವಾಗುತ್ತಿದೆ ಎಂದು ತಿಳಿಸಿದ್ದಾರೆ.

## ಚಿನ್ನದ ಪದಕ ವಿಜೇತರಿಗೆ 1 ಕೋಟಿ ನಗದು, ಗ್ರೂಪ್-ಬಿ ಹುದ್ದೆಗಳಿಗೆ ನೇರ ನೇಮಕಾತಿ!

• ಉದಯವಾಹಿನಿ, ಬೆಂಗಳೂರು

ಮುಕ್ತಾಯವಾದ ಏಷ್ಯನ್ ಗೇಮ್ಸ್ 2026ರಲ್ಲಿ ಪದಕ ಗೆದ್ದು ದೇಶ ಹಾಗೂ ರಾಜ್ಯಕ್ಕೆ ಕೀರ್ತಿ ತಂದ ರಾಜ್ಯದ ಕ್ರೀಡಾಪಟುಗಳನ್ನು ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಹಾಗೂ ಉಪ ಮುಖ್ಯಮಂತ್ರಿಗಳು ಹಾಗೂ ಯುವ ಸಬಲೀಕರಣ ಮತ್ತು ಕ್ರೀಡಾ ಸಚಿವರಾದ ಡಾ. ಜಿ. ಪರಮೇಶ್ವರ್ ಅವರು ವಿಧಾನಸೌಧದಲ್ಲಿ ಇಂದು ಸನ್ಮಾನಿಸಿ ಅಭಿನಂದಿಸಿದರು. ಈ ವೇಳೆ ಮಾತನಾಡಿದ ಜಿ. ಪರಮೇಶ್ವರ್ ಏಷ್ಯನ್ ಗೇಮ್ಸ್‌ನಲ್ಲಿ ರಾಜ್ಯದ ಕ್ರೀಡಾಪಟುಗಳು ತೋರಿದ ಸಾಧನೆಯನ್ನು ಗೌರವಿಸುವುದರ ಜೊತೆಗೆ, ಕರ್ನಾಟಕದ ಕ್ರೀಡಾ ಪ್ರತಿಭೆಗಳಿಗೆ ಹೆಚ್ಚಿನ ಆರ್ಥಿಕ ಪ್ರೋತ್ಸಾಹ, ಉದ್ಯೋಗ ಭದ್ರತೆ ಹಾಗೂ ಅಂತಾರಾಷ್ಟ್ರೀಯ ಮಟ್ಟದ ಸ್ಪರ್ಧೆಗಳಿಗೆ ಅಗತ್ಯ ನೆರವು ಕಲ್ಪಿಸುವ ಉದ್ದೇಶದಿಂದ ಸರ್ಕಾರ ಹಲವು ಮಹತ್ವದ ಕ್ರಮಗಳನ್ನು ಪ್ರಕಟಿಸಿದೆ ಎಂದು ತಿಳಿಸಿದರು.

**ನಗದು ಪುರಸ್ಕಾರ ಭಾರೀ ಹೆಚ್ಚಳ:** ಏಷ್ಯನ್ ಗೇಮ್ಸ್ ಪದಕ ವಿಜೇತರಿಗೆ ನೀಡಲಾಗುತ್ತಿದ್ದ ನಗದು ಪುರಸ್ಕಾರದ ಮೊತ್ತವನ್ನು ಪರಿಷ್ಕರಿಸಿ ಗಣನೀಯವಾಗಿ ಹೆಚ್ಚಿಸಲಾಗಿದೆ. ಈ ಹಿಂದೆ ಚಿನ್ನದ ಪದಕ ವಿಜೇತರಿಗೆ 35 ಲಕ್ಷ ರೂ, ಬೆಳ್ಳಿ ಪದಕ ವಿಜೇತರಿಗೆ 25 ಲಕ್ಷ ರೂ. ಹಾಗೂ ಕಂಚಿನ ಪದಕ ವಿಜೇತರಿಗೆ 15 ಲಕ್ಷ ರೂ. ನಗದು ಪುರಸ್ಕಾರ ನೀಡಲಾಗುತ್ತಿತ್ತು.


ಉದಯವಾಹಿನಿ ಚಿತ್ರ

ಪರಿಷ್ಕೃತ ಮೊತ್ತದ ಪ್ರಕಾರ, ಚಿನ್ನದ ಪದಕ ವಿಜೇತರಿಗೆ 1 ಕೋಟಿ ರೂ, ಬೆಳ್ಳಿ ಪದಕ ವಿಜೇತರಿಗೆ 75 ಲಕ್ಷ ರೂ ಮತ್ತು ಕಂಚಿನ ಪದಕ ಗೆದ್ದರೆ 50 ಲಕ್ಷ ರೂ. ನಗದು ಪುರಸ್ಕಾರ ನೀಡಲಾಗುವುದು ಎಂದರು. ಈ ಬಾರಿ ಎಂಟು ಮಂದಿಗೆ ಈ ನಗದು ಪುರಸ್ಕಾರ ಸಿಗಲಿದ್ದು, ಜೊತೆಗೆ ಈ ಎಂಟು ಪದಕ ವಿಜೇತರಿಗೆ ಏಷ್ಯನ್ ಗೇಮ್ಸ್ 2026ರಲ್ಲಿ ಭಾಗವಹಿಸಿದ್ದಕ್ಕಾಗಿ, ಪದಕ ಸಾಧನೆಗೆ ನೀಡಲಾಗುವ ನಗದು ಪುರಸ್ಕಾರದ ಹೆಚ್ಚುವರಿಯಾಗಿ ತಲಾ 5 ಲಕ್ಷ ರೂ. ಪ್ರೋತ್ಸಾಹಧನ ನೀಡಲಾಗುವುದು.

**ಕ್ರೀಡಾಪಟುಗಳ ಸಾಧನೆಗೆ ತಕ್ಕ ಗೌರವ ನೀಡುವ ಹಾಗೂ ಮುಂದಿನ ಕ್ರೀಡಾಪಟುಗಳಿಗೆ ಇನ್ನಷ್ಟು ಪ್ರೇರಣೆ ನೀಡುವ ಉದ್ದೇಶದಿಂದ ನಗದು ಪುರಸ್ಕಾರದ ಮೊತ್ತವನ್ನು ಹೆಚ್ಚಿಸಲಾಗಿದೆ ಎಂದು ಅವರು ತಿಳಿಸಿದರು.**
**-ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್**

## ಜೈಲಿನಲ್ಲಿ ಪವಿತ್ರಾ ಗೌಡಗೆ ನೈಜೀರಿಯನ್ ಪ್ರಜೆಗಳ ಕಾಟ! ಕೋರ್ಟ್ ಗರಂ

• ಉದಯವಾಹಿನಿ, ಬೆಂಗಳೂರು

ಚಿತ್ರದುರ್ಗದ ರೇಣುಕಾಸ್ವಾಮಿ ಕೊಲೆ ಪ್ರಕರಣದಲ್ಲಿ ಜೈಲು ಪಾಲಾಗಿರುವ ನಟ ದರ್ಶನ್ ಅವರ ಗೆಳತಿ ಪವಿತ್ರಾ ಗೌಡ ಅವರಿಗೆ ಈಗ ಹೊಸ ಟೆನ್ಷನ್ ಶುರುವಾಗಿದೆ. ಪರಪ್ಪನ ಅಗ್ರಹಾರ ಜೈಲಿನಲ್ಲಿರುವ ದರ್ಶನ್ ಅವರ ಗೆಳತಿ, ಪ್ರಕರಣದ ಎ1 ಆರೋಪಿ ಪವಿತ್ರಾ ಗೌಡ ಅವರು ನೈಜೀರಿಯನ್ ಪ್ರಜೆಗಳ ಕಾಟದಿಂದ ರೋಸಿ ಹೋಗಿದ್ದು, ಕೋರ್ಟ್ ಮುಂದೆ ತಮ್ಮ ಅಳಲು ತೋಡಿಕೊಂಡಿದ್ದಾರೆ.

ತಮ್ಮ ಬ್ಯಾರಕ್ ಬದಲಾವಣೆ ಮಾಡುವಂತೆ ಕೋರಿ ಪವಿತ್ರಾ ಗೌಡ ಸಲ್ಲಿಸಿದ್ದ ಅರ್ಜಿಗೆ ಅಸ್ತು ಎಂದಿದ್ದ ಕೋರ್ಟ್, ಬ್ಯಾರಕ್ ಬದಲಾಯಿಸುವಂತೆ ಸೂಚನೆ ನೀಡಿತ್ತು. ಆದರೆ ಇದುವರೆಗೂ ಬೇರೆ ಬ್ಯಾರಕ್ ಗೆ ಶಿಫ್ಟ್ ಮಾಡಿ ವರದಿ ಸಲ್ಲಿಸದ ಜೈಲಾಧಿಕಾರಿಗಳ ವಿರುದ್ಧ ಕೋರ್ಟ್ ಗರಂ ಆಗಿದೆ. ಇಂದೇ ವರದಿ ಸಲ್ಲಿಸುವಂತೆ ಜೈಲಾಧಿಕಾರಿಗಳಿಗೆ ಕೋರ್ಟ್ ಡೆಡ್ ಲೈನ್ ನೀಡಿದೆ.

ಸೆಪ್ಟೆಂಬರ್ 7ರಂದು ಬೇರೆ ಬ್ಯಾರಕ್ ಗೆ ಶಿಫ್ಟ್ ಮಾಡುವಂತೆ ಕೋರ್ಟ್ ಆದೇಶ ನೀಡಿತ್ತು. ಆದರೆ ಆದೇಶ ಬಂದು ಒಂದು ತಿಂಗಳು ಕಳೆದರೂ ಬೇರೆ ಬ್ಯಾರಕ್ ಗೆ ಶಿಫ್ಟ್ ಮಾಡಿಲ್ಲ ಎಂದು ಪವಿತ್ರಾ ಗೌಡ ಮತ್ತೆ ಅರ್ಜಿ ಸಲ್ಲಿಸಿದ್ದರು.


ಉದಯವಾಹಿನಿ ಚಿತ್ರ

ನೈಜೀರಿಯನ್ ಕಾಟಕ್ಕೆ ಬೇಸತ್ತು ಜಡ್ಜ್ ಮುಂದೆ ಪವಿತ್ರಾ ಗೌಡ ಕಣ್ಣೀರು ಸಹ ಹಾಕಿದ್ದರು. ಆಗ ಸೆ.26ರೊಳಗೆ ವರದಿ ನೀಡುವಂತೆ ಜೈಲಾಧಿಕಾರಿಗಳಿಗೆ ಕೋರ್ಟ್ ಸೂಚನೆ ನೀಡಿತ್ತು. ಆದರೂ ಜೈಲಾಧಿಕಾರಿಗಳು ವರದಿ ನೀಡಿರಲಿಲ್ಲ. ಹೀಗಾಗಿ ಅಕ್ಟೋಬರ್ 5ರಂದು ಮಾಫಿ ಸಾಕ್ಷಿ ಪ್ರಕ್ರಿಯೆ ಆರಂಭಕ್ಕೂ ಮುನ್ನ ಪವಿತ್ರಾ ಗೌಡ ಪರ ವಕೀಲರು ಈ ವಿಚಾರನ್ನು ಮತ್ತೆ ನ್ಯಾಯಾಧೀಶರ ಗಮನಕ್ಕೆ ತಂದಿದ್ದಾರೆ.

### ವರದಿ ನೀಡುವಂತೆ ಸೂಚನೆ

**ಜೈಲಾಧಿಕಾರಿಗಳು ಇನ್ನೂ ವರದಿ ನೀಡದ್ದಕ್ಕೆ ನ್ಯಾಯಾಧೀಶರು ಗರಂ ಆಗಿದ್ದು, ಇಂದು ತಪ್ಪದೆ ವರದಿ ನೀಡುವಂತೆ ಸೂಚನೆ ನೀಡಿದ್ದಾರೆ.**

# ಸುಳ್ಳು ಫಾರಂ-7 ಸಲ್ಲಿಸಿ 5,698 ಮತದಾರರನ್ನು ತೆಗೆಸಲು ಯತ್ನ ಆರೋಪ, ಸೌಮ್ಯಾ ರೆಡ್ಡಿ ದೂರು

### ಫಾರಂ 7 ಹಂಚಿದ ಆರೋಪದಡಿ ಬಿಜೆಪಿ ಕಾರ್ಯಕರ್ತರಿಬ್ಬರ ವಿರುದ್ಧ ಬೆಂಗಳೂರಿನಲ್ಲಿ ಎಫ್‌ಐಆರ್ ದಾಖಲಾಗಿದೆ.

• ಉದಯವಾಹಿನಿ, ಕೆಂಗೇರಿ

ಜಯನಗರ ವಿಧಾನಸಭಾ ಕ್ಷೇತ್ರದಲ್ಲಿ ಮತದಾರರ ಪಟ್ಟಿಯಿಂದ 5,698 ಮತದಾರರ ಹೆಸರುಗಳನ್ನು ಅಕ್ರಮವಾಗಿ ತೆಗೆದುಹಾಕಲು ಸುಳ್ಳು ಫಾರಂ-7 ಅರ್ಜಿಗಳನ್ನು ಸಲ್ಲಿಸಿದ ಆರೋಪದಡಿ ಭಾರತೀಯ ಜನತಾ ಪಕ್ಷದ ಇಬ್ಬರು ಬೂತ್ ಮಟ್ಟದ ಏಜೆಂಟ್‌ಗಳು ಮತ್ತು ಇತರರ ವಿರುದ್ಧ ಎಫ್‌ಐಆರ್ ದಾಖಲಾಗಿದೆ.

1 ಸುಳ್ಳು ಫಾರಂ-7 ಅರ್ಜಿ
2 ವಿಶೇಷ ಸಮಗ್ರ ಪರಿಷ್ಕರಣೆ ಪ್ರಕ್ರಿಯೆ
3 ಮತದಾರರು ಶಾಶ್ವತವಾಗಿ ಬೇರೆಡೆಗೆ ವಲಸೆ

ಕರ್ನಾಟಕ ಪ್ರದೇಶ ಮಹಿಳಾ ಕಾಂಗ್ರೆಸ್ ಅಧ್ಯಕ್ಷೆ ಹಾಗೂ ಕಾಂಗ್ರೆಸ್ ನಾಯಕಿ ಸೌಮ್ಯಾ ರೆಡ್ಡಿ ಅವರು ನೀಡಿದ ದೂರಿನ ಆಧಾರದ ಮೇಲೆ ಪ್ರಕರಣ ದಾಖಲಿಸಿಕೊಳ್ಳಲಾಗಿದೆ ಎಂದು ಜಯನಗರ ಠಾಣೆ ಪೊಲೀಸರು ತಿಳಿಸಿದ್ದಾರೆ.

ಮತದಾರರ ಪಟ್ಟಿ ವಿಶೇಷ ಸಮಗ್ರ ಪರಿಷ್ಕರಣೆ ಪ್ರಕ್ರಿಯೆ ನಡೆಯುತ್ತಿದ್ದ ಜೂನ್ 16ರಿಂದ ಅಕ್ಟೋಬರ್ 5ರ ನಡುವಿನ ಅವಧಿಯಲ್ಲಿ ಈ ಅಕ್ರಮ ಎಸಗಲಾಗಿದ್ದು, ಪಟ್ಟಿಯಿಂದ ಹೆಸರುಗಳನ್ನು ತೆಗೆದುಹಾಕಲು ಅಥವಾ ಆಕ್ಷೇಪಣೆ ಸಲ್ಲಿಸಲು ಬಳಸಲಾಗುವ ಫಾರಂ-7 ಅರ್ಜಿಗಳನ್ನು ದುರ್ಬಳಕೆ ಮಾಡಿಕೊಳ್ಳಲಾಗಿದೆ ಎಂದು ಸೌಮ್ಯಾ ರೆಡ್ಡಿ ತಮ್ಮ ದೂರಿನಲ್ಲಿ ಉಲ್ಲೇಖಿಸಿದ್ದಾರೆ.

ಜಯನಗರ ಕ್ಷೇತ್ರದಲ್ಲಿನ 5,698 ಮತದಾರರು ಶಾಶ್ವತವಾಗಿ ಬೇರೆಡೆಗೆ ವಲಸೆ ಹೋಗಿದ್ದಾರೆ ಎಂದು ಸುಳ್ಳು ಮಾಹಿತಿ ನೀಡಿ, ಈ ಅರ್ಜಿಗಳನ್ನು ಬೂತ್


ಉದಯವಾಹಿನಿ ಚಿತ್ರ

ಮಟ್ಟದ ಅಧಿಕಾರಿಗಳಿಗೆ ಸಲ್ಲಿಸಲಾಗಿತ್ತು. ಬಿಜೆಪಿ ಬಿಎಲ್‌ಎಗಳಾದ ರಾಮಕೃಷ್ಣ ಮತ್ತು ಯೋಗೇಶ್ ಹಾಗೂ ಅವರೊಂದಿಗೆ ಇತರರು ಸೇರಿ ಈ ಕೃತ್ಯ ಎಸಗಿದ್ದಾರೆ.

ಸೌಮ್ಯಾ ರೆಡ್ಡಿ ಅವರು ನೀಡಿದ ದೂರಿನ ಆಧಾರದ ಮೇಲೆ ಆರೋಪಿಗಳಾದ ರಾಮಕೃಷ್ಣ, ಯೋಗೇಶ್ ಮತ್ತು ಇತರರ ವಿರುದ್ಧ ಭಾರತೀಯ ನ್ಯಾಯ ಸಂಹಿತೆ 2023ರ ಕಾಯ್ದೆಯ ಸೆಕ್ಷನ್ 61(2), 217(319(2), 336(2) ಮತ್ತು 340(2) ರ ಅಡಿಯಲ್ಲಿ ಪ್ರಕರಣ ದಾಖಲಿಸಿಕೊಳ್ಳಲಾಗಿದ್ದು, ತನಿಖೆ ಆರಂಭಿಸಲಾಗಿದೆ ಎಂದು ಪೊಲೀಸರು ತಿಳಿಸಿದ್ದಾರೆ. ರಾಜ್ಯದಲ್ಲಿ 16-06-2026ರಿಂದ 04-10-2026ರವರೆಗೆ ಒಟ್ಟು 91,278 ಫಾರಂಗಳು 7 ಸಲ್ಲಿಕೆಯಾಗಿವೆ. ಈ ಪೈಕಿ, ಪ್ರಸ್ತಾಪಿತ ಹೆಸರು ಸೇರ್ಪಡೆಗೆ ಆಕ್ಷೇಪಣೆ ವ್ಯಕ್ತಪಡಿಸಿ ಸ್ವೀಕರಿಸಲಾದ ನಮೂನೆಗಳ ಸಂಖ್ಯೆ ಶೂನ್ಯ ಆಗಿದೆ. ಸೆಪ್ಟಂಬರ್ 23ರವರೆಗೆ ಸಲ್ಲಿಕೆಯಾದ ಫಾರಂ 7 ಅರ್ಜಿಗಳ ಬಗ್ಗೆ ವಿಚಾರಣೆ ನಡೆಸಿ ಅಕ್ಟೋಬರ್ 27ಕ್ಕೆ ಪ್ರಕಟಿಸಲಾಗುವ ಎಸ್‌ಐಆರ್ ಅಂತಿಮ ಮತದಾರರ ಪಟ್ಟಿಯಲ್ಲಿ ಪರಿಗಣಿಸಲಾಗುತ್ತದೆ. ಸೆಪ್ಟಂಬರ್ 23ರವರೆಗೆ 58,220 ಫಾರ್ಮ್ ಗಳು 7 ಸಲ್ಲಿಕೆಯಾಗಿವೆ. ಈ ಅರ್ಜಿಗಳನ್ನು ಅಕ್ಟೋಬರ್ 22ರೊಳಗೆ ವಿಲೇವಾರಿ ಮಾಡಲಾಗುತ್ತದೆ. ಉಳಿದ ಫಾರ್ಮ್ 7 ಸಂಬಂಧ ಅರ್ಜಿಗಳನ್ನು ಅಂತಿಮ ಪಟ್ಟಿ ಪ್ರಕಟಿಸಿದ ಬಳಿಕ ಕಾಲಾನುಕ್ರಮವಾಗಿ ವಿಲೇವಾರಿ ಮಾಡಿ ಕ್ರಮ ಕೈಗೊಳ್ಳಲಾಗುತ್ತದೆ ಎಂದು ಅವರು ಸ್ಪಷ್ಟಪಡಿಸಿದ್ದರು.

### ರಾಜ್ಯ ಮುಖ್ಯ ಚುನಾವಣಾಧಿಕಾರಿ ಹೇಳಿದ್ದೇನು

**ಎಸ್‌ಐಆರ್ ಅಂತಿಮ ಮತದಾರರ ಪಟ್ಟಿ ಪ್ರಕಟಿಸಿದ ಬಳಿಕ ಹೊಸ ಸೇರ್ಪಡೆಗೆ ವಿಶೇಷ ಅಭಿಯಾನ ನಡೆಸಲಾಗುವುದು. ಫಾರಂ 7 ಸಾಮೂಹಿಕ ಅರ್ಜಿ ಸಲ್ಲಿಕೆ ಮಾಡಿದವರ ವಿರುದ್ಧ ವಿಚಾರಣೆ ನಡೆಸಿ ಕ್ರಮ ಕೈಗೊಳ್ಳಲಿದ್ದಾರೆ ಎಂದು ರಾಜ್ಯ ಮುಖ್ಯ ಚುನಾವಣಾಧಿಕಾರಿ ಅನ್ಬುಕುಮಾರ್ ಸೋಮವಾರ ಮಾಧ್ಯಮಗೋಷ್ಟಿಯಲ್ಲಿ ತಿಳಿಸಿದ್ದರು.**

**ಬಿಜೆಪಿ ಮತ್ತು ಅದರ ಮೈತ್ರಿ ಕೂಟದ ಪಕ್ಷಗಳಿಗೆ ರಾಜಕೀಯವಾಗಿ ಬೆಂಬಲ ನೀಡದ ಸಮುದಾಯಗಳು ,ಅಲ್ಪಸಂಖ್ಯಾತ ಸಮುದಾಯಗಳ ಮತದಾರರನ್ನು ಗುರಿಯಾಗಿಸಿಕೊಂಡು ಹೆಸರುಗಳನ್ನು ಪಟ್ಟಿಯಿಂದ ಕೈಬಿಡಲು ಸಂಚು ರೂಪಿಸಲಾಗಿದೆ ಎಂದು ಸೌಮ್ಯಾ ರೆಡ್ಡಿ ಆರೋಪಿಸಿದ್ದಾರೆ.**

ರಾಜ್ಯ ಸರ್ಕಾರದ ಅಡಿಯಲ್ಲಿ ಕೆಲಸ ಮಾಡಿದವರೇ ಬಿಎಲ್‌ಒಗಳು ಹೊರತು ಕೇಂದ್ರ ಸರ್ಕಾರದ ನೌಕರರಲ್ಲ ಎಂದು ಬಿ.ವೈ. ವಿಜಯೇಂದ್ರ ಹೇಳಿದರು

# ಚುನಾವಣಾ ಆಯುಕ್ತ ಅನ್ಬುಕುಮಾರ್ ನೇಮಕ ಮಾಡಿದ್ದು ರಾಜ್ಯ ಸರ್ಕಾರವೇ!

**ಉದಯವಾಹಿನಿ, ಧಾರವಾಡ**

SIRಗೊಂದಲ ವಿಚಾರ SIR ಹಾಗೂ ಫಾರಂ 7 ಬಗ್ಗೆ ಅರಾಜಾಕತೆ ಸೃಷ್ಟಿ ಮಾಡಿದ್ದಾರೆ. ಚುನಾವಣಾ ಆಯೋಗದ ಮುಂದೆ ಪ್ರತಿಭಟನೆ ಮಾಡುವ ಕಪಟ ನಾಟಕ ಮಾಡಿದ್ರು. ಚುನಾವಣಾ ಆಯುಕ್ತ ಅನ್ಬುಕುಮಾರ್ ನೇಮಕ ಮಾಡಿದ್ದು ರಾಜ್ಯ ಸರ್ಕಾರವೇ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ಹರಿಹಾಯ್ದರು.

**1.** ಕಾನೂನು ತಿಳಿಯುವ ಅವಶ್ಯಕತೆ ಇಲ್ಲ
**2.** ಬೆದರಿಕೆಗೆ ಹೆದರುವ ಅವಶ್ಯಕತೆ ಇಲ್ಲ
**3.** ಪ್ರಿಯಾಂಕ್ ಖರ್ಗೆ ಸೃಷ್ಟಿ ಮಾಡ್ತಿದ್ದಾರೆ

ಈ ಕುರಿತು ಮಂಗಳವಾರ ಮಾಧ್ಯಮಗೋಷ್ಠಿಯಲ್ಲಿ ಮಾತನಾಡಿದ ಅವರು, ಪ್ರತಿ ಕ್ಷೇತ್ರದಲ್ಲಿ ಅಹಿಂದ ಮತದಾರರನ್ನು ಕೈಬಿಡುವ ಕೆಲಸ ಆಂತ ಸಿಎಂ ಆರೋಪ ಮಾಡಿದ್ದಾರೆ. ನೀವೇ ನೇಮಕ ಮಾಡಿರುವ ಅನ್ಬುಕುಮಾರ್ ಚುನಾವಣಾ ಆಯುಕ್ತರು. 5–10 ಸಾವಿರ ಅಹಿಂದ ಮತ ತೆಗೆದಿದ್ದಾರೆ. ಪ್ರತಿ ಒಂದು ವಿಧಾನಸಭಾ ಕ್ಷೇತ್ರದಲ್ಲಿ 5–10 ಸಾವಿರ ಡಿಲಿಟ್ ಅಂತ ಆರೋಪ ಮಾಡಿದ್ದಾರೆ. ಚುನಾವಣಾ ಆಯೋಗ ಕೊಟ್ಟಿರುವ ಹಕ್ಕು ಫಾರಂ 7. ರಾಜ್ಯ ಸರ್ಕಾರದ ಅಡಿಯಲ್ಲಿ ಕೆಲಸ ಮಾಡಿದವರೇ ಬಿಎಲ್‌ಒಗಳು ಹೊರತು ಕೇಂದ್ರ ಸರ್ಕಾರದ ನೌಕರರಲ್ಲ ಎಂದರು.

ಸಚಿವ ಪ್ರಿಯಾಂಕ್ ಖರ್ಗೆ ಒಂದು ವರ್ಷ ಸಜೆ ನೀಡಬೇಕೆಂಬ ವಿಚಾರದ ಕುರಿತು ಮಾತನಾಡಿ, ಪ್ರಿಯಾಂಕ್ ಖರ್ಗೆ ಅವರೇ ಕಾನೂನು ನೀವು ಹೇಳುವ ಅವಶ್ಯಕತೆ ಇಲ್ಲ. ಕಲಬುರಗಿ, ರಿಪಬ್ಲಿಕ್ ಆಫ್ ಕಲಬುರಗಿ ಆಗಿದೆ. ನಿಮ್ಮ ಕಪಿಮುಷ್ಟಿಯಲ್ಲಿ ಕಲಬುರಗಿ ಇದೆ. ನಿಮ್ಮ ಕಲಬುರಗಿಯಲ್ಲಿ ಎಷ್ಟು ಕೊಲೆ ಆಗಿವೆ. ಸುಪಾರಿ ಕಿಲ್ಲರ್ಸ್‌ಅನ್ನು ಪ್ರಿಯಾಂಕ್ ಖರ್ಗೆ ಸೃಷ್ಟಿ ಮಾಡ್ತಿದ್ದಾರೆ. 15 ಲಕ್ಷ ಕೊಟ್ಟು ರಾತ್ರೋರಾತ್ರಿ ಹೋಗಿ ಅಮಾಯಕರಿಗೆ ಹಣ ಕೊಟ್ಟು ಬಾಯಿ ಮುಚ್ಚಿಸ್ತಾರೆ. ನಿಮ್ಮಿಂದ ಕಾನೂನು ತಿಳಿಯುವ ಅವಶ್ಯಕತೆ ಇಲ್ಲ. ನಿಮ್ಮ ಬೆದರಿಕೆಗೆ ನಾವು ಹೆದರುವ ಅವಶ್ಯಕತೆ ಇಲ್ಲ ಎಂದು ವಿಜಯಂದ್ರ ಗುಡುಗಿದರು.


ಉದಯವಾಹಿನಿ ಚಿತ್ರ

ಬಸ್ ಟಿಕೆಟ್ ದರ ಏರಿಕೆ ವಿಚಾರಕ್ಕೆ ಪ್ರತಿಕ್ರಿಯಿಸಿದ ಅವರು, KSRTC ಎಂಡಿ ಅವರು ರಾಜ್ಯ ಸರ್ಕಾರದಿಂದ 6.5 ಸಾವಿರ ಕೋಟಿ ಬಾಕಿ ಇದೆ. ಬಾಕಿ ಪಾವತಿಸದಿದ್ದರೆ ಸಂಬಳ ಕೊಡೋಕು ಆಗಲ್ಲ ಅಂತ ಪತ್ರ ಬರೆದಿದ್ದಾರೆ. ರಾಜ್ಯ ಕಾಂಗ್ರೆಸ್ ಸರ್ಕಾರ ಬೆಲೆ ಏರಿಕೆ ಬಿಟ್ಟು ಏನೂ ಸಾಧನೆ ಮಾಡಿಲ್ಲ. ಗ್ಯಾರಂಟಿ ಯೋಜನೆಯ 52 ಸಾವಿರ ಕೋಟಿ ರೂಪಾಯಿಗೆ ಅಬಕಾರಿ ಇಲಾಖೆಗೆ ಜವಾಬ್ದಾರಿ ಕೊಟ್ಟಿದ್ದಾರೆ. ಅಬಕಾರಿ ಇಲಾಖೆಯಲ್ಲಿ 11 ಸಾವಿರ ಕೋಟಿ ರೂಪಾಯಿಗೂ ಅಧಿಕ ಆದಾಯ ಹೆಚ್ಚಾಗಿದೆ. ಕರ್ನಾಟಕ ರಾಜ್ಯವನ್ನು ಕುಡುಕರ ರಾಜ್ಯವಾಗಿ ಮಾಡಿದೆ ಕಾಂಗ್ರೆಸ್ ಸರ್ಕಾರ ಎಂದು ಕಿಡಿಕಾರಿದರು.

SiR ಬಗ್ಗೆ ಮಾತಾಡುವ ನಾಯಕರೇ.. ಶಶಿ ತರೂರ್ ಯಾರು? ಇವರ ಎಂಪಿ ಶಶಿ ತರೂರ್ ಕೇರಳದಲ್ಲಿ SIR ಆದ್ಮೇಲೆ ಕಾಂಗ್ರೆಸ್ ಅಧಿಕಾರಕ್ಕೆ ಬರಲು ಕಾರಣ ಅಂದಿದ್ದಾರೆ. SIR ಇಂದ ವೋಟರ್ ಲಿಸ್ಟ್ ಸರಿಯಾಗಿ ಪರಿಶೀಲನೆ ಆಗಿದೆ. ಹೀಗಂತ ಅಲ್ಲಿರುವ ಸಂಸದರೇ ಹೇಳಿದ್ದಾರೆ.

> ಸಿಎಂ ಅವರೇ ನಿಮ್ಮ ಸರ್ಕಾರದ ವೈಫಲ್ಯ ಮುಚ್ಚಿಕೊಳ್ಳಲು ಚುನಾವಣಾ ಆಯೋಗ ತೋರಿಸುತ್ತಿದ್ದಾರೆ. ಬಿಜೆಪಿ ಕಾರ್ಯಕರ್ತರ ಮೇಲೆ ಎಸ್‌ಐಆರ್ ದಾಖಲಿಸಿ ಹೆದರಿಸುತ್ತಿದ್ದಾರೆ. ರಾಜ್ಯದ ಪೊಲೀಸ್ ಠಾಣೆಗಳು ಕಾಂಗ್ರೆಸ್ ಕಚೇರಿಗಳಾಗಿವೆ.
> – ಬಿ ವೈ ವಿಜಯೇಂದ್ರ

### ನಮಗೆ ಯಾವುದೇ ಎಫೆಕ್ಟ್ ಆಗಲ್ಲ

ಪಕ್ಷೇತರ ಅಭ್ಯರ್ಥಿ ಕಾಂತಕುಮಾರ್‌ಗೆ ಯತ್ನಾಳ್ ಬೆಂಬಲ ವಿಚಾರಕ್ಕೆ ಮಾತನಾಡಿ, ಸದ್ಯಕ್ಕೆ ಅವರು ನಮ್ಮ ಪಕ್ಷದಲ್ಲಿ ಇಲ್ಲ ಮುಂದೆ ಅವರು ಬಂದಾಗ ನೋಡೋಣ. ಯಾರೂ ಬಿಜೆಪಿ ಬಂಡಾಯ ಅಭ್ಯರ್ಥಿ ಇಲ್ಲ. ರಾಜಕಾರಣ ಬೇರೆ, ಪ್ರತಿಭಟನೆಗೆ ಬೆಂಬಲ ಬೇರೆ. ನಮಗೆ ಯಾವುದೇ ಎಫೆಕ್ಟ್ ಆಗಲ್ಲ ಎಂದು ಹೇಳಿದರು.

## ಪರವಾನಿಗೆ ಇಲ್ಲದೆ ಕೇರಳಕ್ಕೆ 11 ಜಾನುವಾರುಗಳ ಅಕ್ರಮ ಸಾಗಣೆ: ಆರೋಪಿ ಬಂಧನ

**ಉದಯವಾಹಿನಿ, ಪುತ್ತೂರು**

ಕೇರಳದ ಕಡೆಗೆ ಅಕ್ರಮವಾಗಿ ಜಾನುವಾರುಗಳನ್ನು ಸಾಗಣೆ ಮಾಡುತ್ತಿದ್ದ ಪಿಕಪ್ ವಾಹನವನ್ನು ಪುತ್ತೂರು ಗ್ರಾಮಾಂತರ ಪೊಲೀಸರು ತಡೆದು 11 ಜಾನುವಾರುಗಳನ್ನು ರಕ್ಷಿಸಿದ್ದು, ಪ್ರಕರಣಕ್ಕೆ ಸಂಬಂಧಿಸಿದಂತೆ ಓರ್ವ ಆರೋಪಿಯನ್ನು ಬಂಧಿಸಿದ್ದಾರ (ಅ.5ರಂದು) ಬೆಳಗಿನ ಜಾವ ಜಾನುವಾರುಗಳನ್ನು ಅಕ್ರಮವಾಗಿ ಕೇರಳದ ಕಡೆಗೆ ಸಾಗಣೆ ಮಾಡುತ್ತಿರುವ ಬಗ್ಗೆ ಪುತ್ತೂರು ಗ್ರಾಮಾಂತರ ಪೊಲೀಸ್ ಠಾಣೆಯ ಉಪನಿರೀಕ್ಷಕಿ ಸುಷ್ಮಾ ಜಿ. ಭಂಡಾರಿ ಅವರಿಗೆ ಮಾಹಿತಿ ಲಭಿಸಿತ್ತು. ಈ ಹಿನ್ನೆಲೆಯಲ್ಲಿ ಪೊಲೀಸ್ ಸಿಬ್ಬಂದಿಯೊಂದಿಗೆ ಬಲ್ನಾಡು ಗ್ರಾಮದ ಬಿಳಿಯೂರುಕಟ್ಟೆ ಎಂಬಲ್ಲಿ ಕಾರ್ಯಾಚರಣೆ ನಡೆಸಿದ ಪೊಲೀಸರು ಎಂ–19–ಎಈ–8558 ನೋಂದಣಿಯ ಪಿಕಪ್ ವಾಹನವನ್ನು ತಡೆದಿದ್ದಾರೆ.ಪೊಲೀಸರನ್ನು ಕಂಡ ವಾಹನದಲ್ಲಿದ್ದ ಚಾಲಕ ಹಾಗೂ ಮತ್ತೋರ್ವ ವ್ಯಕ್ತಿ ವಾಹನವನ್ನು ಸ್ಥಳದಲ್ಲೇ ಬಿಟ್ಟು ಪರಾರಿಯಾಗಿದ್ದಾರೆ. ಬಳಿಕ ವಾಹನವನ್ನು ಪರಿಶೀಲಿಸಿದಾಗ 11 ಜಾನುವಾರುಗಳನ್ನು ಯಾವುದೇ ಸೂಕ್ತ ವ್ಯವಸ್ಥೆಯಿಲ್ಲದೆ, ಹಿಂಸಾತ್ಮಕವಾಗಿ ತುಂಬಿಸಿ ಸಾಗಾಟ ಮಾಡುತ್ತಿರುವುದು ಪತ್ತೆಯಾಗಿದೆ. ಜಾನುವಾರುಗಳನ್ನು ಸಾಗಿಸಲು ಯಾವುದೇ ಪರವಾನಿಗೆ ಪಡೆಯದೆ, ಮಾಂಸಕ್ಕಾಗಿ ಮಾರಾಟ ಮಾಡುವ ಉದ್ದೇಶದಿಂದ ಕೇರಳದ ಕಡೆಗೆ ಸಾಗಿಸಲಾಗುತ್ತಿತ್ತು ಎಂದು ಪೊಲೀಸರು ತಿಳಿಸಿದ್ದಾರೆ. ಈ ಕುರಿತು ಪುತ್ತೂರು ಗ್ರಾಮಾಂತರ ಪೊಲೀಸ್ ಠಾಣೆಯಲ್ಲಿ ಅ.ಕ್ರ. 125/2026ರಂತೆ ಕರ್ನಾಟಕ ಜಾನುವಾರು ಹತ್ಯೆ ಪ್ರತಿಬಂಧಕ ಮತ್ತು ಸಂರಕ್ಷಣಾ ಕಾಯ್ದೆ–2020ರ ಕಲಂ 4, 6, 7, 12 ಹಾಗೂ ಪ್ರಾಣಿಗಳ ಮೇಲಿನ ಕ್ರೌರ್ಯ ತಡೆ ಕಾಯ್ದೆಯ ಕಲಂ 11(ಜ) ಅಡಿಯಲ್ಲಿ ಪ್ರಕರಣ ದಾಖಲಿಸಿ ತನಿಖೆ ಕೈಗೊಳ್ಳಲಾಗಿದೆ.ತನಿಖೆ ಮುಂದುವರಿಸಿದ ಪೊಲೀಸರು, ಯಾವುದೇ ಅಗತ್ಯ ಪರವಾನಿಗೆ ಇಲ್ಲದೆ ಜಾನುವಾರುಗಳನ್ನು ಮಾರಾಟ ಮಾಡಿದ್ದ ಆರೋಪದ ಮೇಲೆ ಪುತ್ತೂರು ಆರ್ಯಾಪು ನಿವಾಸಿ ಶಿವಪ್ರಸಾದ್ (52) ಎಂಬಾತನನ್ನು ಬಂಧಿಸಿದ್ದಾರೆ.


ಉದಯವಾಹಿನಿ ಚಿತ್ರ

## ಬೇರೆ ಗಣಪತಿಗಳ ವಿಸರ್ಜನೆಗೆ ಇಲ್ಲದ ಅಡ್ಡಿ ಪೆಂಡಾಲ್ ಗಣೇಶನಿಗೆ ಯಾಕೆ?

**ಉದಯವಾಹಿನಿ, ಹಾಸನ**

ನಿಷೇಧಾಜ್ಞೆ ಜಾರಿಯಲ್ಲಿದ್ದರೂ ಹಾಸನ ನಗರದ ದೇವಿಗೆರೆ ಆವರಣದಲ್ಲಿ ಪೆಂಡಾಲ್ ಗೌರಿ–ಗಣಪತಿ ಮೂರ್ತಿಗಳನ್ನು ವಿಸರ್ಜನೆ ಮಾಡಿರುವ ವಿಚಾರಕ್ಕೆ ಸಂಬಂಧಿಸಿದಂತೆ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಶುಭನ್ವಿತಾ ಅವರಿಗೆ ಜಿಲ್ಲಾಧಿಕಾರಿ ಕೆ.ಎಸ್.ಲತಾಕುಮಾರಿ ನೋಟಿಸ್ ಜಾರಿ ಮಾಡಿದ್ದಾರೆ. ಮತ್ತೊಂದೆಡೆ ಇದೇ ವಿಚಾರವಾಗಿ ಸುದ್ದಿಗೋಷ್ಠಿ ನಡೆಸಿ ಜಿಲ್ಲಾಧಿಕಾರಿಗಳ ನಡೆ ವಿರುದ್ಧ ಜೆಡಿಎಸ್ ಶಾಸಕ ಸ್ವರೂಪ್ ಪ್ರಕಾಶ್ ಆಕ್ರೋಶ ವ್ಯಕ್ತಪಡಿಸಿದ್ದಾರೆ.



ಡಿಸಿ ಅವರ ಬೇಜವಾಬ್ದಾರಿ ಹೇಳಿಕೆಯಿಂದ ಜನರಿಗೆ, ಭಕ್ತರಿಗೆ ನೋವಾಗಿದೆ. ಬೇರೆ ಗಣಪತಿಗಳ ವಿಸರ್ಜನೆಗೆ ಇಲ್ಲದ ಅಡ್ಡಿ ಪೆಂಡಾಲ್ ಗಣಪತಿ ವಿಸರ್ಜನೆಗೆ ಯಾಕೆ ಎಂಬುದು ನಮ್ಮ ಪ್ರಶ್ನೆ. ಎಸ್ಪಿಗೆ ಕೊಟ್ಟ ನೋಟೀಸ್ ನಲ್ಲಿ ಪೆಂಡಾಲ್ ಗಣಪತಿ ಆಯೋಜಕರ ವಿರುದ್ಧ ಕ್ರಮಕ್ಕೆ ಸೂಚಿಸಿದ್ದಾರೆ. ಆದರೆ ಅವರ ಆದೇಶವನ್ನ ನಾವು ಬಹಿಷ್ಕಾರ ಮಾಡ್ತೇವೆ. ನಿನ್ನೆ ದೇವಿಗೆರೆ ಸಂರಕ್ಷಣೆ ಅಂತಾ ಸಮಿತಿ ರಚನೆ ಮಾಡಿದಾರೆ. ಶಾಸಕನಾದ ನನ್ನ ಗಮನಕ್ಕೆ ತರದೆ ಹೀಗೆ ಮಾಡಿದ್ದಾರೆ. ಈ ಸಂಬಂಧ ಡಿಸಿ ಕಚೇರಿ ಎದುರು ಬೃಹತ್ ಪ್ರತಿಭಟನೆ ಮಾಡುತ್ತೇವೆ ಎಂದವರು ತಿಳಿಸಿದ್ದಾರೆ. ನಿಯಮಗಳನ್ನು ಪಾಲಿಸುತ್ತಿಲ್ಲ ಕಾನೂನು ಸುವ್ಯವಸ್ಥೆ ಕಾಂಪ್ರಮೈಸ್ ಆಗುತ್ತೆ. ಏನಾದರೂ ಘಟನೆ ಆದರೆ ಮಾತ್ರ ಕಾನೂನು ಸುವ್ಯವಸ್ಥೆ ಬರುತ್ತೆ. ತಹಶೀಲ್ದಾರ್ ವರದಿ ಸೂಕ್ಷ್ಮವಾಗಿದೆ, ಪರಿಶೀಲಿಸಿ ಆದೇಶ ಕೊಡಬೇಕಿತ್ತು. ಅದು ಆಡಳಿತಾತ್ಮಕ ವಿಚಾರ, ಅವರು ಒಬ್ಬರು ಅಧಿಕಾರಿಯಾಗಿದ್ದಾರೆ. ಅವರದ್ದೇ ಆದ ಕಾನೂನು ಚೌಕಟ್ಟಿನಲ್ಲಿ ಕೆಲಸ ಮಾಡಬೇಕು. ಯಾವ ಅಧಿಕಾರಿಯ ಬಗ್ಗೆಯೂ ನನಗೆ ವೈಯುಕ್ತಿಕ ದ್ವೇಷ ಇಲ್ಲ. ನಾನು ಆದೇಶ ಹೊರಡಿಸಿದ್ದನ್ನು ತಹಶೀಲ್ದಾರ್, ಮತ್ತೊಬ್ಬರು ಪಾಲಿಸಬೇಕು ಎಂದು ಎಸ್‌ಪಿ ಶುಭನ್ವಿತಾ ವಿರುದ್ಧ ಹಾಸನ ಡಿಸಿ ಪರೋಕ್ಷವಾಗಿ ಅಸಮಾಧಾನ ಹೊರಹಾಕಿದ್ದಾರೆ.

## ಉತ್ತಮ ಆಡಳಿತ ನೀಡುವುದು ತಮ್ಮ ಜವಾಬ್ದಾರಿ

**ಉದಯವಾಹಿನಿ, ಯಲಬುರ್ಗಾ**

ಗ್ರಾಮದಲ್ಲಿರುವ ಸಾರ್ವಜನಿಕರಿಗೆ ಉತ್ತವಾದ ಸೇವೆ ಒದಗಿಸುವುದು, ಜನಸ್ನೇಹಿಯಾಗಿ ಆಡಳಿತ ನಡೆಸುವುದು, ಸರಿಯಾಗಿ ಕೆಲಸ ನಿರ್ವಹಿಸುವುದು ಉತ್ತಮ ಆಡಳಿತ ಗ್ರಾಮ ಪಂಚಾಯತಿಯ ಮೂಲ ಉದ್ದೇಶವಾಗಿದ್ದು, ಎಲ್ಲರೂ ಇದನ್ನು ಅಳವಡಿಸಿಕೊಳ್ಳಬೇಕು ಎಂದು ಕಾರ್ಯನಿರ್ವಾಹಕ ಅಧಿಕಾರಿಗಳಾದ ನೀಲಗಂಗಾ ಬಬಲಾದ ಹೇಳಿದರು.

ಇಂದು ಯಲಬುರ್ಗಾ ತಾಲ್ಲೂಕು ಪಂಚಾಯತಿ ಸಾಮರ್ಥ್ಯ ಸೌಧದಲ್ಲಿ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಅಬ್ದುಲ್ ನಜೀರ್ ಸಾಬ್ ರಾಜ್ಯ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಂಸ್ಥೆ ಹಾಗೂ ತಾಲ್ಲೂಕು ಪಂಚಾಯತಿ ವತಿಯಿಂದ ಗ್ರಾಮ ಪಂಚಾಯತಿ ಆಡಳಿತಾಧಿಕಾರಿಗಳು, ಗ್ರಾಮ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು ಹಾಗೂ ಜಿಪಿಎಲ್‌ಎಫ್ ಒಕ್ಕೂಟದ ಅಧ್ಯಕ್ಷರುಗಳಿಗೆ ಹಮ್ಮಿಕೊಂಡಿದ್ದ ಮೂರು ದಿನಗಳ ತರಬೇತಿ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಒಂಬತ್ತು ಸ್ಥಳೀಯ ಸುಸ್ಥಿರ ಅಭಿವೃದ್ಧಿ ಗುರಿಗಳಲ್ಲಿ ಉತ್ತಮ ಆಡಳಿತವು ಒಂದಾಗಿದೆ. ಅಧಿಕಾರಿಗಳು ಸಮಯ ಪಾಲನೆ, ಅಚ್ಚುಕಟ್ಟಾಗಿ ಕೆಲಸ ನಿರ್ವಹಿಸಿದರೆ ಅದು ಉತ್ತಮ ಆಡಳಿತವಾಗಲಿದೆ. ಈ ಕುರಿತು ಗ್ರಾಮ ಪಂಚಾಯತಿ ಪ್ರಮುಖ ಭಾಗಿದಾರರಿಗೆ ಸಾಮರ್ಥ್ಯಾಭಿವೃದ್ಧಿಯನ್ನು ವೃದ್ಧಿಸುವ ಸಲುವಾಗಿ ಈ ತರಬೇತಿ ನೀಡಲಾಗುತ್ತಿದೆ. ಎಲ್ಲರೂ ಪಾಲ್ಗೊಂಡು ಇದರ ಸದುಪಯೋಗ ಪಡೆದುಕೊಳ್ಳಬೇಕು ಎಂದರು. ಈ ಸಂದರ್ಭದಲ್ಲಿ ತಾಲ್ಲೂಕು ಪಂಚಾಯತಿ ಸಹಾಯಕ ನಿರ್ದೇಶಕರಾದ ಹನಮಂತಗೌಡ ಪೊಲೀಸ್ ಪಾಟೀಲ್, ಫಕೀರಪ್ಪ ಕಟ್ಟಿಮನಿ ಅವರು ಮಾತನಾಡಿದರು. ತರಬೇತಿ ಕಾರ್ಯಕ್ರಮದಲ್ಲಿ ಬೆಳಗ್ಗೆಯಿಂದ ಸಂಜೆಯವರೆಗೆ ಅಧಿವೇಶನಗಳು ಜರುಗಿದವು. ಎಲ್ಲಾ ಗ್ರಾಮ ಪಂಚಾಯತಿ ಪಿಡಿಒರವರು, ಜಿಪಿಎಲ್‌ಎಫ್ ಒಕ್ಕೂಟದ ಸದಸ್ಯರು ಹಾಜರಿದ್ದರು.


ಉದಯವಾಹಿನಿ ಚಿತ್ರ

## ಮಳೆಗಾಗಿ ದೇವರಿಗೆ ಅಂಬಲಿ, ಗುಗ್ಗರಿ ನೈವೇದ್ಯ: ಪಶ್ಚಿಮಘಟ್ಟದ ಸೆರಗಿನಲ್ಲೊಂದು ವಿಶಿಷ್ಟ ಆಚರಣೆ

**ಉದಯವಾಹಿನಿ, ಬೆಳಗಾವಿ**

ಪಶ್ಚಿಮಘಟ್ಟದ ಸೆರಗಿನಲ್ಲಿ ಬರುವ ಖಾನಾಪುರ ತಾಲ್ಲೂಕಿನಲ್ಲೂ ಈ ಬಾರಿ ಭರದ ಛಾಯೆ ಆವರಿಸಿದೆ. ಮಳೆ ಕೈಕೊಟ್ಟ ಪರಿಣಾಮ ಭತ್ತ, ಕಬ್ಬು ಸೇರಿ ವಿವಿಧ ಬೆಳೆಗಳು ಒಣಗುವ ಆತಂಕ ಎದುರಾಗಿದೆ. ಈ ಹಿನ್ನೆಲೆಯಲ್ಲಿ ಖಾನಾಪುರ ತಾಲ್ಲೂಕಿನ ಅವರೊಳ್ಳಿ ಗ್ರಾಮದ ರೈತರು ಮಳೆಗಾಗಿ ದೇವರ ಮೊರೆ ಹೋಗಿದ್ದಾರೆ.

ಗ್ರಾಮದ ಹೊರವಲಯದ ಅರಣ್ಯ ಪ್ರದೇಶದಲ್ಲಿರುವ ಗುಡ್ಡದ ಸಿದ್ಧೇಶ್ವರ ದೇವಸ್ಥಾನಕ್ಕೆ ಗ್ರಾಮಸ್ಥರು ಪಾದಯಾತ್ರೆಯಲ್ಲಿ ತೆರಳಿ ವಿಶೇಷ ಪೂಜೆ ಸಲ್ಲಿಸಿದರು. ಮನೆ ಮನೆಯಿಂದ ಅಂಬಲಿ ಹಾಗೂ ಅವರೆಕಾಳಿನ ಗುಗ್ಗರಿ ತಯಾರಿಸಿಕೊಂಡು ಬಂದಿದ್ದ ಗ್ರಾಮಸ್ಥರು, ದೇವರಿಗೆ ನೈವೇದ್ಯವಾಗಿ ಸಮರ್ಪಿಸಿ ಉತ್ತಮ ಮಳೆಯಾಗಲಿ ಎಂದು ಪ್ರಾರ್ಥಿಸಿದ್ದಾರೆ.

ದೇವಸ್ಥಾನದ ಪ್ರಾಂಗಣದಲ್ಲಿ ಇಡೀ ದಿನ ಶಿವಭಜನೆ ಮಾಡಿ, ಸಿದ್ದೇಶ್ವರನ ಧ್ಯಾನದಲ್ಲಿ ಗ್ರಾಮಸ್ಥರು ಕಾಲ ಕಳೆದರು. ಬಳಿಕ ಮನೆಗಳಿಂದ ತಂದಿದ್ದ ಬುತ್ತಿ ಗಂಟುಗಳನ್ನು ದೇವರಿಗೆ ನೈವೇದ್ಯ ಅರ್ಪಿಸಿ, ಅಲ್ಲಿಯೇ ಸಾಮೂಹಿಕವಾಗಿ ಪಂಕ್ತಿ ಭೋಜನ ಮಾಡಿದರು. ಸಂಜೆ ಪೂಜೆ ಹಾಗೂ ಧಾರ್ಮಿಕ ಕಾರ್ಯಕ್ರಮಗಳನ್ನು ಮುಗಿಸಿದ ಗ್ರಾಮಸ್ಥರು ದೇವರ ಮೇಲೆ ಭಾರ ಹಾಕಿ ತಮ್ಮ ಮನೆಗಳತ್ತ ಹೆಜ್ಜೆ ಹಾಕಿದರು. ಈ ಕುರಿತು ಗ್ರಾಮಸ್ಥ ಎನ್.ಎಸ್. ಪಾಟೀಲ್ ಮಾತನಾಡಿ, ಮಳೆಗಾಗಿ ಅಂಬಲಿ, ಗುಗ್ಗರಿಯನ್ನು ನಮ್ಮೂರಿನ ಆರಾಧ್ಯ ದೈವ ಗುಡ್ಡದ ಸಿದ್ದಪ್ಪಜ್ಜನಿಗೆ ಸಮರ್ಪಿಸುವ ಪದ್ಧತಿ ಹಿಂದಿನ ಕಾಲದಿಂದಲೂ ನಡೆದುಕೊಂಡು ಬಂದಿದೆ. ಸಂಕಷ್ಟದಲ್ಲಿರುವ ನಮಗೆ, ಮಳೆ ಸುರಿಸಿ ನಮ್ಮನ್ನು ಕಾಪಾಡುವಂತೆ ದೇವರಲ್ಲಿ ಪ್ರಾರ್ಥಿಸಿದ್ದೇವೆ ಎಂದು ಹೇಳಿದ್ದಾರೆ. ಖಾನಾಪುರ ಮಲೆನಾಡು ಪ್ರದೇಶ, ದಟ್ಟಾರಣ್ಯವನ್ನೂ ಹೊಂದಿದೆ.


ಉದಯವಾಹಿನಿ ಚಿತ್ರ

## ಶರಣಪ್ಪ ಮಟ್ಟೂರರವರಿಗೆ ಮತ ನೀಡಲು ಮುಖಂಡರ ಮನವಿ

**ಉದಯವಾಹಿನಿ, ಬಳ್ಳಾರಿ**

ಕರ್ನಾಟಕ ಈಶಾನ್ಯ ಶಿಕ್ಷಕರ ಕ್ಷೇತ್ರದ ವಿಧಾನ ಪರಿಷತ್ ಚುನಾವಣೆಯ ಕಾಂಗ್ರೆಸ್ ಅಭ್ಯರ್ಥಿ ಶರಣಪ್ಪ ಮಟ್ಟೂರ್ ಅವರ ಪರವಾಗಿ ಬಳ್ಳಾರಿ ನಗರದ ವಿವಿಧ ಶಾಲೆಗಳಿಗೆ ನಗರ ಜಿಲ್ಲಾ ಕಾಂಗ್ರೆಸ್ ಸಮಿತಿ ಅಧ್ಯಕ್ಷ ಅಲ್ಲಂ ಪ್ರಶಾಂತ್ ನೇತೃತ್ವದಲ್ಲಿ ಪಕ್ಷದ ಮುಖಂಡರು ತೆರಳಿ ಮತ ಯಾಚನೆ ಮಾಡಿದರು. ನಗರದಸೇಂಟ್ ಪೀಟರ್ಸ್ ಹೈಸ್ಕೂಲ್ ಪಾರ್ವತಿ ನಗರ, ಬಾಲ ನಾಗಪ್ಪ ಹೈಸ್ಕೂಲ್, ವಿದ್ಯಾನಿಕೇತನ್ ಹೈಸ್ಕೂಲ್, ನೊಬೆಲ್ ಹೈ ಸ್ಕೂಲ್, ಗಂಗೋತ್ರಿ ಹೈ ಸ್ಕೂಲ್ ಗೆ ತೆರಳಿದ ಮುಖಂಡರು ಶಿಕ್ಷಕರನ್ನು ಭೇಟಿಯಾಗಿ ಕರ ಪತ್ರ ನೀಡಿ. ಶರಣಪ್ಪ ಮಟ್ಟೂರು ಅವರಿಗೆ ಮತ ನೀಡುವಂತೆ ಮನವಿ ಮಾಡಿದರು. ಈ ಸಂದರ್ಭದಲ್ಲಿ ಬಳ್ಳಾರಿ ನಗರಾಭಿವೃದ್ಧಿ ಪ್ರಾಧಿಕಾರ ಅಧ್ಯಕ್ಷರಾದ ಜೆ.ಎಸ್. ಆಂಜನೇಯುಲು, ಡಿ.ಸಿ.ಸಿ. ಕಾರ್ಯಾಧ್ಯಕ್ಷ ಬೋಯಪಾಟಿ ವಿಷ್ಣುವರ್ಧನ, ಉಪಾಧ್ಯಕ್ಷರು ಕೆ. ಶ್ರೀನಿವಾಸಲು, ಕಾಂಗ್ರೆಸ್ ಮುಖಂಡರಾದ ವೀರೇಂದ್ರ ಕುಮಾರ್, ಸತೀಶ್ ಕಾಂಡ್ರಾ, ಡಿ.ಸಿ.ಸಿ. ಕಾರ್ಯದರ್ಶಿ ಶೋಭ ಕಾಳಿಂಗ, ಬಳ್ಳಾರಿ ಜಿಲ್ಲಾ ಕಾಂಗ್ರೆಸ್ ಶಿಕ್ಷಕರ ವಿಭಾಗದ ಅಧ್ಯಕ್ಷ ಅಖೀಲ್ ಅಹಮ್ಮದ್, ಸೇವದಾಳ ಜಿಲ್ಲಾಧ್ಯಕ್ಷ ಅತಾವುಲ್ಲಾ, ಕೊಟ್ಟಾಲ್ ರಘು, ಮಲ್ಲಿಶ್ವರಿ, ಸಂತೋಷ್ ಸ್ವಾಮಿ, ಅಖಿಲ್, ಹಾಗು ಪಕ್ಷದ ಇನ್ನಿತರ ಕಾರ್ಯಕರ್ತರಿದ್ದರು.

ದೌರ್ಜನ್ಯ ನಡೆಸಿದ ಆರೋಪದ ಹಿನ್ನೆಲೆಯಲ್ಲಿ ಸಂಬಂಧಪಟ್ಟ ಪೊಲೀಸ್ ಅಧಿಕಾರಿಗಳನ್ನು ಅಮಾನತುಗೊಳಿಸಿ, ವಿಚಾರಣೆ ನಡೆಸಬೇಕು

# ಎಫ್‌ಐಆರ್ ಹಿಂಪಡೆದು, ಪೊಲೀಸ್ ಅಧಿಕಾರಿಗಳನ್ನು ಅಮಾನತುಗೊಳಿಸಿ

**ಉದಯವಾಹಿನಿ, ಬಳ್ಳಾರಿ**

ಎಸ್‌ಐಆರ್ ವಿಚಾರಕ್ಕೆ ಸಂಬಂಧಿಸಿದಂತೆ ಬಿಜೆಪಿ ಮುಖಂಡರು ಹಾಗೂ ಕಾರ್ಯಕರ್ತರ ವಿರುದ್ಧ ದಾಖಲಿಸಿರುವ ಎಫ್‌ಐಆರ್‌ಅನ್ನು ಕೂಡಲೇ ಹಿಂಪಡೆಯಬೇಕು ಹಾಗೂ ಪ್ರತಿಭಟನಾಕಾರರ ಮೇಲೆ ದೌರ್ಜನ್ಯ ನಡೆಸಿದ ಆರೋಪದ ಹಿನ್ನೆಲೆಯಲ್ಲಿ ಸಂಬಂಧಪಟ್ಟ ಪೊಲೀಸ್ ಅಧಿಕಾರಿಗಳನ್ನು ಅಮಾನತುಗೊಳಿಸಿ ವಿಚಾರಣೆ ನಡೆಸಬೇಕು" ಎಂದು ವಿಧಾನ ಪರಿಷತ್ ಸದಸ್ಯ ವೈ.ಎಂ. ಸತೀಶ್ ಆಗ್ರಹಿಸಿದರು.

**1.** ಪೊಲೀಸರಿಗೆ ಯಾವ ಅಧಿಕಾರವಿದೆ
**2.** ಆಯೋಗದ ಮೊರೆ ಹೋಗಬೇಕಿತ್ತು
**3.** ಯಾವ ಕ್ರಮ ಕೈಗೊಳ್ಳಬಹುದು

ನಗರದ ಮೋಕಾ ರಸ್ತೆಯ ವಾಜಪೇಯಿ ಬಡಾವಣೆಯಲ್ಲಿರುವ ಬಿಜೆಪಿ ಕಚೇರಿಯಲ್ಲಿ ಮಂಗಳವಾರ ನಡೆದ ಮಾಧ್ಯಮಗೋಷ್ಠಿಯಲ್ಲಿ ಮಾತನಾಡಿದ ಅವರು, "ಎಸ್‌ಐಆರ್‌ಗೆ ಸಂಬಂಧಿಸಿದಂತೆ ಮತದಾರರ ಪಟ್ಟಿಯಲ್ಲಿ ಹೆಸರು ಸೇರ್ಪಡೆ ಅಥವಾ ತೆಗೆದುಹಾಕುವ ಪ್ರಕ್ರಿಯೆಗೆ ಚುನಾವಣಾ ಆಯೋಗದ ನಿಯಮಾನುಸಾರ ಫಾರಂ–7 ಸಲ್ಲಿಸಲಾಗಿದೆ. ಈ ವಿಚಾರ ಚುನಾವಣಾ ಆಯೋಗಕ್ಕೆ ಸಂಬಂಧಿಸಿದ್ದಾಗಿದ್ದು, ಅಗತ್ಯವಿದ್ದವರು ಚುನಾವಣಾಧಿಕಾರಿ ಅಥವಾ ಚುನಾವಣಾ ಆಯೋಗದ ಮೊರೆ ಹೋಗಬೇಕಿತ್ತು. ಆದರೆ ಈ ವಿಚಾರದಲ್ಲಿ ಪೊಲೀಸರು ಮಧ್ಯಪ್ರವೇಶಿಸಿ ಬಿಜೆಪಿ ಕಾರ್ಯಕರ್ತರ ವಿರುದ್ಧ ಎಫ್‌ಐಆರ್ ದಾಖಲಿಸಿರುವುದು ಸರಿಯಲ್ಲ" ಎಂದರು.

"ಬಿಎಲ್‌ಎ–1 ವಿರುದ್ಧ ಎಫ್‌ಐಆರ್ ದಾಖಲಿಸಲು ಪೊಲೀಸರಿಗೆ ಯಾವ ಅಧಿಕಾರವಿದೆ ಎಂಬುದನ್ನು ಸ್ಪಷ್ಟಪಡಿಸಬೇಕು. ಚುನಾವಣಾ ಆಯೋಗದ ನಿಯಮಗಳನ್ನು ಉಲ್ಲಂಘಿಸದೆ ಫಾರಂ–7 ಸಲ್ಲಿಸಲಾಗಿದ್ದು, ಈ ವಿಚಾರದಲ್ಲಿ ಪೊಲೀಸರು ಕಾನೂನುಬದ್ಧವಾಗಿ ಯಾವ ಕ್ರಮ ಕೈಗೊಳ್ಳಬಹುದು ಎಂಬುದನ್ನು ವಿವರಿಸಬೇಕು" ಎಂದು ಸತೀಶ್ ಆಕ್ರೋಶ ವ್ಯಕ್ತಪಡಿಸಿದರು.

"ನಿನ್ನೆ ನಡೆದ ಪ್ರತಿಭಟನೆ ವೇಳೆ ಪೊಲೀಸರು ಬಿಜೆಪಿ ಕಾರ್ಯಕರ್ತರನ್ನು ಎಳೆದಾಡಿ ಚದುರಿಸಲು ಮುಂದಾಗಿದ್ದು, ಈ ವೇಳೆ ಕೆಲವರಿಗೆ ಗಾಯಗಳಾಗಿವೆ. ಬಿಜೆಪಿ ಜಿಲ್ಲಾಧ್ಯಕ್ಷ ಅನಿಲ್ ಕುಮಾರ್ ಮೋಕಾ ನಾಯ್ಡು ಅವರ ಮೇಲೂ ಪೊಲೀಸರು ಹಲ್ಲೆ ನಡೆಸಿ ಗಾಯಗೊಳಿಸಿದ್ದಾರೆ" ಎಂದು ಆರೋಪಿಸಿದ ಅವರು, "ಜಿಲ್ಲಾಧ್ಯಕ್ಷರಿಗೆ ಭುಜ, ಕೈ ಹಾಗೂ ಬೆರಳಿಗೆ ಗಾಯಗಳಾಗಿದ್ದು, ಚಿಕಿತ್ಸೆ ಪಡೆದಿರುವ ಬಗ್ಗೆ ವೈದ್ಯಕೀಯ ದಾಖಲೆಗಳಿವೆ" ಎಂದು ತಿಳಿಸಿದರು.

"ಪ್ರತಿಭಟನೆ ನಡೆಸುವುದು ಪ್ರಜಾಪ್ರಭುತ್ವ ವ್ಯವಸ್ಥೆಯಲ್ಲಿ ಪ್ರತಿಯೊಬ್ಬರ ಹಕ್ಕಾಗಿದೆ. ರಾಜ್ಯದ ಮುಖ್ಯಮಂತ್ರಿ ಹಾಗೂ ಸಚಿವ ಸಂಪುಟದ ಸದಸ್ಯರು ಚುನಾವಣಾ ಆಯೋಗದ ಕಚೇರಿ ಮುಂದೆ ಪ್ರತಿಭಟನೆ ನಡೆಸಿದ ಸಂದರ್ಭದಲ್ಲಿ ಅವರ ವಿರುದ್ಧ ಇದೇ ರೀತಿಯ ಕ್ರಮ ಕೈಗೊಳ್ಳಲಾಗಿದೆಯೇ?, ಎಂಬುದನ್ನು ಪ್ರಶ್ನಿಸಿದ ಸತೀಶ್, "ಸಾಮಾನ್ಯ ಕಾರ್ಯಕರ್ತರಿಗೂ ಪ್ರತಿಭಟನೆ ನಡೆಸುವ ಹಕ್ಕಿದೆ" ಎಂದರು.

"ಬಳ್ಳಾರಿಯಲ್ಲಿ ಕೆಲ ಪೊಲೀಸ್ ಅಧಿಕಾರಿಗಳು ತಮ್ಮ ಕರ್ತವ್ಯ ನಿರ್ವಹಿಸುವ ಬದಲು ಹೆಲ್ಮೆಟ್ ತಪಾಸಣೆಗೆ ನಿಲ್ಲುವಂತಹ ಪರಿಸ್ಥಿತಿ ಇದೆ" ಎಂದು ಟೀಕಿಸಿದ ಅವರು, "ಪೊಲೀಸರು ಕಾನೂನು ಮತ್ತು ನಿಯಮಗಳಂತೆ ತಮ್ಮ ಕರ್ತವ್ಯ ನಿರ್ವಹಿಸಬೇಕು. ಸಾರ್ವಜನಿಕರು ಹಾಗೂ ಪ್ರತಿಭಟನಾಕಾರರೊಂದಿಗೆ ಕಾನೂನುಬದ್ಧವಾಗಿ ನಡೆದುಕೊಳ್ಳಬೇಕು" ಎಂದು ಹೇಳಿದರು. "ಪೊಲೀಸರು ಯಾವುದೇ ಪ್ರಕರಣ ದಾಖಲಿಸುವ ಮುನ್ನ ಘಟನೆ ಕುರಿತು ಸಮಗ್ರವಾಗಿ ಪರಿಶೀಲಿಸಬೇಕು. ರಾಜಕೀಯ ಒತ್ತಡಕ್ಕೆ ಮಣಿದು ಪ್ರಕರಣ ದಾಖಲಿಸಿದರೆ, ಪೊಲೀಸರು ಒಂದು ಪಕ್ಷದ ಪರವಾಗಿ ಕೆಲಸ ಮಾಡುತ್ತಿದ್ದಾರೆ ಎಂಬ ಆರೋಪಕ್ಕೆ ಕಾರಣವಾಗುತ್ತದೆ. ಆದ್ದರಿಂದ ಪೊಲೀಸರು ಕಾನೂನುಬದ್ಧವಾಗಿ ಕಾರ್ಯನಿರ್ವಹಿಸಬೇಕು" ಎಂದು ಹೇಳಿದರು.


ಉದಯವಾಹಿನಿ ಚಿತ್ರ

> ಬಿಎಲ್‌ಎ–1 ವಿರುದ್ಧ ದಾಖಲಿಸಿರುವ ಎಫ್‌ಐಆರ್ ಅನ್ನು ಕೂಡಲೇ ಹಿಂಪಡೆಯಬೇಕು. ಘಟನೆಗೆ ಸಂಬಂಧಿಸಿದಂತೆ ಬ್ರೂಸ್‌ಪೇಟೆ ಪೊಲೀಸ್ ಠಾಣೆಯ ಸಿಪಿಐ ಹಾಗೂ ಎಪಿಎಂಸಿ ಪೊಲೀಸ್ ಠಾಣೆಯ ಸಿಪಿಐ ಅವರನ್ನು ಅಮಾನತುಗೊಳಿಸಿ ವಿಚಾರಣೆ ನಡೆಸಬೇಕು.
> – ವೈ.ಎಂ. ಸತೀಶ್

### ದೌರ್ಜನ್ಯ ಸರಿಯಲ

ಮಾಜಿ ಶಾಸಕ ಗಾಳಿ ಸೋಮಶೇಖರ ರೆಡ್ಡಿ ಮಾತನಾಡಿ, "ನಿನ್ನೆ ನಡೆದ ಪ್ರತಿಭಟನೆ ವೇಳೆ ಪೊಲೀಸರು ನಡೆಸಿದ್ದಾರೆ ಎನ್ನಲಾದ ದೌರ್ಜನ್ಯ ಸರಿಯಲ್ಲ. ಬಿಜೆಪಿ ಜಿಲ್ಲಾಧ್ಯಕ್ಷರನ್ನು ಗುರಿಯಾಗಿಸಿಕೊಂಡು ಕ್ರಮ ಕೈಗೊಳ್ಳಲಾಗಿದೆ" ಎಂದು ಆರೋಪಿಸಿದರು.

## ಮಿನಿ ನ್ಯೂಸ್

### ವಿಶ್ವೇಶ್ವರಯ್ಯ ಪಿಎಚ್‌ಡಿ ಯೋಜನೆ: ಫೆಲೋಶಿಪ್‌ಗೆ ಅರ್ಜಿ

**ಉದಯವಾಹಿನಿ, ಕಲಬುರಗಿ**

ಭಾರತ ಸರ್ಕಾರದ ಎಲೆಕ್ಟ್ರಾನಿಕ್ಸ್ ಮತ್ತು ಮಾಹಿತಿ ತಂತ್ರಜ್ಞಾನ ಸಚಿವಾಲಯದ "ವಿಶ್ವೇಶ್ವರಯ್ಯ ಪಿಎಚ್‌ಡಿ ಯೋಜನೆಯಡಿ", ಕರ್ನಾಟಕ ಕೇಂದ್ರೀಯ ವಿಶ್ವವಿದ್ಯಾಲಯದ (ಸಿಯುಕೆ) ಕಂಪ್ಯೂಟರ್ ಸೈನ್ಸ್ ಮತ್ತು ಇಂಜಿನಿಯರಿಂಗ್ ವಿಭಾಗದಲ್ಲಿ ಪೋಸ್ಟ್–ಡಾಕ್ಟರಲ್ ಫೆಲೋಶಿಪ್ ಕಾರ್ಯಕ್ರಮಕ್ಕಾಗಿ ಅರ್ಹ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ. ಈ ಫೆಲೋಶಿಪ್ ಒಂದು ವರ್ಷದ ಅವಧಿಗೆ ಮಾತ್ರ ಮಾನ್ಯವಾಗಿರುತ್ತದೆ. ಇದು ಪೂರ್ಣಕಾಲಿಕ, ತಾತ್ಕಾಲಿಕ ಮತ್ತು ವರ್ಗಾಯಿಸಲಾಗದ ಹುದ್ದೆಯಾಗಿದ್ದು, ಭಾರತದಲ್ಲಿ ಮಾತ್ರ ಲಭ್ಯವಿರುತ್ತದೆ. ಈ ಯೋಜನೆಯಡಿ ಆಯ್ಕೆಯಾಗುವ ಅಭ್ಯರ್ಥಿಗಳು ಸಿಯುಕೆ ಕಂಪ್ಯೂಟರ್ ಸೈನ್ಸ್ ಮತ್ತು ಇಂಜಿನಿಯರಿಂಗ್ ವಿಭಾಗದಲ್ಲಿ ಪೋಸ್ಟ್–ಡಾಕ್ಟರಲ್ ಸಂಶೋಧನಾ ಕಾರ್ಯವನ್ನು ಕೈಗೊಳ್ಳಬೇಕಾಗುತ್ತದೆ. ಶೈಕ್ಷಣಿಕ ಅರ್ಹತೆಗಳು, ಸಹಪರಿಶೀಲಿತ ಶೋಧನಾ ಪ್ರಕಟಣೆಗಳು ಹಾಗೂ ಮನ್ನಣೆಗಳನ್ನು ಒಳಗೊಂಡಂತೆ ಉತ್ತಮ ಹಾಗೂ ಸಾಬೀತಾದ ಶೈಕ್ಷಣಿಕ ಮತ್ತು ಸಂಶೋಧನಾ ದಾಖಲೆಯನ್ನು ಹೊಂದಿರುವ ಅರ್ಹ ಸಂಶೋಧಕರಿಗೆ ಈ ಪೋಸ್ಟ್–ಡಾಕ್ಟರಲ್ ಫೆಲೋಶಿಪ್ ನೀಡಲಾಗುತ್ತದೆ. ಈ ಯೋಜನೆಯ ಅರ್ಹತಾ ಮಾನದಂಡಗಳು, ನಿಯಮಗಳು ಮತ್ತು ಷರತ್ತುಗಳು, ಫೆಲೋಶಿಪ್ ಮೊತ್ತ ಹಾಗೂ ಅರ್ಜಿ ಸಲ್ಲಿಸುವ ವಿಧಾನ ಸೇರಿದಂತೆ ಹೆಚ್ಚಿನ ಮಾಹಿತಿಗಾಗಿ ಸಿಯುಕೆಯ ಕಂಪ್ಯೂಟರ್ ಸೈನ್ಸ್ ವಿಭಾಗದ ಡೀನ್ ಪ್ರೊ.ಆರ್. ಎಸ್.ಹೆಗಡಿ ಅವರನ್ನು ಸಂಪರ್ಕ ಮಾಡಬಹುದು ಮೊ : 9604085138, ( rshegadi@cuk.ac.in,) ಅಥವಾ ವಿವಿ ಅಧಿಕೃತ ಜಾಲತಾಣವನ್ನು ವೀಕ್ಷಿಸಬಹುದು.

### ಬಣ್ಣದ ಲೋಕದೊಳಗೆ "ಸುಣ್ಣ" ಕೇಳುವವರು ಯಾರು ?

**ಉದಯವಾಹಿನಿ, ಕಲಬುರಗಿ**

ನಮ್ಮ ಹಿರಿಯರು ಕಸದಲ್ಲೂ ರಸ ಹುಡುಕಿ ಬಳಸಿ ಅದರ ಉಪಯುಕ್ತತೆಯನ್ನು ತೋರಿಸಿಕೊಟ್ಟಿದ್ದರು. ನಾವು ಆಧುನಿಕತೆಯ ಭರಾಟೆಯಲ್ಲಿ ಅವುಗಳನ್ನು ಕೈ ಬಿಟ್ಟು ನಮಗೆ ನಾವೆ ಹಾನಿ ಮಾಡಿಕೊಂಡೆವು. ಅಂತಹ ಮಹತ್ವದ ಶ್ರೇಷ್ಠ ವಸ್ತುಗಳಲ್ಲಿ ಸುಣ್ಣವೂ ಒಂದು.. ನಮ್ಮ ಪೂರ್ವಿಕರು ಗ್ರಾಮೀಣ ಪ್ರದೇಶದಲ್ಲಿ ಮದುವೆ , ಹಬ್ಬ ಹರಿ ದಿನಗಳಲ್ಲಿ ಶುಭ ಸಮಾರಂಭಗಳು ಜರುಗುವ ತಿಂಗಳ ಮೊದಲೇ ಮನೆ, ಅಂಗಡಿ ,ಕೊಟ್ಟಿಗೆ, ಗೋದಾಮುಗಳಿಗೆ ವರ್ಷಕ್ಕೊಮ್ಮೆ ಸುಣ್ಣಬಳಸಿ ಅಂದ ಹೆಚ್ಚಿಸುತ್ತಿದ್ದರು. ಕ್ಯಾಲ್ಸಿಯಂ ಕಾರ್ಬೋನೇಟ್ ಅಧಿಕ ಪ್ರಮಾಣದಲ್ಲಿರುವ ಜಲಜ ಶಿಲೆಯೇ ಸುಣ್ಣದ ಮೂಲರೂಪ. ಅದನ್ನು ಭಟ್ಟಿಗಳಲ್ಲಿ ಹದವಾಗಿ ಸುಟ್ಟರೆ ದೊರೆಯುತ್ತಿದ್ದುದೇ ಸುಣ್ಣ. ಈ ಸುಣ್ಣವನ್ನ ಗಾರೆ ತಯಾರಿಸಲು, ಗಿಲಾವು ಮಾಡಲು, ಮನೆಗೆ ಚೆಂದ ಕಾಣಲು ಬಳಸಿದ್ದರು.ಕೃಷಿಯ ಭೂಮಿಯ ಸೌಳು ತಗೆಯಲು, ಸಕ್ಕರೆ ಬೆಲ್ಲದ ಸಂಸ್ಕರಣದಲ್ಲಿ, ರಸ್ತೆಯ ಅಡಿ ಗಟ್ಟಿ ಮಾಡಲು, ಗಾಜು, ಕಾಗದ ತಯಾರಿಕೆಯ ಕಚ್ಚಾವಸ್ತುವಾಗಿ, ನೀರನ್ನು ಶುದ್ಧೀಕರಿಸಲು ಎಲೆ ಅಡಿಕೆಯ ಜೊತೆ ಮೆಲ್ಲಲೂ ಬಳಸಿದರು. ಅಂತಹ ಬಹುಪಯೋಗಿ ಸುಣ್ಣದ ಬಳಕೆ ನಿಲ್ಲಿಸಿ, ಸುಣ್ಣ ಸುಡುವ ಉದ್ಯೋಗದಲ್ಲಿದ್ದ ನೂರಾರು ಕುಟುಂಬಗಳ ಕಾಯಕ ನಿಂತು ಹೋಯಿತು. ನಮಗೆ ಕಡಿಮೆ ವೆಚ್ಚದಲ್ಲಿ ಮನೆಗೆ ಬ್ಯಾಕ್ಟೀರಿಯಾಗಳನ್ನು ನಿಯಂತ್ರಿಸುವ ಮತ್ತು ಬಹುಪಯೋಗಿ ಸುಣ್ಣವನ್ನು ದೂರ ಮಾಡಿಕೊಂಡೆವು.


ಉದಯವಾಹಿನಿ ಚಿತ್ರ

### ವಿಬಿ ಜಿ ರಾಮ್ ಜಿ ಕೂಲಿಕಾರರ ಆರೋಗ್ಯ ತಪಾಸಣೆ

**ಉದಯವಾಹಿನಿ, ಹೊಸಪೇಟೆ**

ವಿಜಯನಗರ ಜಿಲ್ಲೆಯ ಹೊಸಪೇಟೆ ತಾಲ್ಲೂಕಿನ ಚಿಲಕನಹಟ್ಟಿ ಗ್ರಾಪಂ ವ್ಯಾಪ್ತಿಯ ಟಿ ಬಸಾಪುರ ಗ್ರಾಮದ ಟಿ.ಬಿ. ತಾಂಡ ಗ್ರಾಮದ ಚೋಪ್ಯನಾಯ್ಕ ಅವರ ಹೊಲದ ಹತ್ತಿರ ಬಸಾಪುರ ಪುನಶ್ವೇತನ ಕಾಮಗಾರಿ ಸ್ಥಳದಲ್ಲಿ ಗ್ರಾಮ ಆರೋಗ್ಯ ಅಭಿಯಾನದಡಿ ವಿಬಿ ಜಿ ರಾಮ್ ಜಿ ಕೂಲಿ ಕಾರ್ಮಿಕರಿಗಾಗಿ ವಿಶೇಷ ಆರೋಗ್ಯ ತಪಾಸಣೆ ನಡೆಸಲಾಯಿತು.

ವಿಶೇಷ ಆರೋಗ್ಯ ತಪಾಸಣೆ ಶಿಬಿರಕ್ಕೆ ಚಾಲನೆ ನೀಡಿ ಮಾತನಾಡಿದ ತಾ.ಪಂ ಸಹಾಯಕ ನಿರ್ದೇಶಕರಾದ ಕವಿತ ಕರ್ಣಂ, ವಿಬಿ ಜಿ ರಾಮ್ ಜೀ ಕೂಲಿಕಾರರ ಆರೋಗ್ಯ ರಕ್ಷಣೆಗೆ ಹೆಚ್ಚಿನ ಒತ್ತು ನೀಡಲಾಗುತ್ತದೆ. ಉಚಿತ ಆರೋಗ್ಯ ತಪಾಸಣೆ ಶಿಬಿರದಲ್ಲಿ ಕೂಲಿ ಕಾರ್ಮಿಕರು ಆರೋಗ್ಯ ತಪಾಸಣೆ ನಡೆಸಿಕೊಳ್ಳುವ ಮೂಲಕ ತಮ್ಮ ಆರೋಗ್ಯಗಳ ರಕ್ಷಣೆ ಮಾಡಿಕೊಳ್ಳಬೇಕು ಎಂದರು. ಮರಿಯಮ್ಮನಹಳ್ಳಿ ಪ್ರಾಥಮಿಕ ಆರೋಗ್ಯ ಕೇಂದ್ರದ ವೈದ್ಯಾಧಿಕಾರಿ ಡಾ.ಕೃಷ್ಣ ಹಾಗೂ ಪಿಡಿಒ ಬಸಮ್ಮ ಮಾತನಾಡಿ, ಕೂಲಿಕಾರರು ದುಡಿಯುವ ಸ್ಥಳಕ್ಕೆ ತೆರಳಿ ಆರೋಗ್ಯ ತಪಾಸಣಾ ಶಿಬಿರದಲ್ಲಿ ರಕ್ತದೊತ್ತಡ, ಸಕ್ಕರೆ ಕಾಯಿಲೆ, ಕ್ಷಯರೋಗ ಸೇರಿದಂತೆ ಸಾಂಕ್ರಾಮಿಕ ರೋಗಗಳ ತಪಾಸಣೆ ಮಾಡಲಾಗುತ್ತದೆ. ಹಾಗೂ ಮಾನಸಿಕ ಆರೋಗ್ಯ ಹಾಗೂ ಸಂಭಾವ್ಯ ಆರೋಗ್ಯ ಸಮಸ್ಯೆಗಳ ಕುರಿತು ಅರಿವು ಮೂಡಿಸಲಾಗುತ್ತದೆ ಎಂದರು. ತಾಲ್ಲೂಕು ಐಇಸಿ ಸಂಯೋಜಕ ಹೆಚ್. ನಾಗರಾಜ ಮಾತನಾಡಿ ಪ್ರತಿಯೊಬ್ಬ ಕೂಲಿ ಕಾರ್ಮಿಕರು ಶಿಬಿರದ ಸದುಪಯೋಗ ಪಡೆದುಕೊಳ್ಳಿ ಎಂದರು. ಶಿಬಿರದಲ್ಲಿ ವಿಬಿ ಜಿ ರಾಮ್ ಜೀ ಯೋಜನೆಯ 106 ಜನ ಕೂಲಿ ಕಾರ್ಮಿಕರಿಗೆ ಉಚಿತ ಆರೋಗ್ಯ ತಪಾಸಣೆ ನಡೆಸಿ, ಔಷಧಿ ವಿತರಣೆ ಮಾಡಲಾಯಿತು.


ಉದಯವಾಹಿನಿ ಚಿತ್ರ

### ಮುಸ್ಲಿಂ ಯುವತಿಗೆ ವಸತಿ ನಿರಾಕರಣೆ

**ಉದಯವಾಹಿನಿ, ಉಡುಪಿ**

ಹಿಂದೂ ಕುಟುಂಬದ ಸ್ನೇಹಿತೆಯೊಂದಿಗೆ ಪ್ರವಾಸಕ್ಕಾಗಿ ಉಡುಪಿಗೆ ಬಂದಿದ್ದ ಬಳ್ಳಾರಿಯ ಯುವತಿಗೆ ಮುಸ್ಲಿಂ ಧರ್ಮಕ್ಕೆ ಸೇರಿದವರು ಎಂಬ ಕಾರಣಕ್ಕೆ ರಾತ್ರಿ ಉಳಿದುಕೊಳ್ಳಲು ಅನುಮತಿ ನಿರಾಕರಿಸಿದ್ದು, ಮಠದ ವಸತಿ ಗೃಹದ ಅಧಿಕಾರಿಗಳ ಕೃತ್ಯವನ್ನು ಸಿಪಿಎಂ(ಎಂ) ಉಡುಪಿ ಜಿಲ್ಲಾ ಸಮಿತಿ ತೀವ್ರವಾಗಿ ಖಂಡಿಸಿದೆ. ಈ ಬಗ್ಗೆ ಸೋಮವಾರ ಮಾಧ್ಯಮ ಹೇಳಿಕೆ ಬಿಡುಗಡೆ ಮಾಡಿರುವ ಸಿಪಿಐ(ಎಂ) ಜಿಲ್ಲಾ ಕಾರ್ಯದರ್ಶಿ ಸುರೇಶ್ ಕಲ್ಲಗಾರ ಅವರು, ಬಳ್ಳಾರಿಯ ಯುವತಿಯೊಬ್ಬರಿಗೆ ಕೇವಲ ಅವರು ಮುಸ್ಲಿಂ ಸಮುದಾಯಕ್ಕೆ ಸೇರಿದವರು ಎಂಬ ಕಾರಣಕ್ಕಾಗಿ ಅಕ್ಟೋಬರ್ 3 ರಂದು ಮಠದ ವಸತಿ ಗೃಹದಲ್ಲಿ ರಾತ್ರಿ ತಂಗಲು ಅನುಮತಿ ನಿರಾಕರಿಸಲಾಗಿದೆ ಎಂದು ಆರೋಪಿಸಿದ್ದಾರೆ. ಅಕ್ಟೋಬರ್ 3 ರಂದು ಬಳ್ಳಾರಿ ಜಿಲ್ಲೆಯ ಮುಸ್ಲಿಂ ಯುವತಿ ತನ್ನ ಸ್ನೇಹಿತೆ ಶಕುಂತಲಾ ಮತ್ತು ಅವರ ಕುಟುಂಬದೊಂದಿಗೆ ಪ್ರವಾಸಕ್ಕಾಗಿ ಉಡುಪಿ ಜಿಲ್ಲೆಗೆ ಆಗಮಿಸಿದ್ದು, ಕೃಷ್ಣ ದೇವಾಲಯದಲ್ಲಿ ಪ್ರಾರ್ಥನೆ ಸಲ್ಲಿಸಿದ ನಂತರ ರಾತ್ರಿ ಉಳಿದು ಕೊಳ್ಳಲು ಕೃಷ್ಣ ಮಠದ ವಸತಿ ಗೃಹಕ್ಕೆ ಆಗಮಿಸಿದ್ದರು. ಆ ವೇಳೆ ರಾತ್ರಿ 8 ಗಂಟೆ ಆಗಿತ್ತು. ಎಲ್ಲರ ಆಧಾರ್ ಕಾರ್ಡ್ ಪರಿಶೀಲಿಸಿದ ವಸತಿ ಗೃಹದ ಅಧಿಕಾರಿಗಳು ಮುಸ್ಲಿಂ ಯುವತಿಗೆ ರಾತ್ರಿ ಉಳಿದುಕೊಳ್ಳಲು ಅವಕಾಶ ನೀಡಲಿಲ್ಲ. ಸ್ನೇಹಿತೆ ಶಕುಂತಲಾ ಅವರ ಕುಟುಂಬದ ಹಿರಿಯರು, ಆಕೆ ನಮ್ಮ ಮೊಮ್ಮಗಳು ಇದ್ದಂತೆ, ಅಲ್ಲದೆ ರಾತ್ರಿ ಹೊತ್ತಿನಲ್ಲಿ ಅಪರಿಚಿತ ನಗರದಲ್ಲಿ ಒಬ್ಬಳೇ ಎಲ್ಲಿಗೆ ಹೋಗುವುದು ಎಂದು ಅಂಗಲಾಚಿದರೂ ವಸತಿ ಗೃಹದ ಅಧಿಕಾರಿಗಳು ಕೇಳಲಿಲ್ಲ ಎಂದು ಹೇಳಿದ್ದಾರೆ.


ಅಂಗಲಾಚಿದರೂ ಕರುಣೆ ತೋರದ ಸಿಬ್ಬಂದಿ

## ದಿನ ಭವಿಷ್ಯ

| | | |
|---|---|---|
| ರಾಹುಕಾಲ | ಮಧ್ಯಾಹ್ನ | 12:00 ರಿಂದ 01:30 |
| ಗುಳಿಕ ಕಾಲ | ಬೆಳಗ್ಗೆ | 10:30 ರಿಂದ 12:00 |
| ಯಮಗಂಡ ಕಾಲ | ಬೆಳಿಗ್ಗೆ | 07:30 ರಿಂದ 09:00 |

**ಮೇಷ** ನಿಮ್ಮ ಅತ್ಯಂತ ಪ್ರೀತಿಯ ಕನಸು ನನಸಾಗುತ್ತದೆ. ಆದರೆ ತುಂಬಾ ಸಂತೋಷ ಸ್ವಲ್ಪ ಸಮಸ್ಯೆಗಳನ್ನು ಉಂಟುಮಾಡಬಹುದಾದ್ದರಿಂದ ನಿಮ್ಮ ಉತ್ಸಾಹವನ್ನು ನಿಯಂತ್ರಣದಲ್ಲಿರಿಸಿಕೊಳ್ಳಿ. ಹೂಡಿಕೆಗಳನ್ನು ಸಂಪ್ರದಾಯಬದ್ಧವಾಗಿ ಉಳಿತಾಯ ಮಾಡಿದರೆ ಹಣ ಮಾಡುತ್ತೀರಿ.

**ವೃಷಭ** ನಿಮ್ಮ ಅಪಾರ ವಿಶ್ವಾಸ ಮತ್ತು ಸುಲಭದ ಕೆಲಸದ ವೇಳಾಪಟ್ಟಿ ಇಂದು ವಿಶ್ರಾಂತಿಗೆ ಸಾಕಷ್ಟು ಸಮಯ ನೀಡುತ್ತದೆ. ನಿಮಗೆ ಆಕರ್ಷಕವಾಗಿ ತೋರುವ ಯಾವುದೇ ಹೂಡಿಕೆಯ ಯೋಜನೆಯ ಬಗ್ಗೆ ಹೆಚ್ಚು ಕಂಡುಹಿಡಿಯಲು ಮೇಲ್ಮೈಗಿಂತ ಕೆಳಗೆ ಆಳವಾಗಿ ಕೆದಕಿ.

**ಮಿಥುನ** ಇಂದು ನೀವು ಆರಾಮವಾಗಿರುವ ಭಾವನೆ ಹೊಂದಿರುತ್ತೀರಿ ಮತ್ತು ಆನಂದಿಸಲು ಸೂಕ್ತ ಮನೋಭಾವದಲ್ಲಿರುತ್ತೀರಿ. ನಿಮಗಾಗಿ ಹಣವನ್ನು ಉಳಿಸುವ ನಿಮ್ಮ ಬಯಕೆ ಇಂದು ಪೂರ್ಣಗೊಳ್ಳಬಹುದು. ಇಂದು ನೀವು ಸೂಕ್ತವಾಗಿ ಉಳಿಸಲು ಸಾಧ್ಯವಾಗುತ್ತದೆ.

**ಕರ್ಕಾಟಕ** ಆರೋಗ್ಯ ದೃಷ್ಟಿಯಿಂದ ಉತ್ತಮವಾದ ದಿನ. ನಿಮ್ಮ ಹರ್ಷಚಿತ್ತದ ಮನಸ್ಸು ರಾಜ್ಯದ ನೀವು ಬಯಸಿದ ಟಾನಿಕ್ ನೀಡುತ್ತದೆ ಮತ್ತು ನಿಮಗೆ ಆತ್ಮವಿಶ್ವಾಸ ತರುತ್ತದೆ. ಹಣ ನಿಮಗೆ ಅಗತ್ಯವಾಗಿದೆ ಆದರೆ ನಿಮ್ಮ ಸಂಬಂಧಗಳನ್ನು ಹಾಳುಮಾಡುವಷ್ಟು ಹಣದ ಬಗ್ಗೆ ಗಂಭೀರವಾಗಬೇಡಿ.

**ಸಿಂಹ** ನಿಮ್ಮ ಅಸಭ್ಯ ವರ್ತನೆ ನಿಮ್ಮ ಹೆಂಡತಿಯ ಮನಸ್ಸನ್ನು ಹಾಳು ಮಾಡುತ್ತದೆ. ನೀವು ಯಾರನ್ನಾದರೂ ಅಗೌರವದಿಂದ ಕಾಣುವುದು ಹಾಗೂ ಸಂಬಂಧವನ್ನು ಲಘು ತೆಗೆದುಕೊಳ್ಳುವುದು ಅಪಾಯ ತೀವ್ರವಾಗಿ ಘಾಸಿಗೊಳಿಸಬಹುದು ಎಂದು ಅರ್ಥ.

**ಕನ್ಯಾ** ಪ್ರತಿ ವ್ಯಕ್ತಿಯನ್ನೂ ಆಲಿಸಿ ನಿಮ್ಮ ಸಮಸ್ಯೆಗಳಿಗೆ ಪರಿಹಾರ ದೊರಕಬಹುದು. ಇಂದು ಯಾವುದೇ ಸಹಾಯವಿಲ್ಲದೆ, ನೀವು ಹಣವನ್ನು ಗಳಿಸುವಲ್ಲಿ ಸಾಮರ್ಥ್ಯರಾಗಿರುತ್ತೀರಿ. ನೀವು ಪ್ರೀತಿಸುವವರಿಂದ ಉಡುಗೊರೆ ಪಡೆಯಲು ಹಾಗೂ ನೀಡಲು ಪವಿತ್ರವಾದ ದಿನ.

**ತುಲಾ** ಒತ್ತಡದ ದಿನದ ಹೊರತಾಗಿಯೂ ಆರೋಗ್ಯ ಪರಿಪೂರ್ಣವಾಗಿರುತ್ತದೆ. ನಿಮ್ಮ ವೆಚ್ಚಗಳನ್ನು ನಿಯಂತ್ರಿಸಲು ಪ್ರಯತ್ನಿಸಿ ಮತ್ತು ಇಂದು ತುಂಬಾ ಖರ್ಚು ಮಾಡಬೇಡಿ. ಮಕ್ಕಳು ಅಧ್ಯಯನದಲ್ಲಿ ಅವರ ನಿರಾಸಕ್ತಿಯಿಂದಾಗಿ ಶಾಲೆಯಲ್ಲಿ ನಿರಾಸೆಯುಂಟುಮಾಡಬಹುದು.

**ವೃಶ್ಚಿಕ** ಆರೋಗ್ಯವು ಇತರರೊಂದಿಗೆ ಸಂತೋಷ ಹಂಚಿಕೊಳ್ಳುವ ಮೂಲಕ ಅರಳುತ್ತದೆ. ಇಂದು ನಿಮ್ಮ ಹಣವನ್ನು ಅನೇಕ ವಿಷಯಗಳಿಗೆ ಖರ್ಚು ಮಾಡಬಹುದು, ನೀವು ಇಂದು ಉತ್ತಮ ಬಜೆಟ್ ಅನ್ನು ಯೋಜಿಸಬೇಕಾಗಿದೆ, ಇದು ನಿಮ್ಮ ಅನೇಕ ಸಮಸ್ಯೆ ತೆಗೆದುಹಾಕುತ್ತದೆ.

**ಧನಸ್ಸು** ನಿಮ್ಮ ಮನಸ್ಸು ಒಳ್ಳೆಯ ವಿಷಯಗಳನ್ನು ಗ್ರಹಿಸುತ್ತದೆ. ನೀವು ನಿಮ್ಮ ಕೋಪವನ್ನು ನಿಯಂತ್ರಿಸಿ ಮತ್ತು ಕಚೇರಿಯಲ್ಲಿ ಎಲ್ಲರೊಂದಿಗೆ ಉತ್ತಮವಾಗಿ ವರ್ತಿಸಿ., ಆಗೇ ನೀವು ಮಾಡದಿದ್ದರೆ ನಿಮ್ಮ ಕೆಲಸ ಹೋಗಬಹುದು. ನಿಮ್ಮ ಪ್ರೀತಿಪಾತ್ರರ ಅತೃಪ್ತಿಗೆ ನಿಮ್ಮ ನಗು ನಿಮ್ಮ ಅತ್ಯುತ್ತಮ ಔಷಧವಾಗಿದೆ.

**ಮಕರ** ನಿಮ್ಮಲ್ಲಿ ಇಂದು ಚುರುಕುತನವನ್ನು ನೋಡಬಹುದು. ನಿಮ್ಮ ಆರೋಗ್ಯವು ಇಂದು ನಿಮ್ಮನ್ನು ಸಂಪೂರ್ಣವಾಗಿ ಬೆಂಬಲಿಸುತ್ತದೆ. ಆಲ್ಕೋಹಾಲ್ ಸಿಗರೇಟ್ ಮುಂತಾದವುಗಳಿಗೆ ಹಣ ಖರ್ಚು ಮಾಡಬಾರದು, ಎಂದು ನಿಮಗೆ ನನ್ನ ಸಲಹೆ ನೀಡಲಾಗಿದೆ.

**ಕುಂಭ** ವಿಶ್ರಾಂತಿಯ ಸಲುವಾಗಿ ನಿಕಟ ಸ್ನೇಹಿತರೊಂದಿಗೆ ಸ್ವಲ್ಪ ಸಮಯ ಕಳೆಯಿರಿ. ರಿಯಲ್ ಎಸ್ಟೇಟ್ ಮತ್ತು ಆರ್ಥಿಕ ವ್ಯವಹಾರಗಳಿಗೆ ಒಳ್ಳೆಯ ದಿನ. ನಿಮ್ಮ ಜ್ಞಾನ ಮತ್ತು ಒಳ್ಳೆಯ ಹಾಸ್ಯ ನಿಮ್ಮ ಬಳಿಯಿರುವ ಜನರನ್ನು ಆಕರ್ಷಿಸಬಹುದು.

**ಮೀನ** ಸಂಗಾತಿಯೊಡನೆ ಚಲನಚಿತ್ರ – ರಂಗಭೂಮಿ ಅಥವಾ ಊಟ ನಿಮ್ಮನ್ನು ಒಂದು ಶಾಂತ ಮತ್ತು ಅದ್ಭುತ ಮನಸ್ಥಿತಿಯಲ್ಲಿರುತ್ತದೆ. ಇಂದು ಕೆಲವು ವ್ಯಾಪಾರಿಗಳಿಗೆ ಹಣದ ಲಾಭವಾಗುವ ಸಾಧ್ಯತೆ ಇದೆ. ಈ ಹಣ ನಿಮ್ಮ ಅನೇಕ ಸಮಸ್ಯೆ ದೂರ ಮಾಡಬಹುದು.

### ನಿರ್ದೇಶಕ ಡಾ. ಮಾನ್‌ಸಿಂಗ್ ಅವರ ನೇತೃತ್ವದ ಕೇಂದ್ರ ಬರ ಪರಿಶೀಲನಾ ತಂಡ ಆಗಮಿಸಿ ವಿವಿಧ ಮಾಹಿತಿಗಳನ್ನು ರೈತರಿಂದ ಪಡೆದುಕೊಂಡಿತು

# ಬಾಗಲಕೋಟೆಯ ವಿವಿಧ ಗ್ರಾಮಗಳಿಗೆ ಕೇಂದ್ರ ಬರ ಅಧ್ಯಯನ ತಂಡ ಭೇಟಿ

**ಉದಯವಾಹಿನಿ, ಬಾಗಲಕೋಟೆ**

ಖಾರಿಫ್ ಹಂಗಾಮಿನ ಬರ ಪರಿಸ್ಥಿತಿ ಅಧ್ಯಯನಕ್ಕಾಗಿ ಜಿಲ್ಲೆಗೆ ಆಗಮಿಸಿರುವ ಕೇಂದ್ರ ಬರ ಅಧ್ಯಯನ ತಂಡವು ಸೋಮವಾರ ಜಿಲ್ಲೆಯ ವಿವಿಧ ಗ್ರಾಮಗಳಿಗೆ ಭೇಟಿ ನೀಡಿ ಮಳೆಯ ಕೊರತೆಯಿಂದ ಹಾನಿಗೊಳಗಾದ ವಿವಿಧ ಬೆಳೆಗಳನ್ನು ಪರಿಶೀಲಿಸಿತು.

**1.** ಹಾನಿಯ ವಾಸ್ತವ ಸ್ಥಿತಿಯನ್ನು ಪರಿಶೀಲಿಸಿತು
**2.** ಬಿತ್ತನೆಗೆ ತಗುಲಿದ ವೆಚ್ಚ ಹಾಗೂ ಬೆಳೆ ಹಾನಿ
**3.** ಬೆಳೆಯಲಾಗಿದ್ದ ಕಬ್ಬು ಬೆಳೆಯನ್ನು ವೀಕ್ಷಿಸಿತು

ನಿರ್ದೇಶಕ ಡಾ. ಮಾನ್‌ಸಿಂಗ್ ಅವರ ನೇತೃತ್ವದ ಕೇಂದ್ರ ತಂಡವು ಗುಳೇದಗುಡ್ಡ, ಬಾಗಲಕೋಟೆ, ಹುನಗುಂದ ಹಾಗೂ ಇಳಕಲ್ ತಾಲ್ಲೂಕಿನ ವಿವಿಧ ಗ್ರಾಮಗಳಿಗೆ ತೆರಳಿ ರೈತರ ಜಮೀನುಗಳಿಗೆ ಭೇಟಿ ನೀಡಿ ಬೆಳೆ ಹಾನಿಯ ವಾಸ್ತವ ಸ್ಥಿತಿಯನ್ನು ಪರಿಶೀಲಿಸಿತು. ಬಿತ್ತನೆಗೆ ಮಾಡಿರುವ ವೆಚ್ಚ, ಮಳೆಯ ಪ್ರಮಾಣ, ಬೆಳೆ ಹಾನಿಯ ಪ್ರಮಾಣ, ನೀರಾವರಿ ವ್ಯವಸ್ಥೆ ಹಾಗೂ ಬೆಳೆ ವಿಮೆ ಸೇರಿದಂತೆ ವಿವಿಧ ಮಾಹಿತಿಗಳನ್ನು ರೈತರಿಂದ ಪಡೆದುಕೊಂಡಿತು.

ಬೆಳಗ್ಗೆ ಬಾಗಲಕೋಟೆಯಿಂದ ನೇರವಾಗಿ ಗುಳೇದಗುಡ್ಡ ತಾಲ್ಲೂಕಿನ ಹಳದೂರ ಗ್ರಾಮದ ರಸ್ತೆಯಲ್ಲಿರುವ ಹುಸೇನಬಿ ದಾಲಾಯತ ಅವರ ಎರಡು ಎಕರೆ ಜಮೀನಿಗೆ ಭೇಟಿ ನೀಡಿದ ತಂಡ, ಮಳೆಯ ಕೊರತೆಯಿಂದ ಹಾನಿಗೊಳಗಾದ ಮೆಕ್ಕೆಜೋಳ ಬೆಳೆಯನ್ನು ಪರಿಶೀಲಿಸಿತು. ಬಿತ್ತನೆಗೆ ತಗುಲಿದ ವೆಚ್ಚ ಹಾಗೂ ಬೆಳೆ ಹಾನಿಯ ಪ್ರಮಾಣದ ಕುರಿತು ರೈತರಿಂದ ಮಾಹಿತಿ ಪಡೆದುಕೊಂಡಿತು. ಮಳೆಯ ಕೊರತೆಯಿಂದ ಬೆಳೆ ಕೈಕೊಟ್ಟಿದ್ದು,




ಆರ್ಥಿಕವಾಗಿ ಸಂಕಷ್ಟಕ್ಕೆ ಸಿಲುಕಿರುವುದಾಗಿ ರೈತರು ತಂಡದ ಮುಂದೆ ತಮ್ಮ ಅಳಲನ್ನು ತೋಡಿಕೊಂಡರು.

ಬಳಿಕ ಬಾಗಲಕೋಟೆ ತಾಲ್ಲೂಕಿನ ಶೀರೂರ ಗ್ರಾಮಕ್ಕೆ ತೆರಳಿದ ತಂಡವು ರುದ್ರಪ್ಪ ಗಾಣಿಗೇರ ಅವರ 2 ಎಕರೆ 10 ಗುಂಟೆ ಜಮೀನಿನಲ್ಲಿ ಬೆಳೆಯಲಾಗಿದ್ದ ಕಬ್ಬು ಬೆಳೆಯನ್ನು ವೀಕ್ಷಿಸಿತು. ಬೆಳೆ ಹಾನಿಯ ಪ್ರಮಾಣ ಹಾಗೂ ಕೃಷಿಗೆ ಮಾಡಿರುವ ವೆಚ್ಚದ ಕುರಿತು ರೈತರಿಂದ ಮಾಹಿತಿ ಪಡೆಯಿತು. ಪಕ್ಕದ ಜಮೀನಿನಲ್ಲಿ ಬಸಯ್ಯ ಅವರ ಹಾನಿಗೊಂಡ ಜೋಳದ ಬೆಳೆ ವೀಕ್ಷಣೆ ಮಾಡಿದರು. ಭಗವತಿ ಗ್ರಾಮದ ನಾಗಪ್ಪ ಸಿದ್ದಪ್ಪ ಗುಳೇದ ಅವರ ಜಮೀನಿಗೆ ಭೇಟಿ ನೀಡಿದ ಕೇಂದ್ರ ತಂಡವು ಹಾನಿಗೊಳಗಾದ ಈರುಳ್ಳಿ ಬೆಳೆಯನ್ನು ಪರಿಶೀಲಿಸಿತು. ಪ್ರತಿ ಎಕರೆಗೆ ಎಷ್ಟು ವೆಚ್ಚ ಮಾಡಲಾಗಿದೆ ಹಾಗೂ ಬೆಳೆ ವಿಮೆ ಮಾಡಿಸಲಾಗಿದೆಯೇ ಎಂಬುದರ ಕುರಿತು ರೈತರಿಂದ ಮಾಹಿತಿ ಪಡೆಯಿತು. ಬೆಳೆ ವಿಮೆ ಮಾಡಿಸಿದ್ದರೂ ಈವರೆಗೆ ಯಾವುದೇ ಪರಿಹಾರ ದೊರೆತಿಲ್ಲ ಎಂದು ರೈತರು ತಂಡಕ್ಕೆ ತಿಳಿಸಿದರು. ಹುನಗುಂದ ತಾಲ್ಲೂಕಿನ ನಂದನೂರ ಗ್ರಾಮಕ್ಕೆ ಭೇಟಿ ನೀಡಿದ ಕೇಂದ್ರ ತಂಡವು ಯಲ್ಲವ್ವ ಜಂಬಗಿ ಅವರ ಜಮೀನಿನಲ್ಲಿ ಬೆಳೆಯಲಾಗಿದ್ದ ಕೆಂಪು ಮೆಣಸಿನಕಾಯಿ ಬೆಳೆಯ ಹಾನಿಯನ್ನು ಪರಿಶೀಲಿಸಿತು. ಈ ಸಂದರ್ಭದಲ್ಲಿ ಉಪಸ್ಥಿತರಿದ್ದ ಸಣ್ಣ ಕೈಗಾರಿಕೆ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ವಿಜಯಾನಂದ ಕಾಶಪ್ಪನವರ ಅವರು, ಮಳೆಯ ಕೊರತೆಯಿಂದ ಬೆಳೆಗಳು ಕುಂಠಿತಗೊಂಡು ಸಂಪೂರ್ಣವಾಗಿ ಹಾನಿಗೊಳಗಾಗಿರುವ ಕುರಿತು ಕೇಂದ್ರ ತಂಡಕ್ಕೆ ಮಾಹಿತಿ ನೀಡಿದರು.

> ಮಳೆಯ ಕೊರತೆಯಿಂದ ಈ ಭಾಗದಲ್ಲಿ ವಿವಿಧ ಬೆಳೆಗಳು ಸಂಪೂರ್ಣವಾಗಿ ಹಾನಿಗೊಳಗಾಗಿವೆ. ನೀರಾವರಿ ಜಮೀನುಗಳಲ್ಲಿನ ಬೋರ್‌ವೆಲ್‌ಗಳಲ್ಲಿಯೂ ನೀರಿನ ಪ್ರಮಾಣ ಗಣನೀಯವಾಗಿ ಕಡಿಮೆಯಾಗಿದ್ದು, ಲಭ್ಯವಿರುವ ನೀರನ್ನು ಕುಡಿಯುವ ಉದ್ದೇಶಕ್ಕೆ ಮಾತ್ರ ಬಳಸುವಂತಹ ಪರಿಸ್ಥಿತಿ ನಿರ್ಮಾಣವಾಗಿದೆ.
> – **ಉಮೇಶ ಮೇಟಿ,** ಶಾಸಕ

**ಮೆಣಸಿನಕಾಯಿ ಬೆಳೆ ಪರಿಶೀಲನೆ**

ಹಳ್ಳೂರ ಗ್ರಾಮದ ಜಮೀನಿನಲ್ಲಿ ಬೆಳೆಯಲಾಗಿದ್ದ ಸೂರ್ಯಕಾಂತಿ ಬೆಳೆಯ ಹಾನಿಯನ್ನು ಪರಿಶೀಲಿಸಿ, ರೈತ ಮಾದವರಾಜ ಜೋಶಿ ಅವರಿಂದ ಬೆಳೆ ಹಾನಿಯ ವಿವರಗಳನ್ನು ಪಡೆದುಕೊಂಡರು. ಬೇವೂರ ಗ್ರಾಮದಲ್ಲಿಯೂ ಹಾನಿಗೊಳಗಾದ ಮೆಣಸಿನಕಾಯಿ ಬೆಳೆಯನ್ನು ತಂಡ ವೀಕ್ಷಿಸಿತು.

## ಅಕ್ಟೋಬರ್ 31ರ ವರೆಗೆ ನಿಷೇಧಾಜ್ಞೆ ಮುಂದುವರೆಸಿ ಜಿಲ್ಲಾಧಿಕಾರಿ ಆದೇಶ

**ಉದಯವಾಹಿನಿ, ದಾವಣಗೆರೆ**

ಪಂಚಮಶಾಲಿ ಮಠದಲ್ಲಿ ಅಕ್ಟೋಬರ್ 31 ರವರೆಗೆ ನಿಷೇಧಾಜ್ಞೆಯನ್ನು ಜಿಲ್ಲಾಧಿಕಾರಿ ಡಾ.ಗಂಗಾಧರಸ್ವಾಮಿ ಜಿ ಎಂ ಅವರು ಮುಂದುವರೆಸಿ ಆದೇಶ ಹೊರಡಿಸಿದ್ದಾರೆ.

ದಾವಣಗೆರೆ ಜಿಲ್ಲೆಯ ಹರಿಹರ ತಾಲ್ಲೂಕಿನ ಹನಗವಾಡಿ ಬಳಿ ಇರುವ ಪಂಚಮಸಾಲಿ ಮಠದಲ್ಲಿ ಗದ್ದಲ ಗಲಾಟೆಗಳಾದ ಹಿನ್ನೆಲೆಯಲ್ಲಿ ಪಂಚಮಸಾಲಿ ಮಠದಲ್ಲಿ ಕಾನೂನು ಸುವ್ಯವಸ್ಥೆ ಕಾಪಾಡುವ ನಿಟ್ಟಿನಲ್ಲಿ ನಿಷೇಧಾಜ್ಞೆ ಮುಂದುವರೆಸಿದ್ದಾರೆ. ಹರಿಹರ ಗ್ರಾಮಾಂತರ ಠಾಣಾ ವ್ಯಾಪ್ತಿಯ ಪಂಚಮಸಾಲಿ ಮಠದ ಆವರಣದಲ್ಲಿ ಅಕ್ಟೋಬರ್ 31 ರವರೆಗೆ ನಿಷೇಧಾಜ್ಞೆ ಜಾರಿ ಮಾಡಲಾಗಿದೆ.

ಮಠದಲ್ಲಿ ಧಾರ್ಮಿಕ ಪೂಜಾ ವಿಧಾನಗಳನ್ನು ಹೊರತುಪಡಿಸಿ ಯಾವುದೇ ರೀತಿಯ ಸಭೆ ಸಮಾರಂಭ ಹಾಗೂ ಮಾಧ್ಯಮಗೋಷ್ಠಿಯನ್ನು ನಡೆಸುವಂತಿಲ್ಲ ಎಂದು ಕಟ್ಟುನಿಟ್ಟಾಗಿ ಆದೇಶದಲ್ಲಿ ಉಲ್ಲೇಖಿಸಲಾಗಿದೆ. ಈ ಹಿಂದೆಯೂ ಕೂಡ ಮಠದ ಆವರಣದಲ್ಲಿ ನಿಷೇಧಾಜ್ಞೆ ವಿಧಿಸಲಾಗಿತ್ತು. ನಿಷೇಧಾಜ್ಞೆ ಜಾರಿಗೊಳಿಸಿ ಜಿಲ್ಲಾಧಿಕಾರಿ ಜಿ ಎಂ ಗಂಗಾಧರಸ್ವಾಮಿ ಆದೇಶ ಮಾಡಿರುವುದು ಭಕ್ತರಲ್ಲಿ ಸಂತಸ ಮನೆ ಮಾಡಿದೆ. ಇದರ ಸಂಬಂಧ ಜಿಲ್ಲಾಡಳಿತದಿಂದ ಅಧಿಕೃತವಾಗಿ ಪ್ರಕಟಣೆಯನ್ನು ಬಿಡುಗಡೆ ಮಾಡಲಾಗಿದೆ.

ಇನ್ನು, ಟ್ರಸ್ಟಿಗಳು ಹಾಗೂ ವಚನಾನಂದ ಸ್ವಾಮೀಜಿ ಮಧ್ಯೆ ಶೀತಲ ಸಮರ ನಡೆಯುತ್ತಿದ್ದು, ಸ್ವಾಮೀಜಿ ಬೆಂಬಲವಾಗಿ ಮಾಜಿ ಶಾಸಕ ಹೆಚ್ ಎಸ್ ಶಿವಶಂಕರ್ ನಿಂತಿದ್ದಾರೆ. ಮತ್ತೊಂದೆಡೆ ಟ್ರಸ್ಟಿಗಳಿಗೆ ಮಠದ ಲೆಕ್ಕ ಕೊಡಿ ಎಂದು ಭಕ್ತರು ಹಾಗೂ ಲೆಕ್ಕ ಕೊಡಿ ಸಮಿತಿಯವರು ಪಟ್ಟು ಹಿಡಿದಿದ್ದಾರೆ. ಇದರಿಂದ ಶಾಂತಿ ಕದಡಬಾರದು ಎಂದು ನಿಷೇಧಾಜ್ಞೆ ಮುಂದುವರೆಸಲಾಗಿದೆ.

## ಸಮಾಜದ ನೋವು, ನಲಿವಿಗೆ ಸ್ಪಂದಿಸಲಿ ಸಾಹಿತ್ಯ : ಶಶಿಕಾಂತ ಶೆಂಬೆಳ್ಳಿ

**ಉದಯವಾಹಿನಿ, ಬೀದರ್**

ಸಾಹಿತ್ಯವು ಆತ್ಮಸಂತೋಷ ನೀಡುವುದರ ಜೊತೆಗೆ ಸಮಾಜದ ನೋವು–ನಲಿವುಗಳಿಗೆ ಸ್ಪಂದಿಸುವ ಕಾರ್ಯವನ್ನೂ ಮಾಡಬೇಕು. ಕಾಲದಿಂದ ಕಾಲಕ್ಕೆ ಸಾಗಿಬಂದ ಕಾವ್ಯ ಹಾಗೂ ಸಾಹಿತ್ಯ ಕೃತಿಗಳು ಸಮಾಜಮುಖಿ ಚಿಂತನೆಗಳನ್ನು ಬೆಳೆಸುವಲ್ಲಿ ಮಹತ್ವದ ಪಾತ್ರ ವಹಿಸಿವೆ ಎಂದು ಪ್ರಜಾವಾಣಿ ಕನ್ನಡ ದಿನ ಪತ್ರಿಕೆಯ ಜಿಲ್ಲಾ ವರದಿಗಾರ ಶಶಿಕಾಂತ ಶೆಂಬೆಳ್ಳಿ ಹೇಳಿದರು.

ನಗರದ ಕುಂಬಾರವಾಡ ರಸ್ತೆಯ ಅತಿವಾಳೆ ಸಾಂಸ್ಕೃತಿಕ ಸಭಾಂಗಣದಲ್ಲಿ ಭಾನುವಾರ ಜನಪರ ಸಾಂಸ್ಕೃತಿಕ ಪ್ರತಿಷ್ಠಾನದ ವತಿಯಿಂದ ಆಯೋಜಿಸಿದ್ದ ಜಿಲ್ಲಾ ಮಟ್ಟದ ಒಂದು ದಿನದ ಕಾವ್ಯ ಕಮ್ಮಟವನ್ನು ಸಸಿಗೆ ನೀರೆರೆಯುವ ಮೂಲಕ ಉದ್ಘಾಟಿಸಿ ಅವರು ಮಾತನಾಡಿದರು.



ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಹಿರಿಯ ಸಾಹಿತಿ ಡಾ. ಎಸ್.ಎಂ. ಜನವಾಡಕರ್ ಮಾತನಾಡಿ, ಕಾವ್ಯ ರಚಿಸುವಾಗ ಬದುಕಿನ ಸಮಗ್ರ ಅನುಭವ ಹಾಗೂ ಆಳವಾದ ಅರಿವು ಅಗತ್ಯ. ಕಾವ್ಯವು ಸ್ಪಷ್ಟ, ನಿಖರ ಹಾಗೂ ಅರ್ಥಪೂರ್ಣವಾಗಿರಬೇಕು. ಸಮಾಜವನ್ನು ಕಟ್ಟುವ ಮತ್ತು ಮೌಲ್ಯಗಳನ್ನು ಬೆಳೆಸುವಂತಹ ಕಾವ್ಯಗಳು ಇಂದಿನ ಅಗತ್ಯವಾಗಿದೆ ಎಂದರು.

## ಅ.24, 25ರಂದು 25ನೇ ಕಲ್ಯಾಣ ಪರ್ವ ರಜತ ಮಹೋತ್ಸವ

**ಉದಯವಾಹಿನಿ, ಬೀದರ್**

ಬಸವ ಧರ್ಮ ಪೀಠದ ಸ್ವಾಭಿಮಾನಿ ಹಾಗೂ ತತ್ವನಿಷ್ಠ ಶರಣರಿಂದ ಅಕ್ಟೋಬರ್ 24 ಮತ್ತು 25ರಂದು 25ನೇ ಕಲ್ಯಾಣ ಪರ್ವ ರಜತ ಮಹೋತ್ಸವ ಆಯೋಜಿಸಲಾಗಿದೆ ಎಂದು ಬೆಂಗಳೂರಿನ ಶ್ರೀ ಚನ್ನಬಸವೇಶ್ವರ ಜ್ಞಾನಪೀಠದ ಅಧ್ಯಕ್ಷ ಜಗದ್ಗುರು ಡಾ. ಚನ್ನಬಸವಾನಂದ ಸ್ವಾಮೀಜಿ ತಿಳಿಸಿದರು. ನಗರದ ಪತ್ರಿಕಾ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಬೀದರ್ ಜಿಲ್ಲಾ ರಾಷ್ಟ್ರೀಯ ಬಸವದಳ, ಲಿಂಗಾಯತ ಧರ್ಮ ಮಹಾಸಭಾ ಹಾಗೂ ಕ್ರಾಂತಿ ಗಂಗೋತ್ರಿ ಮಹಿಳಾ ಗಣದ ಸಂಯುಕ್ತ ಆಶ್ರಯದಲ್ಲಿ ಕಾರ್ಯಕ್ರಮ ನಡೆಯಲಿದೆ ಎಂದರು.

2002ರಲ್ಲಿ ಬಸವಧರ್ಮ ಪೀಠಾಧ್ಯಕ್ಷೆ ಮಾತೆ ಮಹಾದೇವಿ ಅವರ ನೇತೃತ್ವದಲ್ಲಿ ಆರಂಭವಾದ ಕಲ್ಯಾಣ ಪರ್ವ ಇದೀಗ 25ನೇ ವರ್ಷಕ್ಕೆ ಕಾಲಿಟ್ಟಿದೆ. ಮಾತೆ ಮಹಾದೇವಿ ಅವರ ಆಶಯದಂತೆ ಕಾರ್ಯನಿರ್ವಹಿಸುತ್ತಿರುವ ರಾಷ್ಟ್ರೀಯ ಬಸವದಳದ 25 ಶಾಖೆಗಳನ್ನು ಆಯ್ಕೆ ಮಾಡಿ ಅತ್ಯುತ್ತಮ ರಾಷ್ಟ್ರೀಯ ಬಸವದಳ ಪ್ರಶಸ್ತಿ ನೀಡಲಾಗುವುದು. ಲಿಂಗಾನಂದ ಅಪ್ಪಾಜಿ ಅವರ ಸ್ಮರಣಾರ್ಥ ಗೌರವ ಪುರಸ್ಕಾರವನ್ನೂ ಪ್ರದಾನ ಮಾಡಲಾಗುವುದು ಎಂದು ಹೇಳಿದರು. ಬಸವ ತತ್ವ ಅನುಸರಿಸುತ್ತಿರುವ 25 ಜೋಡಿ ದಂಪತಿಗಳಿಗೆ 'ಆದರ್ಶ ಶರಣ ದಂಪತಿಗಳು' ಪ್ರಶಸ್ತಿ ಹಾಗೂ ವಿವಿಧ ಕ್ಷೇತ್ರಗಳಲ್ಲಿ ಸೇವೆ ಸಲ್ಲಿಸಿದ 25 ಸಾಧಕರಿಗೆ ಗೌರವ ಪುರಸ್ಕಾರ ನೀಡಿ ಸನ್ಮಾನಿಸಲಾಗುವುದು ಎಂದು ತಿಳಿಸಿದರು. ಕ್ರಾಂತಿ ಗಂಗೋತ್ರಿ ಮಹಿಳಾ ಗಣದ ರಾಷ್ಟ್ರೀಯ ಅಧ್ಯಕ್ಷೆ ಸತ್ಯಾದೇವಿ ಮಾತೆ ಮಾತನಾಡಿ, ಕರ್ನಾಟಕ, ಮಹಾರಾಷ್ಟ್ರ, ತೆಲಂಗಾಣ ಸೇರಿದಂತೆ ವಿವಿಧ ರಾಜ್ಯಗಳು ಹಾಗೂ ಕರ್ನಾಟಕದ ಎಲ್ಲಾ ಜಿಲ್ಲೆಗಳಿಂದ ಸುಮಾರು 10 ಸಾವಿರಕ್ಕೂ ಅಧಿಕ ಬಸವ ಭಕ್ತರು ಪಾಲ್ಗೊಳ್ಳುವ ನಿರೀಕ್ಷೆಯಿದೆ. ಆಗಮಿಸುವ ಭಕ್ತರಿಗೆ ಪ್ರಸಾದ ಹಾಗೂ ವಸತಿ ವ್ಯವಸ್ಥೆ ಕಲ್ಪಿಸಲಾಗುವುದು ಎಂದರು.





## ಕೃಷಿ ಸಖಿಯರ ಸಂಕಷ್ಟಕ್ಕೆ ಸ್ಪಂಧಿಸಿದ ಅಶೋಕ್ ರೈ

**ಉದಯವಾಹಿನಿ, ಪುತ್ತೂರು**

ಪುತ್ತೂರು ತಾಲ್ಲೂಕಿನ ಕೃಷಿ ಉದ್ಯೋಗ ಸಖಿಯರ ಗೌರವ ಧನ ಕಳೆದ 18 ತಿಂಗಳಿನಿಂದ ಪಾವತಿಯಾಗದೇ ಇದ್ದು ಈ ಬಗ್ಗೆ ಕೃಷಿ ಉದ್ಯೋಗ ಸಖಿಯ ಕಾರ್ಯಕರ್ತರು ಶಾಸಕ ಅಶೋಕ್ ರೈ ಅವರಿಗೆ ದೂರು ನೀಡಿದ್ದು ಈ ಬಗ್ಗೆ ಅಧಿಕಾರಿಯ ಜತೆ ಮಾತುಕತೆ ನಡೆಸಿದ ಶಾಸಕರು 24 ಗಂಟೆಯೊಳಗೆ ವೇತನ ಪಾವತಿಸುವಂತೆ ಸೂಚನೆಯನ್ನು ನೀಡಿದ್ದಾರೆ.

ಪುತ್ತೂರು ತಾಲ್ಲೂಕಿನಲ್ಲಿ ಸುಮಾರು 17 ಕೃಷಿ ಉದ್ಯೋಗ ಸಖಿಯರಿದ್ದು ಅವರು ಸಂಜೀವಿನಿ ಕರ್ನಾಟಕ ರಾಜ್ಯ ಗ್ರಾಮೀಣ ಜೀವನೋಪಾಯ ಸಂವರ್ಧನ ಶಾಖೆಯಡಿ ಕೆಲಸ ನಿರ್ವಹಿಸುತ್ತಿದ್ದಾರೆ. ಇವರಿಗೆ ನೀಡಬೇಕಾದ ಗೌರವ ಧನವನ್ನು ಸಂಬಂಧಿಸಿದ ಇಲಾಖೆಯಿಂದ ಬಿಡುಗಡೆಯಾಗಿರಲಿಲ್ಲ. ಕಳೆದ 18 ತಿಂಗಳಿಂದ ಗೌರವಧನ ಪಾವತಿಯಾಗದೇ ಇದ್ದ ಕಾರಣ ಕೆಲವು ತಿಂಗಳ ಹಿಂದೆ ತಾವು ಮಾಡುತ್ತಿದ್ದ ಸೇವೆಯನ್ನು ಸ್ಥಗಿತಗೊಳಿಸುವುದಾಗಿ ತಿಳಿಸಿದ್ದರು. ಕೆಲಸ ಸ್ಥಗಿತಗೊಂಡ ಬಳಿಕವೂ ವೇತನ ಪಾವತಿಯಾಗದೇ ಇರುವ ಬಗ್ಗೆ ಅ.5ರಂದು ಶಾಸಕ ಅಶೋಕ್ ರೈ ಅವರನ್ನು ಭೇಟಿಯಾಗಿ ವಿಚಾರವನ್ನು ಗಮನಸೆಳೆದಿದ್ದರು. ಈ ಬಗ್ಗೆ ಸಂಬಂಧಿಸಿದ ಅಧಿಕಾರಿಯ ಜೊತೆ ಮಾತುಕತೆ ನಡೆಸಿದ ಶಾಸಕರು 24 ಗಂಟೆಯೊಳಗೆ ಬಾಕಿ ಇರುವ ಗೌರವ ಧನವನ್ನು ಪಾವತಿಮಾಡುವಂತೆ ಸೂಚನೆಯನ್ನು ನೀಡಿದ್ದಾರೆ. ನಮ್ಮ ಸಂಕಷ್ಟವನ್ನು ನಾವು ಶಾಸಕರ ಬಳಿ ಹೇಳಿಕೊಂಡೆವು. ಕಳೆದ 18 ತಿಂಗಳಿಂದ ನಮಗೆ ಸಿಗಬೇಕಾದ ಗೌರವ ಧನ ಸಿಗಲಿಲ್ಲ. ನಾಲ್ಕು ತಿಂಗಳ ಹಿಂದೆ ಸಂಬಂಧಿಸಿದವರಿಗೆ ತಿಳಿಸಿದ್ದರೂ ಯಾವುದೇ ಪ್ರಯೋಜನವಾಗಿರಲಿಲ್ಲ. ಶಾಸಕರು ನಮ್ಮ ಮನವಿಗೆ ಸ್ಪಂದಿಸಿ ತಕ್ಷಣ ಗೌರವ ಧನ ಪಾವತಿ ಮಾಡುವಂತೆ ಸೂಚನೆ ನೀಡಿದ್ದಾರೆ.

## ಪರಾರಿಯಾಗಲು ಯತ್ನಿಸಿದ ಆರೋಪಿಗೆ 2 ವರ್ಷದ ಶಿಕ್ಷೆ

**ಉದಯವಾಹಿನಿ, ಪುತ್ತೂರು**

ವಿಚಾರಣೆಗಾಗಿ ನ್ಯಾಯಾಲಯಕ್ಕೆ ಹಾಜರುಪಡಿಸಿದ್ದ ವೇಳೆ ಪೊಲೀಸರ ವಶದಿಂದ ತಪ್ಪಿಸಿಕೊಂಡು ಪರಾರಿಯಾಗಲು ಯತ್ನಿಸಿದ್ದ ಪ್ರಕರಣಕ್ಕೆ ಸಂಬಂಧಿಸಿದ ಆರೋಪಿಗೆ ಕೋರ್ಟ್ ಎರಡು ವರ್ಷಗಳ ಸಾದಾ ಕಾರಾಗೃಹ ಶಿಕ್ಷೆ ವಿಧಿಸಿ ಆದೇಶಿಸಿದೆ.ಪುತ್ತೂರು ಸಿರಿ ಬಾಗಿಲು ನಿವಾಸಿ ಜಯೇಶ್ ಅಲಿಯಾಸ್ ಜಯೇಶ್ ಕಾಂತ್ ಎಸ್., ಶಾಹಿರ್ ಅಲಿಯಾಸ್ ಶಾಕಿರ್ (41) ಶಿಕ್ಷೆಗೆ ಗುರಿಯಾದ ಆರೋಪಿ.ಉಪ್ಪಿನಂಗಡಿ ಪೊಲೀಸ್ ಠಾಣೆಯಲ್ಲಿ ದಾಖಲಾಗಿದ್ದ ಅ.ಕ್ರ. 120/2008ರ ಪ್ರಕರಣದಲ್ಲಿ ಭಾರತೀಯ ದಂಡ ಸಂಹಿತೆಯ ಕಲಂ 450, 302 ಹಾಗೂ 201ರ ಅಡಿಯಲ್ಲಿ ಆರೋಪಿ ವಿರುದ್ಧ ಪ್ರಕರಣ ದಾಖಲಾಗಿತ್ತು. ಈ ಪ್ರಕರಣದ ವಿಚಾರಣೆಗೆ ಸಂಬಂಧಿಸಿದಂತೆ ಆರೋಪಿಯನ್ನು 2016ರ ಎಪ್ರಿಲ್ 5ರಂದು ಮಂಗಳೂರು ಕಾರಾಗೃಹದಿಂದ ಪುತ್ತೂರಿನ 5ನೇ ಹೆಚ್ಚುವರಿ ಜಿಲ್ಲಾ ಮತ್ತು ಸತ್ರ ನ್ಯಾಯಾಲಯಕ್ಕೆ ಕರೆತರಲಾಗಿತ್ತು.ನ್ಯಾಯಾಲಯದಲ್ಲಿ ಕಲಾಪ ನಡೆಯುತ್ತಿದ್ದ ಸಂದರ್ಭದಲ್ಲಿ ಆರೋಪಿ ಏಕಾಏಕಿ ಪೊಲೀಸರ ವಶದಿಂದ ತಪ್ಪಿಸಿಕೊಂಡು ಪರಾರಿಯಾಗಲು ಪ್ರಯತ್ನಿಸಿದ್ದಾನೆ ಎಂದು ಪೊಲೀಸರು ತಿಳಿಸಿದ್ದಾರೆ. ಈ ಘಟನೆಯ ಕುರಿತು ಪುತ್ತೂರು ನಗರ ಪೊಲೀಸ್ ಠಾಣೆಯಲ್ಲಿ ಅ.ಕ್ರ. 91/2016ರಂತೆ ಭಾರತೀಯ ದಂಡ ಸಂಹಿತೆಯ ಕಲಂ 224ರ ಅಡಿಯಲ್ಲಿ ಪ್ರಕರಣ ದಾಖಲಿಸಲಾಗಿತ್ತು. ಪ್ರಕರಣದ ತನಿಖೆ ನಡೆಸಿದ ಪೊಲೀಸರು ಅಗತ್ಯ ಸಾಕ್ಷ್ಯಾಧಾರಗಳನ್ನು ಸಂಗ್ರಹಿಸಿ ನ್ಯಾಯಾಲಯಕ್ಕೆ ದೋಷಾರೋಪಣಾ ಪಟ್ಟಿ ಸಲ್ಲಿಸಿದ್ದರು. ಅಂದಿನ ಪುತ್ತೂರು ನಗರ ಪೊಲೀಸ್ ಠಾಣೆಯ ಪೊಲೀಸ್ ಉಪನಿರೀಕ್ಷಕರಾದ ಖಾದರ್ ಅವರು ತನಿಖಾಧಿಕಾರಿಯಾಗಿ ಕಾರ್ಯನಿರ್ವಹಿಸಿ ನ್ಯಾಯಾಲಯಕ್ಕೆ ದೋಷಾರೋಪಣಾ ಪಟ್ಟಿ ಸಲ್ಲಿಸಿದ್ದರು.



## ವಿದ್ಯುತ್ ಸಮಸ್ಯೆ ಬಗ್ಗೆ ಜೆಸ್ಕಾಂ ಎಂಡಿ ಜತೆ ಶಾಸಕ ಡಾ. ಶೈಲೇಂದ್ರ ಬೆಲ್ದಾಳೆ ಚರ್ಚೆ

**ಉದಯವಾಹಿನಿ, ಬೀದರ್**



ಬೀದರ್ ದಕ್ಷಿಣ ಕ್ಷೇತ್ರದ ವಿವಿಧ ಗ್ರಾಮಗಳಲ್ಲಿ ವಿದ್ಯುತ್ ಪರಿವರ್ತಕಗಳ ಕೊರತೆ ಸೇರಿದಂತೆ ಸಾರ್ವಜನಿಕರು ಮತ್ತು ರೈತರು ಎದುರಿಸುತ್ತಿರುವ ಹಲವು ವಿದ್ಯುತ್ ಸಮಸ್ಯೆಗಳ ಕುರಿತು ಬೀದರ್ ದಕ್ಷಿಣ ಕ್ಷೇತ್ರದ ಮಾನ್ಯ ಶಾಸಕರಾದ ಡಾ. ಶೈಲೇಂದ್ರ ಬೆಲ್ದಾಳೆ ಅವರು ಇಂದು ಕಲಬುರಗಿಯ GESCOM ಕಚೇರಿಯಲ್ಲಿ ವ್ಯವಸ್ಥಾಪಕ ನಿರ್ದೇಶಕರಾದ ಶ್ರೀ ಶಶಿಧರ್ ಕುರೇರಾ ಅವರನ್ನು ಭೇಟಿ ಮಾಡಿ ಸಮಗ್ರವಾಗಿ ಚರ್ಚಿಸಿದರು.

ಕ್ಷೇತ್ರದಲ್ಲಿ 63 ಕೆ.ವಿ.ಎ ಹಾಗೂ 100 ಕೆ.ವಿ.ಎ ಸಾಮರ್ಥ್ಯದ ವಿದ್ಯುತ್ ಪರಿವರ್ತಕಗಳು ಅಗತ್ಯ ಪ್ರಮಾಣದಲ್ಲಿ ಲಭ್ಯವಿರದ ಹಿನ್ನೆಲೆಯಲ್ಲಿ, ಹೊಸ ಪರಿವರ್ತಕಗಳ ಅಳವಡಿಕೆ ಹಾಗೂ ಹಾಳಾಗಿರುವ ಪರಿವರ್ತಕಗಳ ಬದಲಾವಣೆಯಲ್ಲಿ ವಿಳಂಬವಾಗುತ್ತಿದೆ. ಇದರಿಂದ ಹಲವು ಗ್ರಾಮಗಳ ರೈತರು ಹಾಗೂ ಸಾರ್ವಜನಿಕರು ವಿದ್ಯುತ್ ಸಮಸ್ಯೆ ಎದುರಿಸುತ್ತಿರುವುದನ್ನು ಶಾಸಕರು ಅಧಿಕಾರಿಗಳ ಗಮನಕ್ಕೆ ತಂದರು.

ವಿದ್ಯುತ್ ಪರಿವರ್ತಕಗಳು ಕೃಷಿ ಹಾಗೂ ಗ್ರಾಮೀಣ ಪ್ರದೇಶದ ವಿದ್ಯುತ್ ಪೂರೈಕೆಯಲ್ಲಿ ಪ್ರಮುಖ ಪಾತ್ರ ವಹಿಸುವುದರಿಂದ, 63 ಮತ್ತು 100 ಕೆ.ವಿ.ಎ ಪರಿವರ್ತಕಗಳನ್ನು ಹೆಚ್ಚಿನ ಪ್ರಮಾಣದಲ್ಲಿ ಲಭ್ಯಪಡಿಸಿ, ಅಗತ್ಯವಿರುವ ಗ್ರಾಮಗಳಿಗೆ ತ್ವರಿತವಾಗಿ ಪೂರೈಸುವಂತೆ ಶಾಸಕರು GESCOM MD ಅವರಿಗೆ ಮನವಿ ಮಾಡಿದರು. ಅಲ್ಲದೆ, ಹಾಳಾದ ಪರಿವರ್ತಕಗಳನ್ನು ವಿಳಂಬವಿಲ್ಲದೆ ಬದಲಾಯಿಸುವುದು, ವಿದ್ಯುತ್ ಪೂರೈಕೆಯಲ್ಲಿ ಪದೇಪದೇ ಉಂಟಾಗುತ್ತಿರುವ ವ್ಯತ್ಯಯಗಳನ್ನು ಸರಿಪಡಿಸುವುದು ಹಾಗೂ ರೈತರ ಕೃಷಿ ಪಂಪ್‌ಸೆಟ್‌ಗಳಿಗೆ ಸಮರ್ಪಕ ವಿದ್ಯುತ್ ಪೂರೈಕೆ ಮಾಡುವ ನಿಟ್ಟಿನಲ್ಲಿ ಅಗತ್ಯ ಕ್ರಮ ಕೈಗೊಳ್ಳುವಂತೆ ಚರ್ಚಿಸಲಾಯಿತು.

## ಆಟೋರಿಕ್ಷಾ ಪ್ರಯಾಣ ಮರು ದರ ಪರಿಷ್ಕರಣೆ

**ಉದಯವಾಹಿನಿ, ಮಂಗಳೂರು**

ಪ್ರಾದೇಶಿಕ ಸಾರಿಗೆ ಪ್ರಾಧಿಕಾರದಿಂದ ಆಗಸ್ಟ್ 28 ರಂದು ಹೊರಡಿಸಿದ ಆದೇಶದಲ್ಲಿ ಈ ಹಿಂದೆ ಅಂದರೆ 2022 ರ ನವೆಂಬರ್ 23 ರಲ್ಲಿ ಹೊರಡಿಸಲಾದ ಪರಿಷ್ಕೃತ ಅಧಿಸೂಚನೆಯಲ್ಲಿ ನಂತರದ ಪ್ರತಿ ಕಿ.ಮೀ ನಿಗದಿಪಡಿಸಿದ ರೂ.20 ನ್ನು ಪರಿಗಣಿಸದ ಕಾರಣ ಆಗಸ್ಟ್ 28 ರ ಆದೇಶವನ್ನು ಹಿಂಪಡೆದು ಪರಿಷ್ಕೃತ ಆದೇಶವನ್ನು ಹೊರಡಿಸಿದ್ದು, ಪರಿಷ್ಕೃತ ಆಟೋರಿಕ್ಷಾ ಪ್ರಯಾಣ ದರವು ನವೆಂಬರ್ 1 ರಿಂದ ಜಾರಿಗೆ ಬರಲಿದೆ ಎಂದು ಮಂಗಳೂರು ಪ್ರಾದೇಶಿಕ ಸಾರಿಗೆ ಪ್ರಾಧಿಕಾರದ ಪ್ರಕಟಣೆ ತಿಳಿಸಿದೆ.



ಇತ್ತೀಚಿನ ದಿನಗಳಲ್ಲಿ ಸಿ.ಎನ್.ಜಿ, ಎಲ್.ಪಿ.ಜಿ ಮತ್ತು ಡೀಸೆಲ್ ಬೆಲೆಗಳು ಹಾಗೂ ವಾಹನದ ಬಿಡಿಭಾಗಗಳ ಬೆಲೆ ಏರಿಕೆಯಾಗಿರುತ್ತದೆ. ಇದರಿಂದ ಆಟೋ ಚಾಲಕರ ಖರ್ಚು ವೆಚ್ಚಗಳು ಕೂಡಾ ಹೆಚ್ಚಾಗಿರುತ್ತದೆ. ಕನಿಷ್ಠ ದರ ಮೊದಲ 1.5 ಕಿ.ಮೀ.– ರೂ.40 (ಗರಿಷ್ಠ 3 ಜನ ಪ್ರಯಾಣಿಕರು), ನಂತರದ ಪ್ರತಿ ಕಿಲೋಮೀಟರ್ ದರ– ರೂ.23 (ಗರಿಷ್ಠ 3 ಜನ ಪ್ರಯಾಣಿಕರು), ಕಾಯುವ ದರಗಳು –ಮೊದಲ 10 ನಿಮಿಷ ಉಚಿತ ನಂತರದ 15 ನಿಮಿಷದವರಗೆ ಅಥವಾ ಅದರ ಭಾಗಕ್ಕೆ ರೂ.5 ಪ್ರಯಾಣಿಕರ ಸರಕಿಗೆ (ಲಗೇಜ್)– ಒಬ್ಬ ಪ್ರಯಾಣಿಕ ಕಡ್ಡಾಯವಾಗಿ ಜೊತೆ ಇರಬೇಕು, ಮೊದಲ 20 ಕಿ.ಗ್ರಾಂ.ಗಳಿಗೆ ಉಚಿತ ನಂತರದ 20 ಕೆ.ಜಿ.ಗಳಿಗೆ ಅಥವಾ ಅದರ ಭಾಗಕ್ಕೆ ರೂ.5, ರಾತ್ರಿ ವೇಳೆ ದರ– ರಾತ್ರಿ 10 ಗಂಟೆಯಿಂದ ಬೆಳಗಿನ ಜಾವ 5 ಗಂಟೆಯವರಗೆ ಮಾತ್ರ ಈ ಮೇಲಿನ ದರದ ಒಂದೂವರೆ ಪಟ್ಟು ದರವನ್ನು ಪ್ರಯಾಣಿಕರಿಂದ ಪಡೆಯಲು ಅವಕಾಶವಿದೆ.

### ಪ್ರಜಾ ಸೇವೆ ಸಭೆಯಲ್ಲಿ ಹೆಚ್ಚಿನ ಅರ್ಜಿಗಳ ಪೈಕಿ ಮನೆಗಳು ಇಲ್ಲದೇ ಇರುವುದರ ಬಗ್ಗೆ ಮನವಿಗಳು ಬಂದಿವೆ

# ವಸತಿ ರಹಿತ ಕುಟುಂಬಗಳಿಗೆ ಸರ್ಕಾರದಿಂದ ನಿವೇಶನ ವಿತರಿಸಲು ಪ್ರಯತ್ನ

**ಉದಯವಾಹಿನಿ, ಬೆಳಗಾವಿ**

ಖಾನಾಪುರದಲ್ಲಿ ಸೋಮವಾರ ನಡೆದ ಪ್ರಜಾ ಸೇವೆ ಆಂದೋಲನ ಸಭೆಯಲ್ಲಿ ಪ್ರಮುಖವಾಗಿ ರಸ್ತೆ, ಸಾರಿಗೆ, ಅರಣ್ಯ ಇಲಾಖೆ ಸಮಸ್ಯೆಗಳ ಬಗ್ಗೆ ಅರ್ಜಿಗಳು ಬಂದಿವೆ. ಅದರಲ್ಲೂ ಮನೆ ಇಲ್ಲದವರಿಂದಲೇ ಹೆಚ್ಚು ಅರ್ಜಿಗಳು ಸಲ್ಲಿಕೆ ಆಗಿವೆ. ಸರ್ಕಾರದಿಂದ ಅವರಿಗೆ ನಿವೇಶನ ವಿತರಿಸುವ ಬಗ್ಗೆ ಪ್ರಯತ್ನಿಸಲಾಗುತ್ತದೆ ಎಂದು ಜಿಲ್ಲಾ ಉಸ್ತುವಾರಿ ಸಚಿವ ಸತೀಶ್ ಜಾರಕಿಹೊಳಿ ಭರವಸೆ ನೀಡಿದ್ದಾರೆ.

ಖಾನಾಪುರದ ಲೋಕಮಾನ್ಯ ತಿಲಕ್ ಸಭಾಭವನದಲ್ಲಿ ಹಮ್ಮಿಕೊಂಡಿದ್ದ ಪ್ರಜಾಸೇವಾ ಆಂದೋಲನ ಸಭೆ ಬಳಿಕ ಮಾಧ್ಯಮಗಳ ಜೊತೆಗೆ ಮಾತನಾಡಿದ, ಅವರು, ಈಗಾಗಲೇ ಕೆಲವು ಅರ್ಜಿಗಳಿಗೆ ಸ್ಥಳದಲ್ಲೇ ಪರಿಹಾರ ಕಲ್ಪಿಸಿದ್ದೇವೆ. ಕೆಲವು ರಾಜ್ಯ ಸರ್ಕಾರದ ಹಂತದಲ್ಲಿ ಇರುವ ಅರ್ಜಿಗಳು ಬಾಕಿ ಇವೆ. ಎರಡ್ಮೂರು ತಿಂಗಳಲ್ಲಿ ಅವುಗಳಿಗೆ ಪರಿಹಾರ ನೀಡಲು ಪ್ರಯತ್ನಿಸುತ್ತೇವೆ. ಪ್ರಮುಖವಾಗಿ ಸಾರಿಗೆ, ಆರೋಗ್ಯ, ರಸ್ತೆ, ಕುಡಿಯುವ ನೀರು, ಅರಣ್ಯ, ವಸತಿ ಸೇರಿದಂತೆ ವಿವಿಧ ಸಮಸ್ಯೆಗಳ ಬಗ್ಗೆ ಮನವಿ ಸಲ್ಲಿಕೆ ಆಗಿವೆ. ಹೆಚ್ಚಿನ ಅರ್ಜಿಗಳ ಪೈಕಿ ಮನೆಗಳ ಇಲ್ಲದೇ ಇರುವುದರ ಬಗ್ಗೆ ಮನವಿ ಬಂದಿವೆ. ಅವರಿಗೆ ಸರ್ಕಾರದಿಂದ ನಿವೇಶನ ನೀಡಲು ಪ್ರಯತ್ನಿಸುತ್ತೇವೆ ಎಂದು ಹೇಳಿದ್ದಾರೆ. ಜಿಲ್ಲಾಧಿಕಾರಿ ಮೊಹಮ್ಮದ್ ರೋಷನ್ ಮಾತನಾಡಿ, ಅರಣ್ಯ, ಲೋಕೋಪಯೋಗಿ, ಸಾರಿಗೆ, ಶಿಕ್ಷಣ, ಕಂದಾಯ, ಹೆಸ್ಕಾಂ ಇಲಾಖೆ ಸೇರಿ ವಿವಿಧ ಇಲಾಖೆಗಳ ಅಡಿಯಲ್ಲಿ ಸ್ಮಶಾನ ಭೂಮಿ ಮಂಜೂರು, ಶಾಲಾ ಕಟ್ಟಡ ನಿರ್ಮಾಣಕ್ಕೆ ಜಾಗ ಹಾಗೂ ಮತ್ತಿತರ ಸಮಸ್ಯೆಗಳಿಗೆ ಸಂಬಂಧಿಸಿದ 200 ಅರ್ಜಿಗಳು ಸೋಮವಾರದ ಸಭೆಯಲ್ಲಿ ಸಲ್ಲಿಕೆಯಾಗಿವೆ. ಆ ಪೈಕಿ ಶೇ.50ರಷ್ಟು ಅರ್ಜಿಗಳಿಗೆ ಸ್ಥಳದಲ್ಲೇ ಜಿಲ್ಲಾ ಉಸ್ತುವಾರಿ ಸಚಿವರು ಪರಿಹಾರ ಸೂಚಿಸಿದ್ದಾರೆ. ಇನ್ನುಳಿದಂತೆ ಶೀಘ್ರವೇ ಸ್ಮಶಾನ ಮತ್ತು ಶಾಲೆಗಳಿಗೂ ಜಾಗ ಮಂಜೂರು ಮಾಡುತ್ತೇವೆ ಎಂದು ಹೇಳಿದ್ದಾರೆ.

ಈ ಹಿಂದೆ ಯರಗಟ್ಟಿಯಲ್ಲಿ ನಡೆದ ಪ್ರಜಾ ಸೇವೆ ಆಂದೋಲನ ಸಭೆಯಲ್ಲಿ ಸುಮಾರು 250 ಅರ್ಜಿಗಳು ಸ್ವೀಕೃತವಾಗಿದ್ದು, ಅವುಗಳಲ್ಲಿ ಸುಮಾರು ಶೇ.40ರಷ್ಟು ಅರ್ಜಿಗಳನ್ನು ಈಗಾಗಲೇ ವಿಲೇವಾರಿ ಮಾಡಲಾಗಿದೆ.

ಸಭೆಯಲ್ಲಿ ಶಾಸಕ ವಿಠ್ಠಲ ಹಲಗೇಕರ್, ವಿಧಾನ ಪರಿಷತ್ ಸದಸ್ಯ ಚನ್ನರಾಜ ಹಟ್ಟಿಹೊಳಿ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಕೆ.ರಾಮರಾಜನ್, ಅಪರ ಜಿಲ್ಲಾಧಿಕಾರಿ ವಿಜಯಕುಮಾರ ಹೊನಕೇರಿ, ಬೆಳಗಾವಿ ಎಸಿ ಶ್ರವಣ ನಾಯಕ, ವಾಯುವ್ಯ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆ ನಿಗಮದ ಉಪಾಧ್ಯಕ್ಷ ಸುನೀಲ ಹನುಮಣ್ಣವರ, ಜಿಲ್ಲಾ ಗ್ಯಾರಂಟಿ ಯೋಜನೆಗಳ ಪ್ರಾಧಿಕಾರಿದ ಜಿಲ್ಲಾಧ್ಯಕ್ಷ ವಿನಯ ನಾವಲಗಟ್ಟಿ, ಜಿ.ಪಂ. ಯೋಜನಾ ನಿರ್ದೇಶಕ ರವಿ ಬಂಗಾರಪ್ಪನವರ, ಕೃಷಿ ಇಲಾಖೆ ಜೆಡಿ ಡಾ. ಹೆಚ್.ಡಿ. ಕೋಳೇಕರ್, ತೋಟಗಾರಿಕಾ ಇಲಾಖೆ ಜೆಡಿ ಮಹಾಂತೇಶ ಮುರಗೋಡ ಸೇರಿ ಮತ್ತಿತರರು ಇದ್ದರು.

**1.** ಪರಿಹಾರ ನೀಡಲು ಪ್ರಯತ್ನಿಸುತ್ತೇವೆ
**2.** ಈ ಸಭೆಯಲ್ಲಿ ಆಕ್ಷೇಪಣೆ ಬಂದಿವೆಯಾ
**3.** ಕಸ್ತೂರಿ ರಂಗನ್ ವರದಿ ಪರವಾಗಿ ಇಲ್ಲ



> ಇನ್ನು ಕಸ್ತೂರಿ ರಂಗನ್ ವರದಿ ಜಾರಿ ಬಗ್ಗೆ ಏನಾದರೂ ಈ ಸಭೆಯಲ್ಲಿ ಆಕ್ಷೇಪಣೆ ಬಂದಿವೆಯಾ ಎಂಬ ಮಾಧ್ಯಮಗಳ ಪ್ರಶ್ನೆಗೆ ಆಕ್ಷೇಪಣೆ ಯಾವುದೂ ಬಂದಿಲ್ಲ. ಆದರೆ, ನಮ್ಮ ಸರ್ಕಾರ ಕಸ್ತೂರಿ ರಂಗನ್ ವರದಿ ಪರವಾಗಿ ಇಲ್ಲ. ಜನತೆಯ ಪರವಾಗಿದೆ.
> – **ಸತೀಶ್ ಜಾರಕಿಹೊಳಿ,** ಸಚಿವ

> ಉಳಿದ ಅರ್ಜಿಗಳನ್ನೂ ಸಂಬಂಧಿಸಿದ ಇಲಾಖೆಗಳ ಮೂಲಕ ತ್ವರಿತವಾಗಿ ಪರಿಶೀಲಿಸಿ ವಿಲೇವಾರಿಗೆ ಸೂಚಿಸಲಾಗಿದೆ. ಸಮಸ್ಯೆ ಪರಿಹರಿಸಿದ ಬಳಿಕ ಅರ್ಜಿದಾರರಿಗೆ ಹಿಂಬರಹ ಕೊಡಲಾಗುತ್ತದೆ. ಪೋರ್ಟಲ್‌ನಲ್ಲೂ ತಮ್ಮ ಅರ್ಜಿ ಸ್ಟೇಟಸ್ ನೋಡಬಹುದು.
> – **ಮೊಹಮ್ಮದ್ ರೋಷನ್,** ಜಿಲ್ಲಾಧಿಕಾರಿ

## ರಾಹುಲ್, ಪ್ರಿಯಾಂಕಾ ಗಾಂಧಿ ಸೇರಿದಂತೆ INDIA ಒಕ್ಕೂಟದ ಹಲವು ಸಂಸದರು ಪೊಲೀಸ್ ವಶಕ್ಕೆ..!

# ದೆಹಲಿಯಲ್ಲಿ ಹೈಡ್ರಾಮಾ: EC ಕಚೇರಿ ಮುತ್ತಿಗೆಗೆ ಯತ್ನ

**ನವದೆಹಲಿ:** ಮುಖ್ಯ ಚುನಾವಣಾ ಆಯುಕ್ತರ ರಾಜಿನಾಮೆಗೆ ಆಗ್ರಹಿಸಿ ಚುನಾವಣಾ ಆಯೋಗದ ಪ್ರಧಾನ ಕಚೇರಿಯನ್ನು ಮುತ್ತಿಗೆ ಹಾಕಲು ಯತ್ನಿಸಿದ ಲೋಕಸಭೆ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ, ಕಾಂಗ್ರೆಸ್ ನಾಯಕಿ ಪ್ರಿಯಾಂಕಾ ಗಾಂಧಿ ವಾದ್ರಾ ಸೇರಿ 'ಇಂಡಿಯಾ' ಒಕ್ಕೂಟದ ಪ್ರಮುಖ ಸಂಸದರನ್ನು ದೆಹಲಿ ಪೊಲೀಸರು ಮಂಗಳವಾರ ವಶಕ್ಕೆ ಪಡೆದಿದ್ದಾರೆ.

1. ಮುಖ್ಯ ಚುನಾವಣಾ ಆಯುಕ್ತರ ರಾಜಿನಾಮೆಗೆ ಆಗ್ರಹ
2. ಆಯೋಗದ ಪ್ರಧಾನ ಕಚೇರಿಯನ್ನು ಮುತ್ತಿಗೆ ಹಾಕಲು ಯತ್ನ
3. ಮೆರವಣಿಗೆಗೆ ತಡೆದ ಪೊಲೀಸ್ ಭದ್ರತಾ ಸಿಬ್ಬಂದಿ

ಚುನಾವಣಾ ಆಯೋಗದ ಕೇಂದ್ರ ಕಚೇರಿಯತ್ತ ತೆರಳುತ್ತಿದ್ದ ಇಂಡಿಯಾ ಒಕ್ಕೂಟದ ಸಂಸದರನ್ನು ಸಂಸತ್ ರಸ್ತೆಯಲ್ಲಿ ಪೊಲೀಸರು ತಡೆದರು. ಬಳಿಕ ಸಂಸದರು ರಸ್ತೆಯಲ್ಲೇ ಧರಣಿ ಕುಳಿತು ಜ್ಞಾನೇಶ್ ಕುಮಾರ್ ರಾಜೀನಾಮೆಗೆ ಆಗ್ರಹಿಸಿದರು.

ಇದಕ್ಕೂ ಮುನ್ನ ಭದ್ರತಾ ಸಿಬ್ಬಂದಿ ಮೆರವಣಿಗೆಯನ್ನು ತಡೆದಾಗ ರಾಹುಲ್ ಗಾಂಧಿ ಮತ್ತು ಟಿಎಂಸಿ ಸಂಸದ ಅಭಿಷೇಕ್ ಬ್ಯಾನರ್ಜಿ ಪೊಲೀಸ್ ಬ್ಯಾರಿಕೇಡ್ ಮೇಲೆ ಹತ್ತಿದ್ದರು.

ರಾಜ್ಯಸಭೆ ಮತ್ತು ಲೋಕಸಭೆಯ ಪ್ರತಿಪಕ್ಷ ನಾಯಕರಾದ ಮಲ್ಲಿಕಾರ್ಜುನ ಖರ್ಗೆ ಹಾಗೂ ರಾಹುಲ್ ಗಾಂಧಿ ಸೇರಿದಂತೆ INDIA ಒಕ್ಕೂಟದ ಸಂಸದರು ಸಂಸತ್ ಭವನದ ಆವರಣದಿಂದ ಚುನಾವಣಾ ಆಯೋಗದತ್ತ ಮೆರವಣಿಗೆ ಆರಂಭಿಸಿದ್ದರು. ಆದರೆ, ಸಂಸತ್ ಸ್ಟ್ರೀಟ್‌ನಲ್ಲಿ ಪೊಲೀಸರು ಅವರನ್ನು ತಡೆದರು. ನೀತಿ ಆಯೋಗದ ಕಚೇರಿ ಮತ್ತು ಆಕಾಶವಾಣಿ ಭವನದ ನಡುವಿನ ರಸ್ತೆಯಲ್ಲಿ, ಚುನಾವಣಾ ಆಯೋಗದ ಕಚೇರಿ ಕಡೆಗೆ ಸಾಗುವ ಮಾರ್ಗದಲ್ಲಿ



ಸಂಸದರನ್ನು ತಡೆಯಲಾಯಿತು. ಮುಂದೆ ಸಾಗಲು ಅವಕಾಶ ನೀಡದ ಹಿನ್ನೆಲೆಯಲ್ಲಿ ಅವರು ರಸ್ತೆಯಲ್ಲೇ ಕುಳಿತು ಪ್ರತಿಭಟನೆ ನಡೆಸಿದರು. ಪ್ರತಿಭಟನಾಕಾರರು ಜ್ಞಾನೇಶ್ ಕುಮಾರ್ ಅವರನ್ನು ಆರ್‌ಎಸ್‌ಎಸ್ ಸಮವಸ್ತ್ರದಲ್ಲಿ ಚಿತ್ರಿಸಿರುವ ಕಟೌಟ್‌ಗಳನ್ನು ಪ್ರದರ್ಶಿಸಿದರು. ಬಿಜೆಪಿ ಹೈ, ಸಿಇಸಿ ಹೈ", "ವೋಟ್ ಚೋರ್, ಗದ್ದಿ ಛೋಡ್" ಹಾಗೂ "ಪ್ರಜಾಪ್ರಭುತ್ವ ಮಾರಾಟಕ್ಕಿಲ್ಲ" ಎಂಬ ಘೋಷಣೆಗಳನ್ನು ಕೂಗಿದರು.

ರಾಹುಲ್ ಗಾಂಧಿ ತಮ್ಮ ಎಕ್ಸ್ ಖಾತೆಯಲ್ಲಿ, "ಜ್ಞಾನೇಶ್ ನಿಮ್ಮ ಸಮಯ ಮುಗಿದಿದೆ ಸಹೋದರ. ರಾಜೀನಾಮೆ ನೀಡುವ ಸಮಯ ಬಂದಿದೆ" ಎಂದು ಪೋಸ್ಟ್ ಮಾಡಿದ್ದಾರೆ.

ಟಿಎಂಸಿ ನಾಯಕರಾದ ಅಭಿಷೇಕ್ ಬ್ಯಾನರ್ಜಿ, ಡೆರೆಕ್ ಒಬ್ರಿಯಾನ್, ಕಾಂಗ್ರೆಸ್ ನಾಯಕಿ ಪ್ರಿಯಾಂಕಾ ಗಾಂಧಿ ವಾದ್ರಾ, ಸಮಾಜವಾದಿ ಪಕ್ಷದ ಮುಖ್ಯಸ್ಥ ಅಖಿಲೇಶ್ ಯಾದವ್ ಹಾಗೂ ಸಿಪಿಐ(ಎಂ) ನಾಯಕ ಜಾನ್ ಬ್ರಿಟ್ಟಾಸ್ ಸೇರಿದಂತೆ ಹಲವು ನಾಯಕರು ಮೆರವಣಿಗೆಯಲ್ಲಿ ಪಾಲ್ಗೊಂಡಿದ್ದರು. ಮೆರವಣಿಗೆ ಹಿನ್ನೆಲೆಯಲ್ಲಿ ಸಂಸತ್ ಭವನ ಮತ್ತು ಚುನಾವಣಾ ಆಯೋಗದ ಕಚೇರಿ ಸುತ್ತಮುತ್ತ ಭಾರಿ ಭದ್ರತೆ ಹಾಗೂ ಬ್ಯಾರಿಕೇಡ್‌ಗಳನ್ನು ಅಳವಡಿಸಲಾಗಿತ್ತು. ಸಂಸದರು ಆಗಮಿಸುವುದಕ್ಕೂ ಮುನ್ನವೇ ಭದ್ರತಾ ಸಿಬ್ಬಂದಿಯನ್ನು ನಿಯೋಜಿಸಲಾಗಿತ್ತು. ಸಂಸದರು ಮೊದಲು ಸಂಸತ್ತಿನ ಮಕರ ದ್ವಾರದಲ್ಲಿ ಜಮಾಯಿಸಿ, ಬಳಿಕ ಚುನಾವಣಾ ಆಯೋಗದ ಕಚೇರಿಯಾಗಿರುವ ನಿರ್ವಾಚನ ಸದನ್‌ನತ್ತ ಮೆರವಣಿಗೆ ಆರಂಭಿಸಿದ್ದರು.ಮೆರವಣಿಗೆಗೂ ಮುನ್ನ ಪ್ರತಿಪಕ್ಷ ಸಂಸದರು ಭದ್ರತಾ ವ್ಯವಸ್ಥೆ ಕುರಿತು ಪ್ರಶ್ನೆಗಳನ್ನು ಎತ್ತಿದ್ದರು.

> ದೇಶದಾದ್ಯಂತ ಜ್ಞಾನೇಶ್ ಕುಮಾರ್ ನೇತೃತ್ವ ವಹಿಸಿದ್ದ ಸಂಸ್ಥೆಯ ಮೇಲೆ ಇಡೀ ದೇಶ ನಂಬಿಕೆ ಇಟ್ಟಿತ್ತು. ಆ ಸಂಸ್ಥೆಯ ಬಗ್ಗೆ ದೇಶ ಹೆಮ್ಮೆಪಡುತ್ತಿತ್ತು. ಅದರ ನಿಷ್ಪಕ್ಷಪಾತದ ಬಗ್ಗೆ ಹಿಂದೆಂದೂ ಪ್ರಶ್ನೆಗಳು ಎದ್ದಿರಲಿಲ್ಲ. ಆದರೆ ಒಬ್ಬ ವ್ಯಕ್ತಿ ಆ ವಿಶ್ವಾಸವನ್ನು ಮುರಿದಿದ್ದಾರೆ.
> – ಇಮ್ರಾನ್ ಮಸೂದ್, ಕಾಂಗ್ರೆಸ್ ಸಂಸದ

ಮತದಾರರಾಗಿ ನೋಂದಣಿ ಮಾಡಿಕೊಳ್ಳಲು ಬಳಸುವ ಫಾರ್ಮ್–6ರಲ್ಲಿ ಮಾಡಲಾದ ಬದಲಾವಣೆಗಳ ಕುರಿತು ಸುಪ್ರೀಂ ಕೋರ್ಟ್ ನೀಡಿದ ಅಭಿಪ್ರಾಯಗಳನ್ನು ಉಲ್ಲೇಖಿಸಿ ಜ್ಞಾನೇಶ್ ಕುಮಾರ್ ರಾಜೀನಾಮೆಗೆ ಆಗ್ರಹಿಸಿದ್ದರು. ಒಂದು ಸಂಪೂರ್ಣ ಜಾಲ ಒಟ್ಟಾಗಿ ಕಾರ್ಯನಿರ್ವಹಿಸುತ್ತಿದೆ. ನಾವು ಜ್ಞಾನೇಶ್ ಕುಮಾರ್ ಅವರನ್ನು ಪ್ರಶ್ನಿಸುತ್ತೇವೆ. ಬಿಜೆಪಿ ಮುಖ್ಯಮಂತ್ರಿಗಳು ಇದಕ್ಕೆ ಉತ್ತರ ನೀಡಬೇಕಾಗುತ್ತದೆ ಎಂದು ಆರೋಪಿಸಿದರು.

ಸಂಸದ ಪಿ. ಸಂತೋಷ್ ಕುಮಾರ್ ಮಾತನಾಡಿ, ಮತದಾರರ ಪಟ್ಟಿಗಳ ವಿಶೇಷ ತೀವ್ರ ಪರಿಷ್ಕರಣೆ ಸಂದರ್ಭದಲ್ಲಿ ಫಾರ್ಮ್–6ಕ್ಕೆ ಸೇರಿಸಲಾದ ಹೆಚ್ಚುವರಿ ಘೋಷಣೆಯ ಕುರಿತು ಪ್ರತಿಪಕ್ಷಗಳು ಎತ್ತಿದ್ದ ಆಕ್ಷೇಪಗಳಿಗೆ ಸುಪ್ರೀಂ ಅಭಿಪ್ರಾಯಗಳು ಮತ್ತಷ್ಟು ಬಲ ನೀಡಿವೆ ಎಂದು ಹೇಳಿದರು.

# ಜ್ಞಾನೇಶ್‌ಕುಮಾರ್‌ರಿಂದ ಸಂವಿಧಾನದ ಆಶಯ ದುರ್ಬಲ

**ನವದೆಹಲಿ:** "ಮತಪಟ್ಟಿ ವಿಶೇಷ ಸಮಗ್ರ ಪರಿಷ್ಕರಣೆಯಡಿ ದೆಹಲಿಯಲ್ಲಿ 46 ಲಕ್ಷ ಸೇರಿ ದೇಶಾದ್ಯಂತ 13 ಕೋಟಿಗೂ ಅಧಿಕ ಮತದಾರರ ಹೆಸರುಗಳನ್ನು ಕೈಬಿಡಲಾಗಿದೆ ಎಂಬ ಆರೋಪ ತೀವ್ರ ಕಳವಳಕಾರಿ. ಮುಖ್ಯ ಚುನಾವಣಾ ಆಯುಕ್ತ ಜ್ಞಾನೇಶ್ ಕುಮಾರ್ ಸಂವಿಧಾನವನ್ನು ದುರ್ಬಲಗೊಳಿಸಿ ದ್ದಾರೆ" ಎಂದು ದೆಹಲಿಯ ಮಾಜಿ ಲೆಫ್ಟಿನೆಂಟ್ ಗವರ್ನರ್ ನಜೀಬ್ ಜಂಗ್ ಆರೋಪಿಸಿದ್ದಾರೆ.



ದೆಹಲಿ ಮಾಜಿ ಲೆಫ್ಟಿನೆಂಟ್ ಗವರ್ನರ್ ಆರೋಪ

ಮಂಗಳವಾರ ಪತ್ರಿಕೆ ಜತೆ ಮಾತನಾಡಿರುವ ಅವರು, "ಅಧಿಕಾರಿ ವರ್ಗ ಸಂವಿಧಾನದ ಮೇಲೆ ಪ್ರಮಾಣ ಮಾಡಿ ವಚನ ತೆಗೆದುಕೊಳ್ಳುತ್ತಾರೆ. ಅದನ್ನು ಕಾಪಾಡುವ ಪ್ರತಿಜ್ಞೆ ಮಾಡುತ್ತಾರೆ. ಆದರೆ, ಜ್ಞಾನೇಶ್ ಕುಮಾರ್ ಸಿಇಸಿ ಆಗಿ ಸಂವಿಧಾನವನ್ನೇ ದುರ್ಬಲಗೊಳಿಸಿದ್ದಾರೆ" ಎಂದು ಅವರು ದೂರಿದ್ದಾರೆ. "ಮತಪಟ್ಟಿಯಲ್ಲಿ ಹೆಸರುಗಳು ಕೈಬಿಟ್ಟು ಹೋಗಲು ಮತ್ತು ಸಂವಿಧಾನ ದುರ್ಬಲವಾಗಲು ಎಲ್ಲರೂ ಅಲ್ಲ, ಜ್ಞಾನೇಶ್ ಕುಮಾರ್ ಮಾತ್ರ ಕಾರಣ. ಅವರು ಸಿಇಸಿ ಆಗಿ ಅಧಿಕಾ ರವನ್ನು ದುರ್ಬಳಕೆ ಮಾಡಿಕೊ ಂಡಿದ್ದಾರೆ" ಎಂದು ನಜೀಬ್ ಜಂಗ್ ಗಂಭೀರ ಆರೋಪ ಮಾಡಿದ್ದಾರೆ.

ಎಸ್‌ಐಆರ್ ಪ್ರಕ್ರಿಯೆಯನ್ನೇ ಪ್ರಶ್ನಿಸಿರುವ ನಜೀಬ್ ಜಂಗ್, "ದೇಶದಲ್ಲಿ 13 ಕೋಟಿಗೂ ಅಧಿಕ ಮತದಾರರನ್ನು ಪಟ್ಟಿಯಿಂದ ಕೈಬಿಡಲಾಗಿದೆ. ನಿಜವಾಗಿಯೂ ಅಷ್ಟು ಸಂಖ್ಯೆಯ ಜನರು ಅಕ್ರಮ ಮತದಾರರೇ? ಎಸ್‌ಐಆರ್‌ಗೂ ಮೊದಲು ಚುನಾವಣೆಗಳು ನಡೆದಿವೆ. ಆಗ ಯಾವುದೇ ದೂರು ಇರಲಿಲ್ಲ. ಅವರೆಲ್ಲರೂ ಚುನಾವಣೆಗಳಲ್ಲಿ ಮತ ಚಲಾಯಿಸಿದ್ದರು. ಈಗ ಅವರೆಲ್ಲರೂ ಇದ್ದಕ್ಕಿದ್ದಂತೆ ಹೇಗೆ ಅಕ್ರಮರಾದರು" ಎಂದು ಪ್ರಶ್ನಿಸಿದ್ದಾರೆ. "ದೆಹಲಿಯ ಒಟ್ಟು ಜನಸಂಖ್ಯೆ ಸುಮಾರು 2 ಕೋಟಿ. ಈ ಪೈಕಿ 46 ರಿಂದ 47 ಲಕ್ಷ ಜನರನ್ನು ಅಕ್ರಮ ಎಂದು ಪಟ್ಟಿಯಿಂದ ಕೈಬಿಡಲಾಗಿದೆ. ಅದು ಹೇಗೆ ಅಷ್ಟು ಪ್ರಮಾಣದಲ್ಲಿ ಅಕ್ರಮವಾಗಲು ಸಾಧ್ಯ? ಎಂದು ಅವರು ಕೇಳಿದ್ದಾರೆ. ಮಾಜಿ ನಾಗರಿಕ ಸೇವಕ, ಕಾರ್ಯಕರ್ತ ಮತ್ತು ನಾಗರಿಕರ ನಿಯೋ ೀಗದ ಭಾಗವಾಗಿರುವ ನಾನು, "ಸಿಇಸಿ ಜ್ಞಾನೇಶ್ ಕುಮಾರ್ ಅವರಿಗೆ ಆರೋಪಪಟ್ಟಿ ಮತ್ತು ಮಹಾಭಿಯೋಗದ ಕುರಿತಾದ ಸಾರ್ವಜನಿಕ ನೋಟಿಸ್ ಅನ್ನು ನೀಡಲು ಮುಂದಾಗಿದ್ದೆ. ಆದರೆ, ನಿಯೋಗವನ್ನು ಚುನಾವಣಾ ಆಯೋಗದ ಪ್ರಧಾನ ಕಚೇರಿಗೆ ಪ್ರವೇಶಿಸದಂತೆ ದೆಹಲಿ ಪೊಲೀಸರು ತಡೆದಿದ್ದಾರೆ. ಇದು ಜನರ ಹಕ್ಕುಗಳಿಗಾಗಿ ನಡೆಸುತ್ತಿರುವ ಹೋರಾಟ" ಎಂದು ಅವರು ಹೇಳಿದ್ದಾರೆ. ಇಂಡಿಯಾ ಮೈತ್ರಿಕೂಟದ ಸಂಸದರ ಪ್ರತಿಭಟನೆಯ ಕುರಿತು ಪ್ರಶ್ನೆಗೆ ಉತ್ತರಿಸಿದ ಜಂಗ್, "ನಾನು ಯಾವುದೇ ರಾಜಕೀಯ ಪಕ್ಷಕ್ಕೆ ಸಲಹೆಗಳನ್ನು ನೀಡುತ್ತಿಲ್ಲ. ನಮಗೆ ಯಾವುದೇ ರಾಜಕೀಯ ಪಕ್ಷದೊಂದಿಗೆ ಸಂಬಂಧವಿಲ್ಲ. ನಾವು ನಿವೃತ್ತ ನಾಗರಿಕ ಸೇವಾ ಅಧಿಕಾರಿಗಳು. ನನಗಿಂತ ಕನಿಷ್ಠ 15–16 ವರ್ಷ ಕಿರಿಯರಾದ ಜ್ಞಾನೇಶ್ ಕುಮಾರ್ ಅವರಂತಹ ಅಧಿಕಾರಿಗಳೊಂದಿಗೆ ಮಾತನಾಡುವುದು ಮತ್ತು ನಮ್ಮ ತಟಸ್ಥ ನಿಲುವನ್ನು ಅವರಿಗೆ ವಿವರಿಸುವುದು ನಮ್ಮ ಕರ್ತವ್ಯ ಎಂದು ನಮಗೆ ಅನ್ನಿಸಿತು" ಎಂದು ಹೇಳಿದ್ದಾರೆ.

ಮಾಜಿ ಐಎಎಸ್ ಅಧಿಕಾರಿಯಾಗಿರುವ ನಜೀಬ್ ಜಂಗ್, 2009 ರಿಂದ 2013 ರವರೆಗೆ ದೆಹಲಿಯ ಜಾಮಿಯಾ ಮಿಲಿಯಾ ಇಸ್ಲಾಮಿಯಾ ವಿಶ್ವವಿದ್ಯಾಲಯದ ಕುಲಪತಿಯಾಗಿದ್ದರು. ನಂತರ 2013 ರಿಂದ 2016 ರವರೆಗೆ ದೆಹಲಿಯ ಲೆಫ್ಟಿನೆಂಟ್ ಗವರ್ನರ್ ಆಗಿ ಸೇವೆ ಸಲ್ಲಿಸಿದರು. ಅವರ ಅಧಿಕಾರಾವಧಿಯಲ್ಲೇ ಆಮ್ ಆದ್ಮಿ ಪಕ್ಷವು ದೆಹಲಿಯಲ್ಲಿ ಸರ್ಕಾರವನ್ನು ರಚಿಸಿತು. ಅವರ ಹಾಗೂ ದೆಹಲಿ ಸರ್ಕಾರದ ನಡುವೆ ದೀರ್ಘಕಾಲದ ಸಂಘರ್ಷ ಏರ್ಪಟ್ಟಿತ್ತು.

## ಪ.ಬಂಗಾಳ, ತಮಿಳುನಾಡು, ಅಸ್ಸೋಂ, ಪುದುಚೇರಿ ಉಪಚುನಾವಣೆ: ಹುಮಾಯೂನ್ ಕಬೀರ್ ಅರೆಸ್ಟ್

**ಹೈದರಾಬಾದ್ :** ಪಶ್ಚಿಮ ಬಂಗಾಳ, ತಮಿಳುನಾಡಿನ ತಲಾ ಎರಡು ವಿಧಾನಸಭಾ ಕ್ಷೇತ್ರಗಳು ಅಸ್ಸೋಂನ ಒಂದು ಲೋಕಸಭಾ ಮತ್ತು ಪುದುಚೇರಿಯ ಒಂದು ವಿಧಾನಸಭಾ ಕ್ಷೇತ್ರ ಸೇರಿದಂತೆ ಆರು ಪ್ರಮುಖ ಕ್ಷೇತ್ರಗಳಲ್ಲಿ ಇಂದು ಉಪಚುನಾವಣೆಯ ಮತದಾನ ನಡೆಯುತ್ತಿದೆ.

ಪಶ್ಚಿಮ ಬಂಗಾಳದ ರೆಜಿನಗರ ಮತ್ತು ನಂದಿಗ್ರಾಮ, ತಮಿಳುನಾಡಿನ ಮಧುರಾಂತಕಂ ಮತ್ತು ಧಾರಾಪುರಂ, ಪುದುಚೇರಿಯ ತಟ್ಟಂಚಾವಡಿ ಹಾಗೂ ಅಸ್ಸೋಂನ ನಾಗಾಂವ್ ಲೋಕಸಭಾ ಕ್ಷೇತ್ರದಲ್ಲಿ ಮತದಾನ ನಡೆಯುತ್ತಿದೆ. ತೀವ್ರ ಕುತೂಹಲ ಕೆರಳಿಸಿರುವ ರಾಜಕೀಯ ಕಣವಾಗಿ ಮಾರ್ಪಟ್ಟಿರುವ ಈ ಉಪಚುನಾವಣೆಗಳ ಫಲಿತಾಂಶ ಇದೇ ಅಕ್ಟೋಬರ್ 9ರಂದು ಪ್ರಕಟವಾಗಲಿದೆ.

**ಎಲ್ಲರ ಗಮನ ಸೆಳೆದಿರುವ ಪಶ್ಚಿಮ ಬಂಗಾಳ ಚುನಾವಣೆ:** ಪಶ್ಚಿಮ ಬಂಗಾಳದ ಎರಡು ಪ್ರಮುಖ ಚುನಾವಣಾ ಕಣಗಳ ಪೈಕಿ, ಪೂರ್ವ ಮೇದಿನಿಪುರದ ನಂದಿಗ್ರಾಮ ಎಲ್ಲರ ಗಮನ ಸೆಳೆದಿದೆ. ನಂದಿಗ್ರಾಮ ಮಮತಾ ಬ್ಯಾನರ್ಜಿ ಅವರ ಅಧಿಕಾರಕ್ಕೆ ದಾರಿ ಮಾಡಿಕೊಟ್ಟ ಕ್ಷೇತ್ರದ ಜೊತೆಗೆ 2021ರಲ್ಲಿ ಬಿಜೆಪಿ ನಾಯಕ ಸುವೇಂದು ಅಧಿಕಾರಿ ಮಮತಾ ಬ್ಯಾನರ್ಜಿ ಅವರನ್ನು ಇದೇ ಕ್ಷೇತ್ರದಲ್ಲಿ ಸೋಲಿಸಿದ್ದರು.

ಸುವೇಂದು ಅಧಿಕಾರಿ ಈ ಕ್ಷೇತ್ರವನ್ನು ತೆರವು ಮಾಡಿದ ಕಾರಣ ಮತ್ತೆ ಉಪಚುನಾವಣೆ ಸಾಗಿದ್ದು, ಬಿಜೆಪಿಯು ತನ್ನ ಅಭ್ಯರ್ಥಿಯಾಗಿ ಹಸಿರಾಣಿ ರಾಥ್ ಅವರನ್ನು ಕಣಕ್ಕಿಳಿಸಿದೆ.

ರೆಜಿನಗರ ಮತ್ತು ನೌಡಾ ಎರಡೂ ಕ್ಷೇತ್ರಗಳಲ್ಲಿ ಜಯ ಗಳಿಸಿದ್ದ ಹುಮಾಯೂನ್ ಕಬೀರ್ ಅವರು ನೌಡಾ ಕ್ಷೇತ್ರವನ್ನು ಉಳಿಸಿಕೊಳ್ಳಲು ನಿರ್ಧರಿಸಿದ ನಂತರ ರೆಜಿನಗರ ಕ್ಷೇತ್ರವು ತೆರವಾಗಿದ್ದು, ಇಲ್ಲಿ ಉಪಚುನಾವವಣೆ ನಡೆದಿದೆ.

**ಕಬೀರ್ ಪೊಲೀಸ್ ವಶಕ್ಕೆ:** ಆಮ್ ಜನತಾ ಉನ್ನಯನ್ ಪಾರ್ಟಿ ಮುಖ್ಯಸ್ಥ ಹಾಗೂ ಶಾಸಕ ಹುಮಾಯೂನ್ ಕಬೀರ್ ಅವರನ್ನು ಪೊಲೀಸರು ಮುರ್ಷಿದಾಬಾದ್‌ನಲ್ಲಿರುವ ಅವರ ಪಕ್ಷದ ಕಚೇರಿಯಿಂದ ರೆಜಿನಗರ ಪೊಲೀಸರು ಬಂಧಿಸಿದ್ದಾರೆ. ರೆಜಿನಗರ ವಿಧಾನಸಭಾ ಉಪಚುನಾವಣೆಯಲ್ಲಿ ಮತ ಚಲಾಯಿಸಿದ ನಂತರ, ಹಲವು ಮತಗಟ್ಟೆಗಳಲ್ಲಿ ಮತದಾನ ಪ್ರಕ್ರಿಯೆಯಲ್ಲಿ ಪೊಲೀಸರು ಹಸ್ತಕ್ಷೇಪ ಮಾಡುತ್ತಿದ್ದಾರೆ ಎಂದು ಆರೋಪಿಸಿ, ಪೊಲೀಸರೊಂದಿಗೆ ಮಾತಿನ ಚಕಮಕಿ ಜೋರಾದ ಹಿನ್ನೆಲೆ ಕಬೀರ್ ಅವರನ್ನು ಬಂಧಿಸಿದ್ದಾರೆ ಎಂದು ವರದಿಯಾಗಿದೆ. ಅಸ್ಸೋಂನ ನಾಗಾಂವ್ ಚುನಾವಣೆ: ಅಸ್ಸೋಂನ ನಾಗಾಂವ್ ಲೋಕಸಭಾ ಕ್ಷೇತ್ರದ ಉಪಚುನಾವಣೆ ಸಾಗಿದೆ. ಕಾಂಗ್ರೆಸ್ ಸಂಸದ ಪ್ರದ್ಯುತ್ ಬೋರ್ಡೊಲೊಯ್ ಅವರು ತಮ್ಮ ಸ್ಥಾನಕ್ಕೆ ರಾಜೀನಾಮೆ ನೀಡಿ, ನಂತರ ಬಿಜೆಪಿ ಟಿಕೆಟ್‌ನಿಂದ ದಿಸ್ಪೂರ್ ವಿಧಾನಸಭಾ ಕ್ಷೇತ್ರಕ್ಕೆ ಸ್ಪರ್ಧಿಸಿ ಗೆಲುವು ಸಾಧಿಸಿದ್ದರಿಂದ ಈ ಉಪಚುನಾವಣೆ ನಡೆದಿದೆ.

## ಬಾರ್ ಡಾನ್ಸರ್ ಮೇಲಿನ ಹುಚ್ಚು ಪ್ರೀತಿಗೆ 657 ಕೋಟಿ ಸರ್ಕಾರಿ ಹಣ ಲೂಟಿ ಮಾಡಿದ ಬ್ಯಾಂಕ್ ಮ್ಯಾನೇಜರ್

**ಚಂಡೀಗಢ:** ಒಳ್ಳೆಯದೇ ಆಗಲಿ, ಕೆಟ್ಟದೇ ಆಗಲಿ, ಪ್ರೀತಿಗಾಗಿ ನಮ್ ಗಂಡುಮಕ್ಕಳು ಏನ್ ಬೇಕಾದರೂ ಮಾಡುತ್ತಾರೆ ಅನ್ನೋದಕ್ಕೆ ಈ ಘಟನೆಯೇ ಸಾಕ್ಷಿ! ಹೌದು, ಚಂಡೀಗಢದಲ್ಲಿ ಬ್ಯಾಂಕ್ ನೌಕರನೊಬ್ಬ ತಾನು ಪ್ರೀತಿಸುತಿದ್ದ ಬಾರ್ ಡಾನ್ಸರ್ ಗೆಳತಿಗಾಗಿ ಹರಿಯಾಣ ಸರ್ಕಾರ ಮತ್ತು ಚಂಡೀಗಢ ಆಡಳಿತದ ಇಲಾಖೆಗಳ 657 ಕೋಟಿ ರೂ. ಸರ್ಕಾರಿ ಬೊಕ್ಕಸದ ಹಣವನ್ನು ಲೂಟಿ ಮಾಡಿದ್ದಾನೆ. ಈ ಮೂಲಕ ಆಕೆಗೆ ಡಾನ್ಸ್ ಬಿಡುವಂತೆ ಹೇಳಿ, ಪ್ರತಿ ತಿಂಗಳು 10 ಲಕ್ಷ ರೂ. ಪಾಕೆಟ್ ಮನಿ ನೀಡುತ್ತಿದ್ದನು ಎನ್ನುವ ಅಘಾತಕಾರಿ ಮಾಹಿತಿ ಹೊರಬಿದಿದ್ದೆ.

**ತಿಂಗಳಿಗೆ 10 ಲಕ್ಷ ಪಾಕೆಟ್ ಮನಿ!**

**ಏನಿದು ಪ್ರಕರಣ?** ಇತ್ತೀಚೆಗೆ ಸಿಬಿಐ ತನಿಖೆಯಿಂದ ಆಘಾತಕಾರಿ ಹಗರಣ ಬೆಳಕಿಗೆ ಬಂದಿದ್ದು, ಹರಿಯಾಣ ಮತ್ತು ಚಂಡೀಗಢದ ಸರ್ಕಾರಿ ಇಲಾಖೆಗಳ ಬ್ಯಾಂಕ್ ಖಾತೆಗಳಿಂದ ಬರೋಬ್ಬರಿ 657 ಕೋಟಿ ರೂಪಾಯಿ ಸಾರ್ವಜನಿಕ ಹಣವನ್ನು ಲೂಟಿ ಮಾಡಿದ ಆರೋಪದ ಮೇಲೆ ಐಡಿಎಫ್‌ಸಿ ಫಸ್ಟ್ ಬ್ಯಾಂಕ್‌ನ ಮಾಜಿ ಮ್ಯಾನೇಜರ್ ರಿಭವ್ ರಿಷಿ ಎಂಬಾತನ ವಿರುದ್ಧ ಸಿಬಿಐ ತನಿಖೆ ನಡೆಸುತ್ತಿದೆ. ಈತ ತಾನು ಪ್ರೀತಿಸುತ್ತಿದ್ದ ಬಾರ್ ಡಾನ್ಸರ್‌ಗಾಗಿ ಈ ಹಣವನ್ನು ನೀರಿನಂತೆ ಖರ್ಚು ಮಾಡಿರುವುದು ಬಹಿರಂಗಗೊಂಡಿದೆ.

## ಸ್ಮಿತ್ ಮಚ್ಚರ್ ತಲೆಬುರುಡೆಯಲ್ಲಿ ಮೂಳೆ ಮುರಿತ

**ಅಬುಧಾಬಿ:** 'ಫ್ಲೈದುಬೈ' ವಿಮಾನವನ್ನು ಪತನಗೊಳಿಸುವ ಪ್ರಯತ್ನ ವಿಫಲಗೊಳಿಸುವಾಗ ಗಾಯಗೊಂಡಿದ್ದ ಭಾರತೀಯ ಪೈಲಟ್ ಕ್ಯಾಪ್ಟನ್ ಸ್ಮಿತ್ ಮಚ್ಚರ್ ಅವರ ತಲೆಬುರುಡೆಯ ಮೂಳೆ ಮುರಿತ ಉಂಟಾಗಿದೆ ಎಂದು ಮೂಲಗಳು ತಿಳಿಸಿವೆ.



38 ವರ್ಷದ ಕ್ಯಾಪ್ಟನ್ ಸ್ಮಿತ್ ಮಚ್ಚರ್, ತೀವ್ರ ನೋವು ಮತ್ತು ರಕ್ತಸ್ರಾವದ ನಡುವೆಯೂ ಹೋರಾಡಿ ಕಾಕ್‌ಪಿಟ್ ಬಾಗಿಲನ್ನು ತೆರೆಯುವಲ್ಲಿ ಯಶಸ್ವಿಯಾದರು. ದಾಳಿಯ ಸಮಯದಲ್ಲಿ ಮಚ್ಚರ್ ಅವರು 'ಡಿಪ್ರೆಸ್ಡ್ ಫ್ರಾಕ್ಚರ್'ಗೆ (ತಲೆಬುರುಡೆಯ ಮೂಳೆಯ ತುಂಡು ಒಳಕ್ಕೆ ಕುಸಿಯುವಂತಹ ಮುರಿತ) ಒಳಗಾಗಿದ್ದರು ಮತ್ತು ಸೌದಿ ಅರೇಬಿಯಾದಲ್ಲಿ ತುರ್ತು ಚಿಕಿತ್ಸೆ ಪಡೆದರು. ಅಲ್ಲಿ ವೈದ್ಯರು ಅವರ ತಲೆಬುರುಡೆಯನ್ನು ಸರಿಪಡಿಸುವ ಶಸ್ತ್ರಚಿಕಿತ್ಸೆ ನಡೆಸಿದ ನಂತರ ಅವರನ್ನು ಯುಎಇಗೆ ಕರೆತರಲಾಯಿತು. ತಲೆಬುರುಡೆಯ ಮೂಳೆ ಮುರಿದು, ಮೂಳೆಯ ತುಂಡೊಂದು ಮೆದುಳಿನ ಕಡೆಗೆ ಒಳಮುಖವಾಗಿ ತಳ್ಳಲ್ಪಟ್ಟಾಗ 'ಡಿಪ್ರೆಸ್ಡ್ ಸ್ಕಲ್ ಫ್ರಾಕ್ಚರ್' ಸಂಭವಿಸುತ್ತದೆ. ಇಲ್ಲಿ "ತುಂಡು" ಎಂದರೆ ಸುತ್ತಮುತ್ತಲಿನ ಸಾಮಾನ್ಯ ಮೂಳೆಗಿಂತ ಕೆಳಮಟ್ಟದಲ್ಲಿರುವ ಮುರಿದ ತಲೆಬುರುಡೆಯ ಭಾಗವಾಗಿದೆ. ಈ ರೀತಿಯ ಗಾಯವು ಗಂಭೀರವಾದುದಾಗಿದೆ. ಏಕೆಂದರೆ ಮೂಳೆಯು ಮೆದುಳಿನ ಮೇಲೆ ಒತ್ತಡ ಹೇರಬಹುದು ಅಥವಾ ಮೆದುಳಿಗೆ ಹಾನಿ ಉಂಟುಮಾಡಬಹುದು. ಆದ್ದರಿಂದ ಇದಕ್ಕೆ ಸಾಮಾನ್ಯವಾಗಿ ವೈದ್ಯಕೀಯ ಆರೈಕೆ ಅಥವಾ ಶಸ್ತ್ರಚಿಕಿತ್ಸೆಯ ಅಗತ್ಯವಿದೆ ಎಂದು ಮೂಲಗಳು ತಿಳಿಸಿವೆ. ಪೈಲಟ್ ತಮ್ಮ ಕೈಕಾಲುಗಳು, ಎದೆ ಮತ್ತು ಹೊಟ್ಟೆಯ ಮೇಲ್ಭಾಗದಲ್ಲಿಯೂ ಗಾಯಗಳನ್ನು ಹೊಂದಿದ್ದರು, ಆದರೆ ಅವರು "ಚೇತರಿಕೆಯ ಸಕಾರಾತ್ಮಕ ಲಕ್ಷಣಗಳನ್ನು" ತೋರಿಸು ತ್ತಿದ್ದಾರೆ. ಉನ್ನತ ವೈದ್ಯಕೀಯ ಆರೈಕೆಗಾಗಿ ಕಳೆದ ವಾರ ಕ್ಯಾಪ್ಟನ್ ಮಚ್ಚರ್ ಅವರನ್ನು ಸೌದಿ ಅರೇಬಿಯಾದಿಂದ ಅಬುಧಾಬಿಗೆ ವಿಮಾನದ ಮೂಲಕ ಕರೆತರಲಾಯಿತು. ಅವರನ್ನು ಮಿಲಿಟರಿ ಆಸ್ಪತ್ರೆಗೆ ದಾಖಲಿಸಲಾಗಿದ್ದು, ಅಲ್ಲಿ ವಿಶೇಷ ವೈದ್ಯರ ತಂಡವು ಅವರ ಆರೋಗ್ಯದ ಮೇಲೆ ನಿರಂತರ ನಿಗಾ ಇರಿಸಿದೆ. ಪೈಲಟ್ ಚಿಕಿತ್ಸೆಗೆ "ಉತ್ತಮವಾಗಿ ಸ್ಪಂದಿಸುತ್ತಿದ್ದಾರೆ" ಎಂದು ಮೂಲಗಳು ತಿಳಿಸಿವೆ.

ಅಧಿಕಾರಿಗಳು ಕ್ಯಾಪ್ಟನ್ ಮಚ್ಚರ್ ಅವರ ಕುಟುಂಬದವರಿಗೆ ಆಸ್ಪತ್ರೆಯಲ್ಲಿ ಅವರನ್ನು ಭೇಟಿಯಾಗಲು ಅವಕಾಶ ನೀಡಿದ್ದಾರೆ ಮತ್ತು ಅವರ ಆರೋಗ್ಯದ ಕುರಿತಾದ ನಿಯಮಿತ ಮಾಹಿತಿಯನ್ನು ಕುಟುಂಬಕ್ಕೆ ತಿಳಿಸಲಾಗುತ್ತಿದೆ ಎಂದು ಮೂಲಗಳು ಹೇಳಿವೆ. ಕಳೆದ ವಾರ ಪ್ರಧಾನಿ ನರೇಂದ್ರ ಮೋದಿ ಅವರೊಂದಿಗೆ ವಿಡಿಯೋ ಕರೆಯಲ್ಲಿ ಮಾತನಾಡುತ್ತಿದ್ದಾಗ ಕ್ಯಾಪ್ಟನ್ ಮಚ್ಚರ್ ಅವರು ಘಟನೆಯನ್ನು ವಿವರಿಸಿದರು.

### ಟರ್ಕಿ ಒಡೆತನದ ಹಡಗಿನ ಮೇಲೆ ರಷ್ಯಾ ಡ್ರೋನ್ ದಾಳಿ, ಭಾರತೀಯ ಪ್ರಜೆ ಸೇರಿದಂತೆ ಹಲವರಿಗೆ ಗಾಯ

# ಕಪ್ಪು ಸಮುದ್ರದಲ್ಲಿ ಸಾಗುತ್ತಿದ್ದ ಹಡಗಿನ ಮೇಲೆ ರಷ್ಯಾ ಡ್ರೋನ್ ದಾಳಿಗೆ ಇಬ್ಬರು ಸಾವು

**ಮಾಸ್ಕೋ/ನವದೆಹಲಿ:** ಕಪ್ಪು ಸಮುದ್ರದಲ್ಲಿ ಟರ್ಕಿ ಒಡೆತನದ ಹಡಗಿನ ಮೇಲೆ ರಷ್ಯಾ ಡ್ರೋನ್ ದಾಳಿ ನಡೆಸಿದ್ದು, ಕನಿಷ್ಠ ಇಬ್ಬರು ಸಾವನ್ನಪ್ಪಿದ್ದಾರೆ. ಘಟನೆಯಲ್ಲಿ ಭಾರತೀಯ ಪ್ರಜೆ ಸೇರಿದಂತೆ ಹಲವು ಮಂದಿ ಗಾಯಗೊಂಡಿದ್ದಾರೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

1. ಗಾಯಗೊಂಡವರಲ್ಲಿ ಮೂವರು ಭಾರತೀಯ ಪ್ರಜೆಗಳು
2. ಎಲ್ಲಾ ಗಾಯಾಳುಗಳಿಗೂ ಚಿಕಿತ್ಸೆ ಮುಂದುವರಿದಿದೆ
3. ರೊಮೇನಿಯಾದಲ್ಲಿರುವ ಭಾರತೀಯ ರಾಯಭಾರ ಕಚೇರಿಯಿಂದ ಮಾಹಿತಿ

ಗಾಯಗೊಂಡವರಲ್ಲಿ ಮೂವರು ಭಾರತೀಯ ಪ್ರಜೆಗಳಾಗಿದ್ದು, ಅವರು ಚಿಕಿತ್ಸೆ ಪಡೆಯುತ್ತಿದ್ದಾರೆ ಎಂದು ರೊಮೇನಿಯಾದಲ್ಲಿರುವ ಭಾರತೀಯ ರಾಯಭಾರ ಕಚೇರಿ ಮಾಹಿತಿ ನೀಡಿದೆ. ಕಪ್ಪು ಸಮುದ್ರದಲ್ಲಿ ಸಾಗುತ್ತಿದ್ದ ವಾಣಿಜ್ಯ ನೌಕೆ ಎಂವಿ ರೊಯಾದ್ ಮಮ್ಮದೋವ್ ಮೇಲೆ ಮಂಗಳವಾರ ನಡೆದಿರುವ ದಾಳಿಯ ಬಗ್ಗೆ ನಮಗೆ ಮಾಹಿತಿ ಲಭಿಸಿದೆ. ಪ್ರಾಥಮಿಕ ಮಾಹಿತಿಯ ಪ್ರಕಾರ, ಇಬ್ಬರು ಮೃತಪಟ್ಟಿದ್ದು, ಸಿಬ್ಬಂದಿಯ ಕೆಲವರು ಗಾಯಗೊಂಡಿದ್ದು, ಅವರು ರೊಮೇನಿಯಾದಲ್ಲಿ ಚಿಕಿತ್ಸೆ ಪಡೆಯುತ್ತಿದ್ದಾರೆ. ಸಿಬ್ಬಂದಿ ವರ್ಗದಲ್ಲಿ ಮೂವರು ಭಾರತೀಯ ಪ್ರಜೆಗಳೂ ಇದ್ದಾರೆ ಎಂದು ವರದಿಯಾಗಿದೆ ಎಕ್ಸ್ ಜಾಲತಾಣದ ಮೂಲಕ ತಿಳಿಸಲಾಗಿದೆ.

ಭಾರತೀಯ ಪ್ರಜೆಗಳ ಸುರಕ್ಷತೆ ಮತ್ತು ಕ್ಷೇಮದ ಕುರಿತು ಹೆಚ್ಚಿನ ವಿವರ ತಿಳಿದುಕೊಳ್ಳಲು ಭಾರತೀಯ ನಿಯೋಗವು ಸಂಬಂಧಪಟ್ಟ ಅಧಿಕಾರಿಗಳೊಂದಿಗೆ ನಿಕಟ ಸಂಪರ್ಕದಲ್ಲಿದೆ.



ಈ ಘಟನೆಯ ನಂತರ, ರೊಮೇನಿಯಾದಲ್ಲಿರುವ ಭಾರತದ ರಾಯಭಾರಿ ಮನೋಜ್ ಮಹಾಪಾತ್ರ, ಭಾರತೀಯ ಪ್ರಜೆಗಳೊಂದಿಗೆ ಮಾತನಾಡಿದ್ದು, ಮೂವರೂ ಆರೋಗ್ಯವಾಗಿದ್ದಾರೆ ಎಂದು ವೈದ್ಯರು ಖಚಿತಪಡಿಸಿದ್ದಾರೆ. ರಾಯಭಾರಿಗಳು ಅವರಿಗೆ ಸಾಧ್ಯವಿರುವ ಎಲ್ಲಾ ರೀತಿಯ ನೆರವು ಮತ್ತು ಬೆಂಬಲದ ಭರವಸೆ ನೀಡಿದರು. ಭಾರತೀಯ ಸಿಬ್ಬಂದಿಯ ಕ್ಷೇಮ ಹಾಗೂ ಹಿತರಕ್ಷಣೆಗಾಗಿ ಎಲ್ಲಾ ರೀತಿಯ ನೆರವನ್ನೂ ನಾವು ಒದಗಿಸುತ್ತಿದ್ದೇವೆ ಎಂದು ತಿಳಿಸಲಾಗಿದೆ.

ಘಟನೆಯಲ್ಲಿ ಸವನ್ನಪ್ಪಿರುವ ಇಬ್ಬರು ವಿದೇಶಿ ಪ್ರಜೆಗಳು ಯಾವ ದೇಶದವರು ಎಂಬುದು ತಕ್ಷಣಕ್ಕೆ ತಿಳಿದುಬಂದಿಲ್ಲ.

**11 ಮಂದಿ ರಕ್ಷಣೆ**

**ದುರಂತದಲ್ಲಿ ಸಿಬ್ಬಂದಿಯ 11 ಮಂದಿಯನ್ನು ರಕ್ಷಿಸಲಾಗಿದೆ. ಅವರಲ್ಲಿ ಒಬ್ಬರು ಗಾಯಗೊಂಡಿದ್ದಾರೆ. ಕಪ್ಪು ಸಮುದ್ರದಲ್ಲಿ ಪರಿಸ್ಥಿತಿಯನ್ನು ತಿಳಿಗೊಳಿಸಲು ಹಾಗೂ ಭದ್ರತೆಯನ್ನು ಖಚಿತಪಡಿಸಲು ಉಕ್ರೇನ್ ಪದೇ ಪದೇ ನಿರ್ದಿಷ್ಟ ಕ್ರಮಗಳನ್ನು ಪ್ರಸ್ತಾಪಿಸಿದೆ ಎಂದು ಪುನರುಚ್ಚರಿಸಿದರು.**

ಈ ನಡುವೆ ಟರ್ಕಿಯ ಒಡೆತನದ ನಾಗರಿಕ ನೌಕೆಯೊಂದರ ಮೇಲೆ ತಟಸ್ಥ ಜಲಪ್ರದೇಶದಲ್ಲಿ ಎರಡು ರಷ್ಯಾದ ಡ್ರೋನ್‌ಗಳು ಭೀಕರ ದಾಳಿ ನಡೆಸಿವೆ ಎಂದು ಉಕ್ರೇನ್ ಅಧ್ಯಕ್ಷ ವೊಲೊಡಿಮಿರ್ ಝೆಲೆನ್ಸ್ಕಿ ತಿಳಿಸಿದರು.

ಹಡಗಿನಲ್ಲಿ ಅಜರ್ಬೈಜಾನ್ ಮತ್ತು ಭಾರತದ ನಾಗರಿಕರು ಇದ್ದರು. ದುರದೃಷ್ಟವಶಾತ್, ಸದ್ಯದ ಮಾಹಿತಿಯ ಪ್ರಕಾರ ಹಡಗಿನ ಕ್ಯಾಪ್ಟನ್ ಮೃತಪಟ್ಟಿದ್ದಾರೆ ಎಂದು ತಿಳಿದುಬಂದಿದೆ. ಇನ್ನೊಬ್ಬ ವ್ಯಕ್ತಿಯ ಸ್ಥಿತಿಗತಿಯ ಬಗ್ಗೆ ಇನ್ನೂ ಮಾಹಿತಿ ಪಡೆಯಲಾಗುತ್ತಿದೆ ಎಂದು ಝೆಲನ್ಸ್ಕಿ ತಿಳಿಸಿದರು.

ಜಾಗತಿಕ ಆಹಾರ ಭದ್ರತೆಯನ್ನು ಮರುಸ್ಥಾಪಿಸಲು ಒತ್ತಡದ ಅಗತ್ಯವಿದೆ. ಈ ವಿಷಯದಲ್ಲಿ ನಿಜವಾದ ಆಸಕ್ತಿ ಹೊಂದಿರುವ ಪ್ರತಿಯೊಬ್ಬರೂ ಸಹಾಯ ಮಾಡಬೇಕು ಎಂದು ಕರೆ ನೀಡಿದರು.

ರಷ್ಯಾ ಉಕ್ರೇನ್ ಸಂಘರ್ಷದಿಂದ ವಾಣಿಜ್ಯ ಹಡಗು ಸಾಗಣೆ ಮತ್ತು ಬಂದರು ಮೂಲಸೌಕರ್ಯದ ಮೇಲೆ ಹೆಚ್ಚುತ್ತಿರುವ ದಾಳಿಗಳಿಂದಾಗಿ ಕಪ್ಪು ಸಮುದ್ರವು ತೀವ್ರ ಅಡ್ಡಿ ಎದುರಿಸುತ್ತಿರುವ ನಿರ್ಣಾಯಕ ಜಾಗತಿಕ ವ್ಯಾಪಾರ ಕೇಂದ್ರವಾಗಿದೆ.

ಕೇವಲ ಒಂದು ದಿನದ ಹಿಂದಷ್ಟೇ, ಉಕ್ರೇನ್‌ನ ಸುಮಿ ಪ್ರದೇಶದಲ್ಲಿ ಭಾರತೀಯ ಮಾಲೀಕತ್ವದ ಔಷಧೀಯ ಗೋದಾಮಿನ ಮೇಲೆ ರಷ್ಯಾ ನಡೆಸಿದ ದಾಳಿಯಲ್ಲಿ 52 ವರ್ಷದ ಉದ್ಯೋಗಿಯೊಬ್ಬರು ಮೃತಪಟ್ಟಿದ್ದರು.

## ಮಿನಿ ನ್ಯೂಸ್

### ಮಹಿಳಾ ಪತ್ರಕರ್ತೆಗೆ ಎಸಿಪಿ ಲೈಂಗಿಕ ಕಿರುಕುಳ ಕೇಸ್‌ಗೆ ಟ್ವಿಸ್ಟ್: AI ನಕಲಿ ವಿಡಿಯೋ ಹರಿಬಿಟ್ಟಿದ್ದ ವ್ಯಕ್ತಿಯ ಬಂಧನ

ಮುಖ್ಯ ಚುನಾವಣಾ ಆಯುಕ್ತರ ವಿರುದ್ಧ ದೆಹಲಿಯಲ್ಲಿ ನಡೆದ ಪ್ರತಿಭಟನೆ ವೇಳೆ ದೆಹಲಿ ಪೊಲೀಸ್ ಅಧಿಕಾರಿಯೊಬ್ಬರು (ಎಸಿಪಿ) ಮಹಿಳಾ ಪತ್ರಕರ್ತೆಗೆ ಕಿರುಕುಳ ನೀಡುತ್ತಿದ್ದಾರೆ ಎಂದು ಬಿಂಬಿಸುವ ನಕಲಿ AI ವಿಡಿಯೋ ಹರಿಬಿಟ್ಟಿದ್ದ ನದೀಮ್ ಅಹ್ಮದ್ (24) ಎಂಬ ವ್ಯಕ್ತಿಯನ್ನು ದೆಹಲಿ ಸೈಬರ್ ಕ್ರೈಮ್ ಪೊಲೀಸರು ಬಂಧಿಸಿದ್ದಾರೆ. **ಏನಿದು ಘಟನೆ?** ಭಾರತದ ಮುಖ್ಯ ಚುನಾವಣಾ ಆಯುಕ್ತ ಜ್ಞಾನೇಶ್ ಕುಮಾರ್ ಅವರ ವಿರುದ್ಧ ದೆಹಲಿಯ ಜಂತರ್ ಮಂತರ್‌ನಲ್ಲಿ ಕಾಕರೂಚ್ ಜನತಾ ಪಾರ್ಟಿ ಪ್ರತಿಭಟನೆ ಆಯೋಜಿಸಿತ್ತು. ಈ ಪ್ರತಿಭಟನೆಯ ವರದಿ ಮಾಡಲು ಹೋಗಿದ್ದ ಸ್ವತಂತ್ರ ಮಹಿಳಾ ಪತ್ರಕರ್ತೆಯೊಬ್ಬರು, ದೆಹಲಿ ಪೊಲೀಸ್ ಎಸಿಪಿ ವಿವೇಕ್ ಭಗತ್ ಅವರು ತಮ್ಮನ್ನು ಅನುಚಿತವಾಗಿ ಮುಟ್ಟಿ ಲೈಂಗಿಕ ಕಿರುಕುಳ ನೀಡಿದ್ದಾರೆ ಎಂದು ಗಂಭೀರ ಆರೋಪ ಮಾಡಿದ್ದರು. ಈ ಘಟನೆ ದೇಶಾದ್ಯಂತ ಭಾರಿ ಆಕ್ರೋಶಕ್ಕೆ ಕಾರಣವಾಗಿತ್ತು. ಈ ವಿವಾದದ ಬೆನ್ನಲ್ಲೇ ಆರೋಪಿ ನದೀಮ್ ಅಹ್ಮದ್ ತಾನು ನಡೆಸುತ್ತಿದ್ದ 24,000 ಚಂದಾದಾರರನ್ನು ಹೊಂದಿರುವ ನ್ಯೂಸ್ ಐನಾ ಟುಡೇ ಎಂಬ ಇನ್‌ಸ್ಟಾಗ್ರಾಮ್ ಖಾತೆಯಲ್ಲಿ ಒಂದು ವಿಡಿಯೋ ಹಂಚಿಕೊಂಡಿದ್ದ. ಅದು ಪ್ರತಿಭಟನಾ ಸ್ಥಳದ ಸಿಸಿಟಿವಿ ದೃಶ್ಯಾವಳಿಯಂತೆ ಕಾಣಿಸುತ್ತಿತ್ತು. ಅದರಲ್ಲಿ ಪೊಲೀಸ್ ಅಧಿಕಾರಿಯೊಬ್ಬರು ಮಹಿಳೆಗೆ ಲೈಂಗಿಕ ಕಿರುಕುಳ ನೀಡುವ ದೃಶ್ಯವಿದ್ದು, ಅದರ ಪಕ್ಕದಲ್ಲೇ ಎಸಿಪಿ ವಿವೇಕ್ ಭಗತ್ ಅವರ ಫೋಟೋ ಮತ್ತು ಹೆಸರನ್ನು ಹಾಕಿ ವಿಡಿಯೋದಲ್ಲಿರುವ ಅಧಿಕಾರಿಯೇ ವಿವೇಕ್ ಭಗತ್ ಎಂಬಂತೆ ಬಿಂಬಿಸಲಾಗಿತ್ತು. ಮುಂದುವರೆದು, ದೆಹಲಿ ಪೊಲೀಸರ ಸೈಬರ್ ವಿಭಾಗ ಈ ವಿಡಿಯೋವನ್ನು ಪರಿಶೀಲಿಸಿದಾಗ, ಇದು ನೈಜ ದೃಶ್ಯವಲ್ಲ ಬದಲಿಗೆ AI ಪರಿಕರಗಳನ್ನು ಬಳಸಿ ಸೃಷ್ಟಿಸಲಾದ ನಕಲಿ ವಿಡಿಯೋ ಎಂದು ದೃಢಪಟ್ಟಿದೆ. ಹಾಗಾಗಿ, ಹರಿಯಾಣದ ಪಲ್ವಾಲ್ ಮೂಲದ ಆರೋಪಿ ನದೀಮ್‌ನನ್ನು ತಕ್ಷಣವೇ ಬಂಧಿಸಲಾಯಿತು. ವಿಚಾರಣೆಯ ವೇಳೆ ಆರೋಪಿ ನದೀಮ್, ದೆಹಲಿ ಪೊಲೀಸರ ಇಮೇಜ್‌ಗೆ ಧಕ್ಕೆ ತರುವುದು, ಪ್ರತಿಭಟನಾಕಾರರನ್ನು ಪೊಲೀಸರ ವಿರುದ್ಧ ಎತ್ತಿಕಟ್ಟುವುದು ಮತ್ತು ಸಮಾಜದಲ್ಲಿ ಶಾಂತಿ ಕದಡಿ ದಂಗೆಯಂತಹ ವಾತಾವರಣ ನಿರ್ಮಿಸುವುದು ತನ್ನ ಉದ್ದೇಶವಾಗಿತ್ತು ಎಂದು ಒಪ್ಪಿಕೊಂಡಿದ್ದಾನೆ.

### ಆಪ್ ಆಧಾರಿತ ಸಾರಿಗೆ ಬಳಸುವ ಮಹಿಳೆಯರಿಗೆ ಸುರಕ್ಷತೆ ಮಾರ್ಗಸೂಚಿ ಬಿಡುಗಡೆ ಮಾಡಿದ ಎನ್‌ಸಿಡಬ್ಲ್ಯೂ

**ನವದೆಹಲಿ:** ಆಪ್ ಆಧಾರಿತ ಕ್ಯಾಬ್‌ಗಳು, ಆಟೋಗಳು, ಬೈಕ್ ಟ್ಯಾಕ್ಸಿಗಳು ಮತ್ತು ಇತರ ಆನ್‌ಲೈನ್ ಸಾರಿಗೆ ಸೇವೆಗಳನ್ನು ಬಳಸುವ ಮಹಿಳೆಯರಿಗಾಗಿ ರಾಷ್ಟ್ರೀಯ ಮಹಿಳಾ ಆಯೋಗವು ಹೊಸ ಸುರಕ್ಷತಾ ಮಾರ್ಗಸೂಚಿಗಳನ್ನು ಹೊರಡಿಸಿದೆ.

ಈ ಮಾರ್ಗಸೂಚಿಗಳು ಚಾಲಕ ಮತ್ತು ವಾಹನದ ಪರಿಶೀಲನೆ, ಮಾರ್ಗ ಬದಲಾವಣೆ, ಕಿರುಕುಳ, ಅಸುರಕ್ಷಿತ ಸ್ಥಳಗಳಲ್ಲಿ ಪ್ರಯಾಣಿಕರನ್ನು ಇಳಿಸುವುದು ಮತ್ತು ತುರ್ತು ನೆರವಿನಲ್ಲಿ ವಿಳಂಬದಂತಹ ವಿಷಯಗಳನ್ನು ಒಳಗೊಂಡಿದೆ. ದೂರುಗಳನ್ನು ತ್ವರಿತವಾಗಿ ಬಗೆಹರಿಸಲು ಅನುಕೂಲವಾಗುವಂತೆ, ಪೊಲೀಸ್ ಇಲಾಖೆ, ಸಾರಿಗೆ ಅಧಿಕಾರಿಗಳು ಮತ್ತು ಆಪ್–ಆಧಾರಿತ ಕಂಪನಿಗಳ ನಡುವಿನ ಸಮನ್ವಯವನ್ನು ಸುಧಾರಿಸುವಂತೆ ಎನ್‌ಸಿಡಬ್ಲ್ಯೂ ಸೂಚಿಸಿದೆ. ಚಾಲಕರು ಮತ್ತು ವಾಹನಗಳ ಕುರಿತು ಮಾಹಿತಿಯನ್ನು ಸರಿಯಾಗಿ ಪರಿಶೀಲಿಸುವಂತೆ ಹಾಗೂ ಆಪ್‌ನಲ್ಲಿ ತೋರಿಸಲಾದ ವಿವರಗಳಿಗೆ ಚಾಲಕ ಅಥವಾ ವಾಹನ ಹೊಂದಿಕೆಯಾಗದಿದ್ದಲ್ಲಿ ಮಹಿಳೆಯರು ಯಾವುದೇ ದಂಡವಿಲ್ಲದೆ ರೈಡ್‌ಗಳನ್ನು ರದ್ದುಗೊಳಿಸಲು ಅವಕಾಶ ನೀಡುವಂತೆ ಆಪ್ ಆಧಾರಿತ ಕಂಪನಿಗಳಿಗೆ ಸೂಚಿಸಲಾಗಿದೆ. ಚಾಲಕರ ಹಿನ್ನೆಲೆ ಮತ್ತು ಪೊಲೀಸ್ ಪರಿಶೀಲನೆ ಹಾಗೂ ಮಹಿಳಾ ಸುರಕ್ಷತೆಯ ಕುರಿತು ನಿಯಮಿತ ತರಬೇತಿಯನ್ನು ನೀಡುವಂತೆಯೂ ಮಾರ್ಗಸೂಚಿಗಳು ಶಿಫಾರಸು ಮಾಡಲಾಗಿದೆ. ತಡರಾತ್ರಿ ರೈಡ್‌ಗಳಿಗೆ ಚಾಲಕರ ಬಲವಾದ ಪರಿಶೀಲನೆ, ನಂಬಿಕಸ್ಥ ಸಂಪರ್ಕದೊಂದಿಗೆ ರೈಡ್‌ಗಳ ಮಾಹಿತಿ ಹಂಚಿಕೊಳ್ಳಲು ಸೂಚಿಸಲಾಗಿದೆ. ಸುರಕ್ಷಿತ ಡ್ರಾಪ್ ಆಯ್ಕೆ, 24x7 ತುರ್ತು ಬೆಂಬಲಕ್ಕೆ ಮಾರ್ಗಸೂಚಿ ನೀಡಲಾಗಿದೆ. ಮಾರ್ಗದಲ್ಲಿ ಚಾಲಕ ತಪ್ಪಾದ ಮಾರ್ಗ ಬಳಕೆ ಮಾಡಿದರೆ ಅಥವಾ ದೀರ್ಘಕಾಲದವರೆಗೆ ಒಂದೇ ಕಡೆ ನಿಂತಿದ್ದಾಗ, ಆಪ್‌ಗಳು ಕಂಪನಿ ಮತ್ತು ಪ್ರಯಾಣಿಕರಿಗೆ ಎಚ್ಚರಿಕೆ ನೀಡಬೇಕು. ಪ್ರಯಾಣಿಕರಿಗೆ ಸುಲಭವಾಗಿ ಬಳಸಬಹುದಾದ SOS ಬಟನ್ ಲಭ್ಯವಿರಬೇಕು. ಮಹಿಳೆಯರನ್ನು ಸುರಕ್ಷಿತವಾಗಿ ಅವರ ಸ್ಥಾನದಲ್ಲಿ ಇಳಿಸುವುದು, ಹಿರಿಯ ಮಹಿಳೆಯರಿಗೆ ಹೆಚ್ಚುವರಿ ನೆರವು ದೂರುಗಳ ಮೇಲೆ ತ್ವರಿತ ಕ್ರಮ ಮತ್ತು ತನಿಖೆಗಾಗಿ ಪ್ರಯಾಣದ ದಾಖಲೆಗಳನ್ನು ಸುರಕ್ಷಿತ ಸಂರಕ್ಷಣೆಯಂತಹ ಮಹತ್ವ ಎನ್‌ಸಿಡಬ್ಲ್ಯೂ ಒತ್ತಿಹೇಳಿದೆ. ಪೊಲೀಸ್ ಕ್ರಮದ ಅಗತ್ಯವಿರುವ ದೂರುಗಳನ್ನು ವಿಳಂಬವಿಲ್ಲದೆ ಪೊಲೀಸರಿಗೆ ರವಾನಿಸಬೇಕು ಎಂದು ಸೂಚಿಸಿದೆ.

### ಶಾಲೆಗಳಲ್ಲಿ ಸಂವಿಧಾನದ ಪ್ರಸ್ತಾವನೆ ಪಠಣೆ: ಅರ್ಜಿ ವಜಾ

**ನವದೆಹಲಿ:** ಶಾಲೆಗಳಲ್ಲಿ ಬೆಳಗಿನ ಪ್ರಾರ್ಥನೆ ಸಮಯದಲ್ಲಿ ಸಂವಿಧಾನದ ಪ್ರಸ್ತಾವನೆ ಪಠಿಸುವಂತೆ ನಿರ್ದೇಶನ ನೀಡಬೇಕೆಂದು ಕೋರಿದ್ದ ಅರ್ಜಿಯನ್ನು ಸುಪ್ರೀಂ ಕೋರ್ಟ್ ಮಂಗಳವಾರ ವಜಾಗೊಳಿಸಿತು. ನ್ಯಾಯಮೂರ್ತಿಗಳಾದ ವಿಕ್ರಮ್ ನಾಥ್, ಅಗಸ್ಟಿನ್ ಜಾರ್ಜ್ ಮಸಿಹ್ ಮತ್ತು ಸಂದೀಪ್ ಮೆಹ್ತಾ ಅವರನ್ನೊಳಗೊಂಡ ಪೀಠವು "ಅರ್ಜಿ ವಜಾಗೊಳಿಸಲಾಗಿದೆ ಎಂದು ಹೇಳಿತು. ಶಾಲೆಗಳಲ್ಲಿ ಬೆಳಗಿನ ಪ್ರಾರ್ಥನಾ ಸಭೆಯ ವೇಳೆ ಪ್ರಸ್ತಾವನೆಯನ್ನು ಪಠಿಸುವಂತೆ ನಿರ್ದೇಶನ ಕೋರಿ ಈ ಅರ್ಜಿಯನ್ನು ಸಲ್ಲಿಸಲಾಗಿದೆ ಎಂದು ಅರ್ಜಿದಾರರ ಪರ ವಕೀಲರು ತಿಳಿಸಿದರು. ಈ ಸಂಬಂಧ ಅವರು ಶಿಕ್ಷಣದ ಹಕ್ಕಿಗೆ ಸಂಬಂಧಿಸಿದ ಸಂವಿಧಾನದ ವಿಧಿ 21J ಅನ್ನು ಉಲ್ಲೇಖಿಸಿದರು. ಶಾಲೆಗಳಲ್ಲಿ 6ನೇ ತರಗತಿಯಲ್ಲಿ ಈಗಾಗಲೇ ಪ್ರಸ್ತಾವನೆಯನ್ನು ಕಲಿಸಲಾಗುತ್ತಿದೆ ಎಂಬುದನ್ನು ಪರಿಗಣಿಸಿದ ನ್ಯಾಯಪೀಠ, ಅರ್ಜಿಯನ್ನು ವಜಾಗೊಳಿಸಿತು.

### ಕಾಂಗ್ರೆಸ್‌ಗೆ ಕೈ ಕೊಟ್ಟ AAP; ECI ವಿರುದ್ಧದ ಪ್ರತಿಭಟನೆಯಲ್ಲಿ ಭಾಗಿಯಾಗಲ್ಲ– ಸಂಜಯ್ ಸಿಂಗ್

**ನವದೆಹಲಿ:** ಭಾರತೀಯ ಚುನಾವಣಾ ಆಯೋಗದ ವಿರುದ್ಧ ಇಂಡಿಯಾ ಮೈತ್ರಿಕೂಟ ಮಂಗಳವಾರ ಹಮ್ಮಿಕೊಂಡಿರುವ ಪ್ರತಿಭಟನಾ ಮೆರವಣಿಗೆಯ ವಿಷಯದಲ್ಲಿ ವಿರೋಧ ಪಕ್ಷಗಳ ಒಕ್ಕೂಟದಲ್ಲಿ ಬಿರುಕು ಮೂಡಿದೆ. ಆಮ್ ಆದ್ಮಿ ಪಕ್ಷ ಈ ಪ್ರತಿಭಟನಾ ರ್ಯಾಲಿಯಿಂದ ದೂರ ಉಳಿಯಲು ನಿರ್ಧರಿಸಿದೆ. ಚುನಾವಣಾ ಆಯೋಗ ಮತ್ತು ಮತದಾರರ ಪಟ್ಟಿಯ ವಿಶೇಷ ತೀವ್ರ ಪರಿಷ್ಕರಣೆ ಪ್ರಕ್ರಿಯೆಗೆ ಸಂಬಂಧಿಸಿದ ವಿವಾದದ




ಕುರಿತು ಆಮ್ ಆದ್ಮಿ ಪಕ್ಷ ತನ್ನದೇ ಆದ ರೀತಿಯಲ್ಲಿ ಪ್ರತಿಭಟನೆಗಳನ್ನು ಮುಂದುವರಿಸಿದ್ದರೂ, ಮಂಗಳವಾರ ಚುನಾವಣಾ ಆಯೋಗದ ಕಚೇರಿಗೆ ಇಂಡಿಯಾ ಮೈತ್ರಿಕೂಟ ನಡೆಸಲಿರುವ ಮೆರವಣಿಗೆಯಲ್ಲಿ ತಮ್ಮ ಪಕ್ಷ ಭಾಗವಹಿಸುವುದಿಲ್ಲ ಎಂದು ಎಎಪಿ ಸಂಸದ ಸಂಜಯ್ ಸಿಂಗ್ ತಿಳಿಸಿದರು. ಈ ಪ್ರತಿಭಟನೆಗಳನ್ನು ಜನ ಚಳುವಳಿ ಎಂದು ಬಣ್ಣಿಸಿದ ಸಿಂಗ್, ಪ್ರತಿಭಟನೆಯ ಸಂದರ್ಭದಲ್ಲಿ ಎಎಪಿ ನಾಯಕರು ಪಕ್ಷದ ಬ್ಯಾನರ್‌ಗಳನ್ನು ಬಳಸುತ್ತಿಲ್ಲ ಎಂಬುದನ್ನು ಒತ್ತಿ ಹೇಳಿದರು. "ನಮ್ಮ ಪಕ್ಷ ಜಂತರ್ ಮಂತರ್‌ನಲ್ಲಿ ಮತ್ತು ದೇಶದ ವಿವಿಧ ಭಾಗಗಳಲ್ಲಿ ಪ್ರತಿದಿನವೂ ನಿರಂತರವಾಗಿ ಪ್ರತಿಭಟನೆ ನಡೆಸುತ್ತಿದೆ. ನಾವು ಪಕ್ಷದ ಬ್ಯಾನರ್‌ಗಳನ್ನು ಕೂಡ ಬಳಸುತ್ತಿಲ್ಲ, ಏಕೆಂದರೆ ಇದು ಜನರ ಚಳುವಳಿ ಮತ್ತು ದೇಶದ ನಾಗರಿಕರಿಗೆ ಸಂಬಂಧಿಸಿದ ವಿಷಯ ಎಂದು ನಾವು ನಂಬುತ್ತೇವೆ; ಇದರಲ್ಲಿ ಪ್ರತಿಯೊಬ್ಬರೂ ಭಾಗವಹಿಸಬೇಕು. ಇನ್ನು ನಾಳೆಯ ಪ್ರತಿಭಟನೆಯ ವಿಷಯಕ್ಕೆ ಬಂದರೆ, ಅದನ್ನು ಇಂಡಿಯಾ ಮೈತ್ರಿಕೂಟ ಆಯೋಜಿಸುತ್ತಿದೆ ಮತ್ತು ಆಮ್ ಆದ್ಮಿ ಪಕ್ಷವು ಅದರ ಭಾಗವಾಗಿಲ್ಲ. ಆದಾಗ್ಯೂ, ನಾವು ಈ ಹೋರಾಟವನ್ನು ನಮ್ಮದೇ ಆದ ರೀತಿಯಲ್ಲಿ ನಡೆಸುತ್ತಿದ್ದೇವೆ... ನಾವು ಪ್ರತಿಭಟನೆಯಲ್ಲಿ ಭಾಗವಹಿಸುತ್ತಿಲ್ಲ," ಎಂದು ಸಿಂಗ್ ಹೇಳಿದರು.

# ಆಕ್ಷನ್‌ನಿಂದ ಪ್ರೇಮಲೋಕ ಪ್ರವೇಶಿಸಿದ ಆಕ್ಷನ್ ಪ್ರಿನ್ಸ್

## ನಭಾ ನಟೇಶ್ ಜೊತೆಗಿನ ಕೆಮಿಸ್ಟ್ರಿಕಣ್ತುಂಬಿಕೊಳ್ಳಲು ಫ್ಯಾನ್ಸ್ ಕಾತರ

ಸ್ಯಾಂಡಲ್‌ವುಡ್‌ನ ಆಕ್ಷನ್ ಪ್ರಿನ್ಸ್ ಧ್ರುವ ಸರ್ಜಾ ಅವರಿಂದು ಜನ್ಮದಿನದ ಸಂಭ್ರಮದಲ್ಲಿದ್ದಾರೆ. 38ನೇ ಹುಟ್ಟುಹಬ್ಬ ಆಚರಿಸಿಕೊಳ್ಳುತ್ತಿರುವ ನಟನಿಗೆ ಕುಟುಂಬಸ್ಥರು, ಸಿನಿ ಸ್ನೇಹಿತರೂ ಸೇರಿದಂತೆ ಅಪಾರ ಸಂಖ್ಯೆಯ ಅಭಿಮಾನಿಗಳು ಶುಭ ಕೋರುತ್ತಿದ್ದಾರೆ. ಸೂಪರ್ ಸ್ಟಾರ್ ಕಡೆಯಿಂದಲೂ ಫ್ಯಾನ್ಸ್‌ಗೆ ಭರ್ಜರಿ ಬರ್ತ್‌ಡೇ ಟ್ರೀಟ್ ಸಿಕ್ಕಿದೆ. ಜನಪ್ರಿಯ ತಾರೆಯ ವಿಶೇಷ ದಿನದಂದು ಅವರ ನೂತನ ಪ್ಯಾನ್ ಇಂಡಿಯನ್ ಪ್ರಾಜೆಕ್ಟ್ ಅಧಿಕೃತವಾಗಿ ಘೋಷಣೆಯಾಗಿದೆ.



ಆಕ್ಷನ್ ಪ್ರಿನ್ಸ್ ಈಗ ತಮ್ಮ ಮಾಸ್ ಇಮೇಜ್‌ನಿಂದ ಹೊರಬಂದು ಹೊಚ್ಚ ಹೊಸ ಅವತಾರದಲ್ಲಿ ಪ್ರೇಕ್ಷಕರಿಗೆ ದರ್ಶನ ಕೊಡಲು ಸಜ್ಜಾಗಿದ್ದಾರೆ. ಅವರ ಮುಂದಿನ ಚಿತ್ರಕ್ಕೆ ಕೆಮಿಸ್ಟ್ರಿ ಎಂಬ ಆಕರ್ಷಕ ಶೀರ್ಷಿಕೆ ಇಡಲಾಗಿದ್ದು, ದಕ್ಷಿಣ ಚಿತ್ರರಂಗದ ಖ್ಯಾತ ನಟಿ ನಭಾ ನಟೇಶ್ ನಾಯಕಿಯಾಗಿ ಸಾಥ್ ನೀಡುತ್ತಿದ್ದಾರೆ. ದಕ್ಷಿಣ ಭಾರತದ ಖ್ಯಾತ ಚಲನಚಿತ್ರ ನಿರ್ಮಾಣ ಸಂಸ್ಥೆ ಪೀಪಲ್ ಮೀಡಿಯಾ ಫ್ಯಾಕ್ಟರಿ ಬ್ಯಾನರ್ ಅಡಿಯಲ್ಲಿ ಟಿ.ಜಿ. ವಿಶ್ವಪ್ರಸಾದ್ ಮತ್ತು ಕೃತಿ ಪ್ರಸಾದ್ ಈ ಚಿತ್ರವನ್ನು ಅದ್ಧೂರಿಯಾಗಿ ನಿರ್ಮಿಸುತ್ತಿದ್ದಾರೆ. ಯುವ ನಿರ್ದೇಶಕ ವಿಶಾಲ್ ಆತ್ರೇಯ ಈ ಚಿತ್ರಕ್ಕೆ ಆಕ್ಷನ್ ಕಟ್ ಹೇಳುತ್ತಿದ್ದಾರೆ.

**ಮಾಸ್ ಅಬ್ಬರ ಬಿಟ್ಟು ಭಾವನೆಗಳ ಲೋಕಕ್ಕೆ ಕಾಲಿಟ್ಟ ಧ್ರುವ ಸರ್ಜಾ:** ಈವರೆಗೂ ಭರ್ಜರಿ ಸಾಹಸ, ಮಾಸ್ ಡೈಲಾಗ್‌ಗಳ ಮೂಲಕವೇ ಚಿತ್ರಮಂದಿರಗಳಲ್ಲಿ ಸಿಳ್ಳೆ, ಚಪ್ಪಾಳೆ ಗಿಟ್ಟಿಸಿಕೊಳ್ಳುತ್ತಿದ್ದ ಆಕ್ಷನ್ ಪ್ರಿನ್ಸ್, ಈ ಬಾರಿ ಮನಮಿಡಿಯುವ ಪ್ರೇಮಕಥೆ ಮತ್ತು ಅಪ್ಪಟ ಕೌಟುಂಬಿಕ ಕಥಾಹಂದರವನ್ನು ಆಯ್ಕೆ ಮಾಡಿಕೊಂಡಿರುವುದು ಅಭಿಮಾನಿಗಳಲ್ಲಿ ಹೊಸ ಭರವಸೆ ಮೂಡಿಸಿದೆ. ಚಿತ್ರದಲ್ಲಿ ಧ್ರುವ ಅವರ ರೊಮ್ಯಾನ್ಸ್, ಮಮತೆ ಹಾಗೂ ಭಾವನಾತ್ಮಕ ಅಭಿನಯವನ್ನು ಕಣ್ತುಂಬಿಕೊಳ್ಳಲು ಪ್ರೇಕ್ಷಕರು ಸಜ್ಜಾಗಿದ್ದಾರೆ. ಮಾಸ್ ಆಕ್ಷನ್ ಸಿನಿಮಾಗಳ ಮೂಲಕ ಅಭಿಮಾನಿಗಳ ಮೆಚ್ಚಿನ ಹೀರೋ ಆಗಿರುವ ಧ್ರುವ, ಈಗ ಕೌಟುಂಬಿಕ ಪ್ರೇಕ್ಷಕರು, ಮಹಿಳೆಯರು ಹಾಗೂ ಯುವ ಜೋಡಿಗಳ ಹೃದಯ ಗೆಲ್ಲಲು ಹೊರಟಿದ್ದಾರೆ. **ಕುಟುಂಬ ಸಮೇತ ಸಂಭ್ರಮಿಸುವ ಅದ್ಧೂರಿ ಸಿನಿಮಾ:** ಪ್ರತಿಯೊಬ್ಬರೂ ತಮ್ಮ ವೈಯಕ್ತಿಕ ಬದುಕಿಗೆ ಕನೆಕ್ಟ್ ಮಾಡಿಕೊಳ್ಳುವಂತಹ ಕೌಟುಂಬಿಕ ಬಾಂಧವ್ಯ ಮತ್ತು ಲವ್ ಸ್ಟೋರಿ ಈ ಚಿತ್ರದ ಪ್ರಮುಖ ಆಕರ್ಷಣೆ. ಅಭಿಮಾನಿಗಳು ತಮ್ಮ ಇಡೀ ಕುಟುಂಬದೊಂದಿಗೆ ಚಿತ್ರಮಂದಿರಕ್ಕೆ ಬಂದು ಆನಂದಿಸುವಂತಹ ಸಂಪೂರ್ಣ ಮನರಂಜನೆಯನ್ನು ಚಿತ್ರತಂಡ ಹಿರಿತೆರೆ ಮೇಲೆ ಕಟ್ಟಿಕೊಡಲಿದೆ. ಧ್ರುವ ಸರ್ಜಾ ಅವರ ಭರ್ಜರಿ ಸ್ಟಾರ್‌ಡಮ್ ಜೊತೆಗೆ ಭಾವನೆಗಳನ್ನೊಳಗೊಂಡ ಈ ಸಿನಿಮಾ, ಅದ್ಧೂರಿ ಮೇಕಿಂಗ್ ಮೂಲಕವೂ ಗಮನ ಸೆಳೆಯಲಿದೆ.

**ಅನಿರೀಕ್ಷಿತ ಕಾಂಬಿನೇಷನ್, ಹೊಚ್ಚ ಹೊಸ ದೃಷ್ಟಿಕೋನ:** ಸ್ಟಾರ್ ನಟ ಧ್ರುವ ಸರ್ಜಾ ಹಾಗೂ ಯುವ ಪ್ರತಿಭೆ ವಿಶಾಲ್ ಆತ್ರೇಯ ಅವರ ಕಾಂಬಿನೇಶನ್ ಈ ಪ್ರಾಜೆಕ್ಟ್‌ನ ಮತ್ತೊಂದು ವಿಶೇಷತೆ. ಒಬ್ಬ ಖ್ಯಾತ ಮಾಸ್ ಹೀರೋ ಯುವ ನಿರ್ದೇಶಕನ ಕ್ರಿಯೇಟಿವ್ ವಿಷನ್‌ಗೆ ಕೈಜೋಡಿಸಿರುವುದು ಸಿನಿಮಾ ಮೇಲಿನ ನಿರೀಕ್ಷೆಯನ್ನು ಇಮ್ಮಡಿಗೊಳಿಸಿದೆ. ತೆಲುಗಿನ ಪೀಪಲ್ ಮೀಡಿಯಾ ಫ್ಯಾಕ್ಟರಿ ಸಂಸ್ಥೆಯು ಈಗಾಗಲೇ ಕನ್ನಡದ ಸ್ಟಾರ್ ನಟರಾದ ಸುದೀಪ್, ಗಣೇಶ್, ಉಪೇಂದ್ರ ಅವರೊಂದಿಗೆ ಕೈಜೋಡಿಸಿದೆ. ಈಗ ಧ್ರುವ ಸರ್ಜಾ ಜೊತೆಗಿನ ದೊಡ್ಡ ಪ್ರಾಜೆಕ್ಟ್ ಘೋಷಿಸಿದ್ದು, ಸ್ಯಾಂಡಲ್‌ವುಡ್‌ನಲ್ಲಿ ಗಟ್ಟಿಯಾಗಿ ಬೇರೂರುವ ಹಾಗೂ ವಿಭಿನ್ನ ಕಥೆಗಳನ್ನು ಕನ್ನಡಿಗರಿಗೆ ನೀಡುವ ಮಹತ್ವಾಕಾಂಕ್ಷೆಯನ್ನು ಹೊಂದಿದೆ. ಧ್ರುವ ಸರ್ಜಾ ಅವರ ವೃತ್ತಿಜೀವನದಲ್ಲೇ ಒಂದು ಮಹತ್ವದ ಮೈಲಿಗಲ್ಲಾಗುವ ಎಲ್ಲಾ ಲಕ್ಷಣಗಳು ಗೋಚರಿಸಿದ್ದು, ಸದ್ಯ ಪೋಸ್ಟರ್ ಸೋಷಿಯಲ್ ಮಿಡಿಯಾದಲ್ಲಿ ಪ್ರತಿಕ್ರಿಯೆ ಸ್ವೀಕರಿಸುತ್ತಿದೆ.

# ಎಲ್ಲರೂ ನನ್ನನ್ನು ಇಷ್ಟಪಡಬೇಕು ಎಂಬ ಹಠವಿಲ್ಲ, ಯಾರಿಗಾಗಿಯೂ ನಾನು ಬದಲಾಗುವುದಿಲ್ಲ

## ಟ್ರೋಲ್‌ಗಳಿಗೆ ರಶ್ಮಿಕಾ ಮಂದಣ್ಣ ಪ್ರತಿಕ್ರಿಯೆ



ಇತ್ತೀಚಿನ ದಿನಗಳಲ್ಲಿ ಸೆಲೆಬ್ರಿಟಿಗಳು ಸಾಮಾಜಿಕ ಜಾಲತಾಣಗಳಲ್ಲಿ ತೀವ್ರ ಟ್ರೋಲಿಂಗ್‌ಗೆ ಒಳಗಾಗುತ್ತಿದ್ದಾರೆ. ಐಶ್ವರ್ಯಾ ರೈ, ಕತ್ರಿನಾ ಕೈಫ್, ರಣ್‌ಬೀರ್ ಕಪೂರ್, ಸಲ್ಮಾನ್ ಖಾನ್ ಅವರಂತಹ ಖ್ಯಾತ ತಾರೆಯರು ಈಗಾಗಲೇ ವಿವಿಧ ಕಾರಣಗಳಿಗಾಗಿ ಟ್ರೋಲ್‌ಗೆ ಗುರಿಯಾಗಿದ್ದಾರೆ. ಕೊಡಗಿನ ಬೆಡಗಿ ರಶ್ಮಿಕಾ ಮಂದಣ್ಣ ಕೂಡಾ ಇದರಿಂದ ಹೊರತಲ್ಲ. ಹಲವು ಯಶಸ್ವಿ ಸಿನಿಮಾಗಳನ್ನು ಕೊಟ್ಟಿದ್ದೂ, ಆರಂಭದ ದಿನಗಳಿಂದಲೂ ಆನ್‌ಲೈನ್ ದಾಳಿಗೆ ಒಳಗಾಗುತ್ತಲೇ ಬಂದಿದ್ದಾರೆ. ಇದೀಗ, ತಮ್ಮ ವಿರುದ್ಧ ಆನ್‌ಲೈನ್‌ನಲ್ಲಿ ನಡೆಯುತ್ತಿರುವ ಟ್ರೋಲಿಂಗ್‌ಗೆ ಖಡಕ್ ಉತ್ತರ ನೀಡಿದ್ದಾರೆ. ಪ್ರತಿಯೊಬ್ಬರೊಂದಿಗೂ ಸ್ನೇಹಪರ ಆಗಿರುವುದನ್ನು ಕೆಲವರು ಮೆಚ್ಚುವುದಿಲ್ಲ ಎಂದು ಪ್ರಸ್ತಾಪಿಸಿದರು. ಆದರೆ, ಅಂತಹ ಟೀಕೆಗಳಿಗಾಗಿ ತಾವು ತಮ್ಮ ನಡವಳಿಕೆಯನ್ನು ಬದಲಾಯಿಸಿಕೊಳ್ಳುವುದಿಲ್ಲ ಎಂದು ಕಿರಿಕ್ ಪಾರ್ಟಿ ನಟಿ ಸ್ಪಷ್ಟಪಡಿಸಿದರು. ಬಿಡುಗಡೆ ಹೊಸ್ತಿಲಿನಲ್ಲಿರುವ 'ರಣಬಾಲಿ' ಚಿತ್ರದ ಪ್ರಚಾರದ ಅಂಗವಾಗಿ ಭಾಗಿಯಾಗಿದ್ದ ಸಂದರ್ಶನವೊಂದರಲ್ಲಿ ಬಹುಭಾಷಾ ನಟಿ ತಮ್ಮ ಅಭಿಪ್ರಾಯಗಳನ್ನು ಹಂಚಿಕೊಂಡರು.

"ನಟಿಸುವ ಅಗತ್ಯವಿಲ್ಲ. ನನ್ನ ಪ್ರಕಾರ, ಎಲ್ಲರೊಂದಿಗೆ ಒಳ್ಳೆಯತನದಿಂದಿರುವುದು ದೌರ್ಬಲ್ಯವಲ್ಲ. ನಾನು ಇರುವ ವಾತಾವರಣದಲ್ಲಿ ಸಕಾರಾತ್ಮಕತೆಯನ್ನು ಮೂಡಿಸಲು ಬಯಸುವುದರಿಂದಲೇ ನಾನು ಸದಾ ಉತ್ಸಾಹದಿಂದ ಇರುತ್ತೇನೆ. ಇದನ್ನು ನೀವು ಏನು ಬೇಕಾದರೂ ಕರೆಯಬಹುದು. ಎಲ್ಲರೂ ನನ್ನನ್ನು ಇಷ್ಟಪಡಬೇಕೆಂಬ ಹಠ ನನಗಿಲ್ಲ. ಆದರೆ ಈ ರೀತಿ ಇರುವುದೇ ನನಗೆ ಇಷ್ಟ. ನಾನು ನಾನಾಗಿಯೇ ಇರಲು ಬೇರೊಬ್ಬರಂತೆ ನಟಿಸುವ ಅಗತ್ಯವಿಲ್ಲ ಮತ್ತು ಇತರರಿಗಾಗಿ ನನ್ನನ್ನು ಬದಲಾಯಿಸಿಕೊಳ್ಳಲು ಸಾಧ್ಯವಿಲ್ಲ. ನನ್ನ ಈ ಉತ್ಸಾಹಭರಿತ ಸ್ವಭಾವವು ನನ್ನ ಕುಟುಂಬ ಮತ್ತು ಸ್ನೇಹಿತರನ್ನು ಸಂತೋಷವಾಗಿರಿಸುತ್ತದೆ" ಎಂದು ಹೇಳಿದರು. ಈ ವೇಳೆ ಪತಿ ವಿಜಯ್ ದೇವರಕೊಂಡ ಕೂಡಾ ನಟಿಗೆ ತಮ್ಮ ಬೆಂಬಲ ನೀಡಿದರು. ರಶ್ಮಿಕಾ ಅವರ ಅಭಿಮಾನಿಗಳೊಂದಿಗೆ ಆತ್ಮೀಯ ಹಾಗೂ ಸ್ನೇಹಪರ ರೀತಿಯಲ್ಲಿ ಬೆರೆಯುವುದನ್ನು ಬಹುತೇಕರು ಮೆಚ್ಚುತ್ತಾರೆ. ಆದರೆ, ಅವರ ಇದೇ ಗುಣವು ಅವರನ್ನು ಆನ್‌ಲೈನ್ ಟ್ರೋಲ್‌ಗಳಿಗೆ ಗುರಿಯಾಗುವಂತೆ ಮಾಡಿದೆ. ಇತ್ತೀಚೆಗೆ ಸಾಮಾಜಿಕ ಜಾಲತಾಣಗಳಲ್ಲಿ ಕೆಲವರು ಅವರ ನಡವಳಿಕೆಯನ್ನು ಓವರ್ ಆಕ್ಟಿಂಗ್ ಎಂದು ಟೀಕಿಸಿದ್ದಾರೆ. ಈ ಹಿನ್ನೆಲೆ, 'ಸಾರ್ವಜನಿಕರ ಮೆಚ್ಚುಗೆ ಪಡೆಯುವ ಉದ್ದೇಶದಿಂದ ತಾವು ಹೀಗೆ ವರ್ತಿಸುತ್ತಿಲ್ಲ' ಎಂದು ಮಂದಣ್ಣ ಸ್ಪಷ್ಟಪಡಿಸಿದ್ದಾರೆ. ಇದೇ ಸಂದರ್ಶನದಲ್ಲಿ, ಅವರು ತಮ್ಮ ಮುಂಬರುವ 'ರಣಬಾಲಿ' ಚಿತ್ರದ ಕುರಿತಾಗಿಯೂ ಇಂಟ್ರೆಸ್ಟಿಂಗ್ ವಿಷಯಗಳನ್ನು ಹಂಚಿಕೊಂಡರು. ಈ ಚಿತ್ರವು ತಮಗೆ ಅತ್ಯಂತ ವಿಶೇಷವಾದುದು ಎಂದು ಹೇಳಿದ ರಶ್ಮಿಕಾ, ಈ ಸಿನಿಮಾ ಒಪ್ಪಿಕೊಂಡಿದ್ದರ ಹಿಂದಿನ ಕಾರಣವನ್ನೂ ವಿವರಿಸಿದರು. "ರಾಹುಲ್ ಸಂಕೃತ್ಯಾನ್ ನಿರ್ದೇಶನದ ಚಿತ್ರವೊಂದರಲ್ಲಿ ನಟಿಸಬೇಕು ಎಂಬುದು ನನ್ನ ಬಹುಕಾಲದ ಬಯಕೆಯಾಗಿತ್ತು. ಹಾಗಾಗಿ ಈ ಅವಕಾಶವನ್ನು ಕಳೆದುಕೊಳ್ಳಲು ನಾನು ಇಷ್ಟಪಡಲಿಲ್ಲ. ವಿಜಯ್ ದೇವರಕೊಂಡ ಅವರು ಇದರಲ್ಲಿ ನಾಯಕನಾಗಿ ನಟಿಸುತ್ತಿದ್ದಾರೆ ಎಂದು ತಿಳಿದ ತಕ್ಷಣವೇ ನಾನು ಇದಕ್ಕೆ ಒಪ್ಪಿಗೆ ಸೂಚಿಸಿದೆ. ವಿಜಯ್ ಅವರೊಂದಿಗೆ ತೆರೆ ಹಂಚಿಕೊಂಡು ಬಹಳ ಕಾಲವಾಗಿತ್ತು, ಅದಕ್ಕಾಗಿಯೇ ಈ ಸಿನಿಮಾ ನನಗೆ ತುಂಬಾ ವಿಶೇಷವಾಗಿದೆ" ಎಂದು ಹೇಳಿದರು.

ಇನ್ನೂ, ತಮ್ಮ 'ಜಯಮ್ಮ' ಪಾತ್ರದ ಕುರಿತು ಮಾತನಾಡುತ್ತಾ, ಅದೊಂದು ಅತ್ಯಂತ ಭಾವನಾತ್ಮಕ ಪಾತ್ರವೆಂದು ಬಣ್ಣಿಸಿದರು. ಆ ಪಾತ್ರವು ಪ್ರೇಕ್ಷಕರ ಮನಸ್ಸಿಗೆ ಆಳವಾಗಿ ನಾಟುತ್ತದೆ ಎಂಬ ವಿಶ್ವಾಸ ವ್ಯಕ್ತಪಡಿಸಿದರು.

ಅಜಯ್ – ಅತುಲ್ ಜೋಡಿಯು ಈ ಚಿತ್ರಕ್ಕೆ ಸಂಗೀತ ಸಂಯೋಜನೆ ಮಾಡುತ್ತಿದ್ದು, ಈಗಾಗಲೇ ಬಿಡುಗಡೆಯಾಗಿರುವ ಟೀಸರ್‌ಗೆ ಅವರು ನೀಡಿರುವ ಹಿನ್ನೆಲೆ ಸಂಗೀತವು ಅತ್ಯುತ್ತಮವಾಗಿತ್ತು. 'ಮೈತ್ರಿ ಮೂವಿ ಮೇಕರ್ಸ್' ಈ ಪ್ರತಿಷ್ಠಿತ ಚಿತ್ರವನ್ನು ನಿರ್ಮಿಸುತ್ತಿದ್ದು, 'ಟಿ-ಸಿರೀಸ್' ಪ್ರಸ್ತುತಪಡಿಸುತ್ತಿದೆ. ದಸರಾ ಹಬ್ಬದ ಸಂದರ್ಭಕ್ಕೆ ಹೊಂದಿಕೆಯಾಗುವಂತೆ, ಅಕ್ಟೋಬರ್ 16ರಂದು ಪ್ರಪಂಚದಾದ್ಯಂತ ಚಿತ್ರಮಂದಿರಗಳಲ್ಲಿ ಬಿಡುಗಡೆಯಾಗಲಿದೆ. 'ರಣಬಾಲಿ'ಯಲ್ಲದೇ ರಶ್ಮಿಕಾ ಅವರ ಕೈಯಲ್ಲಿ ಇನ್ನೂ ಹಲವು ಪ್ರತಿಷ್ಠಿತ ಯೋಜನೆಗಳಿವೆ. ದೇಶದ ಹೆಮ್ಮೆಯ ಸಂಗೀತ ದಿಗ್ಗಜ ದಿ.ಎಂ.ಎಸ್.ಸುಬ್ಬುಲಕ್ಷ್ಮಿ ಅವರ ಜೀವನಚರಿತ್ರೆಯನ್ನಾಧರಿಸಿದ ಚಿತ್ರದಲ್ಲಿ ನಟಿ ಪ್ರಮುಖ ಪಾತ್ರವನ್ನು ನಿರ್ವಹಿಸುತ್ತಿದ್ದಾರೆ. 'ಜೆರ್ಸಿ' ಚಿತ್ರದ ಮೂಲಕ ಖ್ಯಾತಿ ಪಡೆದ ಗೌತಮ್ ತಿನ್ನನೂರಿ ಈ ಚಿತ್ರವನ್ನು ನಿರ್ದೇಶಿಸುತ್ತಿದ್ದು, ಇದರ ಉದ್ಘಾಟನಾ ಸಮಾರಂಭವು ಇತ್ತೀಚೆಗೆ ಚೆನ್ನೈನಲ್ಲಿ ಅದ್ಧೂರಿಯಾಗಿ ನಡೆಯಿತು. ಇದರೊಂದಿಗೆ, ಚೊಚ್ಚಲ ನಿರ್ದೇಶಕ ರವೀಂದ್ರ ಪುಲ್ಲೆ ನಿರ್ದೇಶನದ 'ಮೈಸಾ' ಎಂಬ ಮಹಿಳಾ ಪ್ರಧಾನ ಚಿತ್ರದಲ್ಲೂ ನಟಿಸುತ್ತಿದ್ದಾರೆ. 'ಮೈಸಾ' ನವೆಂಬರ್ 27ರಂದು ವಿಶ್ವಾದ್ಯಂತ ಬಿಡುಗಡೆಯಾಗಲಿದೆ.

# 20Mಗೂ ಹೆಚ್ಚು ವೀಕ್ಷಣೆಯಾದ ಜೈಲರ್ 2 ಟ್ರೇಲರ್




ಭಾರತೀಯ ಚಿತ್ರರಂಗದ ಬಹುಬೇಡಿಕೆ ನಟ ರಜನಿಕಾಂತ್ ಮುಖ್ಯಭೂಮಿಕೆಯ ಬಹುನಿರೀಕ್ಷಿತ ಚಿತ್ರ 'ಜೈಲರ್ 2' ಬಿಡುಗಡೆಗೂ ಮುನ್ನವೇ ಬಾಕ್ಸ್ ಆಫೀಸ್‌ನಲ್ಲಿ ಭಾರಿ ಸದ್ದು ಮಾಡುತ್ತಿದೆ. ಚಿತ್ರ ನಿರ್ಮಾಣ ಸಂಸ್ಥೆಯ ಪ್ರಕಾರ, ಮುಂಗಡ ಬುಕಿಂಗ್ ಆರಂಭವಾದ ಕೇವಲ 12 ಗಂಟೆಗಳಲ್ಲೇ ನೆಲ್ಸನ್ ದಿಲೀಪ್ ಕುಮಾರ್ ನಿರ್ದೇಶನದ ಈ ಚಿತ್ರವು ಅಮೆರಿಕದಲ್ಲಿ 400ಏ ಡಾಲರ್ ಗಳಿಕೆಯ ಗಡಿ ದಾಟಿದೆ.

ಅಕ್ಟೋಬರ್ 14ರಂದು ಚಿತ್ರದ ಪ್ರೀಮಿಯರ್ ಶೋ ಜರುಗಲಿದ್ದು, ಸಾಗರೋತ್ತರ ಪ್ರದೇಶಗಳಲ್ಲಿ ಈಗಾಗಲೇ ಅಡ್ವಾನ್ಸ್ ಟಿಕೆಟ್ಸ್ ದೊಡ್ಡ ಮೊತ್ತದಲ್ಲಿ ಮಾರಾಟವಾಗುತ್ತಿದೆ. ಕರುನಾಡ ಚಕ್ರವರ್ತಿ ಶಿವರಾಜ್‌ಕುಮಾರ್ ಪ್ರಮುಖ ಪಾತ್ರದಲ್ಲಿರುವ ಈ ಸಿನಿಮಾ ದಸರಾ ಹಬ್ಬದ ಅವಧಿಗೆ ಹೊಂದಿಕೆಯಾಗುವಂತೆ ಅಕ್ಟೋಬರ್ 15ರಂದು ವಿಶ್ವದಾದ್ಯಂತ ಚಿತ್ರಮಂದಿರಗಳಲ್ಲಿ ಬಿಡುಗಡೆಯಾಗಲಿದೆ.

ಯುಎಸ್‌ಎ ಪ್ರೀಮಿಯರ್‌ಗಳಿಗಾಗಿ ಮುಂಗಡ ಬುಕಿಂಗ್ ವಿಷಯದಲ್ಲಿ, ಈ ಹಿಂದೆ 10,000+ ಟಿಕೆಟ್ಸ್ ಮಾರಾಟವಾಗಿದ್ದವು. ಆಗ ಚಿತ್ರ ತಯಾರಕರು ಸಿನಿಪ್ರಿಯರ ಸದ್ದನ್ನು "ತಲೈವರ್ ಫೀವರ್" ಅಂತಾರಾಷ್ಟ್ರೀಯ ಮಾರುಕಟ್ಟೆಗಳನ್ನು ಸ್ವಾಧೀನಪಡಿಸಿಕೊಳ್ಳುವ ಸಂಕೇತವೆಂದು ಕರೆದಿದ್ದರು.

ಇತ್ತೀಚಿನ ಮುಂಗಡ ಬುಕಿಂಗ್ ಅಂಕಿ – ಅಂಶಗಳು, ರಜನಿಕಾಂತ್ ಅಭಿನಯದ ಈ ಚಿತ್ರವು ವಿದೇಶಗಳಲ್ಲಿ ಭರ್ಜರಿ ಆರಂಭವನ್ನು ಕಾಣಲಿದೆ ಎಂಬುದನ್ನು ಸೂಚಿಸುತ್ತವೆ. ಅಮೆರಿಕದಾದ್ಯಂತ ಚಿತ್ರಮಂದಿರಗಳಲ್ಲಿ ಬುಕಿಂಗ್ ಆರಂಭವಾಗಿರುವುದರಿಂದ, ಬಿಡುಗಡೆಯ ದಿನಾಂಕ ಹತ್ತಿರವಾಗುತ್ತಿದ್ದಂತೆ ಟಿಕೆಟ್ ಮಾರಾಟದಲ್ಲಿ ಮತ್ತಷ್ಟು ಏರಿಕೆ ಕಂಡು ಬರುವ ನಿರೀಕ್ಷೆಯಿದೆ.

**20 ಮಿಲಿಯನ್‌ಗೂ ಹೆಚ್ಚು ವೀಕ್ಷಣೆಯಾದ ಟ್ರೇಲರ್:** ಸೋಮವಾರ ಸಂಜೆ ಬಿಡುಗಡೆಯಾದ ಈ ಟ್ರೇಲರ್ 24 ಗಂಟೆಯೊಳಗೆ 20 ಮಿಲಿಯನ್ ಗೂ ಹೆಚ್ಚು ವೀಕ್ಷಣೆಯಾಗಿದೆ. ಟ್ರೇಲರ್ ಜನಪ್ರಿಯ ಪಾತ್ರವಾದ 'ಟೈಗರ್ ಮುತ್ತುವೇಲ್ ಪಾಂಡಿಯನ್' ಆಗಿ ರಜನಿಕಾಂತ್ ಅವರನ್ನು ಮತ್ತೆ ತೆರೆಮೇಲೆ ತಂದಿದೆ. ಮುತ್ತುವೇಲ್ ಪಾಂಡಿಯನ್ ತಮ್ಮ ಜೀವನದ ಶಾಂತಿಯುತ ಹಂತದಲ್ಲಿರುವಂತೆ ಟ್ರೇಲರ್‌ನ ಆರಂಭಿಕ ದೃಶ್ಯಗಳು ತೋರಿಸಿವೆಯಾದರೂ ಶೀಘ್ರದಲ್ಲೇ ಅವರ ಪಾಸ್ಟ್ ಅವರನ್ನು ಮತ್ತೆ ಹಿಂಸಾಚಾರದ ಜಗತ್ತಿಗೆ ಎಳೆ ತರುತ್ತದೆ. ರಜನಿಕಾಂತ್ ಅವರ ವಿಶಿಷ್ಟ ಶೈಲಿ, ಪ್ರಭಾವಶಾಲಿ ಕ್ಷಣಗಳು ಮತ್ತು ಸಾಹಸ ದೃಶ್ಯಗಳು ಟ್ರೇಲರ್‌ನಲ್ಲಿ ಎದ್ದು ಕಾಣುತ್ತವೆ. ಈ ಸೀಕ್ವೆಲ್ ದೊಡ್ಡ ತಾರಾಗಣವನ್ನೂ ಒಳಗೊಂಡಿದೆ. ರಜನಿಕಾಂತ್ ಅವರೊಂದಿಗೆ ವಿದ್ಯಾ ಬಾಲನ್, ಮಿಥುನ್ ಚಕ್ರವರ್ತಿ, ಜಾಕಿ ಶ್ರಾಫ್ ಮತ್ತು ಮೋಹನ್‌ಲಾಲ್ ಕಾಣಿಸಿಕೊಂಡರೆ, ಎಸ್.ಜೆ.ಸೂರ್ಯ ಪ್ರಮುಖ ಖಳನಾಯಕನ ಪಾತ್ರದಲ್ಲಿ ನಟಿಸಿದ್ದಾರೆ. ಕರುನಾಡ ಚಕ್ರವರ್ತಿ ಶಿವರಾಜ್‌ಕುಮಾರ್ ಪ್ರಮುಖ ಪಾತ್ರದಲ್ಲಿದ್ದಾರೆ. ಯೋಗಿ ಬಾಬು ಕೂಡಾ ಮರಳಿದ್ದಾರೆ.

2023ರ ಬ್ಲಾಕ್‌ಬಸ್ಟರ್ 'ಜೈಲರ್'ನ ಮುಂದುವರಿದ ಭಾಗ ಇದಾಗಿದೆ. ನೆಲ್ಸನ್ ದಿಲೀಪ್‌ಕುಮಾರ್ ನಿರ್ದೇಶಕರಾಗಿ ಮರಳುತ್ತಿದ್ದು, ಅನಿರುದ್ಧ್ ರವಿಚಂದರ್ ಸಂಗೀತ ಸಂಯೋಜಕರಾಗಿ ಮತ್ತೆ ಕಾರ್ಯನಿರ್ವಹಿಸುತ್ತಿದ್ದಾರೆ. ಮೊದಲ 'ಜೈಲರ್' ಚಿತ್ರವು ರಜನಿಕಾಂತ್ ಅವರ ವೃತ್ತಿಜೀವನದ ಬ್ಲಾಕ್ ಬಸ್ಟರ್ ಚಿತ್ರಗಳಲ್ಲಿ ಒಂದಾಗಿದ್ದು, ವರದಿಯ ಪ್ರಕಾರ ವಿಶ್ವಾದ್ಯಂತ 600 ಕೋಟಿ ರೂಪಾಯಿಗೂ ಹೆಚ್ಚು ಗಳಿಕೆ ಮಾಡಿತ್ತು. ಈ ಯಶಸ್ಸು ಸೀಕ್ವೆಲ್ ಮೇಲಿನ ನಿರೀಕ್ಷೆಗಳನ್ನು ಹೆಚ್ಚಿಸಿದ್ದು, ಇದು 2026ರ ಅತ್ಯಂತ ನಿರೀಕ್ಷಿತ ತಮಿಳು ಚಲನಚಿತ್ರಗಳಲ್ಲಿ ಒಂದಾಗಿ ಸ್ಥಾನ ಪಡೆದಿದೆ.

ಥಿಯೇಟ್ರಿಕಲ್ ರಿಲೀಸ್‌ಗೂ ಮುನ್ನವೇ, ಜೈಲರ್ 2 ಬೃಹತ್ ಪೋಸ್ಟ್– ಥಿಯೇಟ್ರಿಕಲ್ ಸ್ಟ್ರೀಮಿಂಗ್ ಒಪ್ಪಂದವನ್ನು ಮಾಡಿಕೊಂಡಿದೆ ಎಂದು ವರದಿಯಾಗಿದೆ. ಹೌದು, ಈ ಚಿತ್ರವನ್ನು ಅಮೆಜಾನ್ ಪ್ರೈಮ್ ವಿಡಿಯೋ ಸುಮಾರು 160 ಕೋಟಿ ರೂ.ಗೆ ಪಡೆದುಕೊಂಡಿದೆ ಎನ್ನಲಾಗಿದೆ.

ಅಕ್ಟೋಬರ್ 15 ರಂದು ವಿಶ್ವಾದ್ಯಂತ ಚಿತ್ರಮಂದಿರಗಳಲ್ಲಿ ಬಿಡುಗಡೆಯಾಗುವ ಮುನ್ನ, ಅಕ್ಟೋಬರ್ 14ರಂದು ವಿದೇಶಗಳಲ್ಲಿ ಪ್ರೀಮಿಯರ್ ಪ್ರದರ್ಶನ ಕಾಣಲಿದೆ. ಎಷ್ಟರ ಮಟ್ಟಿಗೆ ಯಶಸ್ಸು ಕಾಣಲಿದೆ ಅನ್ನೋದು ಶೀಘ್ರದಲ್ಲೇ ತಿಳಿಯಲಿದೆ.

## ಚಿನ್ನಕ್ಕೆ 1 ಕೋಟಿ, ಬೆಳ್ಳಿಗೆ 75 ಲಕ್ಷ, ಕಂಚಿಗೆ 50 ಲಕ್ಷ ಬಹುಮಾನ

# ಏಷ್ಯನ್ ಗೇಮ್ಸ್ ಪದಕ ವಿಜೇತರಿಗೆ ನಗದು ಪುರಸ್ಕಾರ ಭಾರಿ ಹೆಚ್ಚಳ

ಪದಕ ವಿಜೇತ ಕ್ರೀಡಾಪಟುಗಳಿಗೆ ನಗದು ಪುರಸ್ಕಾರ ಹೆಚ್ಚಿಸಿ ಸರ್ಕಾರ ಆದೇಶ ಹೊರಡಿಸಿದೆ. ಈ ಸಂಬಂಧ ಚಿನ್ನದ ಗೆದ್ದ ಕ್ರೀಡಾ ಪಟುಗಳ ನಗದು ಪ್ರೋತ್ಸಾಹಧನವನ್ನು 1 ಕೋಟಿ ರೂಪಾಯಿಗೆ ಹೆಚ್ಚಿಸಿದೆ.

ಏಷ್ಯನ್ ಗೇಮ್ಸ್–2026ರಲ್ಲಿ ಪದಕಗಳನ್ನು ಗೆದ್ದು ದೇಶ ಹಾಗೂ ರಾಜ್ಯಕ್ಕೆ ಕೀರ್ತಿ ತಂದ ಕರ್ನಾಟಕದ ಹೆಮ್ಮೆಯ ಕ್ರೀಡಾಪಟುಗಳಿಗೆ ವಿಧಾನಸೌಧದಲ್ಲಿ ಮಂಗಳವಾರ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಗೌರವಿಸಿ, ಹೃತ್ಪೂರ್ವಕ ಅಭಿನಂದನೆ ಸಲ್ಲಿಸಿದರು.

ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ವತಿಯಿಂದ ಆಯೋಜಿಸಲಾಗಿದ್ದ ಈ ಸಮಾರಂಭದಲ್ಲಿ ಕ್ರೀಡಾಪಟುಗಳಿಗಾಗಿ ಹಲವು ಪ್ರಮುಖ ಮತ್ತು ಐತಿಹಾಸಿಕ ಯೋಜನೆ ಹಾಗೂ ಪ್ರೋತ್ಸಾಹಕಗಳನ್ನು ಘೋಷಿಸಲಾಗಿದೆ.

**ಕ್ರೀಡಾಪಟುಗಳಿಗೆ ಇದೇ ಮೊದಲ ಬಾರಿಗೆ ನಗದು ಪ್ರೋತ್ಸಾಹ ಧನ:** ಏಷ್ಯನ್ ಗೇಮ್ಸ್–2026ರಲ್ಲಿ ಭಾಗವಹಿಸಲು ಅರ್ಹತೆ ಪಡೆದು ಸ್ಪರ್ಧಿಸಿದ ಕರ್ನಾಟಕದ 20 ಕ್ರೀಡಾಪಟುಗಳಿಗೆ ಇದೇ ಮೊದಲ ಬಾರಿಗೆ ತಲಾ ರೂ. 5 ಲಕ್ಷ ನಗದು ಪ್ರೋತ್ಸಾಹ ಧನವನ್ನು ಸರ್ಕಾರ ಮಂಜೂರು ಮಾಡಿದೆ. ಈ ಯೋಜನೆಯಡಿ ಅಥ್ಲೆಟಿಕ್ಸ್‌ನ ಯಶಸ್ ಪಾಲಾಕ್ಷ, ಸುಪ್ರಿಯಾ ಸಿಂಡಿಗೆರೆ ಬಸವರಾಜು, ಉನ್ನತಿ ಅಯ್ಯಪ್ಪ, ಎಂ.ಆರ್. ಪೂವಮ್ಮ, ಸ್ನೇಹಾ ಎಸ್.ಎಸ್., ಸಿಂಧು ಶ್ರೀ, ಬ್ಯಾಡ್ಮಿಂಟನ್‌ನ ಆಯುಷ್ ಶೆಟ್ಟಿ, ಕ್ರಿಕೆಟ್‌ನ ಶ್ರೇಯಾಂಕಾ ಆರ್. ಪಾಟೀಲ್, ಸೈಕ್ಲಿಂಗ್ ಟ್ರ್ಯಾಕ್‌ನ ಕೀರ್ತಿ ರಂಗಸ್ವಾಮಿ, ಈಕ್ವೆಸ್ಟ್ರಿಯನ್‌ನ ಫವಾದ್ ಮಿರ್ಜಾ, ಗಾಲ್ಫ್‌ನ ಅದಿತಿ ಅಶೋಕ್, ಪ್ರಣವಿ ಎಸ್. ಅರಸ್, ಹಾಕಿ ಆಟಗಾರ ಮೋಹಿತ್ ಹೆಚ್. ಎಸ್., ಶೂಟಿಂಗ್‌ನ ತಿಲೋತ್ತಮಾ ಸೇನ್, ಈಜುಪಟುಗಳಾದ ಆಕಾಶ್ ಮಣಿ, ಶ್ರೀಹರಿ ನಟರಾಜ್, ದಕ್ಷಿಣ್ ಎಸ್., ಅನೀಶ್ ಗೌಡ, ಟೇಬಲ್ ಟೆನ್ನಿಸ್‌ನ ಯಶಸ್ವಿನಿ ಘೋರ್ಪಡೆ ಹಾಗೂ ಸ್ಪೋರ್ಟ್ಸ್ ಕ್ಲೈಂಬಿಂಗ್‌ನ ದೀಪು ಮಲ್ಲೇಶ್ ಅವರು ಈ ನಗದು ಪ್ರೋತ್ಸಾಹಧನಕ್ಕೆ ಭಾಜನರಾಗಿದ್ದಾರೆ.

**ನಗದು ಪುರಸ್ಕಾರ ಮೊತ್ತ ಭಾರಿ ಹೆಚ್ಚಳ:** ಏಷ್ಯನ್ ಗೇಮ್ಸ್ ಪದಕ ವಿಜೇತರಿಗೆ ನೀಡಲಾಗುತ್ತಿದ್ದ ನಗದು ಪುರಸ್ಕಾರ ಮೊತ್ತವನ್ನು ರಾಜ್ಯ ಸರ್ಕಾರ ಪರಿಷ್ಕರಿಸಿ ಗಮನಾರ್ಹವಾಗಿ ಹೆಚ್ಚಿಸಿದೆ. ಈ ಹಿಂದೆ ಚಿನ್ನದ ಪದಕಕ್ಕೆ ರೂ. 35 ಲಕ್ಷ, ಬೆಳ್ಳಿ ಪದಕಕ್ಕೆ ರೂ. 25 ಲಕ್ಷ ಹಾಗೂ ಕಂಚಿನ ಪದಕಕ್ಕೆ ರೂ. 15 ಲಕ್ಷ ನೀಡಲಾಗುತ್ತಿತ್ತು. ಇದೀಗ ಪರಿಷ್ಕೃತ ಆದೇಶದಂತೆ ಚಿನ್ನದ ಪದಕ ವಿಜೇತರಿಗೆ ರೂ. 1 ಕೋಟಿ, ಬೆಳ್ಳಿ ಪದಕ ವಿಜೇತರಿಗೆ ರೂ. 75 ಲಕ್ಷ ಮತ್ತು ಕಂಚಿನ ಪದಕ ವಿಜೇತರಿಗೆ ರೂ. 50 ಲಕ್ಷ ನಗದು ಬಹುಮಾನವನ್ನು ನಿಗದಿಪಡಿಸಲಾಗಿದೆ.

**'ಗುರಿ: ಒಲಿಂಪಿಕ್ಸ್' ಯೋಜನೆಗೆ ಸೇರ್ಪಡೆ:** ಮುಂಬರುವ ಒಲಿಂಪಿಕ್ ಕ್ರೀಡಾಕೂಟವನ್ನು ಗಮನದಲ್ಲಿಟ್ಟುಕೊಂಡು ಏಷ್ಯನ್ ಗೇಮ್ಸ್ ಪದಕ ವಿಜೇತರಾದ ಎಂ.ಆರ್. ಪೂವಮ್ಮ, ಸ್ನೇಹಾ ಎಸ್.ಎಸ್., ಶ್ರೇಯಾಂಕಾ ಪಾಟೀಲ್ ಹಾಗೂ ಕಾಮನ್‌ವೆಲ್ತ್ ಗೇಮ್ಸ್ ಪದಕ ವಿಜೇತೆ ಶಿಲ್ಪಾ ಕೆ.ಎಸ್. ಅವರನ್ನು 2026–27ನೇ ಸಾಲಿನ 'ಗುರಿ ಒಲಿಂಪಿಕ್ಸ್' ಯೋಜನೆಗೆ ಸೇರ್ಪಡೆಗೊಳಿಸಲಾಗಿದೆ. ಈ ಕ್ರೀಡಾಪಟುಗಳಿಗೆ ಒಲಿಂಪಿಕ್ ಪೂರ್ವ ತರಬೇತಿ ಮತ್ತು ಸಿದ್ಧತೆಗಾಗಿ ಪ್ರಸ್ತುತ ಸಾಲಿನಲ್ಲಿ ತಲಾ ರೂ. 10 ಲಕ್ಷ ನಗದು ಪ್ರೋತ್ಸಾಹ ಧನ ನೀಡಲಾಗುವುದು ಎಂದು ಪ್ರಕಟಣೆಯಲ್ಲಿ ತಿಳಿಸಿದೆ. ಏಷ್ಯನ್ ಗೇಮ್ಸ್–2026ರಲ್ಲಿ ಪದಕ ಗೆದ್ದು ದೇಶ ಹಾಗೂ ರಾಜ್ಯಕ್ಕೆ ಕೀರ್ತಿ ತಂದ ಕರ್ನಾಟಕದ ಕ್ರೀಡಾಪಟುಗಳನ್ನು ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಹಾಗೂ ಉಪ ಮುಖ್ಯಮಂತ್ರಿಗಳು ಹಾಗೂ ಯುವ ಸಬಲೀಕರಣ ಮತ್ತು ಕ್ರೀಡಾ ಸಚಿವರಾದ ಡಾ. ಜಿ. ಪರಮೇಶ್ವರ ಅವರು ವಿಧಾನಸೌಧದಲ್ಲಿ ಮಂಗಳವಾರ ಸನ್ಮಾನಿಸಿ ಅಭಿನಂದಿಸಿದರು.

ಏಷ್ಯನ್ ಗೇಮ್ಸ್‌ನಲ್ಲಿ ರಾಜ್ಯದ ಕ್ರೀಡಾಪಟುಗಳು ತೋರಿದ ಸಾಧನೆಯನ್ನು ಗೌರವಿಸುವುದರ ಜೊತೆಗೆ, ಕರ್ನಾಟಕದ ಕ್ರೀಡಾ ಪ್ರತಿಭೆಗಳಿಗೆ ಹೆಚ್ಚಿನ ಆರ್ಥಿಕ ಪ್ರೋತ್ಸಾಹ, ಉದ್ಯೋಗ ಭದ್ರತೆ ಹಾಗೂ ಅಂತಾರಾಷ್ಟ್ರೀಯ ಮಟ್ಟದ ಸ್ಪರ್ಧೆಗಳಿಗೆ ಅಗತ್ಯ ನೆರವು ಕಲ್ಪಿಸುವ ಉದ್ದೇಶದಿಂದ ಹಲವು ಮಹತ್ವದ ಕ್ರಮಗಳನ್ನು ಕೈಗೊಳ್ಳಲಾಗಿದೆ ಎಂದು ಡಾ. ಜಿ. ಪರಮೇಶ್ವರ್ ಅವರು ತಿಳಿಸಿದರು. ಕ್ರೀಡಾಪಟುಗಳು ತಮ್ಮ ಸಾಧನೆಯ ನಂತರ ಉದ್ಯೋಗದ ಬಗ್ಗೆ ಆತಂಕಪಡಬೇಕಾದ ಪರಿಸ್ಥಿತಿ ಇರಬಾರದು. ಕ್ರೀಡಾ ಸಾಧನೆಗೆ ಗೌರವ ನೀಡುವುದರ ಜೊತೆಗೆ ಅವರ ಮುಂದಿನ ಬದುಕಿಗೂ ಭದ್ರತೆ ನೀಡಬೇಕು ಎಂಬ ಉದ್ದೇಶದಿಂದ ಈ ಕ್ರಮ ಕೈಗೊಳ್ಳಲಾಗಿದೆ ಎಂದು ಪರಮೇಶ್ವರ್ ತಿಳಿಸಿದರು.



### ಪರಿಷ್ಕೃತ ಬಹುಮಾನ ಪಡೆದ ಪದಕ ವಿಜೇತರು

ಈ ಬಾರಿ ಪದಕ ಗೆದ್ದ 8 ಕ್ರೀಡಾಪಟುಗಳಿಗೆ ಹೆಚ್ಚಿಸಿದ ನಗದು ಬಹುಮಾನದ ಜೊತೆಗೆ, ಕ್ರೀಡಾಕೂಟದಲ್ಲಿ ಭಾಗವಹಿಸಿದ್ದಕ್ಕಾಗಿ ನೀಡಲಾಗುವ ರೂ. 5 ಲಕ್ಷ ಹೆಚ್ಚುವರಿ ಪ್ರೋತ್ಸಾಹ ಧನವನ್ನೂ ನೀಡಲಾಗುತ್ತಿದೆ.

ಶ್ರೇಯಾಂಕಾ ಆರ್. ಪಾಟೀಲ್ (ಕ್ರಿಕೆಟ್ – ಮಹಿಳಾ ತಂಡ) – ಚಿನ್ನದ ಪದಕಕ್ಕಾಗಿ ರೂ. 1 ಕೋಟಿ.

ಎಂ.ಆರ್. ಪೂವಮ್ಮ (ಅಥ್ಲೆಟಿಕ್ಸ್) – 4x400 ಮಹಿಳಾ ರಿಲೇಯಲ್ಲಿ ಚಿನ್ನ (ರೂ. 1 ಕೋಟಿ) ಹಾಗೂ 4x400 ಮಿಕ್ಸ್‌ಡ್ ರಿಲೇಯಲ್ಲಿ ಬೆಳ್ಳಿ (ರೂ. 75.00 ಲಕ್ಷ) ಪಡೆದು ಒಟ್ಟು ರೂ. 1.75 ಕೋಟಿ ನಗದು ಪುರಸ್ಕಾರಕ್ಕೆ ಭಾಜನರಾಗಿದ್ದಾರೆ.

ಪ್ರಣವಿ ಎಸ್. ಅರಸ್ (ಗಾಲ್ಫ್) ವೈಯಕ್ತಿಕ ವಿಭಾಗದಲ್ಲಿ ಚಿನ್ನ (ರೂ. 1 ಕೋಟಿ) ಹಾಗೂ ಮಹಿಳಾ ತಂಡ ವಿಭಾಗದಲ್ಲಿ ಬೆಳ್ಳಿ (ರೂ. 75 ಲಕ್ಷ) ಪಡೆದು ಒಟ್ಟು ರೂ. 1.75 ಕೋಟಿ ನಗದು ಪುರಸ್ಕಾರ ಭಾಜನರಾಗಿದ್ದಾರೆ.

ಮೋಹಿತ್ ಹೆಚ್.ಎಸ್. (ಹಾಕಿ – ಪುರುಷರ ತಂಡ) ಚಿನ್ನದ ಪದಕಕ್ಕಾಗಿ ರೂ. 1 ಕೋಟಿ.

ತಿಲೋತ್ತಮಾ ಸೇನ್ (ಶೂಟಿಂಗ್ – 50 ಮೀಟರ್ ರೈಫಲ್ ತಂಡ) – ಬೆಳ್ಳಿ ಪದಕಕ್ಕಾಗಿ ರೂ. 75 ಲಕ್ಷ.

ಅದಿತಿ ಅಶೋಕ್ (ಗಾಲ್ಫ್ – ಮಹಿಳಾ ತಂಡ) ಬೆಳ್ಳಿ ಪದಕಕ್ಕಾಗಿ ರೂ. 75 ಲಕ್ಷ.

ಆಯುಷ್ ಶೆಟ್ಟಿ (ಬ್ಯಾಡ್ಮಿಂಟನ್ – ಪುರುಷರ ತಂಡ) ಕಂಚಿನ ಪದಕಕ್ಕಾಗಿ ರೂ. 50 ಲಕ್ಷ.

ಸ್ನೇಹಾ ಎಸ್.ಎಸ್. (ಅಥ್ಲೆಟಿಕ್ಸ್ – 4x100 ರಿಲೇ) – ಕಂಚಿನ ಪದಕಕ್ಕಾಗಿ ರೂ. 50 ಲಕ್ಷ ನಗದು ಪುರಸ್ಕಾರ ಪಡೆದಿದ್ದಾರೆ.

**ನೇರ ನೇಮಕಾತಿ ಹಾಗೂ ಕ್ರೀಡಾಪಟುಗಳಿಗೆ 2% ಮೀಸಲಾತಿ ಜಾರಿ:** ಏಷ್ಯನ್ ಗೇಮ್ಸ್ ಮತ್ತು ಕಾಮನ್‌ವೆಲ್ತ್ ಗೇಮ್ಸ್‌ನಲ್ಲಿ ಪದಕ ವಿಜೇತರಾದ ಅರ್ಹ ಕ್ರೀಡಾಪಟುಗಳನ್ನು ರಾಜ್ಯ ಸರ್ಕಾರದ 'ಗುಂಪು–ಬಿ' ಹುದ್ದೆಗಳಿಗೆ ನೇರವಾಗಿ ನೇಮಕ ಮಾಡಲು ಅವಕಾಶ ಕಲ್ಪಿಸಲಾಗಿದೆ. ರಾಜ್ಯ ಮುಖ್ಯ ಕಾರ್ಯದರ್ಶಿಯವರ ಅಧ್ಯಕ್ಷತೆಯ ಆಯ್ಕೆ ಸಮಿತಿಯ ಮೂಲಕ ಈ ನೇರ ನೇಮಕಾತಿ ಪ್ರಕ್ರಿಯೆ ನಡೆಯಲಿದೆ. ಇದರೊಂದಿಗೆ, 3–10–2026 ರಂದು ಅಧಿಸೂಚನೆ ಹೊರಡಿಸಲಾಗಿದ್ದು, ಸಾಧಕ ಕ್ರೀಡಾಪಟುಗಳಿಗೆ ರಾಜ್ಯ ಸರ್ಕಾರದ ಎಲ್ಲಾ ಹಂತದ (ಗುಂಪು–ಎ, ಬಿ, ಸಿ ಮತ್ತು ಡಿ) ಹುದ್ದೆಗಳ ನೇರ ನೇಮಕಾತಿಯಲ್ಲಿ ಶೇಕಡಾ 2% ಮೀಸಲಾತಿಯನ್ನು ಜಾರಿಗೊಳಿಸಿ ಆದೇಶಿಸಲಾಗಿದೆ.

## ಟೀಂ ಇಂಡಿಯಾಗೆ ಸ್ಮೃತಿ ಮಂಧಾನ ಮುಂದಿನ ಕ್ಯಾಪ್ಟನ್?

ಭಾರತ ಮಹಿಳಾ ಕ್ರಿಕೆಟ್ ತಂಡದ ಯಶಸ್ವಿ ನಾಯಕಿ ಹರ್ಮನ್‌ಪ್ರೀತ್ ಕೌರ್ ಅವರು ಎಲ್ಲಾ ಮೂರು ಮಾದರಿಯ ಕ್ರಿಕೆಟ್ ನಾಯಕತ್ವದಿಂದ ಕೆಳಗಿಳಿದಿದ್ದಾರೆ. ಈ ಮೂಲಕ ಭಾರತೀಯ ಮಹಿಳಾ ಕ್ರಿಕೆಟ್‌ನಲ್ಲಿ ಅವರ ಸುದೀರ್ಘ ಹಾಗೂ ಐತಿಹಾಸಿಕ ನಾಯಕತ್ವದ ಯುಗಾಂತ್ಯವಾಗಿದೆ. ಈ ಬೆನ್ನಲ್ಲೇ ಉಪನಾಯಕಿಯಾಗಿರುವ ಸ್ಮೃತಿ ಮಂಧಾನ ಅವರು ಮುಂದಿನ ನಾಯಕಿಯಾಗಿ ಜವಾಬ್ದಾರಿ ವಹಿಸಿಕೊಳ್ಳಲಿದ್ದಾರೆ ಎಂದು ವರದಿಯಾಗಿದೆ.

**ಹರ್ಮನ್‌ಪ್ರೀತ್ ಕೌರ್ ಭಾವುಕ ವಿದಾಯ:** 10 ವರ್ಷಗಳಿಗೂ ಹೆಚ್ಚು ಕಾಲ ತಂಡವನ್ನು ಯಶಸ್ವಿಯಾಗಿ ಮುನ್ನಡೆಸಿದ್ದ 37 ವರ್ಷದ ಹರ್ಮನ್‌ಪ್ರೀತ್, "ನಾನು ನನ್ನ ಕರ್ತವ್ಯವನ್ನು ನಿಭಾಯಿಸಿದ್ದೇನೆ. ತಂಡಕ್ಕಾಗಿ ರಕ್ತ, ಬೆವರು, ಸಮಯ ಎಲ್ಲವನ್ನೂ ತ್ಯಾಗ ಮಾಡಿದ್ದೇನೆ. ಈಗ ನಾಯಕತ್ವ ಮುಗಿದಿದೆ, ಆದರೆ ಆಟಗಾರ್ತಿಯಾಗಿ ನನ್ನ ಪ್ರಯಾಣ ಮುಂದುವರೆಯುತ್ತದೆ" ಎಂದು ಇನ್‌ಸ್ಟಾಗ್ರಾಮ್‌ನಲ್ಲಿ ಭಾವುಕ ಪೋಸ್ಟ್ ಹಂಚಿಕೊಂಡಿದ್ದಾರೆ. ಅದರಲ್ಲೂ, ಹರ್ಮನ್‌ಪ್ರೀತ್ ಕೌರ್ ನಾಯಕತ್ವದಲ್ಲಿ ಭಾರತ ತಂಡವು 2025ರ ಮಹಿಳಾ ಏಕದಿನ ವಿಶ್ವಕಪ್ ಮುಕುಟವನ್ನು ಮುಡಿಗೇರಿಸಿಕೊಂಡು ಇತಿಹಾಸ ಸೃಷ್ಟಿಸಿತ್ತು. ಇದರೊಂದಿಗೆ, ಇತ್ತೀಚೆಗೆ ನಡೆದ 2026ರ ಏಷ್ಯನ್ ಗೇಮ್ಸ್‌ನಲ್ಲೂ ತಂಡಕ್ಕೆ ಸತತ ಎರಡನೇ ಬಾರಿಗೆ ಚಿನ್ನದ ಪದಕ ತಂದುಕೊಟ್ಟಿದ್ದರು.



ಹರ್ಮನ್‌ಪ್ರೀತ್ ಕೌರ್ ಯುಗಾಂತ್ಯ ಬೆನ್ನಲ್ಲೇ ನ್ಯಾಷನಲ್ ಕ್ರಶ್‌ಗೆ ನಾಯಕತ್ವ!

**ಮಂಧಾನಾಗೆ ಪಟ್ಟ ಯಾಕೆ?** ಕಳೆದ ಕೆಲವು ವರ್ಷಗಳಿಂದ ತಂಡದ ಉಪನಾಯಕಿಯಾಗಿ ಯಶಸ್ವಿಯಾಗಿ ಕಾರ್ಯನಿರ್ವಹಿಸುತ್ತಾ ಬಂದಿರುವ, ಭಾರತ ತಂಡದ ಸ್ಟಾರ್ ಓಪನರ್, 30 ವರ್ಷದ ಸ್ಮೃತಿ ಮಂಧಾನ, ಸದ್ಯ ನಾಯಕತ್ವದ ರೇಸ್‌ನಲ್ಲಿ ಮುಂಚೂಣಿಯಲ್ಲಿದ್ದಾರೆ. ಅಷ್ಟೇ ಅಲ್ಲದೆ, ವುಮೆನ್ಸ್ ಪ್ರೀಮಿಯರ್ ಲೀಗ್‌ನಲ್ಲಿ ರಾಯಲ್ ಚಾಲೆಂಜರ್ಸ್ ಬೆಂಗಳೂರು ತಂಡವನ್ನು ಮುನ್ನಡೆಸಿ 2024 ಮತ್ತು 2026 ರಲ್ಲಿ ಎರಡು ಬಾರಿ ಚಾಂಪಿಯನ್ ಪಟ್ಟ ಗೆಲ್ಲಿಸಿಕೊಟ್ಟಿರುವುದು ಅವರ ನಾಯಕತ್ವದ ಸಾಮರ್ಥ್ಯಕ್ಕೆ ಸಾಕ್ಷಿಯಾಗಿದೆ. ಅದರಲ್ಲೂ, ಸ್ಮೃತಿ ಮಂಧಾನ ಅವರಿಗೆ ನಾಯಕತ್ವ ಹೊಸದೇನಲ್ಲ. ಈ ಹಿಂದೆ ಹರ್ಮನ್‌ಪ್ರೀತ್ ಗೈರಾದಾಗ ಒಟ್ಟು 22 ಅಂತಾರಾಷ್ಟ್ರೀಯ ಪಂದ್ಯಗಳಲ್ಲಿ ಅವರು ಭಾರತ ತಂಡವನ್ನು ಮುನ್ನಡೆಸಿ 15 ಪಂದ್ಯಗಳಲ್ಲಿ ಜಯ ತಂದುಕೊಟ್ಟಿದ್ದಾರೆ. ಅದರಲ್ಲೂ ಅವರು ಮುನ್ನಡೆಸಿದ ಎಲ್ಲಾ 4 ಏಕದಿನ ಪಂದ್ಯಗಳಲ್ಲೂ ಭಾರತ ಗೆದ್ದಿದೆ. ಏತನ್ಮಧ್ಯೆ, ಹರ್ಮನ್‌ಪ್ರೀತ್ ಕೌರ್ ಅವರ ವಿದಾಯಕ್ಕೂ ಒಂದು ದಿನ ಮುನ್ನ (ಅಕ್ಟೋಬರ್ 5ರಂದು), ನಾಯಕಿ ಹರ್ಮನ್‌ಪ್ರೀತ್ ಕೌರ್, ಸ್ಮೃತಿ ಮಂಧಾನ ಹಾಗೂ ಮುಖ್ಯ ಕೋಚ್ ಅಮೋಲ್ ಮುಜುಂದಾರ್ ಅವರು ಗುವಾಹಟಿಯಲ್ಲಿ ಬಿಸಿಸಿಐ ಕಾರ್ಯದರ್ಶಿ ದೇವಜಿತ್ ಸೈಕಿಯಾ ಅವರನ್ನು ಭೇಟಿಯಾಗಿ ತಂಡದ ಭವಿಷ್ಯದ ರೋಡ್‌ಮ್ಯಾಪ್ ಬಗ್ಗೆ ಸುದೀರ್ಘ ಚರ್ಚೆ ನಡೆಸಿದ್ದರು ಎಂದು ವರದಿಯಾಗಿದೆ. ಅದರಂತೆ, ಅಕ್ಟೋಬರ್ 16 ರಿಂದ ಜಿಂಬಾಬ್ವೆ ವಿರುದ್ಧ ಆರಂಭವಾಗಲಿರುವ ತವರಿನ ಸರಣಿಯಿಂದಲೇ ಸ್ಮೃತಿ ಮಂಧಾನ ಭಾರತ ತಂಡದ ಪೂರ್ಣ ಪ್ರಮಾಣದ ನಾಯಕಿಯಾಗಿ ಹೊಸ ಇನ್ನಿಂಗ್ಸ್ ಆರಂಭಿಸುವ ಸಾಧ್ಯತೆ ದಟ್ಟವಾಗಿದೆ. ಒಟ್ಟಾರೆಯಾಗಿ, ಅಂತಾರಾಷ್ಟ್ರೀಯ ಕ್ರಿಕೆಟ್‌ನಲ್ಲಿ ಅತಿ ಹೆಚ್ಚು ರನ್ ಹಾಗೂ ಶತಕ ಸಿಡಿಸಿದ ವಿಶ್ವ ದಾಖಲೆ ಹೊಂದಿರುವ ಸ್ಮೃತಿ ಮಂಧಾನ ನಾಯಕತ್ವ ವಹಿಸಿಕೊಂಡರೆ, ಭಾರತೀಯ ಮಹಿಳಾ ಕ್ರಿಕೆಟ್‌ನಲ್ಲಿ ಹೊಸ ಯುಗ ಆರಂಭವಾಗಲಿದೆ ಎನ್ನುವುದಂತು ಪಕ್ಕಾ.

Printed by : A. BALACHANDRA, Printed at : RAJHANS ENTERPRISES No. 134, 4th Main Road, Industrial Town, Rajajinagar, Bengaluru - 560044, Karnataka. Owned By, Published By, Editor :T. HOMBE GOWDA, No. 1230, Jayamahal, Ground Floor, 13th Cross, 2nd Phase, Girinagar, Bengaluru - 560 085, Karnataka. Email Id: udayavahininews@yahoo.com , epaper. udayavahini.in www.udayavahini.in Udaya vahini news Udaya vahini news